ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



**ಡಿಸೆಂಬರ್ ೧ನೇ ವಾರ**

01-12-2025 TO 06-12-2025

# ಡುಪ್ಲಾಂಟಿಸ್ ‘ವರ್ಷದ ಅಥ್ಲೀಟ್’

- 2080ಕ್ಕೆ ದೇಶದ ಜನಸಂಖ್ಯೆಯಲ್ಲಿ ಸ್ಥಿರತೆ
- ರಾಜ್ಯದಲ್ಲಿ ‘ಡಿಜಿಟಲ್ ಇ- ಸ್ಟ್ಯಾಂಪ್’
- ಏಕಲವ್ಯ ಪ್ರಶಸ್ತಿ ಪ್ರದಾನ
- ವಿಶ್ವ ಯುವ ಟಿಟಿ: ದಿವ್ಯಾಂಶಿಗೆ ಕಂಚು

## ❖ ವಿಐಎಸ್ಎಲ್ ಪುನಶ್ಚೇತನಕ್ಕೆ ₹4,000 ಕೋಟಿ: ಎಚ್‌ಡಿಕೆ

**ಸಂದರ್ಭ: 'ಭದ್ರಾವತಿಯ ವಿಶ್ವೇಶ್ವರಾಯ ಉಕ್ಕಿನ ಕಾರ್ಖಾನೆಯ (ವಿಐಎಸ್ಎಲ್) ಪುನಶ್ಚೇತನಕ್ಕೆ ₹4,000 ಕೋಟಿ ಮೊತ್ತದ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲಾಗಿದೆ' ಎಂದು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕೆ ಸಚಿವ ತಿಳಿಸಿದರು.**

- 'ಭಾರತೀಯ ಉಕ್ಕು ಪ್ರಾಧಿಕಾರ ಬಂಡವಾಳ ಹೂಡಲಿದೆ. ಪುನಶ್ಚೇತನದ ನಂತರ ರೈಲ್ವೆ ಹಾಗೂ ರಕ್ಷಣಾ ವಲಯದ ಬೇಡಿಕೆ ಆಧರಿಸಿ ಉತ್ಪಾದನೆ ಆರಂಭಿಸಲಾಗುವುದು.
- ಕಾರ್ಖಾನೆಯ 50 ವರ್ಷಗಳ ಭವಿಷ್ಯ ಗಮನದಲ್ಲಿಟ್ಟುಕೊಂಡು ಮಾರುಕಟ್ಟೆ ಹಾಗೂ ಹೊಸ ತಂತ್ರಜ್ಞಾನದ ಕುರಿತು ಅಧ್ಯಯನ ನಡೆಸಿ ಪ್ರತ್ಯೇಕ ಡಿಪಿಆರ್ ರೂಪಿಸಲಾಗಿದೆ' ಎಂದು ಹೇಳಿದರು.
- 'ವಿಐಎಸ್ಎಲ್ ಕಾರ್ಖಾನೆ ಮುಚ್ಚುವ ನಿರ್ಧಾರವನ್ನು ಕೇಂದ್ರ ಸಂಪುಟದಲ್ಲಿ ಕೈಗೊಳ್ಳಲಾಗಿದೆ. ಈ ತೀರ್ಮಾನ ಹಿಂಪಡೆಯಲು ಪ್ರಧಾನಿ ಮೋದಿ ಅವರ ಮನವೊಲಿಸಿ ಕಾರ್ಖಾನೆಗೆ ಜೀವ ಕೊಡುವ ಪ್ರಯತ್ನ ನಡೆದಿದೆ.
- ಒಮ್ಮೆ ಪುನರಾರಂಭವಾದರೆ ಅಡೆತಡೆ ಇಲ್ಲದೇ ಕಾರ್ಖಾನೆ ನಡೆಯಬೇಕು. ಹೀಗಾಗಿ ಅಗತ್ಯವಿರುವ ಗಣಿ ಪಡೆಯುವ ಕೆಲಸವೂ ನಡೆದಿದೆ. ಈ ಬಗ್ಗೆ ಜನವರಿ ತಿಂಗಳಲ್ಲಿ ಸಂಪೂರ್ಣ ಮಾಹಿತಿಯನ್ನು ನೀಡುವೆ' ಎಂದು ಹೇಳಿದರು.

## ❖ ಕೂಸಿನ ಮನೆ 'ಆರೈಕೆದಾರ' ರಿಗೆ ಸಂಕಷ್ಟ: ನರೇಗಾದಡಿ ಗೌರವಧನ ಪಾವತಿಗೆ ಅವಕಾಶ ಇಲ್ಲ: ಕೇಂದ್ರ। ಇವರು ನರೇಗಾ ಭಾಗ.

**ಸಂದರ್ಭ: 'ಉದ್ಯೋಗ ಖಾತ್ರಿ ಯೋಜನೆ ಕಾರ್ಮಿಕರಿಗೆ ಕೂಲಿಯನ್ನು ಕೇಂದ್ರದ ಅನುದಾನದಲ್ಲಿ ನೀಡಲಾಗುತ್ತದೆ; ಸಲಕರಣೆಗಳ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸುತ್ತದೆ.**

- ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಕೆಲಸ ಮಾಡುವ ಕಾರ್ಮಿಕರ ಮಕ್ಕಳ ಆರೈಕೆಗಾಗಿ ರಾಜ್ಯ ಸರ್ಕಾರ ಆರಂಭಿಸಿದ್ದ 'ಕೂಸಿನ ಮನೆ' ಆರೈಕೆದಾರರಿಗೆ ನರೇಗಾದಡಿ ಗೌರವಧನ ನೀಡಲು ಅವಕಾಶ ಇಲ್ಲ ಎಂದು ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ತಿಳಿಸಿದೆ.
- ಇದರಿಂದಾಗಿ ರಾಜ್ಯದಲ್ಲಿ ಕೂಸಿನ ಮನೆಯಲ್ಲಿ ಆರೈಕೆದಾರರಾಗಿ ನೇಮಕಗೊಂಡಿದ್ದ 7,358 ಕೂಲಿ ಕಾರ್ಮಿಕರಿಗೆ ಸಂಕಷ್ಟ ಎದುರಾಗಿದೆ.
- **ನರೇಗಾ ಯೋಜನೆಯ ಕಾರ್ಮಿಕರ ಎಳೆಯ ಮಕ್ಕಳ ಪಾಲನೆ, ಆರೈಕೆಗಾಗಿ ರಾಜ್ಯ ಸರ್ಕಾರ 2023ರಲ್ಲಿ ಈ ಕಾರ್ಯಕ್ರಮ ರೂಪಿಸಿದೆ.**
- ಒಂದು 'ಕೂಸಿನ ಮನೆ' ಗೆ ಸಕ್ರಿಯ ಉದ್ಯೋಗ ಚೀಟಿ ಹೊಂದಿದ್ದ ಇಬ್ಬರು ಮಹಿಳೆಯರನ್ನು ಆರೈಕೆದಾರರಾಗಿ ನೇಮಿಸಲಾಗಿದೆ. ಇವರಿಗೆ ಸಾಮೂಹಿಕ ಕಾಮಗಾರಿಗಳಲ್ಲಿ ಪ್ರತ್ಯೇಕ ಎನ್ಎಂಆರ್ (ನಾಮಿನಲ್ ಮಾಸ್ಟರ್ ರೋಲ್) ಸೃಜಿಸಿ, ಕೆಲಸದ ಸ್ಥಳದಲ್ಲಿ ದೈನಂದಿನ ಹಾಜರಾತಿಯಿಂದ ವಿನಾಯಿತಿ ನೀಡಿದ್ದು ಗೌರವಧನವಾಗಿ ಕೂಲಿ ಪಾವತಿಸಲಾಗುತ್ತಿತ್ತು. ಕಾಮಗಾರಿ ಇಲ್ಲದಿದ್ದಾಗ ಗ್ರಾಮ ಪಂಚಾಯಿತಿ ಅನುದಾನದಲ್ಲಿ ಗೌರವಧನ ಭರಿಸಲಾಗುತ್ತಿತ್ತು.
- **ನರೇಗಾದಲ್ಲಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 4,000 ಕೂಸಿನ ಮನೆಗಳನ್ನು ಸ್ಥಾಪಿಸಿತ್ತು. ಈಗ 'ಮನೆ' ಗಳ ಸಂಖ್ಯೆ 3,679ಕ್ಕೆ ಇಳಿದಿದೆ. 46,723 ಮಕ್ಕಳ ನೋಂದಣಿ ಆಗಿದೆ.**

Dr Rajkumar's KAS Academy

- ಕೆಲ ದಿನಗಳ ಹಿಂದೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ರಾಜ್ಯದ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯಕ್ಕೆ ಪತ್ರ ಬರೆದಿದ್ದು, 'ಆರೈಕೆದಾರರ ಗೌರವಧನವನ್ನು ಉದ್ಯೋಗ ಖಾತ್ರಿ ಯೋಜನೆಯಡಿ ಭರಿಸಲು ನರೇಗಾ ಕಾಯ್ದೆಯ ಶೆಡ್ಯೂಲ್-2ರಲ್ಲಿ ಅವಕಾಶ ಇಲ್ಲ' ಎಂದು ತಿಳಿಸಿದೆ.
- ಆದ್ದರಿಂದ ಆರೈಕೆದಾರರಿಗೆ ತಕ್ಷಣದಿಂದ ವಿನಾಯಿತಿ ರದ್ದು ಪಡಿಸುವಂತೆ ಇಲಾಖೆ ಸುತ್ತೋಲೆ ಹೊರಡಿಸಿದೆ.
- 'ಮಹಿಳಾ ಕಾರ್ಮಿಕರು ಮಕ್ಕಳನ್ನು 'ಕೂಸಿನ ಮನೆ' ಗಳಲ್ಲಿ ಬಿಟ್ಟು ನಿಶ್ಚಿಂತೆಯಿಂದ ನರೇಗಾದಲ್ಲಿ ದುಡಿದು ಕೂಲಿ ಪಡೆಯುತ್ತಿದ್ದಾರೆ. ಕೂಸಿನ ಮನೆಯ ಆರೈಕೆದಾರರೂ ನರೇಗಾ ಭಾಗವೇ ಆಗಿದ್ದಾರೆ. ಆದ್ದರಿಂದ ಅವರಿಗೆ ಹಾಜರಾತಿಯಿಂದ ವಿನಾಯಿತಿ ನೀಡಲಾಗುತ್ತಿತ್ತು.

## ❖ ಕ್ಷಯದ ತಡೆಗೆ ದಿಟ್ಟ ಹೋರಾಟ ಸಾಗಬೇಕಾದ ದಾರಿ ಇನ್ನೂ ಇದೆ

**ಸಂದರ್ಭ: ಕ್ಷಯರೋಗ (ಟಿಬಿ) ವಿರುದ್ಧದ ಹೋರಾಟದಲ್ಲಿ ಭಾರತ ಗಣನೀಯ ಪ್ರಗತಿ ಸಾಧಿಸಿದೆ. ಆದರೂ, ಉದ್ದೇಶಿತ ಗುರಿ ಸಾಧನೆಗಾಗಿ ಇನ್ನೂ ಸಾಕಷ್ಟು ಹೋರಾಟ ನಡೆಸಬೇಕಾಗಿರುವ ಗಂಭೀರ ಆರೋಗ್ಯ ಸವಾಲುಗಳಲ್ಲೊಂದಾಗಿ ಕ್ಷಯ ಉಳಿದಿರುವುದನ್ನು 'ವಿಶ್ವ ಆರೋಗ್ಯ ಸಂಸ್ಥೆ' ಯ (ಡಬ್ಲ್ಯುಎಚ್‌ಒ) 2025ರ ಜಾಗತಿಕ ಕ್ಷಯರೋಗ ವರದಿ ತಿಳಿಸಿದೆ.**

- ಕಾಯಿಲೆಯ ಹೊಸ ಪ್ರಕರಣಗಳ ಸಂಖ್ಯೆಯಲ್ಲಿ ವಿಶ್ವದಲ್ಲೇ ಅತ್ಯಂತ ಹೆಚ್ಚಿನ ಇಳಿಕೆ ಪ್ರಮಾಣವನ್ನು ಭಾರತ ಸಾಧಿಸಿದ್ದರೂ, ವಿಶ್ವದ ಒಟ್ಟು ಟಿಬಿ ಪ್ರಕರಣಗಳಲ್ಲಿ ಶೇ 25ರಷ್ಟು ಭಾರತದಲ್ಲಿಯೇ ವರದಿಯಾಗುತ್ತಿವೆ. 2015ರಲ್ಲಿ 1 ಲಕ್ಷ ಜನರಿಗೆ 235 ರೋಗ ಪ್ರಕರಣಗಳು ದಾಖಲಾಗಿದ್ದರೆ, 2024ರ ವೇಳೆಗೆ ಆ ಪ್ರಮಾಣ 187ಕ್ಕೆ ಇಳಿಕೆಯಾಗಿದೆ.
- ವಾರ್ಷಿಕ ಇಳಿಕೆಯ ಪ್ರಮಾಣ ಸರಾಸರಿ ಶೇ 3ರಷ್ಟಿದೆ. ರೋಗಪತ್ತೆ ಪ್ರಮಾಣವೂ ಹೆಚ್ಚಾಗಿರುವುದರ ಜೊತೆಗೆ, ಚಿಕಿತ್ಸೆ ಸುಲಭವಾಗಿ ಮತ್ತು ವ್ಯಾಪಕವಾಗಿ ಲಭಿಸುತ್ತಿದೆ. 2015ರಲ್ಲಿ 1 ಲಕ್ಷಕ್ಕೆ 28ರಷ್ಟಿದ್ದ ಸಾವಿನ ಪ್ರಮಾಣ 2024ರಲ್ಲಿ 21ಕ್ಕೆ ಕುಸಿದಿದೆ.
- ಈ ಎಲ್ಲ ಸಕಾರಾತ್ಮಕ ಬೆಳವಣಿಗೆಯ ಜೊತೆಯಲ್ಲಿಯೇ ಕೆಲವು ಆತಂಕಕಾರಿ ಸಂಗತಿಗಳನ್ನು ಗಮನಿಸಬೇಕಾಗಿದೆ.
- ಕ್ಷಯರೋಗ ಈಗಲೂ ದೇಶದ ಬಹುದೊಡ್ಡ ಸಾಂಕ್ರಾಮಿಕವಾಗಿ ಉಳಿದಿದೆ. ಕ್ಷಯದಿಂದ ಉಂಟಾಗುವ ಒಟ್ಟು ಸಾವುಗಳಲ್ಲಿ ಮೂರನೇ ಒಂದು ಭಾಗದಷ್ಟು ಪ್ರಕರಣಗಳು ಭಾರತದಲ್ಲೇ ಸಂಭವಿಸುತ್ತಿದ್ದು, ಪ್ರತಿವರ್ಷ ಸುಮಾರು 5 ಲಕ್ಷ ಜನರು ಈ ಕಾಯಿಲೆಗೆ ಬಲಿಯಾಗುತ್ತಿದ್ದಾರೆ.
- ರೋಗಿಯು ಕಾರಣಾಂತರದಿಂದ ಮಧ್ಯದಲ್ಲಿ ಚಿಕಿತ್ಸೆ ನಿಲ್ಲಿಸಿದರೆ ಆತನ ದೇಹದೊಳಗೆ ರೋಗಾಣುಗಳ ಸಂಖ್ಯೆ ಹೆಚ್ಚಾಗಿ 'ಎಂಡಿಆರ್-ಟಿಬಿ' ಆಗುವ ಸಾಧ್ಯತೆ ಇರುತ್ತದೆ. ಕ್ಷಯರೋಗದ ಸಾಮಾನ್ಯ ಪ್ರಕರಣಗಳಿಗಿಂತಲೂ ಎಂಡಿಆರ್-ಟಿಬಿ ಪ್ರಕರಣಗಳ ನಿಯಂತ್ರಣದಲ್ಲಿ ಭಾರತದ ಸಾಧನೆ ಕಳಪೆಯಾಗಿದೆ. ಜಾಗತಿಕ ಎಂಡಿಆರ್-ಟಿಬಿ ಪ್ರಕರಣಗಳಲ್ಲಿ ಭಾರತದ ಪಾಲು ಶೇ 32ರಷ್ಟಿದೆ.
- ಈ ಪ್ರಕರಣಗಳ ಸಂಖ್ಯೆ ಕಡಿಮೆ ಇದ್ದರೂ, ಮರಣ ಪ್ರಮಾಣ ಹೆಚ್ಚಾಗಿರುವುದು ಕಳವಳಕ್ಕೆ ಕಾರಣವಾಗಿದೆ. ಜಾಗತಿಕವಾಗಿ ಕ್ಷಯರೋಗ ನಿರ್ಮೂಲನೆಗೆ 2030ರ ಗಡುವನ್ನು ಗೊತ್ತುಪಡಿಸಲಾಗಿದ್ದರೂ, ಆ ಅವಧಿಯನ್ನು ಭಾರತ 2025ಕ್ಕೆ ನಿಗದಿಪಡಿಸಿಕೊಂಡಿತ್ತು.
- ಕಾರ್ಯಸಾಧುವಲ್ಲದ ಗುರಿಯನ್ನು ಗಡುವಿನೊಳಗೆ ಮುಟ್ಟುವುದಕ್ಕೆ ಅಗತ್ಯವಾದ ಕಾರ್ಯತಂತ್ರಗಳ ಕೊರತೆಯ ಕಾರಣದಿಂದಾಗಿ, ಉದ್ದೇಶಿತ ಗುರಿಸಾಧನೆ ಅಪೂರ್ಣವಾಗಲಿದೆ. ರೋಗಪತ್ತೆ, ಚಿಕಿತ್ಸೆ, ಮುನ್ನೆಚ್ಚರಿಕೆ ಮತ್ತು ಆರೋಗ್ಯ ಕ್ಷೇತ್ರದ ಬಲವರ್ಧನೆ ಎನ್ನುವ ನಾಲ್ಕು ಹಂತಗಳಲ್ಲಿ ಪರಿಣಾಮಕಾರಿ ಕ್ರಮಗಳ ಅನುಷ್ಠಾನಕ್ಕೆ ರಾಷ್ಟ್ರೀಯ ಕಾರ್ಯತಂತ್ರ ಯೋಜನೆ (2017–2025) ರೂಪಿಸಲಾಗಿತ್ತು. ಈ ಎಲ್ಲ ಕ್ಷೇತ್ರಗಳಲ್ಲೂ ಆಗಬೇಕಾದ ಕೆಲಸ ಸಾಕಷ್ಟು ಬಾಕಿಯುಳಿದಿದೆ.

- ಕ್ಷಯರೋಗ ಪತ್ತೆ ಪ್ರಮಾಣದಲ್ಲಿ ಗಣನೀಯ ಸುಧಾರಣೆ ಆಗಿದ್ದರೂ, ವರದಿಯಾಗದೇ ಉಳಿದಿರುವ ಪ್ರಕರಣಗಳ ಸಂಖ್ಯೆ ಒಂದು ಲಕ್ಷದಷ್ಟಿದೆ ಎಂದು ವರದಿಗಳು ಹೇಳುತ್ತಿವೆ. ಈ ಸಂಖ್ಯೆ, ದಾಖಲಾಗದ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿಶ್ವದಲ್ಲೇ ಅತ್ಯಂತ ಹೆಚ್ಚಿನದಾಗಿದೆ.
- ಹೀಗಿದ್ದರೂ, ಚಿಕಿತ್ಸೆಯ ಯಶಸ್ಸಿನ ಪ್ರಮಾಣ ವಿಶ್ವದ ಸರಾಸರಿಗಿಂತಲೂ ಹೆಚ್ಚಿನದಾಗಿದೆ. ಸುಲಭವಾಗಿ ಬಳಸಬಹುದಾದ ಸಲಕರಣೆಗಳು ಸೇರಿದಂತೆ ಪರಿಣಾಮಕಾರಿ ತಂತ್ರಜ್ಞಾನದ ಬಳಕೆಯ ಫಲಿತಾಂಶ ಸ್ಪಷ್ಟವಾಗಿ ಕಾಣಿಸುವಂತಿದೆ. 2024ರಲ್ಲಿ 26 ಲಕ್ಷ ಕ್ಷಯರೋಗ ಪ್ರಕರಣಗಳು ದೇಶದ ವಿವಿಧ ಭಾಗಗಳಲ್ಲಿ ಪತ್ತೆಯಾಗಿದ್ದವು.
- ಇದು ಈವರೆಗೆ ವರ್ಷವೊಂದರಲ್ಲಿ ಪತ್ತೆಯಾದ ಅತ್ಯಂತ ಹೆಚ್ಚಿನ ಪ್ರಕರಣಗಳ ಸಂಖ್ಯೆಯಾಗಿದೆ. ಕ್ಷಯರೋಗದ ಚಿಕಿತ್ಸೆಗೆ ಸಂಬಂಧಿಸಿದ ಬಹುದೊಡ್ಡ ಸವಾಲು, ಸಾಮಾಜಿಕ ಮತ್ತು ಆರ್ಥಿಕ ಹಿನ್ನೆಲೆಗೆ ಸಂಬಂಧಿಸಿದ್ದಾಗಿದೆ.
- ರೋಗಕ್ಕೆ ಚಿಕಿತ್ಸೆ ನೀಡುವ ಸಂದರ್ಭದಲ್ಲಿ ಎದುರಾಗುವ ತೊಡಕುಗಳಲ್ಲಿ ರೋಗಿಗಳ ಕಡಿಮೆ ಆದಾಯ ಮತ್ತು ಅಪೌಷ್ಟಿಕತೆ ಮುಖ್ಯವಾದವುಗಳು. ಪೌಷ್ಟಿಕಾಂಶದ ಕೊರತೆ ಹೋಗಲಾಡಿಸುವುದನ್ನು ಚಿಕಿತ್ಸೆಯ ಭಾಗವಾಗಿ ಮಾಡಿಕೊಳ್ಳಲಾಗಿದೆ.
- ಆದರೆ, ರೋಗ ವರದಿಯಾಗದ ಹೆಚ್ಚಿನ ಪ್ರಕರಣಗಳು ಕಡಿಮೆ ಆದಾಯ ಹೊಂದಿರುವ ಸಮುದಾಯಗಳಿಗೆ ಸಂಬಂಧಿಸಿರುವುದು ದೇಶದ ಸಾಮಾಜಿಕ ಸಂಕಥನವನ್ನು ಬೇರೆಯದೇ ರೀತಿಯಲ್ಲಿ ನೋಡಲು ಒತ್ತಾಯಿಸುವಂತಿದೆ. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಾಗೂ ಉದ್ದೇಶಿತ ಗುರಿಯನ್ನು ತಲಪಲು ಸ್ಥಿರ ಮತ್ತು ಪರಿಣಾಮಕಾರಿ ಯೋಜನೆಗಳನ್ನು ಸರ್ಕಾರ ಅನುಷ್ಠಾನಕ್ಕೆ ತರಬೇಕಾಗಿದೆ.

## ❖ 2080ಕ್ಕೆ ದೇಶದ ಜನಸಂಖ್ಯೆಯಲ್ಲಿ ಸ್ಥಿರತೆ

**ಸಂದರ್ಭ: ಫಲವಂತಿಕೆ ದರ (ಫರ್ಟಿಲಿಟಿ ರೇಟ್) ಕುಸಿತದಿಂದಾಗಿ ದೇಶದ ಜನಸಂಖ್ಯೆಯು 2080ರ ವೇಳೆಗೆ ಸ್ಥಿರಗೊಳ್ಳುವ ನಿರೀಕ್ಷೆಯಿದೆ ಎಂದು ಇಂಡಿಯನ್ ಅಸೋಸಿಯೇಷನ್ ಫಾರ್ ದಿ ಸ್ಟಡಿ ಆಫ್ ಪಾಪ್ಯುಲೇಷನ್ (ಐಎಎಸ್‌ಪಿ) ಹೇಳಿದೆ.**

- ಪ್ರಸ್ತುತ ಫಲವಂತಿಕೆಯ ದರ 1.9ರಷ್ಟಿದ್ದು, ಕಳೆದ ಎರಡು ದಶಕಗಳಲ್ಲಿ ಜನನ ಪ್ರಮಾಣವು ತೀವ್ರವಾಗಿ ಕುಸಿಯುತ್ತಿದೆ ಎಂದು ಸಂಸ್ಥೆಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.
- ‘ನಮ್ಮ ದೇಶದ ಫಲವಂತಿಕೆಯ ಒಟ್ಟು ದರ 2000ನೇ ಇಸ್ವಿಯಲ್ಲಿ ಶೇಕಡ 3.5ರಷ್ಟಿತ್ತು. ಇದೀಗ ಶೇ 1.9ಕ್ಕೆ ನಿಂತಿದ್ದು, ತೀವ್ರವಾಗಿ ಕುಸಿತಗೊಂಡಿದೆ’ ಎಂದು ಐಎಎಸ್‌ಪಿ ಪ್ರಧಾನ ಕಾರ್ಯದರ್ಶಿ ಅನಿಲ್ ಚಂದ್ರನ್ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.
- ‘ದೇಶದ ಜನಸಂಖ್ಯೆಯು 2080ರ ವೇಳೆಗೆ 180 ಕೋಟಿ ಅಥವಾ 190 ಕೋಟಿಗೆ ಏರಿಕೆಯಾಗುವ ನಿರೀಕ್ಷೆಯಿದೆ. ಬೆಳವಣಿಗೆ ದರವೂ ಸ್ಥಿರಗೊಳ್ಳುವ ನಿರೀಕ್ಷೆಯಿದೆ. ಈಗಿನ ಎಲ್ಲ ಅಂದಾಜುಗಳು, ಭಾರತದ ಗರಿಷ್ಠ ಜನಸಂಖ್ಯೆಯು 200 ಕೋಟಿಗಿಂತ ಕಡಿಮೆಯಿರುತ್ತದೆ ಎಂಬುದನ್ನು ತೋರಿಸುತ್ತಿವೆ’ ಎಂದಿದ್ದಾರೆ.

Dr.Rajkumar's IKAS Academy

## ❖ 'ರೆಪೊ ದರ ಕಡಿತ ನಿರೀಕ್ಷೆ : 3ರಿಂದ ಎಂಪಿಸಿ ಸಭೆ ಆರಂಭ, 5ರಂದು ನಿರ್ಧಾರ ಪ್ರಕಟ

**ಸಂದರ್ಭ: ಆರ್‌ಬಿಐನ ಹಣಕಾಸು ನೀತಿ ಸಮಿತಿ (ಎಂಪಿಸಿ) ಸಭೆಯು ಈ ಬಾರಿ ರೆಪೊ ದರವನ್ನು ಶೇ 0.25ರಷ್ಟು ಕಡಿತ ಮಾಡುವ ನಿರೀಕ್ಷೆ ಇದೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ.**

- ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಗವರ್ನರ್ ಸಂಜಯ್ ಮಲ್ಹೋತ್ರಾ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 3ರಿಂದ 5ರವರೆಗೆ ಸಭೆ ನಡೆಯಲಿದ್ದು, 5ರಂದು ಮಲ್ಹೋತ್ರಾ ಹಣಕಾಸು ನೀತಿಯ ನಿರ್ಧಾರವನ್ನು ಪ್ರಕಟಿಸಲಿದ್ದಾರೆ.
- ಗ್ರಾಹಕ ಬೆಲೆ ಸೂಚ್ಯಂಕ ಆಧಾರಿತ (ಸಿಪಿಐ) ಚಿಲ್ಲರೆ ಹಣದುಬ್ಬರವು ಕಳೆದ ಎರಡು ತಿಂಗಳಿನಿಂದ ಶೇ 2ರ ಒಳಗೆ ದಾಖಲಾಗಿದ್ದು, ಹಣದುಬ್ಬರದ ಒತ್ತಡ ಕಡಿಮೆ ಆಗಿದೆ. ಹೀಗಾಗಿ ರೆಪೊ ದರ ಇಳಿಕೆ ಮಾಡಬಹುದು ಎಂದು ಅಂದಾಜಿಸಲಾಗಿದೆ.
- ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಜಿಡಿಪಿ ಬೆಳವಣಿಗೆ ನಿರೀಕ್ಷೆ ಮಾಡಿದ್ದಕ್ಕಿಂತಲೂ ಉತ್ತಮವಾಗಿ ದಾಖಲಾಗಿದೆ. ಆರ್ಥಿಕ ಚಟುವಟಿಕೆ ಚುರುಕುಗೊಂಡಿರುವುದು, ಜಿಎಸ್‌ಟಿ ದರ ಇಳಿಕೆಯಂತಹ ವಿವಿಧ ಅಂಶಗಳಿಂದಾಗಿ ರೆಪೊ ದರವನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಳ್ಳಬಹುದು ಎಂದು ಕೆಲ ತಜ್ಞರು ಹೇಳಿದ್ದಾರೆ.
- ಈ ವರ್ಷದ ಫೆಬ್ರುವರಿಯಿಂದ ಆಗಸ್ಟ್‌ವರೆಗೆ ರೆಪೊ ದರವನ್ನು ಶೇ 1ರಷ್ಟು ಕಡಿಮೆ ಮಾಡಲಾಗಿದೆ. ಪ್ರಸ್ತುತ ರೆಪೊ ದರ ಶೇ 5.5ರಷ್ಟಿದೆ.

### 'ಕಾರ್ಪೊರೇಟ್ ಸಾಲ ಹೆಚ್ಚುವ ನಿರೀಕ್ಷೆ'

- 'ಪ್ರಸಕ್ತ ಆರ್ಥಿಕ ವರ್ಷದಲ್ಲಿ ಕಾರ್ಪೊರೇಟ್ ವಲಯಕ್ಕೆ ನೀಡುವ ಸಾಲವು ಉತ್ತಮ ಬೆಳವಣಿಗೆ ದಾಖಲಿಸುವ ನಿರೀಕ್ಷೆ ಇದೆ' ಎಂದು ಭಾರತೀಯ ಸ್ಟೇಟ್ ಬ್ಯಾಂಕ್‌ನ (ಎಸ್‌ಬಿಐ) ಅಧ್ಯಕ್ಷ ಸಿ.ಎಸ್. ಸೆಟ್ಟಿ ಹೇಳಿದ್ದಾರೆ.
- ದೇಶದಲ್ಲಿ ಆರ್ಥಿಕ ಚಟುವಟಿಕೆ ವೇಗ ಪಡೆದುಕೊಂಡಿದೆ. ಹಾಗಾಗಿ, ಕಾರ್ಪೊರೇಟ್ ಕಂಪನಿಗಳಿಗೆ ನೀಡುವ ಸಾಲದ ಪ್ರಮಾಣವು ಹೆಚ್ಚಳ ಆಗಬಹುದು ಎಂದು ತಿಳಿಸಿದ್ದಾರೆ.
- ಕಾರ್ಪೊರೇಟ್ ವಲಯಕ್ಕೆ ₹7 ಲಕ್ಷ ಕೋಟಿ ಸಾಲ ಮಂಜೂರು ಮಾಡಲಾಗಿದ್ದು, ಈ ಸಾಲ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.
- ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಕಾರ್ಪೊರೇಟ್ ಸಾಲವು, ಶೇ 7.1ರಷ್ಟು ಬೆಳವಣಿಗೆ ಕಂಡಿದೆ. ಆರ್ಥಿಕ ಚಟುವಟಿಕೆಯಲ್ಲಿ ಸುಧಾರಣೆ ಆಗುತ್ತಿರುವು ದರಿಂದ ಬಂಡವಾಳ ಬಳಕೆಯೂ ಹೆಚ್ಚುತ್ತಿದ್ದು, ಇದು ಪ್ರತಿ ತ್ರೈಮಾಸಿಕ ಕಳೆದಂತೆ ಸದೃಢಗೊಳ್ಳುತ್ತಿದೆ ಎಂದು ಹೇಳಿದ್ದಾರೆ.

## ❖ 'ವೆಚ್ಚ ಏರಿಕೆ: ತಯಾರಿಕಾ ವಲಯದ ಗುರಿಗೆ ಅಡಚಣೆ'

**ಸಂದರ್ಭ: ಹೆಚ್ಚುತ್ತಿರುವ ತಯಾರಿಕಾ ವೆಚ್ಚವು, ದೇಶದ ತಯಾರಿಕಾ ವಲಯದ ಗುರಿ ಸಾಧನೆಗೆ ಅಡ್ಡಿ ಉಂಟು ಮಾಡಬಹುದು ಎಂದು ಸಿಯುಟಿಎಸ್ ಇಂಟರ್ ನ್ಯಾಷನಲ್ ವರದಿ ತಿಳಿಸಿದೆ.**

- ಪ್ರಸ್ತುತ ದೇಶದಲ್ಲಿ 53 ಲಕ್ಷ ಟನ್ ನಷ್ಟು ಅಲುಮಿನಿಯಂಗೆ ಬೇಡಿಕೆ ಇದೆ. ಇದು 2030ರ ವೇಳೆಗೆ 83 ಲಕ್ಷ ಟನ್‌ಗೆ ಹೆಚ್ಚಳವಾಗುವ ನಿರೀಕ್ಷೆ ಇದೆ ಎಂದಿದೆ.
- ಪ್ರಸ್ತುತ ಇರುವ ಆಮದು ಸುಂಕದ ವಿಧಾನವು ಎಂಎಸ್‌ಎಂಇ ವಲಯದ ಉದ್ಯಮಗಳಿಗೆ ಯಾವ ರೀತಿ ಅಡ್ಡಿಯಾಗಿದೆ ಎಂದು ವರದಿ ಗಮನ ಸೆಳೆದಿದೆ.
- ಅಂತರರಾಷ್ಟ್ರೀಯ ಮಾನದಂಡಕ್ಕೆ ಹೋಲಿಸಿದರೆ ದೇಶದಲ್ಲಿ ಅಲುಮಿನಿಯಂ ಬೆಲೆ ಹೆಚ್ಚಿದೆ. ಇದು ದೇಶದಲ್ಲಿನ ಅಲುಮಿನಿಯಂ ತಯಾರಕರಿಗೆ ಅನನುಕೂಲ ಉಂಟು ಮಾಡಲಿದೆ. ಈ ದರ ಅಂತರವು ಹೆಚ್ಚಿನ ಪ್ರಮಾಣದಲ್ಲಿ ಅಲುಮಿನಿಯಂ ಬಳಕೆ ಮಾಡುವ ನಿರ್ಮಾಣ ವಲಯ, ನವೀಕರಿಸಬಹುದಾದ ಇಂಧನ ಮೂಲ ಸೌಕರ್ಯ, ವಿದ್ಯುತ್‌ಚಾಲಿತ ವಾಹನಗಳು ಮತ್ತು ಎಲೆಕ್ಟ್ರಾನಿಕ್ಸ್ ವಲಯಗಳ ಮೇಲೆ ಪರಿಣಾಮ ಬೀರಲಿದೆ ಎಂದು ಹೇಳಿದೆ.

Dr. Rajkumar IAS/KAS Academy

- ಕಡಿಮೆ ತಯಾರಿಕಾ ವೆಚ್ಚದಿಂದ ದೇಶದ ಎಂಎಸ್ಎಂಇ ವಲಯದ ಅಲ್ಯುಮಿನಿಯಂ ಕೈಗಾರಿಕೆಗಳು, ಆಮದು ಉತ್ಪನ್ನಗಳ ವಿರುದ್ಧ ಪರಿಣಾಮಕಾರಿಯಾಗಿ ಸ್ಪರ್ಧೆ ಮಾಡಲು ಅನುವು ಮಾಡಿಕೊಡುತ್ತದೆ. ಅಲ್ಲದೆ, ಮಾರುಕಟ್ಟೆಯಲ್ಲಿ ತಮ್ಮ ಸ್ಥಾನವನ್ನು ವಿವಿಧ ಉತ್ಪನ್ನಗಳ ತಯಾರಿಕೆ ಮೂಲಕ ವಿಸ್ತರಿಸುತ್ತವೆ ಎಂದು ಹೇಳಿದೆ.

## ❖ ಕಾಮನ್‌ವೆಲ್ತ್: ₹ 3000–5000 ಕೋಟಿ ನಿರ್ವಹಣಾ ವೆಚ್ಚ

**ಸಂದರ್ಭ: ಅಹಮದಾಬಾದಿ ನಲ್ಲಿ 2030ರಲ್ಲಿ ನಡೆಯಲಿರುವ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕಾಗಿ ಸಂಘಟನಾ ಸಮಿತಿಯೊಂದನ್ನು ರಚಿಸಲಾಗುವುದು. ಕೂಟದ ಕಾರ್ಯ ನಿರ್ವಹಣಾ ವೆಚ್ಚವು ಅಂದಾಜು ₹ 3000 ರಿಂದ ₹ 5000 ಕೋಟಿ ಆಗುವ ಸಾಧ್ಯತೆ ಇದೆ.**

- ಕೂಟದ ಯೋಜನೆಯಲ್ಲಿ ಭಾಗಿಯಾಗಿರುವ ಮೂಲಗಳ ಪ್ರಕಾರ, ಕ್ರೀಡೆ ಮತ್ತು ಸಾರ್ವಜನಿಕ ಬಳಕೆಗಾಗಿ ಇರುವ ಮೂಲಸೌಲಭ್ಯಗಳನ್ನು ಉನ್ನತ ದರ್ಜೆಗೆ ಏರಿಸುವುದು, ಹೊಸ ಸೌಲಭ್ಯ ಗಳನ್ನು ನಿರ್ಮಿಸುವುದು ಸೇರಿದಂತೆ ಇರುವ ಕಾರ್ಯ ಯೋಜನೆಗಳಿಗೆ ಒಟ್ಟಾರೆ ವೆಚ್ಚವನ್ನು ಅಂದಾಜು ಮಾಡಲಾಗುತ್ತಿದೆ.
- ‘2010ರಲ್ಲಿ ದೆಹಲಿಯಲ್ಲಿ ಕಾಮನ್‌ವೆಲ್ತ್ ಕೂಟ ನಡೆದಿತ್ತು. ಅದರಲ್ಲಿ ಹಲವು ವಿವಾದಗಳಾಗಿದ್ದವು. ಮೂಲಸೌಲಭ್ಯಗಳ ಅಭಿವೃದ್ಧಿಯಲ್ಲಿ ವಿಳಂಬ, ಭ್ರಷ್ಟಾಚಾರ ಆರೋಪಗಳು ಮತ್ತು ಪೂರ್ವಯೋಜನೆಯಲ್ಲಿ ನಿರ್ಧರಿಸಿದ ವೆಚ್ಚವು ನಿರ್ಮಾಣ ಹಂತದ ಕೊನೆಯಲ್ಲಿ ವಿಪರೀತ ಹೆಚ್ಚಳ ವಾಗಿ ವಿವಾದವಾಗಿದ್ದವು. ಆದ್ದರಿಂದ ಈ ಬಾರಿ ಯಾವುದೇ ವಿವಾದಗಳು ಇಲ್ಲಿ ಆಗದಂತೆ ಎಚ್ಚರ ವಹಿಸಲಾಗಿದೆ ’ ಎಂದು ಮೂಲಗಳು ತಿಳಿಸಿವೆ.
- ‘ಕೂಟದ ನಿರ್ವಹಣಾ ವೆಚ್ಚವು ₹ 3000 ರಿಂದ ₹ 5000 ಕೋಟಿವರೆಗೆ ಆಗಲಿದೆ. ಇದರಲ್ಲಿ ಕಟ್ಟಡ ನಿರ್ಮಾಣ ಮತ್ತಿತರ ಮೂಲಸೌಲಭ್ಯ ಅಭಿವೃದ್ಧಿಯ ವೆಚ್ಚ ಸೇರಿಲ್ಲ’ ಎಂದೂ ಮೂಲಗಳು ತಿಳಿಸಿವೆ.

## ❖ ವಿಶ್ವ ಯುವ ಟಿಟಿ: ದಿವ್ಯಾಂಶಿಗೆ ಕಂಚು

**ಸಂದರ್ಭ: ಕ್ಲುಯ್ ನಪೊಕಾ (ರುಮೇನಿಯಾ), (ಪಿಟಿಐ): ಭಾರತದ ಉದಯೋನ್ಮುಖ ಆಟಗಾರ್ತಿ ದಿವ್ಯಾಂಶಿ ಭೌಮಿಕ್ ಅವರು ಐಟಿಟಿಎಫ್ ವಿಶ್ವ ಯುವ ಟೇಬಲ್ ಟೆನಿಸ್ ಚಾಂಪಿಯನ್ ಷಿಪ್‌ನಲ್ಲಿ 15 ವರ್ಷದೊಳಗಿನವರ ವಿಭಾಗದಲ್ಲಿ ಕಂಚಿನ ಪದಕ ಗೆದ್ದುಕೊಂಡರು.**

- 15 ವರ್ಷ ವಯಸ್ಸಿನ ದಿವ್ಯಾಂಶಿ, ಸೆಮಿಫೈನಲ್‌ನಲ್ಲಿ ಹೋರಾಟ ತೋರಿದರೂ 1–4 ರಲ್ಲಿ (12–10, 10–12, 6–11, 4–11, 8–11ರಲ್ಲಿ) ಚೀನಾದ ಝು ಕ್ವಿಹುಯಿ ಅವರಿಗೆ ಮಣಿದು ಕಂಚಿನ ಪದಕಕ್ಕೆ ತೃಪ್ತಿಪಟ್ಟುಕೊಳ್ಳಬೇಕಾಯಿತು.
- ಇದಕ್ಕೆ ಮೊದಲು ಭಾರತದ ಆಟಗಾರ್ತಿ, ಯುರೋಪ್, ಕೊರಿಯಾ, ಜಪಾನ್ ಎದುರಾಳಿಗಳ ವಿರುದ್ಧ ಹೋರಾಡಿ ಜಯ ಸಾಧಿಸಿದ್ದರು.
- ಭಾರತ ತಂಡ ವಿಭಾಗದಲ್ಲಿ ಎರಡು ಪದಕಗಳನ್ನು ಗೆದ್ದುಕೊಂಡಿತು. 15 ವರ್ಷದೊಳಗಿನ ಬಾಲಕಿಯರ ತಂಡ (ದಿವ್ಯಾಂಶಿ, ಅನನ್ಯಾ ಮುರಳೀಧರನ್, ಅಂಕೊಲಿಕಾ ಚಕ್ರವರ್ತಿ ಮತ್ತು ನೈಶಾ ರೆವಾಸ್ಕರ್) ಕಂಚಿನ ಪದಕ ಗೆದ್ದಿತ್ತು.
- 19 ವರ್ಷದೊಳಗಿನವರ ಬಾಲಕರ ವಿಭಾಗದಲ್ಲಿ ಭಾರತ ತಂಡ ಬೆಳ್ಳಿ ಪದಕ ಗೆದ್ದಿತು. ಅಂಕುರ್ ಭಟ್ಟಾಚಾರ್ಜಿ, ಅಭಿನಂದ್ ಪ್ರದಿವಾಧಿ, ಪುನಿತ್ ಬಿಸ್ವಾಸ್ ಮತ್ತು ಪ್ರಿಯಾನುಜ್ ಭಟ್ಟಾಚಾರ್ಯ ಅವರನ್ನು ತಂಡ ಒಳಗೊಂಡಿತ್ತು.

## ❖ ಮೊಬೈಲ್‌ನಲ್ಲಿ 'ಸಂಚಾರ ಸಾಥಿ' ಆ್ಯಪ್ ಅಳವಡಿಕೆ ಕಡ್ಡಾಯ

**ಸಂದರ್ಭ: ಅನ್ಯರ ಆಧಾರ್ ಕಾರ್ಡ್ ಬಳಸಿ ಅಕ್ರಮವಾಗಿ ಸಿಮ್ ಖರೀದಿಸುವುದು, ಮೊಬೈಲ್ ಕಳ್ಳತನ ಆಗುವುದು, ಪ್ರತಿ ಮೊಬೈಲ್‌ಗೂ ನೀಡಲಾಗುವ ಅಂತರರಾಷ್ಟ್ರೀಯ ಮೊಬೈಲ್ ಗುರುತಿನ ಸಂಖ್ಯೆ (ಐಎಂಇಐ) ನಕಲು ಮಾಡುವುದು ಸೇರಿದಂತೆ ಹಲವು ವಂಚನೆಗಳಿಂದ ಜನರನ್ನು ರಕ್ಷಿಸುವ ಸಲುವಾಗಿ ಎಲ್ಲ ಮೊಬೈಲ್‌ಗಳಲ್ಲಿಯೂ 'ಸಂಚಾರ ಸಾಥಿ' ಆ್ಯಪ್ ಅಳವಡಿಕೆ (ಇನ್‌ಸ್ಟಾಲ್) ಮಾಡುವುದನ್ನು ಕೇಂದ್ರ ಸರ್ಕಾರ ಕಡ್ಡಾಯ ಮಾಡಿದೆ.**




ಏನಿದು 'ಸಂಚಾರ ಸಾಥಿ'?

2023ರಲ್ಲಿ 'ಸಂಚಾರ ಸಾಥಿ' ಆ್ಯಪ್ ಅನ್ನು ಬಿಡುಗಡೆ ಮಾಡಲಾಗಿದೆ. ಮೊಬೈಲ್ ಕಳ್ಳತನದ ಮೂಲಕವೊ ಅಥವಾ ಡುಪ್ಲಿಕೇಟ್ ಸಿಮ್ ಬಳಸಿಕೊಳ್ಳುವ ಮೂಲಕವೊ, ಐಎಂಇಐ ಸಂಖ್ಯೆ ನಕಲು ಮಾಡಿಕೊಂಡು ಎಸಗುವ ವಂಚನೆಯನ್ನು ಪತ್ತೆ ಮಾಡಲು ಈ ಆ್ಯಪ್ ಸಹಕಾರಿಯಾಗಲಿದೆ. 'ಸಂಚಾರ ಸಾಥಿ' ಎಂಬ ವೆಬ್‌ಸೈಟ್ ಕೂಡ ಇದೆ.

- ಕಳ್ಳತನವಾದ ಮೊಬೈಲ್‌ನ ಐಎಂಇಐ ಸಂಖ್ಯೆ ಬಳಸಿಕೊಂಡು ಆ ಮೊಬೈಲ್ ಅನ್ನು ಈ ಆ್ಯಪ್ ಮೂಲಕ ನಿಷ್ಕ್ರಿಯಗೊಳಿಸಬಹುದು
- ಐಎಂಇಐ ಸಂಖ್ಯೆಯನ್ನು ನಕಲು ಮಾಡಿಕೊಂಡು, ಬೇರೆ ದೇಶದಲ್ಲಿ ಕೂತು ಸೈಬರ್ ಅಪರಾಧ, ಬ್ಯಾಂಕ್ ಖಾತೆ ಬಳಕೆ ಸೇರಿದಂತೆ ಹಲವು ಅಕ್ರಮ ಎಸಗಲಾಗುತ್ತದೆ. ಮೊಬೈಲ್ ಖರೀದಿಸುವವರು, ಖರೀದಿಗೂ ಮುನ್ನ ಈ ಆ್ಯಪ್ ಮೂಲಕ ತಾವು ಖರೀದಿಸುವ ಐಎಂಇಐ ಸಂಖ್ಯೆಯನ್ನು ಪರಿಶೀಲಿಸಿಕೊಳ್ಳಬಹುದು
- ತಮ್ಮ ಆಧಾರ್ ಕಾರ್ಡ್ ಅಥವಾ ಪಾಸ್‌ಪೋರ್ಟ್ ಬಳಸಿಕೊಂಡು ಅಕ್ರಮವಾಗಿ ಸಿಮ್ ಖರೀದಿ ಮಾಡಲಾಗಿದ್ದರೆ, ಈ ಆ್ಯಪ್ ಮೂಲಕ ಅಂಥ ಅಕ್ರಮ ಸಂಪರ್ಕವನ್ನು ನಿಷ್ಕ್ರಿಯ ಮಾಡಬಹುದು

- ಈ ಸಂಬಂಧ ಭಾರತದ ಎಲ್ಲ ಮೊಬೈಲ್ ತಯಾರಕರಿಗೆ, ಮೊಬೈಲ್ ಸೆಟ್‌ಗಳನ್ನು ಆಮದು ಮಾಡಿಕೊಳ್ಳುವ ಕಂಪನಿಗಳಿಗೆ ದೂರಸಂಪರ್ಕ ಸಚಿವಾಲಯವು ನ.28ರಂದು ಕೆಲವು ನಿರ್ದೇಶನಗಳನ್ನು ನೀಡಿ ಆದೇಶ ಹೊರಡಿಸಿದೆ.
- 'ಭಾರತದಲ್ಲಿ ತಯಾರಾಗುವ ಅಥವಾ ಆಮದು ಮಾಡಿಕೊಳ್ಳಲಾಗುವ ಎಲ್ಲ ಮೊಬೈಲ್ ಗಳಲ್ಲಿಯೂ 'ಸಂಚಾರ ಸಾಥಿ' ಆ್ಯಪ್ ಅನ್ನು ಮೊದಲೇ ಇನ್‌ಸ್ಟಾಲ್ ಮಾಡಿರಬೇಕು. ಈಗಾಗಲೇ ಮಾರುಕಟ್ಟೆಯಲ್ಲಿರುವ (ಇನ್ನೂ ಖರೀದಿಯಾಗದ) ಮೊಬೈಲ್‌ಗಳಲ್ಲಿ ಮೊದಲ ಸಾಫ್ಟ್‌ವೇರ್ ಅಪ್‌ಡೇಟ್ ವೇಳೆ ಈ ಆ್ಯಪ್ ಅನ್ನು ಬಳಕೆದಾರರಿಗೆ ನೀಡಬೇಕು' ಎಂದು ಸಚಿವಾಲಯ ಹೇಳಿದೆ.
- 'ಈ ಆ್ಯಪ್ ಅನ್ನು ಮೊದಲೇ 'ಇನ್‌ಸ್ಟಾಲ್' ಮಾಡಿರುವ ಹೊಸ ಮೊಬೈಲ್‌ಗಳನ್ನು 'ಸೆಟ್ಟಿಂಗ್' ಮಾಡಿಕೊಳ್ಳುವಾಗಲೇ ಬಳಕೆದಾರರಿಗೆ ಈ ಆ್ಯಪ್ ಇರುವುದು ಸುಲಭವಾಗಿ ಕಾಣುವಂತೆ ಮಾಡಬೇಕು. ಈ ಆ್ಯಪ್‌ನ ಕಾರ್ಯಾಚರಣೆಯನ್ನು ಡಿಸೇಬಲ್ ಮಾಡುವುದಾಗಲೀ ಅಥವಾ ನಿರ್ಬಂಧಿಸುವುದಾಗಲೀ ಮಾಡುವಂತಿಲ್ಲ' ಎಂದು ಆದೇಶದಲ್ಲಿ ಹೇಳಲಾಗಿದೆ.
- 'ತಯಾರಿಕಾ ಕಂಪನಿಗಳು ಮತ್ತು ಮೊಬೈಲ್‌ಗಳನ್ನು ಆಮದು ಮಾಡಿಕೊಳ್ಳುವ ಕಂಪನಿಗಳು ಆದೇಶ ಪ್ರಕಟವಾದ 120 ದಿನಗಳ ಒಳಗೆ ಆ್ಯಪ್ ಇನ್‌ಸ್ಟಾಲ್ ಆದ ಕುರಿತು ವರದಿ ನೀಡಬೇಕು' ಎಂದೂ ಹೇಳಿದೆ.
- ಆದೇಶ ಪಾಲಿಸದಿದ್ದರೆ ಕ್ರಮ: ಈ ಆದೇಶವನ್ನು ಪಾಲಿಸದಿದ್ದರೆ **ದೂರಸಂಪರ್ಕ ಕಾಯ್ದೆ –2023 ಮತ್ತು ದೂರಸಂಪರ್ಕ ಸೈಬರ್ ಭದ್ರತಾ ನಿಯಮಗಳು – 2024 ಮತ್ತು ಇತರೆ ಕಾಯ್ದೆಗಳ ಅನ್ವಯ** ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಸರ್ಕಾರ ಎಚ್ಚರಿಸಿದೆ.

## ❖ ಇಂದಿರಾ ಕಿಟ್‌ಗೆ ಕ್ಯೂಆರ್ ಕೋಡ್

**ಸಂದರ್ಭ: 'ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲಿಯೂ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಬಹುದಾದ ತಂತ್ರಾಂಶ ಅಳವಡಿಸಿ, ಅದರ ಆಧಾರದಲ್ಲಿ ಪಡಿತರ ಚೀಟಿದಾರರಿಗೆ 'ಇಂದಿರಾ' ಆಹಾರ ಕಿಟ್ ವಿತರಿಸಲು ಕ್ರಮ ತೆಗೆದುಕೊಳ್ಳಬೇಕು' ಎಂದು ಆಹಾರ ಇಲಾಖೆಯ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ.**

- **ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ 5 ಕಿಲೋ ಅಕ್ಕಿಯ ಬದಲು 'ಇಂದಿರಾ' (ಐಎನ್‌ಡಿಐಆರ್‌ಎ – ಇಂಟೆಗ್ರೇಟೆಡ್ ನ್ಯೂಟ್ರಿಷಿಯನ್ ಆ್ಯಂಡ್ ಡಯೆಟರಿ ಇನಿಷಿಯೇಟಿವ್ ಫಾರ್ ರಿವೈಟಲೈಷಿಂಗ್ ಅನ್ನಭಾಗ್ಯ ಬೆನಿಫಿಷರೀಸ್- ಅನ್ನಭಾಗ್ಯ ಫಲಾನುಭವಿ ಗಳನ್ನು ಪುನರುಜ್ಜೀವನಗೊಳಿಸುವ ಸಮಗ್ರ ಪೋಷಣೆ ಮತ್ತು ಆಹಾರ ಉಪಕ್ರಮ) ಆಹಾರ ಕಿಟ್ ಯೋಜನೆ**ಯ ಅನುಷ್ಠಾನದ ಕುರಿತು ಮುಖ್ಯಮಂತ್ರಿ ಸಭೆ ನಡೆಸಿದರು.
- 'ಕಿಟ್‌ನಲ್ಲಿ ಉತ್ತಮ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ಪೂರೈಸಬೇಕು. ಗುಣಮಟ್ಟದಲ್ಲಿ ರಾಜಿ ಆಗಬಾರದು. ಅಳತೆಯಲ್ಲಿ ಹೆಚ್ಚು ಕಡಿಮೆ ಆಗದಂತೆಯೂ ಎಚ್ಚರಿಕೆ ವಹಿಸಬೇಕು' ಎಂದು ಹೇಳಿದರು.

## ❖ ಎಲ್‌ಕೆಜಿ ಮಕ್ಕಳಿಗೂ ಮಧ್ಯಾಹ್ನದ ಬಿಸಿಯೂಟ

**ಸಂದರ್ಭ: ಸರ್ಕಾರಿ ಶಾಲೆಗಳಲ್ಲಿ ಆರಂಭವಾಗಿರುವ ಪೂರ್ವ ಪ್ರಾಥಮಿಕ ತರಗತಿಯ ಮಕ್ಕಳಿಗೂ ಮೊಟ್ಟೆ, ಬಾಳೆಹಣ್ಣು ಸೇರಿದಂತೆ ಮಧ್ಯಾಹ್ನದ ಬಿಸಿಯೂಟ ಸಿಗಲಿದೆ.**

- 2019–20ನೇ ಶೈಕ್ಷಣಿಕ ವರ್ಷದಿಂದಲೇ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ವಿಭಾಗಗಳನ್ನು ಆರಂಭಿಸಲಾಗಿತ್ತು. ಆದರೆ, ಮಧ್ಯಾಹ್ನದ ಬಿಸಿಯೂಟ ವಿಸ್ತರಣೆ ಆಗಿರಲಿಲ್ಲ.
- **ಪ್ರಧಾನಮಂತ್ರಿ ಪೋಷಣ್ ಶಕ್ತಿ ಅಭಿಯಾನದ ಅನುಮೋದನಾ ಮಂಡಳಿ** ಸಭೆಯ ನಿರ್ಧಾರದಂತೆ **ಡಿ.1ರಿಂದ** ಪೂರ್ವ ಪ್ರಾಥಮಿಕ ತರಗತಿಯ ಮಕ್ಕಳಿಗೂ ವಿಸ್ತರಿಸಲಾಗಿದೆ.
- ಪ್ರತಿ ಮಗುವಿಗೆ **ಪ್ರತಿದಿನ ಕೇಂದ್ರ ಸರ್ಕಾರ ₹4.07, ರಾಜ್ಯ ಸರ್ಕಾರ ₹2.71 ವೆಚ್ಚ** ಮಾಡಲಿವೆ. ಒಟ್ಟು ಆಹಾರ ತಯಾರಿ ವೆಚ್ಚ ₹6.78 ನಿಗದಿ ಮಾಡಲಾಗಿದೆ. ಅದಲ್ಲದೆ, ವಾರದಲ್ಲಿ **ನಾಲ್ಕು ದಿನ ಮೊಟ್ಟೆ ಖರೀದಿಗೆ ಅಜೀಂ ಪ್ರೇಮ್‌ಜಿ ಫೌಂಡೇಶನ್ ಹಣಕಾಸಿನ ಸಹಾಯ ಮಾಡಲಿದೆ**. ಉಳಿದ ಎರಡು ದಿನಗಳ ವೆಚ್ಚವನ್ನು ಶಾಲಾ ಶಿಕ್ಷಣ ಇಲಾಖೆ ಭರಿಸುತ್ತದೆ.

## ❖ ರಾಜ್ಯದಲ್ಲಿ 'ಡಿಜಿಟಲ್ ಇ- ಸ್ಟ್ಯಾಂಪ್' ಜಾರಿ: ಸ್ಟ್ಯಾಂಪ್ ವಂಚನೆ, ಭದ್ರತಾ ಲೋಪ ತಡೆಗೆ ಕಂದಾಯ ಇಲಾಖೆ ಹೊಸ ವ್ಯವಸ್ಥೆ

**ಸಂದರ್ಭ: ಹೊಸ ವ್ಯವಸ್ಥೆಯಲ್ಲಿ ನಾಗರಿಕರು ಆಧಾರ್ ಆಧಾರಿತ ಇ- ಸಹಿ ಅಥವಾ ಡಿಜಿಟಲ್ ಸಿಗ್ನೇಚರ್ ಸರ್ಟಿಫಿಕೇಟ್ (ಡಿಎಸ್‌ಸಿ) ಬಳಸಿ ದಸ್ತಾವೇಜುಗಳಿಗೆ ಡಿಜಿಟಲ್ ಸಹಿ ಮಾಡಬಹುದು, ಕಂದಾಯ ಸಚಿವ.**

- ನೋಂದಣಿ ಮತ್ತು ನೋಂದಣಿಯೇತರ ಛಾಪಾ ಕಾಗದ ವಹಿವಾಟುಗಳಿಗೆ ಬಳಸುವ 'ಇ- ಸ್ಟ್ಯಾಂಪ್ ' ಬದಲಿಗೆ 'ಡಿಜಿಟಲ್ ಇ- ಸ್ಟ್ಯಾಂಪ್' ವ್ಯವಸ್ಥೆಯನ್ನು ಕಂದಾಯ ಇಲಾಖೆ ಜಾರಿಗೆ ತಂದಿದೆ.


ವಿಶೇಷತೆಗಳೇನು?
- ಮನೆಯಿಂದಲೇ ಸ್ಟ್ಯಾಂಪ್ ಸೃಷ್ಟಿಸಬಹುದು. ಸೇವೆ 24x7 ಲಭ್ಯ
- ಸುರಕ್ಷಿತ ಆನ್‌ಲೈನ್ ಪಾವತಿ, ಹಣ ನೇರವಾಗಿ ಸರ್ಕಾರದ ಖಜಾನೆಗೆ ಸೇರಲಿದೆ
- ಗುರುತಿನ ವಂಚನೆ, ನಕಲಿ ಸಹಿ ತಡೆಯಲು 'ಇ –ಸಹಿ' ವ್ಯವಸ್ಥೆ
- ಕಾಗದರಹಿತ, ಪರಿಸರ ಸ್ನೇಹಿ, ಸುರಕ್ಷಿತ ಮತ್ತು ವಿಶ್ವಾಸಾರ್ಹ
- ಡಿಜಿಟಲ್ ರೂಪದ ದಸ್ತಾವೇಜುಗಳು ಕಾನೂನುಬದ್ಧ

- 'ಸ್ಟ್ಯಾಂಪ್ ವಂಚನೆ ಮತ್ತು ಭದ್ರತಾ ಲೋಪವನ್ನು ಸಂಪೂರ್ಣ ತೊಡೆದು ಹಾಕಲು ಈ ಹೊಸ ವ್ಯವಸ್ಥೆ ಪರಿಚಯಿಸಲಾಗಿದೆ. ಈ ವ್ಯವಸ್ಥೆಗೆ ಅಗತ್ಯವಾದ ನಿಯಮಗಳನ್ನು ಪ್ರಕಟಿಸಲಾಗಿದ್ದು, ಮುಂದಿನ ದಿನಗಳಲ್ಲಿ 'ಡಿಜಿಟಲ್ ಇ-ಸ್ಟ್ಯಾಂಪ್' ಕಡ್ಡಾಯಗೊಳಿಸಲಾಗುವುದು' .
- 'ನಾಗರಿಕರು ಮಧ್ಯವರ್ತಿಗಳ ನೆರವಿಲ್ಲದೆ, ಮನೆಯಲ್ಲಿಯೇ ಕುಳಿತು 'ಡಿಜಿಟಲ್ ಇ- ಸ್ಟ್ಯಾಂಪ್' ತಯಾರಿಸಿಕೊಳ್ಳಬಹುದು. ಇಂಟರ್‌ನೆಟ್ ಇದ್ದರೆ 24x7 ಜಗತ್ತಿನಲ್ಲಿ ಎಲ್ಲಿಯೇ ಕುಳಿತು ಈ ಸೇವೆಯನ್ನು ಪಡೆಯಬಹುದು. ಎಲ್ಲ ಸೇವೆಗಳು ಸಂಪೂರ್ಣ ಡಿಜಿಟಲ್ ಆಗಿರಲಿದೆ. ಸುರಕ್ಷಿತ ಮತ್ತು ವೇಗವಾಗಿ ಆನ್ ಲೈನ್ ಪಾವತಿ ಮಾಡಲು ಕೂಡಾ ಅವಕಾಶವಿದೆ' .
- 'ಹಿಂದೆ ಛಾಪಾ ಕಾಗದಗಳನ್ನು ಮುದ್ರಿಸಲಾಗುತ್ತಿತ್ತು. ನಕಲಿ ಹಾಗೂ ಛಾಪಾ ಕಾಗದಗಳ ಮರುಬಳಕೆಯ ವಂಚನೆ ತೆಲಗಿ ಹಗರಣದಿಂದ ಬಹಿರಂಗವಾಗಿತ್ತು. ಅದನ್ನು ತಡೆಯಲು ಭೌತಿಕ ಸ್ಟಾಂಪ್ ಕಾಗದಗಳ ಬಳಕೆ ನಿಲ್ಲಿಸಿ, 'ಇ-ಸ್ಟ್ಯಾಂಪ್' ವ್ಯವಸ್ಥೆಯನ್ನು ಜಾರಿಗೆ ತರಲಾಗಿತ್ತು.
- 'ಸ್ಟಾಕ್ ಹೋಲ್ಡಿಂಗ್ ಕಾರ್ಪೊರೇಷನ್ ಲಿಮಿಟೆಡ್ (ಎಸ್‌ಎಚ್‌ಸಿಐಎಲ್) ಸಹಯೋಗದಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ಇ- ಸ್ಟ್ಯಾಂಪ್' ಕಾಗದವನ್ನು ಮುದ್ರಿಸುತ್ತಿದೆ. ಆದರೆ, ಝರಾಕ್ಸ್ ಯಂತ್ರಗಳ ಮೂಲಕ ಇ-ಸ್ಟ್ಯಾಂಪ್ ಪ್ರಮಾಣಪತ್ರಗಳನ್ನು ನಕಲು ಅಥವಾ ಅವುಗಳಂತೆಯೇ ಕಾಣುವ ಪ್ರತಿಗಳನ್ನು ಸೃಷ್ಟಿಸಲು ಸಾಧ್ಯವಾಗಿತ್ತು. ಇದರಿಂದ ಮೂಲ ಹಾಗೂ ನಕಲಿ ಯಾವುದೆಂದು ಪತ್ತೆ ಮಾಡುವುದೇ ಸವಾಲಾಗಿದೆ. ಒಂದು ಉದ್ದೇಶಕ್ಕೆ ಖರೀದಿಸಿದ ಸ್ಟ್ಯಾಂಪ್ ಕಾಗದವನ್ನು ಬೇರೆ ರೀತಿಯ ದಸ್ತಾವೇಜಿಗೆ ಬಳಸುವ ಪ್ರಸಂಗಗಳೂ ನಡೆದಿವೆ. ನಕಲಿ, ನಕಲು ಪ್ರತಿ ಹಾಗೂ ತಪ್ಪು ವರ್ಗೀಕರಣದಿಂದ ಸರ್ಕಾರಕ್ಕೆ ಸೇರುವ ಸ್ಟ್ಯಾಂಪ್ ಶುಲ್ಕ ತಪ್ಪಿಸಿದ ಹಲವು ಘಟನೆಗಳೂ ನಡೆದಿವೆ.

- ‘ಡಿಜಿಟಲ್ ಇ- ಸ್ಟ್ಯಾಂಪ್ ವ್ಯವಸ್ಥೆ ಎಲ್ಲ ರೀತಿಯಲ್ಲೂ ಸುರಕ್ಷಿತವಾಗಿ ಇರಲಿದೆ. ಹೊಸ ವ್ಯವಸ್ಥೆ ಜಾರಿಯಿಂದ ಇ-ಸ್ಟ್ಯಾಂಪ್ ವಿತರಣೆಗಾಗಿ ಎಸ್‌ಎಚ್‌ಸಿಐಎಲ್‌ಗೆ ಸರ್ಕಾರ ನೀಡುವ ಕಮಿಷನ್ ಮೊತ್ತ ಉಳಿತಾಯ ಆಗಲಿದೆ’ .

## ❖ ಪುಟಿನ್ ಭೇಟಿ, ಸ್ನೇಹಕ್ಕೆ ಪುಷ್ಟಿ?

**ಸಂದರ್ಭ: ಭಾರತ ಹಾಗೂ ರಷ್ಯಾ ನಡುವಿನ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲು ಡಿ. 4ರಂದು ವ್ಲಾದಿಮಿರ್ ಪುಟಿನ್ ಭಾರತಕ್ಕೆ ಆಗಮಿಸುತ್ತಿದ್ದಾರೆ. 2021ರಲ್ಲಿ ಭಾರತದಲ್ಲಿ ನಡೆದ ಶೃಂಗಸಭೆಯಲ್ಲಿ ಪುಟಿನ್ ಪಾಲ್ಗೊಂಡಿದ್ದರು. ಈ ನಾಲ್ಕು ವರ್ಷಗಳಲ್ಲಿ ಭಾರತ ಹಾಗೂ ರಷ್ಯಾಗೆ ಸಂಬಂಧಿಸಿದಂತೆ ಅನೇಕ ಬೆಳವಣಿಗೆಗಳು ನಡೆದಿವೆ. ಜಾಗತಿಕ ರಾಜಕೀಯದಲ್ಲಿ ಸಾಕಷ್ಟು ಬದಲಾವಣೆಗಳು ಆಗಿವೆ.**

- ಉಕ್ರೇನ್ ಹಾಗೂ ರಷ್ಯಾ ನಡುವೆ ಕದನ ಚಾಲ್ತಿಯಲ್ಲಿದೆ. ಚೀನಾ ಹಾಗೂ ರಷ್ಯಾ ನಡುವಿನ ಸಂಬಂಧ ಗಟ್ಟಿಗೊಂಡಿದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ರಷ್ಯಾ ಜೊತೆಗಿನ ವಾಣಿಜ್ಯಿಕ ಸಂಬಂಧದ ಕಾರಣಕ್ಕೆ ಭಾರತದ ಮೇಲೆ ದಂಡನಾಸುಂಕ ಹೇರಿದ್ದಾರೆ.
- ಭಾರತ ಹಾಗೂ ಪಾಕಿಸ್ತಾನದ ನಡುವಿನ ಘರ್ಷಣೆಯ ವೇಳೆ ರಷ್ಯಾದ ಯುದ್ಧ ಉಪಕರಣಗಳು ಭಾರತದ ಸಹಾಯಕ್ಕೆ ಒದಗಿದ್ದು ಖಾತರಿಯಾಗಿದೆ. ಈ ಎಲ್ಲ ಸಂಗತಿಗಳ ಬೆಳಕಿನಲ್ಲಿಯೇ ಪುಟಿನ್‌ರ ಭಾರತ ಭೇಟಿಯನ್ನು ಮತ್ತು ಈ ಭೇಟಿ ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ಸಂಬಂಧದ ಮೇಲೆ ಉಂಟು ಮಾಡುವ ಪರಿಣಾಮವನ್ನು ಅಂದಾಜಿಸಬೇಕಿದೆ.
- **ಸ್ವಾತಂತ್ರ್ಯಾನಂತರ ಭಾರತ,** ಸೋವಿಯತ್ ಒಕ್ಕೂಟದಿಂದ ಕೈಗಾರಿಕೀಕರಣಕ್ಕೆ ಪ್ರೇರಣೆ ಮತ್ತು ಸಹಕಾರ ಪಡೆದಿತ್ತು.
    - ✓ 1951ರಲ್ಲಿ ಕಾಶ್ಮೀರ ವಿವಾದ ವಿಶ್ವಸಂಸ್ಥೆಯಲ್ಲಿ ಚರ್ಚೆಗೊಳಗಾದಾಗ ಭಾರತಕ್ಕೆ ಬೆಂಬಲವಾಗಿ ಸೋವಿಯತ್ ತನ್ನ ವೀಟೊ ಚಲಾಯಿಸಿತ್ತು.
    - ✓ 1953ರಲ್ಲಿ ಸೋವಿಯತ್ ನಾಯಕ ಜೋಸೆಫ್ ಸ್ಟ್ಯಾಲಿನ್, ಭಾರತದ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರಿಗೆ, ‘ನೀವು ನಮ್ಮ ಶತ್ರುಗಳಲ್ಲ ಎನ್ನುವುದು ನಮ್ಮ ನೀತಿಯಾಗಿ ಮುಂದುವರಿಯುತ್ತದೆ ಮತ್ತು ನೀವು ನಮ್ಮ ಸಹಾಯವನ್ನು ನಂಬಬಹುದು’ ಎಂದು ಹೇಳಿದ್ದರು.
    - ✓ 1955ರಲ್ಲಿ ಸೋವಿಯತ್ ರಷ್ಯಾಕ್ಕೆ ಪ್ರಧಾನಿ ನೆಹರೂ ಭೇಟಿಯಿತ್ತರು. ಅದೇ ವರ್ಷ ನಿಕಿತಾ ಕ್ರುಶ್ಚೇವ್ ಭಾರತಕ್ಕೆ ಬಂದುಹೋದರು. ಭಿಲಾಯಿಯ ಉಕ್ಕಿನ ಕಾರ್ಖಾನೆ ನಿರ್ಮಾಣಕ್ಕೆ ಸೋವಿಯತ್ ಕೈ ಜೋಡಿಸಿತು.
- **1970ರ ದಶಕದಲ್ಲಿ** ಚೀನಾದ ಜೊತೆಗೆ ಮೈತ್ರಿ ಸಾಧಿಸಲು ಹವಣಿಸುತ್ತಿದ್ದ ಅಮೆರಿಕ, ಅದಕ್ಕೆ ಪೂರಕವಾಗಿ ಪಾಕಿಸ್ತಾನವನ್ನು ಸೇತುವೆಯಾಗಿ ನೋಡುತ್ತಿತ್ತು. 1971ರಲ್ಲಿ ಬಾಂಗ್ಲಾ ವಿಮೋಚನಾ ಯುದ್ಧ ನಡೆದಾಗ, ಪಾಕಿಸ್ತಾನಕ್ಕೆ ಅಮೆರಿಕ ಬೆಂಬಲವಾಗಿ ನಿಂತಿತು. ಯುದ್ಧದಲ್ಲಿ ಭಾರತವನ್ನು ಬೆದರಿಸಲೋ ಎಂಬಂತೆ ಅಮೆರಿಕ ತನ್ನ ಯುಎಸ್‌ಎಸ್ ಎಂಟರ್‌ಪ್ರೈಸ್ ವಿಮಾನವಾಹಕ ನೌಕೆ ಮತ್ತು ಏಳನೇ ಫ್ಲೀಟ್ ಕಾರ್ಯಪಡೆಯನ್ನು ಬಂಗಾಳ ಕೊಲ್ಲಿಗೆ ಕಳುಹಿಸಿತು. ಆಗ ಭಾರತದ ನೆರವಿಗೆ ಬಂದದ್ದು ಸೋವಿಯತ್ ಒಕ್ಕೂಟ!
- **ಅಮೆರಿಕ ಹಾಗೂ ಪಾಕಿಸ್ತಾನ** ನಡುವಿನ ಸಖ್ಯದ ಪರಿಣಾಮಗಳನ್ನು ಅಂದಾಜಿಸಿದ್ದ ಭಾರತದ ಪ್ರಧಾನಿ ಇಂದಿರಾ ಗಾಂಧಿ, ಸೋವಿಯತ್ ಜೊತೆಗೆ ಸ್ನೇಹ ಮತ್ತು ಸಹಕಾರ ಒಪ್ಪಂದಕ್ಕೆ ಸಹಿ ಹಾಕಿದ್ದರು. ಹಾಗಾಗಿ, ಯುಎಸ್‌ಎಸ್ ಎಂಟರ್‌ಪ್ರೈಸ್ ಹಿಂದೂ ಮಹಾಸಾಗರವನ್ನು ಪ್ರವೇಶಿಸಿದಾಗ, ಅಮೆರಿಕದ ಯುದ್ಧನೌಕೆಗಳು ಮತ್ತು ಭಾರತದ ಭೂಪ್ರದೇಶದ ನಡುವೆ ಸೋವಿಯತ್ ನೌಕಾಪಡೆ ನಿಯೋಜನೆಗೊಂಡಿತು. ಇದು ಬಾಂಗ್ಲಾಯುದ್ಧದಲ್ಲಿ ನಿರ್ಣಾಯಕ ಎನಿಸಿತು. ಅಮೆರಿಕ ತನ್ನ ಯುದ್ಧನೌಕೆಯನ್ನು ಹಿಂದಕ್ಕೆ ಕರೆಸಿಕೊಂಡಿತು.

Dr. Rajkumar IAS/KAS Academy

- **ಆ ಬಳಿಕ ಭಾರತ ಹಾಗೂ ಸೋವಿಯತ್ ಒಕ್ಕೂಟದ** ನಡುವಿನ ಸಂಬಂಧ ಅಲಿಪ್ತ ನೀತಿಯ ಚೌಕಟ್ಟನ್ನು ದಾಟಿ ಮತ್ತಷ್ಟು ಗಟ್ಟಿಯಾಯಿತು. ವಿವಿಧ ಕ್ಷೇತ್ರಗಳಲ್ಲಿ ಸೋವಿಯತ್ ಸಹಕಾರ ಪ್ರತಿಫಲಿಸಿತು. 1984ರಲ್ಲಿ ಸೋವಿಯತ್ ಬಾಹ್ಯಾಕಾಶ ನೌಕೆಯಲ್ಲಿ ಭಾರತದ ರಾಕೇಶ್ ಶರ್ಮ ಗಗನಯಾತ್ರೆ ನಡೆಸಿದರು. 1985ರಲ್ಲಿ ಸೋವಿಯತ್ ನೆರವಿನೊಂದಿಗೆ ತಮಿಳುನಾಡಿನ ಕೂಡಂಕುಳಂನಲ್ಲಿ ಪರಮಾಣು ವಿದ್ಯುತ್ ಸ್ಥಾವರ ಆರಂಭಿಸಲಾಯಿತು.
- **1991ರಲ್ಲಿ ಸೋವಿಯತ್ ವಿಘಟನೆಯಾದ** ಬಳಿಕ ಭಾರತ-ರಷ್ಯಾದ ಸಂಬಂಧ ಮುಂದುವರಿಯಿತು. ಭಾರತದ ವಿದೇಶಾಂಗ ನೀತಿಯಲ್ಲಿ ರಷ್ಯಾಕ್ಕೆ ಆದ್ಯತೆ ದೊರೆಯಿತು. ಸೋವಿಯತ್ ವಿಘಟನೆಯಿಂದಾಗಿ ರಷ್ಯಾ ವಾಣಿಜ್ಯಿಕ ಹಾಗೂ ಆರ್ಥಿಕ ಸವಾಲನ್ನು ಎದುರಿಸುತ್ತಿತ್ತು. 1993ರಲ್ಲಿ ಭಾರತ ಹಾಗೂ ರಷ್ಯಾ ನಡುವಿನ ಸ್ನೇಹ ಮತ್ತು ಸಹಕಾರ ಒಪ್ಪಂದ ನವೀಕರಣಗೊಂಡಿತು. ಮೇ 7, 2000ರಂದು ವ್ಲಾದಿಮಿರ್ ಪುಟಿನ್ ರಷ್ಯಾದ ಅಧ್ಯಕ್ಷರಾದ ಬಳಿಕ ಭಾರತದ ಜೊತೆಗೆ ರಷ್ಯಾ ಮತ್ತಷ್ಟು ಬೆಸೆದುಕೊಂಡಿತು. 2000 ಇಸವಿಯ ಅಕ್ಟೋಬರ್‌ನಲ್ಲಿ ಪುಟಿನ್ ಭಾರತಕ್ಕೆ ಭೇಟಿಯಿತ್ತರು. ಭದ್ರತೆ, ರಕ್ಷಣೆ, ವ್ಯಾಪಾರ ಮತ್ತು ಆರ್ಥಿಕತೆ, ವಿಜ್ಞಾನ ಮತ್ತು ತಂತ್ರಜ್ಞಾನ, ಸಂಸ್ಕೃತಿ, ಹೀಗೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳು ಗೌರವ ಹಾಗೂ ಸಹಕಾರದೊಂದಿಗೆ ಮುಂದುವರಿಯಲು ನಿರ್ಧರಿಸಿದವು. ಜಂಟಿಯಾಗಿ ಬ್ರಹ್ಮೋಸ್ ಕ್ಷಿಪಣಿಯನ್ನು ಅಭಿವೃದ್ಧಿಪಡಿಸಿದವು. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಕಾಯಂ ಸದಸ್ಯತ್ವಕ್ಕೆ ಭಾರತದ ಉಮೇದುವಾರಿಕೆಯನ್ನು ರಷ್ಯಾ ಬೆಂಬಲಿಸಿತು.
- **2003ರಲ್ಲಿ ಭಾರತದ ನಾಗರಿಕ ಪರಮಾಣು ಕಾರ್ಯಕ್ರಮವನ್ನು** ವಿಸ್ತರಿಸುವ ಭಾಗವಾಗಿ 'ಪರಮಾಣು ಸಹಕಾರ ಒಪ್ಪಂದ' ಕ್ಕೆ ರಷ್ಯಾ ಮತ್ತು ಭಾರತ ಸಹಿ ಹಾಕಿದವು. 2010ರ ಡಿಸೆಂಬರ್‌ನಲ್ಲಿ ಪುಟಿನ್ ಭಾರತಕ್ಕೆ ಬಂದಾಗ, ಉಭಯ ದೇಶಗಳ ನಡುವಿನ ಸಂಬಂಧವನ್ನು ಎತ್ತರಿಸುವ ವಿಶೇಷ ಕಾರ್ಯತಾಂತ್ರಿಕ ಸಹಭಾಗಿತ್ವ ಒಪ್ಪಂದಕ್ಕೆ ಅಂಕಿತ ಹಾಕಲಾಯಿತು. 2014ರಲ್ಲಿ ನರೇಂದ್ರ ಮೋದಿ ಅವರು ಪ್ರಧಾನಿಯಾದ ಬಳಿಕ ಅಮೆರಿಕವನ್ನು ಹೆಚ್ಚು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮತ್ತು ರಷ್ಯಾದ ಜೊತೆಗೆ ಸಮತೋಲನ ಸಾಧಿಸುವ ಹೆಜ್ಜೆ ಇಡಲಾಯಿತು. ರಕ್ಷಣಾ ಸಾಮಗ್ರಿಗಳ ಖರೀದಿಯಲ್ಲಿ ರಷ್ಯಾ ಮೇಲಿನ ಅವಲಂಬನೆಯನ್ನು ಕಡಿತಗೊಳಿಸುವ ಹಾಗೂ ವೈವಿಧ್ಯ ಕಾಯ್ದುಕೊಳ್ಳುವ ಕ್ರಮ ಕೈಗೊಳ್ಳಲಾಯಿತು. ಡೊನಾಲ್ಡ್ ಟ್ರಂಪ್ ಅವರು ಅಮೆರಿಕ ಅಧ್ಯಕ್ಷರಾದ ಬಳಿಕ 2017ರಲ್ಲಿ ಅಮೆರಿಕ, ಭಾರತ, ಜಪಾನ್ ಮತ್ತು ಆಸ್ಟ್ರೇಲಿಯಾ ಒಳಗೊಂಡ 'ಕ್ವಾಡ್' ಹೊಸ ಹುರುಪು ಪಡೆಯಿತು. ಭಾರತದ ಇಂಡೋ-ಪೆಸಿಫಿಕ್ ಕಾರ್ಯತಂತ್ರದಲ್ಲಿ ಬದಲಾವಣೆ ಯಾದಾಗ ಚೀನಾದೊಂದಿಗೆ ರಷ್ಯಾ ಇನ್ನಷ್ಟು ಬೆಸೆದುಕೊಂಡಿತು.
- **2020ರಲ್ಲಿ ಭಾರತ ಹಾಗೂ ರಷ್ಯಾ ನಡುವಿನ** ವಾರ್ಷಿಕ ಶೃಂಗಸಭೆ ರದ್ದಾಯಿತು! ಅದಕ್ಕೆ ಕೋವಿಡ್ ಕಾರಣ ಎನ್ನಲಾಯಿತು. ಆದರೆ, ಇತರ ಶೃಂಗಸಭೆಗಳು ವಿಡಿಯೊ ಕಾನ್ಫರೆನ್ಸ್ ಮೂಲಕ ನಡೆದಿದ್ದವು. ಅಸಲಿಗೆ ಭಾರತ ಹಾಗೂ ಅಮೆರಿಕ ನಡುವೆ ಬಿಗಿಯಾದ ಬಂಧ ಹಾಗೂ ಅಮೆರಿಕ ನೇತೃತ್ವದ ಕ್ವಾಡ್‌ನಲ್ಲಿ ಭಾರತ ಭಾಗಿಯಾದದ್ದನ್ನು ವಾರ್ಷಿಕ ಸಭೆಯ ರದ್ದತಿಯ ಮೂಲಕ ರಷ್ಯಾ ವಿರೋಧಿಸಿತ್ತು. ರಷ್ಯಾದ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್, 'ಪಾಶ್ಚಿಮಾತ್ಯ ರಾಷ್ಟ್ರಗಳು ಭಾರತವನ್ನು ದಾಳವಾಗಿಸಿಕೊಂಡಿವೆ' ಎಂದು ಪ್ರತಿಕ್ರಿಯಿಸಿದ್ದರು. ಆದರೆ, 'ನಾವು ಸ್ವತಂತ್ರ ವಿದೇಶಾಂಗ ನೀತಿಯನ್ನು ಹೊಂದಿದ್ದೇವೆ, ಭಾರತದ ಇಂಡೋ-ಪೆಸಿಫಿಕ್ ಕಾರ್ಯತಂತ್ರ ರಾಷ್ಟ್ರೀಯ ಹಿತಾಸಕ್ತಿಗೆ ಪೂರಕವಾಗಿದೆ, ಯಾವುದೇ ನಿರ್ದಿಷ್ಟ ದೇಶದ ಮೇಲೆ ಕೇಂದ್ರೀಕೃತವಾಗಿಲ್ಲ' ಎಂದು ಭಾರತ ತಾಳ್ಮೆಯಿಂದ ಪ್ರತಿಕ್ರಿಯಿಸಿತು.
- ಭಾರತ ತನ್ನ ನಿಲುವಿಗೆ ಬದ್ಧವಾಯಿತು. ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯ ಖರೀದಿಯ ವಿಷಯ ಬಂದಾಗ ಅಮೆರಿಕದ ಒತ್ತಡವನ್ನು ಪಕ್ಕಕ್ಕಿಟ್ಟು ರಷ್ಯಾದ ಜೊತೆಗೆ ಖರೀದಿ ಒಪ್ಪಂದ ಅಂತಿಮಗೊಳಿಸಿತು. ಇದು ಭಾರತ-ರಷ್ಯಾ ನಡುವಿನ ಸಂಬಂಧವನ್ನು ಮತ್ತೊಮ್ಮೆ ಹಳಿಗೆ ತಂದಿತು. 2021ರಲ್ಲಿ ಪುಟಿನ್ ಅವರು ಭಾರತಕ್ಕೆ ಭೇಟಿಯಿತ್ತಾಗ, ಬಾಹ್ಯಾಕಾಶ, ರಕ್ಷಣೆ ಮತ್ತು ಇಂಧನ ಸುರಕ್ಷತೆಯ ಸಹಕಾರ ಸೇರಿದಂತೆ ವಿಭಿನ್ನ ಕ್ಷೇತ್ರಗಳಿಗೆ ಸಂಬಂಧಿಸಿದ 28 ಒಪ್ಪಂದ ಏರ್ಪಟ್ಟಿದ್ದವು.

Dr. Rajkumar IAS/KAS Academy

- **ನಾಲ್ಕು ವರ್ಷಗಳ ಬಳಿಕ ಪುಟಿನ್ ಇದೀಗ ಮತ್ತೊಮ್ಮೆ ಭಾರತಕ್ಕೆ ಬರುತ್ತಿದ್ದಾರೆ**. ರಷ್ಯಾದ ರಕ್ಷಣಾ ಉದ್ಯಮಕ್ಕೆ ಭಾರತ ಎರಡನೇ ಅತಿದೊಡ್ಡ ಮಾರುಕಟ್ಟೆ. ಸುಧಾರಿತ ರಕ್ಷಣಾ ಸಾಮಗ್ರಿಗಳ ಖರೀದಿಯ ಕುರಿತ ಮಾತುಕತೆ, ರಕ್ಷಣೆ, ಭದ್ರತೆ, ಇಂಧನ ಕುರಿತ ಒಪ್ಪಂದಗಳು ನಿರೀಕ್ಷಿತವೇ. ಉಕ್ರೇನ್ ಯುದ್ಧ ಆರಂಭವಾದ ಬಳಿಕ ಮೊದಲ ಬಾರಿಗೆ ಪುಟಿನ್ ಭಾರತಕ್ಕೆ ಆಗಮಿಸುತ್ತಿದ್ದಾರೆ. ಉಕ್ರೇನ್ ಯುದ್ಧ ವಿಷಯದಲ್ಲಿ 'ಇದು ಯುದ್ಧಕ್ಕೆ ಕಾಲವಲ್ಲ' ಎಂದು ಪುಟಿನ್ ಅವರ ಎದುರಿನಲ್ಲಿ ಕೂತು ಪ್ರಧಾನಿ ಮೋದಿ ಹೇಳಿದ್ದರೂ, ಮಾತುಕತೆಯ ಮೂಲಕ ಬಿಕ್ಕಟ್ಟು ಬಗೆಹರಿಸಿಕೊಳ್ಳಿ ಎಂದು ಜಾಗತಿಕ ವೇದಿಕೆಗಳಲ್ಲಿ ಭಾರತ ಸ್ಪಷ್ಟಪಡಿಸಿದ್ದರೂ, ಟ್ರಂಪ್ ಮಾತ್ರ ಉಕ್ರೇನ್ ಯುದ್ಧ ಮುಂದುವರಿದಿದ್ದರೆ ಅದಕ್ಕೆ ಚೀನಾ ಮತ್ತು ಭಾರತ ಕಾರಣ; ರಷ್ಯಾದ ತೈಲ ಖರೀದಿಯನ್ನು ಮುಂದುವರಿಸುವ ಮೂಲಕ ಈ ದೇಶಗಳು ರಷ್ಯಾಕ್ಕೆ ಹಣಕಾಸು ಒದಗಿಸುತ್ತಿವೆ ಎಂದು ಪದೇ ಪದೇ ಹೇಳುತ್ತಿದ್ದಾರೆ.
- **ಅಮೆರಿಕದ ಸುಂಕ ಸಮರದ ನಡುವೆಯೇ** 2025–26ನೇ ಆರ್ಥಿಕ ವರ್ಷದ ಎರಡನೇ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇ 8.2ರಷ್ಟು ದಾಖಲಾಗಿದೆ. ಹಾಗಾಗಿ, ಅಮೆರಿಕದ ಸುಂಕ ಬೆದರಿಕೆಯ ಕಾರಣದಿಂದ ಅಲ್ಲದಿದ್ದರೂ, ಜಾಗತಿಕ ಶಾಂತಿ ಕುರಿತ ಭಾರತದ ಬದ್ಧತೆಯ ದೃಷ್ಟಿಯಿಂದ ಮತ್ತು ಟ್ರಂಪ್ ಅವರನ್ನು ಸರಿದೂಗಿಸುವ ಸೂತ್ರವಾಗಿ ಉಕ್ರೇನ್ ಯುದ್ಧದ ವಿಷಯ ಪ್ರಸ್ತಾಪವಾಗಬಹುದು. ಭಾರತ ಹಾಗೂ ರಷ್ಯಾ ನಡುವಿನ ದ್ವಿಪಕ್ಷೀಯ ಸಂಬಂಧ ಹಲವು ಪರೀಕ್ಷೆಗಳನ್ನು ಎದುರಿಸಿ ಗಟ್ಟಿಗೊಂಡಿದೆ. ಪುಟಿನ್ ಅವರ ಭಾರತ ಭೇಟಿ ಆ ನಿಟ್ಟಿನಲ್ಲಿ ಮತ್ತೊಂದು ಹೆಜ್ಜೆ ಎನ್ನಬಹುದು.

## ❖ ನಾಲ್ಕು ಕಾರ್ಮಿಕ ಸಂಹಿತೆಗಳು ಹೊಸ ನಿಯಮಗಳಲ್ಲೇನಿದೆ?

**ಸಂದರ್ಭ: ಕೇಂದ್ರ ಸರ್ಕಾರವು ಕಾರ್ಮಿಕ ಕಲ್ಯಾಣದ ದೃಷ್ಟಿಯಿಂದ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ರೂಪಿಸಿದೆ. ವೇತನ ಸಂಹಿತೆ (2019), ಕೈಗಾರಿಕಾ ಸಂಪರ್ಕ ಸಂಹಿತೆ (2020), ಸಾಮಾಜಿಕ ಭದ್ರತಾ ಸಂಹಿತೆ (2020), ಉದ್ಯೋಗ ಭದ್ರತೆ, ಆರೋಗ್ಯ ಮತ್ತು ಕೆಲಸದ ಸ್ಥಿತಿಗತಿಗಳ ಸಂಹಿತೆ (2020) ಜಾರಿಗೆ ಬಂದಿದ್ದು, ಕಾರ್ಮಿಕರ ಜೀವನ ಮಟ್ಟವನ್ನು ಸುಧಾರಿಸುವ ದಿಸೆಯಲ್ಲಿ ಇವುಗಳನ್ನು ರೂಪಿಸಲಾಗಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಪ್ರತಿಪಾದಿಸಿದೆ.**

- ಇದುವರೆಗೂ ಅಸ್ತಿತ್ವದಲ್ಲಿದ್ದ 29 ಕಾರ್ಮಿಕ ಕಾನೂನುಗಳನ್ನು ಪರಾಮರ್ಶಿಸಿ, ನಿಯಮಾವಳಿಗಳನ್ನು ಆಧುನೀಕರಿಸಿ ಹೊಸ ಸಂಹಿತೆಗಳನ್ನು ರೂಪಿಸಲಾಗಿದೆ.
- ಪ್ರಗತಿ ಪಥದಲ್ಲಿ ಸಾಗುತ್ತಿರುವ ದೇಶದ ಉದ್ಯಮ ರಂಗಕ್ಕೆ ತಕ್ಕಂತೆ ಕಾರ್ಮಿಕ ವ್ಯವಸ್ಥೆಯನ್ನು ಸಜ್ಜುಗೊಳಿಸುವ ಆಶಯ ಇವುಗಳ ಹಿಂದಿದೆ ಎಂದು ಕೇಂದ್ರವು ಹೇಳಿದೆ.


### ಏನು ಬದಲಾವಣೆ?

- **ಉದ್ಯೋಗವನ್ನು ಅಧಿಕೃತಗೊಳಿಸುವುದು:** ಇದುವರೆಗೆ ನೇಮಕಾತಿ ಪತ್ರವು ಕಡ್ಡಾಯವಾಗಿರಲಿಲ್ಲ. ಹೊಸ ಸಂಹಿತೆಯಲ್ಲಿ ಇದು ಕಡ್ಡಾಯವಾಗಿದ್ದು, ಪಾರದರ್ಶಕತೆ, ಉದ್ಯೋಗ ಭದ್ರತೆ ಮತ್ತು ನಿಶ್ಚಿತ ಉದ್ಯೋಗವನ್ನು ಖಾತ್ರಿಪಡಿಸುತ್ತದೆ
- **ಸಾಮಾಜಿಕ ಭದ್ರತೆಯ ವ್ಯಾಪ್ತಿ:** ಇದುವರೆಗೂ ಸಾಮಾಜಿಕ ಭದ್ರತೆಯ ವ್ಯಾಪ್ತಿಯು ಸೀಮಿತವಾಗಿತ್ತು. ಹೊಸ ಸಂಹಿತೆಯಲ್ಲಿ ಎಲ್ಲ ಕಾರ್ಮಿಕರಿಗೂ (ಗಿಗ್ ಮತ್ತು ಫ್ಲಾಟ್‌ಫಾರ್ಮ್ ಕಾರ್ಮಿಕರು ಸೇರಿದಂತೆ) ಸಾಮಾಜಿಕ ಭದ್ರತೆ ಒದಗಿಸಲಾಗಿದೆ. ಪಿಎಫ್, ಇಎಸ್‌ಐಸಿ, ವಿಮೆ ಮತ್ತು ಇತರ ಸಾಮಾಜಿಕ ಭದ್ರತಾ ಸೌಲಭ್ಯಗಳು ಲಭ್ಯ
- **ಕನಿಷ್ಠ ವೇತನ:** ಇದುವರೆಗೆ ನಿರ್ದಿಷ್ಟ ಉದ್ಯಮ/ಕಾರ್ಮಿಕರಿಗೆ ಮಾತ್ರ ಕನಿಷ್ಠ ವೇತನ ನಿಯಮ ಅನ್ವಯವಾಗುತ್ತಿತ್ತು. ಹೆಚ್ಚಿನವರು ನಿಯಮದಿಂದ ಹೊರಗಿದ್ದರು. ನೂತನ ವೇತನ ಸಂಹಿತೆ 2019ರಂತೆ, ಕನಿಷ್ಠ ಮತ್ತು ಸಕಾಲಿಕ ವೇತನವು ಪ್ರತಿಯೊಬ್ಬ ಕಾರ್ಮಿಕನ ಶಾಸನಬದ್ಧ ಹಕ್ಕಾಗಿದೆ
- **ಆರೋಗ್ಯ ರಕ್ಷಣೆ:** ಇದುವರೆಗಿನ ನಿಯಮಗಳಲ್ಲಿ, ವಾರ್ಷಿಕ ಉಚಿತ ಆರೋಗ್ಯ ತಪಾಸಣೆ ಕಡ್ಡಾಯವಾಗಿರಲಿಲ್ಲ. ಪ್ರಸ್ತುತ ಸಂಹಿತೆಯ ಪ್ರಕಾರ, 40 ವರ್ಷ ದಾಟಿದ ಪ್ರತಿಯೊಬ್ಬ ಕಾರ್ಮಿಕನಿಗೂ ವಾರ್ಷಿಕ ಆರೋಗ್ಯ ತಪಾಸಣೆ ಮಾಡಿಸಬೇಕು
- **ಮಹಿಳಾ ಕಾರ್ಮಿಕರ ಪಾಲ್ಗೊಳ್ಳುವಿಕೆ:** ರಾತ್ರಿ ಪಾಳಿಯಲ್ಲಿ ಮತ್ತು ಕೆಲವು ವಲಯಗಳಲ್ಲಿ ಮಹಿಳಾ ಕಾರ್ಮಿಕರು ಕೆಲಸ ಮಾಡುವುದನ್ನು ನಿರ್ಬಂಧಿಸಲಾಗಿತ್ತು. ಪ್ರಸ್ತುತ ಆ ನಿರ್ಬಂಧವನ್ನು ತೆಗೆದುಹಾಕಲಾಗಿದ್ದು, ಎಲ್ಲ ಪಾಳಿಗಳಲ್ಲಿ ಮತ್ತು ಎಲ್ಲ ವಲಯಗಳಲ್ಲಿ (ಮಹಿಳಾ ಕಾರ್ಮಿಕರ ಒಪ್ಪಿಗೆ ಮತ್ತು ಅಗತ್ಯ ಸುರಕ್ಷತೆಯ ಕ್ರಮಗಳಿಗೆ ಒಳಪಟ್ಟು) ಮಹಿಳೆಯರು ಕೆಲಸ ಮಾಡಲು ಅವಕಾಶ ಕಲ್ಪಿಸಲಾಗಿದೆ. ಮಹಿಳಾ ಕಾರ್ಮಿಕರಿಗೆ ಇದು ಸಮಾನ ಅವಕಾಶಗಳನ್ನು ಕಲ್ಪಿಸುತ್ತದೆ
- **ಇಎಸ್‌ಐಸಿ:** ಇದುವರೆಗೆ ನಿರ್ದಿಷ್ಟ ವಲಯಗಳ ಕಾರ್ಮಿಕರಿಗೆ ಮಾತ್ರ ಇಎಸ್‌ಐಸಿ ಸೌಲಭ್ಯ ಇತ್ತು. ಅದನ್ನು ಬದಲಾಯಿಸಲಾಗಿದ್ದು, ದೇಶದಾದ್ಯಂತ ಎಲ್ಲ ವಲಯಗಳ ಕಾರ್ಮಿಕರಿಗೂ (10 ಕಾರ್ಮಿಕರಿಗಿಂತ ಕಡಿಮೆ ಇದ್ದರೂ) ಸೌಲಭ್ಯ ವಿಸ್ತರಿಸಲಾಗಿದೆ
- **ಏಕ, ಸರಳೀಕೃತ ವ್ಯವಸ್ಥೆ:** ಇದುವರೆಗಿನ ನಿಯಮಗಳಲ್ಲಿ ಹಲವು ನೋಂದಣಿಗಳು, ಹಲವು ಪರವಾನಗಿಗಳು ಅಗತ್ಯವಾಗಿದ್ದವು. ಪ್ರಸ್ತುತ ಸಂಹಿತೆಗಳಲ್ಲಿ ಅದನ್ನು ಸರಳೀಕರಿಸಲಾಗಿದ್ದು, ದೇಶದಾದ್ಯಂತ ಒಂದು ನೋಂದಣಿ, ಒಂದು ಪರವಾನಗಿ ಸಾಕು

### ಹೊಸ ಕಾರ್ಮಿಕ ಸಂಹಿತೆಗಳ ಅಗತ್ಯವೇನು?

- ಭಾರತದಲ್ಲಿ ಅಸ್ತಿತ್ವದಲ್ಲಿದ್ದ ಬಹುತೇಕ ಕಾರ್ಮಿಕ ಕಾನೂನುಗಳು ಸ್ವಾತಂತ್ರ್ಯಪೂರ್ವದಲ್ಲಿ ಮತ್ತು ದೇಶದಲ್ಲಿ ಉದ್ಯಮಗಳು ಆರಂಭವಾಗುತ್ತಿದ್ದ ಹಂತದಲ್ಲಿ ರೂಪಿಸಿದಂಥವು.
- ಜಗತ್ತಿನ ಮುಂದುವರಿದ ಆರ್ಥಿಕತೆಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ಕಾರ್ಮಿಕ ಕಾನೂನುಗಳನ್ನು ಬದಲಾಯಿಸಿದ್ದರೂ ಭಾರತದಲ್ಲಿ ಹಳೆಯ ನಿಯಮಗಳೇ ಚಾಲ್ತಿಯಲ್ಲಿದ್ದವು.
- ವಸಾಹತುಶಾಹಿಯ ನೆರಳಿನಿಂದ ಹೊರಬಂದು, ಉದ್ಯಮ ರಂಗದ ಅಗತ್ಯಕ್ಕೆ ತಕ್ಕಂತೆ, ಉದ್ಯಮಿ ಮತ್ತು ಕಾರ್ಮಿಕ ಇಬ್ಬರ ಹಿತವನ್ನೂ ಕಾಯುವಂತೆ ಹೊಸ ನಿಯಮಗಳನ್ನು ರೂಪಿಸುವುದು ಅಗತ್ಯವಾಗಿತ್ತು.
- ಈ ದಿಸೆಯಲ್ಲಿ ಕಾರ್ಮಿಕ ಸಂಹಿತೆಗಳನ್ನು ಜಾರಿಗೊಳಿಸಲಾಗಿದೆ. ಸದ್ಯದ ಮತ್ತು ಭವಿಷ್ಯದ ತಾಂತ್ರಿಕ ಹಾಗೂ ಆರ್ಥಿಕ ಬೆಳವಣಿಗೆಗಳನ್ನು ದೃಷ್ಟಿಯಲ್ಲಿರಿಸಿಕೊಂಡು, ಆತ್ಮನಿರ್ಭರ ಭಾರತಕ್ಕಾಗಿ ಕಾರ್ಮಿಕ ಪಡೆಯನ್ನು ಸಿದ್ಧಗೊಳಿಸಲು ಈ ನಾಲ್ಕು ಸಂಹಿತೆಗಳು ನೆರವಾಗಲಿವೆ ಎಂದು ಕೇಂದ್ರವು ಹೇಳಿದೆ.

## ❖ ಜಿಎಸ್‌ಟಿ: ₹1.70 ಲಕ್ಷ ಕೋಟಿ ಸಂಗ್ರಹ: ಜಿಎಸ್‌ಟಿ ದರ ಪರಿಷ್ಕರಣೆಯಿಂದ ವರಮಾನದಲ್ಲಿ ಇಳಿಕೆ: ಕೇಂದ್ರ ಸರ್ಕಾರ

**ಸಂದರ್ಭ: ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಮೂಲಕ ನವೆಂಬರ್ ತಿಂಗಳಿನಲ್ಲಿ ₹1.70 ಲಕ್ಷ ಕೋಟಿ ವರಮಾನ ಸಂಗ್ರಹವಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಇದು ಕಳೆದ ಒಂದು ವರ್ಷದಲ್ಲಿ ದಾಖಲಾದ ಅತ್ಯಂತ ಕಡಿಮೆ ಮಾಸಿಕ ಸಂಗ್ರಹವಾಗಿದೆ ಎಂದು ತಿಳಿಸಿದೆ.**

- 2024ರ ನವೆಂಬರ್‌ನಲ್ಲಿ ₹1.69 ಲಕ್ಷ ಕೋಟಿ ಜಿಎಸ್‌ಟಿ ಸಂಗ್ರಹವಾಗಿತ್ತು. ಇದಕ್ಕೆ ಹೋಲಿಸಿದರೆ ಪ್ರಸಕ್ತ ನವೆಂಬರ್ ವರಮಾನ ಸಂಗ್ರಹದಲ್ಲಿ ಶೇ 0.7ರಷ್ಟು ಮಾತ್ರ ಹೆಚ್ಚಳವಾಗಿದೆ ಎಂದು ತಿಳಿಸಿದೆ. 2025ರ ಅಕ್ಟೋಬರ್‌ನಲ್ಲಿ ₹1.96 ಲಕ್ಷ ಕೋಟಿ ಸಂಗ್ರಹವಾಗಿತ್ತು.
- ಜಿಎಸ್‌ಟಿ ಮಂಡಳಿಯು ಸೆಪ್ಟೆಂಬರ್ 22ರಂದು ಜಿಎಸ್‌ಟಿ ದರ ಪರಿಷ್ಕರಣೆ ಮಾಡಿತು. ಇದರಿಂದ ಸರಕುಗಳ ಬೆಲೆ ಕಡಿಮೆ ಆಯಿತು. ಇದೇ ವರಮಾನ ಸಂಗ್ರಹದ ಇಳಿಕೆಗೆ ಕಾರಣ ಎಂದು ತಿಳಿಸಿದೆ. ಆದರೂ, ಜಿಎಸ್‌ಟಿ ಇಳಿಕೆಯ ನಡುವೆಯೂ ಕಳೆದ ನವೆಂಬರ್ ತಿಂಗಳಿಗೆ ಹೋಲಿಸಿದರೆ ಈ ಬಾರಿ ವರಮಾನ ಸಂಗ್ರಹದಲ್ಲಿ ಸ್ವಲ್ಪ ಏರಿಕೆ ಕಂಡು ಬಂದಿದೆ ಎಂದು ತಿಳಿಸಿದೆ.
- ಒಟ್ಟು ಜಿಎಸ್‌ಟಿ ಸಂಗ್ರಹದ ಪೈಕಿ, ದೇಶದ ಆಂತರಿಕ ವಹಿವಾಟುಗಳಿಂದ ಬರುವ ಜಿಎಸ್‌ಟಿ ವರಮಾನವು ಶೇ 2.3ರಷ್ಟು ಇಳಿಕೆ ಕಂಡಿದ್ದು, ₹1.24 ಲಕ್ಷ ಕೋಟಿಯಾಗಿದೆ. ಆಮದು ಮಾಡಿಕೊಂಡ ಸರಕುಗಳಿಂದ ಬಂದ ವರಮಾನವು ₹45,976 ಕೋಟಿಯಾಗಿದ್ದು, ಶೇ 10.2ರಷ್ಟು ಏರಿಕೆಯಾಗಿದೆ. ಜಿಎಸ್‌ಟಿ ಮರುಪಾವತಿಯಲ್ಲಿ ಶೇ 4ರಷ್ಟು ಕಡಿಮೆಯಾಗಿದ್ದು, ₹18,196 ಕೋಟಿಯಾಗಿದೆ. ನಿವ್ವಳ ಜಿಎಸ್‌ಟಿ ಸಂಗ್ರಹವು ₹1.52 ಲಕ್ಷ ಕೋಟಿಯಾಗಿದೆ ಎಂದು ತಿಳಿಸಿದೆ.
- ಕೋವಿಡ್ ಅವಧಿಯಲ್ಲಿ ರಾಜ್ಯಗಳಿಗೆ ವರಮಾನ ನಷ್ಟವನ್ನು ಸರಿದೂಗಿಸಲು ತೆಗೆದುಕೊಂಡ ಸಾಲಗಳನ್ನು ಮರುಪಾವತಿಸುವವರೆಗೆ ಪರಿಹಾರ ಸೆಸ್ ಈಗ ತಾತ್ಕಾಲಿಕ ವ್ಯವಸ್ಥೆಯಾಗಿರುವುದರಿಂದ, ಒಟ್ಟು ಜಿಎಸ್‌ಟಿ ಸಂಗ್ರಹವನ್ನು ಲೆಕ್ಕಾಚಾರ ಮಾಡುವಾಗ ಸೆಸ್ ಅನ್ನು ಸೇರಿಸಲಾಗಿಲ್ಲ ಎಂದು ಸರ್ಕಾರದ ಮೂಲಗಳು ತಿಳಿಸಿವೆ.
- **ಹರಿಯಾಣ, ಅಸ್ಸಾಂ ಮತ್ತು ಕೇರಳ ಜಿಎಸ್‌ಟಿ ವರಮಾನದಲ್ಲಿ ಕ್ರಮವಾಗಿ ಶೇ 17, ಶೇ 18 ಮತ್ತು ಶೇ 8ರಷ್ಟು ಬೆಳವಣಿಗೆ ಕಂಡಿದ್ದರೆ, ಮಧ್ಯಪ್ರದೇಶ ಮತ್ತು ಒಡಿಶಾ ಕ್ರಮವಾಗಿ ಶೇ 17 ಮತ್ತು ಶೇ 18ರಷ್ಟು ಕುಸಿತ** ಕಂಡಿವೆ ಎಂದು ತಿಳಿಸಿದೆ.

## ❖ ಎಫ್‌ಡಿಐ ಶೇ 18ರಷ್ಟು ಹೆಚ್ಚಳ

**ಸಂದರ್ಭ: ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಸೆಪ್ಟೆಂಬರ್ ಅವಧಿಯಲ್ಲಿ ದೇಶದಲ್ಲಿನ ವಿದೇಶಿ ನೇರ ಹೂಡಿಕೆ (ಎಫ್‌ಡಿಐ) ಪ್ರಮಾಣ ಶೇ 18ರಷ್ಟು ಹೆಚ್ಚಳವಾಗಿದ್ದು, ₹3.15 ಲಕ್ಷ ಕೋಟಿಯಷ್ಟಾಗಿದೆ. ಇದೇ ಅವಧಿಯಲ್ಲಿ ಅಮೆರಿಕದಿಂದ ವಿದೇಶಿ ನೇರ ಹೂಡಿಕೆ ಪ್ರಮಾಣದಲ್ಲಿ ದುಪ್ಪಟ್ಟು ಹೆಚ್ಚಾಗಿದ್ದು, ₹59,283 ಕೋಟಿಯಷ್ಟಾಗಿದೆ.**

- ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ವಿದೇಶಿ ನೇರ ಹೂಡಿಕೆ ₹2.66 ಲಕ್ಷ ಕೋಟಿಯಷ್ಟಾಗಿತ್ತು ಎಂದು ಕೇಂದ್ರ ಸರ್ಕಾರ ತಿಳಿಸಿದೆ.
- ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ₹1.48 ಲಕ್ಷ ಕೋಟಿ ಒಳಹರಿವು ಆಗಿದೆ. ಕಳೆದ ಸೆಪ್ಟೆಂಬರ್ ತ್ರೈಮಾಸಿಕಕ್ಕೆ ಹೋಲಿಸಿದರೆ ಇದು ಶೇ 21ರಷ್ಟು ಹೆಚ್ಚಳ ಎಂದು ಹೇಳಿದೆ.

## ❖ ಸಂಕಷ್ಟದಲ್ಲಿದ್ದ ಭಾರತೀಯರು ಸ್ವದೇಶಕ್ಕೆ: ಶ್ರೀಲಂಕಾ: 'ಸಾಗರಬಂಧು' ಕಾರ್ಯಾಚರಣೆಯಿಂದ ತಾಯ್ನಾಡಿಗೆ

**ಸಂದರ್ಭ: 'ದಿತ್ವಾ' ಚಂಡಮಾರುತದಿಂದಾಗಿ ತತ್ತರಿಸಿರುವ ಶ್ರೀಲಂಕಾದಲ್ಲಿ ಸಿಲುಕಿದ್ದ 104 ಭಾರತೀಯರನ್ನು ಕರೆತರಲಾಗಿದೆ. ಈ ಮೂಲಕ ಅಪಾಯದಲ್ಲಿದ್ದ ಎಲ್ಲ ಭಾರತೀಯರು ಸ್ವದೇಶಕ್ಕೆ ತಲುಪಿದಂತಾಗಿದೆ.**

- 'ಸಾಗರಬಂಧು ಹೆಸರಿನ ಕಾರ್ಯಾಚರಣೆಯಲ್ಲಿ 104 ಭಾರತೀಯರನ್ನು ವಾಯುಪಡೆಯ ಯುದ್ಧವಿಮಾನದ ಮೂಲಕ ಕೊಲಂಬೊ ಬಂಡಾರನಾಯಿಕೆ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ತಿರುವನಂತಪುರಕ್ಕೆ ಕರೆತರಲಾಯಿತು' ಎಂದು ಭಾರತದ ಹೈಕಮಿಷನ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದೆ.
- ಶ್ರೀಲಂಕಾದ ರಕ್ಷಣ ಕಾರ್ಯಕ್ಕೆ ಮತ್ತಷ್ಟು ನೆರವು ನೀಡುತ್ತಿರುವ ಭಾರತ, ತನ್ನ ಕಾರ್ಯಾಚರಣೆಯನ್ನು ವಿಸ್ತರಿಸಿದೆ. ಭಾರತೀಯ ವಾಯುಪಡೆಯ ಚೇತಕ್ ಯುದ್ಧವಿಮಾನವು ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುತ್ತಿದೆ. ಭೂಕುಸಿತ ಮತ್ತು ಪ್ರವಾಹದಿಂದ ರಸ್ತೆ ಸಂಪರ್ಕ ಕಡಿತಗೊಂಡಿರುವ ಗುಡ್ಡಪ್ರದೇಶ ಕೊಟ್‌ಮಲೆಯಲ್ಲಿಯೂ ಕಾರ್ಯಾಚರಣೆ ನಡೆಸುತ್ತಿದೆ
- ಎನ್‌ಡಿಆರ್‌ಎಫ್ ಕೊಲಂಬೊಕ್ಕೆ ತಲುಪಿದ್ದು, ಕೋಚಿಕಡೆಯಲ್ಲಿ ಕಾರ್ಯಾಚರಣೆ ನಡೆಸುತ್ತಿದೆ.

### ತಮಿಳುನಾಡಿನಲ್ಲಿ ಮುಂದುವರಿದ ಮಳೆ

- ದಿತ್ವಾ ಚಂಡಮಾರುತದ ಪರಿಣಾಮವಾಗಿ ಚೆನ್ನೈ, ತಿರುವಲ್ಲೂರು, ಕಾಂಚೀಪುರಂ, ಕಡಲೂರು ಸೇರಿದಂತೆ ತಮಿಳುನಾಡಿನ ಹಲವೆಡೆ ಸಾಧಾರಣ ಮಳೆಯಾಗಿದೆ.
- ದಿತ್ವಾ ಚಂಡಮಾರುತವು ದುರ್ಬಲಗೊಂಡಿದ್ದು, ಅದರ ಪರಿಣಾಮವಾಗಿ ವಾಯುಭಾರ ಕುಸಿತವಾಗಿದೆ. ಇದು ತಮಿಳುನಾಡು-ಪಾಂಡಿಚೇರಿ ಕರಾವಳಿಗೆ ಸಮೀಪವಾಗಿರುವುದರಿಂದ ಮಳೆ ಮುಂದುವರಿಯುವ ಸಾಧ್ಯತೆಗಳಿವೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.
- ನಿರಂತರ ಮಳೆಯಿಂದಾಗಿ ಹಲವು ಪ್ರದೇಶಗಳು ಜಲಾವೃತಗೊಂಡಿವೆ. ಕೃಷಿಭೂಮಿಗೆ ಹಾನಿಯಾಗಿದೆ.

## ❖ ಆಯಾ ವರ್ಷವೇ ಏಕಲವ್ಯ ಪ್ರಶಸ್ತಿ ಪ್ರದಾನ

**ಸಂದರ್ಭ: 2022 ಮತ್ತು 2023ನೇ ಸಾಲಿನ ಏಕಲವ್ಯ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾ ರತ್ನ ಮತ್ತು ಕ್ರೀಡಾ ಪೋಷಕ ಪ್ರಶಸ್ತಿ.**

'ಒಲಿಂಪಿಕ್ಸ್‌ನಲ್ಲಿ ಚಿನ್ನ ಗೆದ್ದವರಿಗೆ ₹6 ಕೋಟಿ ನೀಡಲಾಗುವುದು. ಗ್ರೂಪ್ 'ಎ' ಮತ್ತು 'ಬಿ' ವೃಂದದ ಸರ್ಕಾರಿ ಉದ್ಯೋಗವನ್ನೂ ನೀಡಲಾಗುವುದು, ಬೆಳ್ಳಿ ಗೆದ್ದವರಿಗೆ ₹4 ಕೋಟಿ ಮತ್ತು ಕಂಚು ಗೆದ್ದವರಿಗೆ ₹3 ಕೋಟಿ ನಗದು ಪುರಸ್ಕಾರ ನೀಡಲಾಗುವುದು' ಎಂದು ಪುನರುಚ್ಚರಿಸಿದ ಸಿದ್ದರಾಮಯ್ಯ ಅವರು, 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗಾಗಿ 60 ಮಂದಿಯನ್ನು ಆಯ್ಕೆ ಮಾಡಿ ತರಬೇತಿ ನೀಡಲಾಗುತ್ತಿದೆ. ತರಬೇತಿಯ ವೇಳೆ ಪ್ರತಿ ವರ್ಷ ಪ್ರತಿ ಕ್ರೀಡಾಪಟುವಿಗೆ ₹10 ಲಕ್ಷ ನೀಡಲಾಗುತ್ತದೆ ಎಂದರು.

### ಪ್ರಶಸ್ತಿ ಪುರಸ್ಕೃತರು

- **2022ನೇ ಸಾಲಿನ ಏಕಲವ್ಯ ಪುರಸ್ಕೃತರು:** ಪ್ರಿಯಾ ಎಚ್. ಮೋಹನ್ (ಅಥ್ಲೆಟಿಕ್ಸ್), ಮಿಥುನ್ ಮಂಜುನಾಥ್ (ಬ್ಯಾಡ್ಮಿಂಟನ್), ಪ್ರತ್ಯನುಷ್ ತೋಮರ್, ಸಂಪತ್ ವಿ.ಪಾಸ್ಮೆಲ್ (ಸೈಕ್ಲಿಂಗ್), ಮೊಹಮ್ಮದ್ ರಾಹಿಲ್ (ಹಾಕಿ/ ಪರ ತಂದೆ ನಾಸಿರುದ್ದೀನ್ ಸ್ವೀಕರಿಸಿದರು), ಧನಲಕ್ಷ್ಮೀ (ಕಯಾಕಿಂಗ್ ಮತ್ತು ಕೆನೊಯಿಂಗ್), ಅದಿತಿ ಅಶೋಕ್ (ಗಾಲ್ಫ್), ಎಸ್.ಡಿ.ಪ್ರಜ್ವಲ್ ದೇವ್ (ಟೆನಿಸ್), ಯುಕ್ತಿ ರಾಜೇಂದ್ರ (ಶೂಟಿಂಗ್), ರಿಧಿಮಾ ವೀರೇಂದ್ರಕುಮಾರ್ (ಈಜು), ಮಣಿಕಂದನ್ ಕೆ (ಪ್ಯಾರಾ ಕ್ಲೈಬಿಂಗ್), ಎಲ್ .ಎಂ.ಮನೋಜ್ (ವಾಲಿಬಾಲ್), ಪ್ರವಲಿಕಾ ವಿ.ಕುಷ್ಟಗಿ (ಟೇಕ್ವಾಂಡೊ), ನಿಂಗಪ್ಪ ಪಿ.ಗೇಣೆನ್ನವರ (ಕುಸ್ತಿ), ರಕ್ಷಿತಾ ಆರ್. (ಪ್ಯಾರಾ ಅಥ್ಲೆಟಿಕ್ಸ್).


- **2023:** ನಿಹಾಲ್ ಜೋಯೆಲ್ (ಅಥ್ಲೆಟಿಕ್ಸ್), ಕೆ.ಸಾಯಿ ಪ್ರತೀಕ್, ಆರ್.ಸಂಜನಾ (ಬ್ಯಾಸ್ಕೆಟ್‌ಬಾಲ್), ಅನುಪಮಾ ಗುಳೇದ (ಸೈಕ್ಲಿಂಗ್), ನೈದಿಲೆ ಬಿ (ಫೆನ್ಸಿಂಗ್), ಉಜ್ವಲ್ ನಾಯ್ಡು (ಜಿಮ್ನಾಸ್ಟಿಕ್ಸ್), ಬಿ.ಆಭರಣ ಸುದೇವ್ (ಹಾಕಿ), ದಾದಾಪೀರ್ (ಕಯಾಕಿಂಗ್/ ಕನೋಯಿಂಗ್), ದಿವ್ಯಾ ಟಿ.ಎಸ್. (ಶೂಟಿಂಗ್), ಅನೀಶ್ ಎಸ್.ಗೌಡ (ಈಜು), ಪ್ರಿಯಾಂಕಾ ಎಸ್. (ವಾಲಿಬಾಲ್), ಐಶ್ವರ್ಯ ಪಿ.ಕರಿಗಾರ (ಕುಸ್ತಿ), ಉಷಾ ಬಿ.ಎನ್. (ವೇಟ್ ಲಿಫ್ಟಿಂಗ್), ಶ್ರೀಧರ ನಾಗಪ್ಪ ಮಾಳಗಿ (ಪ್ಯಾರಾ ಈಜು), ಅಮ್ಮು ಮೋಹನ್ (ಪ್ಯಾರಾ ಬ್ಯಾಡ್ಮಿಂಟನ್). **(ಪ್ರಶಸ್ತಿಯು ₹4ಲಕ್ಷ ನಗದು, ಏಕಲವ್ಯ ಪ್ರತಿಮೆ, ಪ್ರಮಾಣಪತ್ರ ಒಳಗೊಂಡಿದೆ)**
- **ಕರ್ನಾಟಕ ಕ್ರೀಡಾ ರತ್ನ: 2022:** ದಿವ್ಯಾ ಎಂ.ಎಸ್. (ಬಾಲ್ ಬ್ಯಾಡ್ಮಿಂಟನ್), ಭಾಸ್ಕರ ದೇವಾಡಿಗ (ಕಂಬಳ), ರಾಯಪ್ಪ ಧರೆಪ್ಪ ಅಬ್ಬುನವರ (ಸಂಗ್ರಾಣಿ ಕಲ್ಲು ಎತ್ತುವುದು), ಚೈತ್ರಾ ಬಿ. (ಕೊಕ್ಕೊ), ವಿಠಲ್ ಮೇಟಿ (ಕಬಡ್ಡಿ), ಶಂಕರಪ್ಪ ಕೆ. (ಮಲ್ಲಕಂಬ), ಗೋಪವ್ವ ಮಂಜುನಾಥ ಖೋಡ್ಕಿ (ಕುಸ್ತಿ), ಮೊಹಮ್ಮದ್ ಫಿರೋಜ್ ಶೇಖ್ (ಯೋಗ). 2023: ಗೌತಮ್ ಎಂ.ಕೆ. (ಕೊಕ್ಕೊ), ಸುನಿಲ್ ಬಿ.ಪಡತಾರೆ (ಕುಸ್ತಿ), ವಿನಾಯಕ ಎಂ.ಕೊಂಗಿ (ಯೋಗ), ಮೇಘನಾ ಎಚ್.ಎಂ. (ಬಾಲ್‌ಬ್ಯಾಡ್ಮಿಂಟನ್), ಆತ್ರೇಯಾ ಎಂ.ಬಿ. (ಕಬಡ್ಡಿ), ಮಂಜುಳಾ ಹಣಮಂತ ಹುಲಗಣ್ಣವರ (ಮಲ್ಲಕಂಬ). **(₹2 ಲಕ್ಷ ನಗದು, ಪ್ರತಿಮೆ ಮತ್ತು ಪ್ರಶಂಸಾಪತ್ರ)**
- **2023: ಕ್ರೀಡಾ ಪೋಷಕ ಪ್ರಶಸ್ತಿ:** ಶೇಷಾದ್ರಿಪುರಂ ಶಿಕ್ಷಣ ದತ್ತಿ, ಬೆಂಗಳೂರು. **(₹10 ಲಕ್ಷ ನಗದು, ಪ್ರಶಂಸಾಪತ್ರ).**

**ತರಬೇತಿಗಾಗಿ ಜೀವಮಾನ ಸಾಧನೆ**

- 2022 ಬಿ.ಎನ್.ಸುಧಾಕರ್ (ಬ್ಯಾಡ್ಮಿಂಟನ್), ಆರ್.ರಾಜನ್ (ಬ್ಯಾಸ್ಕೆಟ್‌ಬಾಲ್), ಕೃಷ್ಣ (ಫುಟ್‌ಬಾಲ್), ಕಬಡ್ಡಿ (ಈಶ್ವರ ಅಂಗಡಿ), ಉಮೇಶ ಕಲಘಟಗಿ (ಈಜು). 2023: ರಾಹುಲ್ ಬಿ. (ಪ್ಯಾರಾ ಅಥ್ಲೆಟಿಕ್ಸ್), ಎಚ್ .ಎನ್.ಕೃಷ್ಣಮೂರ್ತಿ (ಕಬಡ್ಡಿ), ಕೆ.ಸತ್ಯನಾರಾಯಣ (ಬ್ಯಾಸ್ಕೆಟ್‌ಬಾಲ್), ಎಚ್.ಬಿ.ರವೀಶ್ (ಹಾಕಿ).
- **(₹3 ಲಕ್ಷ ನಗದು, ಪ್ರತಿಮೆ, ಪ್ರಶಂಸಾ ಪತ್ರ)**

## ❖ ಡುಪ್ಲಾಂಟಿಸ್ 'ವರ್ಷದ ಅಥ್ಲೀಟ್'

**ಸಂದರ್ಭ: ಸ್ವೀಡನ್‌ನ ಪೋಲ್‌ವಾಲ್ಟ್ ತಾರೆ ಅರ್ಮಾಂಡ್ ಡುಪ್ಲಾಂಟಿಸ್ ಹಾಗೂ ಅಮೆರಿಕದ ಸಿಡ್ನಿ ಮೆಕ್‌ಲಾಫ್ಲಿನ್ ಲೆವ್ರೊನ್ ಅವರು ವಿಶ್ವ ಅಥ್ಲೆಟಿಕ್ಸ್ ಕೊಡಮಾಡುವ 2025ನೇ ಸಾಲಿನ 'ವರ್ಷದ ಅಥ್ಲೀಟ್' ಗೌರವಕ್ಕೆ ಪಾತ್ರರಾಗಿದ್ದಾರೆ.**



ಪ್ರಶಸ್ತಿಯೊಂದಿಗೆ ಅರ್ಮಾಂಡ್ ಡುಪ್ಲಾಂಟಿಸ್

- ಮೊನಾಕೊದಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಿತು. 'ಸೋಲಿಲ್ಲದ ಸರದಾರ' ಡುಪ್ಲಾಂಟಿಸ್ ಅವರು ಟೋಕಿಯೊದಲ್ಲಿ ಈ ವರ್ಷದ ಸೆಪ್ಟೆಂಬರ್ ನಲ್ಲಿ ನಡೆದ **ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್ ಷಿಪ್‌ನಲ್ಲಿ 6.30ಮೀ. ಜಿಗಿದು 14ನೇ ಬಾರಿಗೆ ವಿಶ್ವ ದಾಖಲೆ ಸ್ಥಾಪಿಸಿದ್ದಾರೆ.**
- 26 ವರ್ಷ ವಯಸ್ಸಿನ ಡುಪ್ಲಾಂಟಿಸ್ ಅವರು ಈ ವರ್ಷದಲ್ಲಿ ಪೋಲ್‌ವಾಲ್ಟ್ ಹೊರಾಂಗಣ ಮತ್ತು ಒಳಾಂಗಣ ಸ್ಪರ್ಧೆಗಳಲ್ಲಿ ವಿಶ್ವ ಚಾಂಪಿಯನ್ ಆಗಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ 16 ಕೂಟಗಳಲ್ಲಿ ಚಿನ್ನ ಜಯಿಸಿದ್ದು, ಅಜೇಯರಾಗಿ ಉಳಿದಿದ್ದಾರೆ.
- ವರ್ಷದ ಅಥ್ಲೀಟ್ ಜೊತೆಗೆ ವರ್ಷದ 'ಶ್ರೇಷ್ಠ ಫೀಲ್ಡ್ ಅಥ್ಲೀಟ್' ಗೌರವಕ್ಕೂ ಅವರು ಭಾಜನರಾಗಿದ್ದಾರೆ ಅವರು 2020 ಮತ್ತು 2022ರಲ್ಲಿಯೂ ವರ್ಷದ ಅಥ್ಲೀಟ್ ಗೌರವಕ್ಕೆ ಭಾಜನರಾಗಿದ್ದರು.
- ಎರಡು ಬಾರಿಯ ಒಲಿಂಪಿಕ್ ಚಾಂಪಿಯನ್ ಹಾಗೂ ವಿಶ್ವದಾಖಲೆ ಹೊಂದಿರುವ ಅಮೆರಿಕದ ಓಟಗಾರ್ತಿ ಲೆವ್ರೊನ್ ಅವರು ಮಹಿಳಾ ವಿಭಾಗದಲ್ಲಿ ಈ ಗೌರವಕ್ಕೆ ಭಾಜನರಾಗಿದ್ದಾರೆ. **26 ವರ್ಷ ವಯಸ್ಸಿನ ಲೆವ್ರೊನ್ ಅವರು ವಿಶ್ವ ಚಾಂಪಿಯನ್‌ಷಿಪ್‌ನ 400 ಮೀ. ಓಟ ಹಾಗೂ 400 ಮೀ. ಹರ್ಡಲ್ಸ್ ಸ್ಪರ್ಧೆಗಳೆರಡರಲ್ಲೂ ಚಿನ್ನ ಗೆದ್ದ ಮೊದಲ ಅಥ್ಲೀಟ್ ಆಗಿದ್ದಾರೆ. ಕಳೆದೆರಡು ವರ್ಷ ಗಳಲ್ಲಿ ಸ್ಪರ್ಧಿಸಿದ ಎಲ್ಲ ಸ್ಪರ್ಧೆಗಳಲ್ಲಿಯೂ ಅವರು ಸ್ವರ್ಣ ಜಯಿಸಿದ್ದಾರೆ.**

Dr Rajkumar IAS/KAS Academy

## ❖ ಋತುಚಕ್ರ ರಜೆ: ಹೊರಬಿದ್ದ ಆದೇಶ

**ಸಂದರ್ಭ: ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ತಕ್ಷಣದಿಂದಲೇ ಜಾರಿಯಾಗುವಂತೆ ತಿಂಗಳಿಗೆ ಒಂದು ಋತುಚಕ್ರ ರಜೆಯನ್ನು ಮಂಜೂರು ಮಾಡಿ ಆರ್ಥಿಕ ಇಲಾಖೆ ಆದೇಶ ಹೊರಡಿಸಿದೆ.**

- ಋತುಚಕ್ರ ಹೊಂದಿರುವ 18 ವರ್ಷದಿಂದ 52 ವರ್ಷ ವಯಸ್ಸಿನ ಮಹಿಳಾ ಸರ್ಕಾರಿ ನೌಕರರಿಗೆ ಈ ರಜೆ ಅನ್ವಯವಾಗಲಿದೆ. ತಿಂಗಳಿಗೆ ಒಂದರಂತೆ ವರ್ಷಕ್ಕೆ ಒಟ್ಟು 12 ಋತುಚಕ್ರ ರಜೆ ಪಡೆಯಬಹುದು.
- ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಸಕ್ಷಮಪ್ರಾಧಿಕಾರವೇ ಈ ರಜೆಯನ್ನೂ ಮಂಜೂರು ಮಾಡಬಹುದಾಗಿದೆ. ಈ ರಜೆ ಪಡೆಯಲು ಯಾವುದೇ ವೈದ್ಯಕೀಯ ಪ್ರಮಾಣ ಪತ್ರ ನೀಡಬೇಕಿಲ್ಲ. ಜತೆಗೆ ಈ ರಜೆಯನ್ನು ಹಾಜರಾತಿ ಪುಸ್ತಕದಲ್ಲಿ ಪ್ರತ್ಯೇಕವಾಗಿ ನಮೂದಿಸಬೇಕು ಎಂದು ಆದೇಶದಲ್ಲಿ ವಿವರಿಸಲಾಗಿದೆ.

## ❖ ನರೇಗಾ: ಕೇಂದ್ರದಿಂದ ₹622 ಕೋಟಿ ಬಾಕಿ

**ಸಂದರ್ಭ:ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯವು ಕರ್ನಾಟಕಕ್ಕೆ ₹622 ಕೋಟಿ ಬಿಡುಗಡೆ ಮಾಡದೆ ಬಾಕಿ ಇರಿಸಿಕೊಂಡಿದೆ.**

- ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯರೊಬ್ಬರು ಕೇಳಿದ ಪ್ರಶ್ನೆಗೆ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಈ ಬಗ್ಗೆ ಉತ್ತರ ನೀಡಿದ್ದಾರೆ. ರಾಜ್ಯಕ್ಕೆ ಕೂಲಿ ಮೊತ್ತ ₹8.94 ಕೋಟಿ, ಸಾಮಗ್ರಿ ವೆಚ್ಚ ₹576 ಕೋಟಿ ಹಾಗೂ ಆಡಳಿತಾತ್ಮಕ ₹37 ಕೋಟಿ ಬಿಡುಗಡೆ ಮಾಡಬೇಕಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

### ರಫ್ತು ಕೇಂದ್ರವಾಗಿ ದಕ್ಷಿಣ ಕನ್ನಡ

- ದಕ್ಷಿಣ ಕನ್ನಡವನ್ನು ಜಿಲ್ಲಾ ರಫ್ತು ಕೇಂದ್ರವಾಗಿ ಘೋಷಿಸಲಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ ತಿಳಿಸಿದ್ದಾರೆ.
- ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಸಂಸದ ಬ್ರಿಜೇಶ್ ಚೌಟ ಮಂಗಳವಾರ ಕೇಳಿದ ಪ್ರಶ್ನೆಗೆ ಸಚಿವರು ಲಿಖಿತ ಉತ್ತರ ನೀಡಿ, ಸಮುದ್ರ ಆಹಾರಗಳು ಗೋಡಂಬಿಯನ್ನು ಸಂಭಾವ್ಯ ರಫ್ತು ಉತ್ಪನ್ನಗಳಾಗಿ ಸೇರಿಸಲಾಗಿದೆ ಎಂದಿದ್ದಾರೆ.

## ❖ 'ಎಸ್‌ಸಿ/ಎಸ್‌ಟಿ ಕಾಯ್ದೆ ರಕ್ಷಣೆ ಇಲ್ಲ'

**ಸಂದರ್ಭ: ಜಾತಿ ವ್ಯವಸ್ಥೆಗೆ ಮಾನ್ಯತೆ ಇಲ್ಲದ ಧರ್ಮಕ್ಕೆ ಮತಾಂತರಗೊಂಡ ವ್ಯಕ್ತಿಗಳಿಗೆ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯ ರಕ್ಷಣಾ ನಿಬಂಧನೆ ಗಳನ್ನು ವಿಸ್ತರಿಸಲು ಸಾಧ್ಯವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ತೀರ್ಪು ನೀಡಿದೆ. ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡಿರುವ ಪರಿಶಿಷ್ಟ ಜಾತಿಗೆ(ಎಸ್‌ಸಿ) ಸೇರಿದ ಜಿತೇಂದ್ರ ಕುಮಾರ್ ಸಾಹ್ನಿ ಮೇಲೆ, ಹಿಂದೂ ದೇವರನ್ನು ಅವಹೇಳನ ಮಾಡಿದ ಕಾರಣ ನೀಡಿ ವಿವಿಧ ವಿಭಾಗಗಳ ಅಡಿಯಲ್ಲಿ ಮೊಕದ್ದಮೆ ಹೂಡಲಾಗಿದೆ. ಅದನ್ನು ಪ್ರಶ್ನಿಸಿ ಜಿತೇಂದ್ರ ಅರ್ಜಿ ಸಲ್ಲಿಸಿದ್ದರು.**

- ಜಾತಿ ವ್ಯವಸ್ಥೆಗೆ ಮಾನ್ಯತೆ ಇಲ್ಲದ ಧರ್ಮಕ್ಕೆ ಮತಾಂತರಗೊಂಡ ವ್ಯಕ್ತಿಗಳಿಗೆ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯ ರಕ್ಷಣಾ ನಿಬಂಧನೆ ಗಳನ್ನು ವಿಸ್ತರಿಸಲು ಸಾಧ್ಯವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಆದೇಶ ನೀಡಿದೆ.
- ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡಿರುವ ಪರಿಶಿಷ್ಟ ಜಾತಿಗೆ(ಎಸ್‌ಸಿ) ಸೇರಿದ ಜಿತೇಂದ್ರ ಕುಮಾರ್ ಸಾಹ್ನಿ ಮೇಲೆ ಹಿಂದೂ ದೇವರನ್ನು ಅವಹೇಳನ ಮಾಡಿದ ಕಾರಣ ನೀಡಿ ವಿವಿಧ ವಿಭಾಗಗಳ ಅಡಿಯಲ್ಲಿ ಮೊಕದ್ದಮೆ ಹೂಡಲಾಗಿದೆ. ಅದನ್ನು ಪ್ರಶ್ನಿಸಿ ಜಿತೇಂದ್ರ ಸಲ್ಲಿಸಿದ ಅರ್ಜಿಯನ್ನು ನ್ಯಾಯಮೂರ್ತಿ ಪ್ರವೀಣ್ ಕುಮಾರ್ ಗಿರಿ ನೇತೃತ್ವದ ಏಕದಸ್ಯ ಪೀಠ ವಜಾಗೊಳಿಸಿ, ಈ ಮಹತ್ವದ ತೀರ್ಪು ನೀಡಿದೆ.


Dr. Rajkumar IAS/KAS Academy

- ತಾನು ಎಸ್‌ಸಿ ಸಮುದಾಯಕ್ಕೆ ಸೇರಿದ್ದು, ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ರಕ್ಷಣೆ ನೀಡುವಂತೆ ಜಿತೇಂದ್ರ ನ್ಯಾಯಾಲಯಕ್ಕೆ ಸಲ್ಲಿಸಿದ ಅರ್ಜಿಯಲ್ಲಿ ಮನವಿ ಮಾಡಿದ್ದರು.
- ಕ್ರಿಶ್ಚಿಯನ್ ಧರ್ಮದಲ್ಲಿ ಜಾತಿ ಆಧಾರಿತ ವ್ಯವಸ್ಥೆ ಇಲ್ಲ. ಆದ್ದರಿಂದ ಪರಿಶಿಷ್ಟ ಜಾತಿಯ ವರ್ಗೀಕರಣದ ಪ್ರಕಾರ ವ್ಯಕ್ತಿಯೊಬ್ಬರು ಆ ಧರ್ಮಕ್ಕೆ ಮತಾಂತರಗೊಂಡ ನಂತರ, ಹಿಂದಿದ್ದ ಜಾತಿ ಪ್ರಮಾಣಪತ್ರ ಮಾನ್ಯವಾಗು ವುದಿಲ್ಲ ಎಂದು ಕೋರ್ಟ್ ತೀರ್ಪಿನಲ್ಲಿ ವಿವರಿಸಿದೆ.
- ‘ಜಾತಿ ತಾರತಮ್ಯ ಎದುರಿಸಿದ ಸಮುದಾಯ ಗಳನ್ನು ರಕ್ಷಿಸುವುದು ಎಸ್‌ಸಿ/ ಎಸ್‌ಟಿ(ದೌರ್ಜನ್ಯ ತಡೆ) ಕಾಯ್ದೆ ಉದ್ದೇಶವಾಗಿದೆ. ಹಾಗಾಗಿ ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡ ತಕ್ಷಣ ತಮ್ಮ ಎಸ್‌ಸಿ ಸ್ಥಾನಮಾನವನ್ನು ಕಳೆದುಕೊಳ್ಳುತ್ತಾರೆ. ಹಾಗಾಗಿ ಈ ಕಾಯ್ದೆಯಲ್ಲಿನ ರಕ್ಷಣಾತ್ಮಕ ನಿಬಂಧನೆ ಗಳನ್ನು ವಿಸ್ತರಿಸಲಾಗುವುದಿಲ್ಲ’ ಎಂದು ಪೀಠ ತಿಳಿಸಿದೆ.
- ಅರ್ಜಿದಾರರ ಧರ್ಮದ ಕುರಿತು 3 ತಿಂಗಳೊಳಗೆ ತನಿಖೆ ನಡೆಸಿ. ನಕಲಿ ದಾಖಲೆ ಸೃಷ್ಟಿಸಿರುವುದು ಸಾಬೀತಾದರೆ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಭವಿಷ್ಯದಲ್ಲಿ ಯಾರೂ ಇಂಥ ಪ್ರಮಾಣ ಪತ್ರಗಳನ್ನು ಸಲ್ಲಿಸಬಾರದು ಎಂದು ನ್ಯಾಯಾಲಯವು ಇದೇ ವೇಳೆ ಮಹಾರಾಜ್‌ಗಂಜ್‌ನ ಜಿಲ್ಲಾಧಿಕಾರಿಗೆ ನಿರ್ದೇಶಿಸಿತು.

## ❖ ಮರೆತ ಶೋಧಕ್ಕೆ ಮಾನ್ಯತೆ ಪಡೆದ ವಿಜ್ಞಾನಿ

**ಸಂದರ್ಭ: ಮೇರಿ ಬ್ರಂಕೋವ್ ಅಮೆರಿಕದ ಸಿಯಾಟಲ್ ಪಟ್ಟಣದಲ್ಲಿರುವ ಇನ್ಸ್‌ಟಿಟ್ಯೂಟ್ ಆಫ್ ಸಿಸ್ಟಮ್ಸ್ ಬಯಾಲಜಿ ಸಂಸ್ಥೆಯಲ್ಲಿ ಯೋಜನಾ ನಿರ್ವಹಣಾಧಿಕಾರಿಯಾಗಿ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ. ಇಪ್ಪತ್ತನಾಲ್ಕು ವರ್ಷಗಳ ಹಿಂದೆ ಇವರು ನಡೆಸಿದ ಸಂಶೋಧನೆಯಿಂದಾಗಿ ಈಗ ನೊಬೆಲ್ ಪಾರಿತೋಷಕವನ್ನು ಪಡೆದಿದ್ದಾರೆ. ‘ನನ್ನ ಕಾರ್ಯಕ್ಷೇತ್ರವೇ ಬೇರೆಯಾಗಿ ಬಿಟ್ಟಿದೆ. ನಾನೀಗ, ಟಿ-ಕೋಶಗಳ ಬಗ್ಗೆ ಸಂಶೋಧನೆಯನ್ನು ಮಾಡುತ್ತಿಲ್ಲ’ ಎನ್ನುತ್ತಾರೆ, ಬ್ರಂಕೋವ್.**


ಮೇರಿ ಬ್ರಂಕೋವ್
ಚಿತ್ರಕೃಪೆ: ನೊಬೆಲ್ ಅಧಿಕೃತ ವೆಬ್‌ಸೈಟ್

- ಆದರೆ ಇಪ್ಪತ್ತು ವರ್ಷಗಳ ಹಿಂದೆ ಬ್ರಂಕೋವ್ ನಡೆಸಿದ ಸಂಶೋಧನೆ ಇಂದು ಫಲ ನೀಡುತ್ತಿದೆ ಎನ್ನಬಹುದು. ಆಗ ಇವರು ವಾಷಿಂಗ್ಟನ್ ರಾಜ್ಯದ ಬೊಥೇಲ್ ಪಟ್ಟಣದಲ್ಲಿದ್ದ ಸೆಲ್‌ಟೆಕ್ ಕೈರೊಸೈನ್ಸ್ ಎನ್ನುವ ಔಷಧ ಕಂಪನಿಯಲ್ಲಿ ಸಂಶೋಧಕಿಯಾಗಿದ್ದರು. ಇದೇ ಸಂಸ್ಥೆಯಲ್ಲಿ ಈ ವರ್ಷದ ನೊಬೆಲ್ ಪಾರಿತೋಷಕವನ್ನು ಪಡೆದಿರುವ ಮತ್ತೊಬ್ಬ ವಿಜ್ಞಾನಿ ಫ್ರೆಡ್ ರಾಮ್ಸ್‌ಡೆಲ್ ಕೂಡ ಇದ್ದರು. ಬ್ರಂಕೋವ್ ಅವರ ಸಹೋದ್ಯೋಗಿಯಾಗಿದ್ದರು.
- ಆ ಸಂದರ್ಭದಲ್ಲಿ ಜಪಾನಿನ ಶಿಮೊನ್ ಸಕಾಗುಚಿ ರಕ್ತದಲ್ಲಿರುವ ಬಿಳಿಯ ರಕ್ತಕೋಶಗಳಲ್ಲಿ ರೋಗಪ್ರತಿರೋಧವನ್ನು ನಿಯಂತ್ರಿಸುವ ಟಿ-ಕೋಶಗಳು ಇವೆ ಎಂದು ಪತ್ತೆ ಮಾಡಿದ್ದರು. ಜೊತೆಗೆ ಅವುಗಳಿಗೂ ಆಟೊ ಇಮ್ಯೂನ್ ಕಾಯಿಲೆಗೂ ಸಂಬಂಧ ಇರಬಹುದು ಎಂಬ ಸೂಚನೆಯನ್ನೂ ನೀಡಿದ್ದರು. ಇದು ಇವರಿಬ್ಬರಿಗೂ ಕುತೂಹಲ ಎನ್ನಿಸಿತು. ಏಕೆಂದರೆ ಬ್ರಂಕೋವ್ ಮತ್ತು ರಾಮ್ಸ್‌ಡೆಲ್ ಕೂಡ ಆಟೊ ಇಮ್ಯೂನ್ ಕಾಯಿಲೆಗಳ ಬಗ್ಗೆ ಸಂಶೋಧನೆ ನಡೆಸುತ್ತಿದ್ದರು. ಅದಕ್ಕಾಗಿ ಚಿಕಿತ್ಸೆ ಹುಡುಕಲು ಪ್ರಯತ್ನಿಸುತ್ತಿದ್ದರು.
- ಆಟೊ ಇಮ್ಯೂನ್ ಕಾಯಿಲೆಗಳಿಗೆ ಚಿಕಿತ್ಸೆ ಹುಡುಕುವ ಪ್ರಯೋಗಗಳಲ್ಲಿ ಇವರು ವಿಶಿಷ್ಟ ಬಗೆಯ ಇಲಿಯೊಂದನ್ನು ಬಳಸುತ್ತಿದ್ದರು. ಈ ಇಲಿ ಪರಮಾಣು ಬಾಂಬು ಯೋಜನೆಯ ಹುಟ್ಟು. ಪರಮಾಣು ಬಾಂಬನ್ನು ತಯಾರಿಸುವ ಸಂದರ್ಭದಲ್ಲಿ, ವಿಕಿರಣಗಳ ಪರಿಣಾಮವನ್ನು ಇಲಿಗಳ ಮೇಲೆ ಪರೀಕ್ಷಿಸುವಾಗ ಹುಟ್ಟಿದ ಒಂದು ತಳಿ. ಈ ತಳಿಯಲ್ಲಿ ಹುಟ್ಟುವ ಗಂಡುಮರಿಗಳಲ್ಲಿ ಅರ್ಧಕ್ಕರ್ಧ ಒಂದು ಬಗೆಯ ಆಟೊ ಇಮ್ಯೂನ್ ಕಾಯಿಲೆಯಿಂದ ನರಳುತ್ತವೆ. ಗಂಡುಇಲಿಗಳಲ್ಲಿಯಷ್ಟೆ ಈ ಕಾಯಿಲೆ ಕಾಣಿಸುತ್ತಿದ್ದುದರಿಂದ, ಇದು ‘ಎಕ್ಸ್’ ಎನ್ನುವ ವರ್ಣತಂತುವಿನ ಮೇಲೆ ಇರುವುದು ಖಚಿತವಾಗಿತ್ತು.

ಎಕ್ಸ್-ಕ್ರೊಮೋಸೋಮು ಎಲ್ಲ ಜೀವಕೋಶಗಳಲ್ಲಿಯೂ ಇರುವ ಲಿಂಗವರ್ಣತಂತು ಜೋಡಿಯಲ್ಲಿ ಒಂದು. ಇದು ಸಾಮಾನ್ಯವಾಗಿ ತಾಯಿಯಿಂದ ಮರಿಗೆ ದಾಟಿ ಬರುತ್ತದೆ. 'ವೈ' ಎಂಬ ಹೆಸರಿನ, ಜೋಡಿಯ ಇನ್ನೊಂದು ವರ್ಣತಂತು ತಂದೆಯಿಂದ ಬಳುವಳಿಯಾಗಿರುತ್ತದೆ. ಈ ರೋಗಿಷ್ಠ ಇಲಿಗಳ ತಳಿಗಳನ್ನು 'ಸ್ಕರ್ಫಿ' ಎಂದು ಕರೆದಿದ್ದರು.

- ಸ್ಕರ್ಫಿ ಇಲಿಗಳಲ್ಲಿ ಹಲವು ತೊಂದರೆಗಳು ಕಾಣಿಸುತ್ತವೆ. ಮೈ ಮೇಲೆ ರೋಮಗಳ ಜಾಗದಲ್ಲಿ ಹುರುಪೆಗಳಿರುತ್ತವೆ. ಗುಲ್ಮ ಮತ್ತು ದುಗ್ದ ಗ್ರಂಥಿಗಳು ಸಾಮಾನ್ಯಕ್ಕಿಂತಲೂ ಊದಿಕೊಂಡಿರುತ್ತವೆ. ಅಂದರೆ ಯಾವುದೋ ದಾಳಿ ನಡೆಯುತ್ತಿರುವ ಕುರುಹು. ಈ ಇಲಿಗಳು ಹೆಚ್ಚು ಕಾಲ ಬದುಕುವುದೂ ಇಲ್ಲ. ಇವೆಲ್ಲವೂ ವಿಕಿರಣದಿಂದ ಉಂಟಾದ ಒಂದು ದೋಷ ಎಂಬುದು ಸ್ಪಷ್ಟವಾಗಿತ್ತು. ಅದು ಎಕ್ಸ್ ವರ್ಣತಂತುವಿನ ಮೇಲೆ ಇರಬೇಕು ಎಂಬುದೂ ನಿರ್ಣಯವಾಗಿತ್ತು. ಆದರೆ ವರ್ಣತಂತುವಿನಲ್ಲಿ ಎಲ್ಲಿ ಎಂಬುದು ಗೊತ್ತಿರಲಿಲ್ಲ. ಜೊತೆಗೆ ಅದರ ಕೆಲಸ ಏನು ಎಂಬುದೂ ಗೊತ್ತಿರಲಿಲ್ಲ. ಈ ಪ್ರಶ್ನೆಗಳಿಗೆ ಉತ್ತರವನ್ನು ಹುಡುಕಿದವರು ಬ್ರಂಕೋವ್.
- ಸ್ಕರ್ಫಿ ಇಲಿಯ ಎಕ್ಸ್ ಕ್ರೋಮೋಸೋಮಿನಲ್ಲಿ ಈ ದೋಷ ಎಲ್ಲಿದೆ ಎಂದು ಪತ್ತೆ ಮಾಡುವ ಕೆಲಸ ಹದಿನೇಳು ಕೋಟಿ ಅಕ್ಷರಗಳಿರುವ ಪುಸ್ತಕದಲ್ಲಿ ಯಾವುದೋ ಪ್ಯಾರಾದಲ್ಲಿ ಇರುವ ಯಾವುದೋ ಅಕ್ಷರದೋಷವನ್ನು ಹುಡುಕಿದ ಹಾಗೆ. ಬ್ರಂಕೋವ್ ಮತ್ತು ರಾಮ್ಸ್‌ಡೆಲ್ ಸಂಶೋಧನೆ ನಡೆಸುತ್ತಿದ್ದ ಸಂದರ್ಭದಲ್ಲಿ ಇದು ಬಹಳ ಶ್ರಮ ಹಾಗೂ ನಿಧಾನದ ಕೆಲಸ ಆಗಿತ್ತು. ಹಾಗಿದ್ದೂ ಹತ್ತಾರು ವರ್ಷಗಳ ಕಾಲ ಸಂಶೋಧನೆ ನಡೆಸಿದ ಬ್ರಂಕೋವ್, ಎಕ್ಸ್ ವರ್ಣತಂತುವಿನಲ್ಲಿರುವ ಸಾವಿರಾರು ಜೀನ್‌ಗಳಲ್ಲಿ ಇಪ್ಪತ್ತು ಜೀನ್‌ಗಳ ಗುಂಪಿನಲ್ಲಿ ಈ ದೋಷ ಇರಬೇಕು ಎಂದು ಪತ್ತೆ ಮಾಡಿದರು. ಅನಂತರ ಈ ಇಪ್ಪತ್ತು ಜೀನ್‌ಗಳನ್ನೂ ಒಂದೊಂದನ್ನಾಗಿ ಆರೋಗ್ಯವಂತ ಇಲಿಯ ಅದೇ ಇಪ್ಪತ್ತು ಜೀನ್‌ಗಳ ಜೊತೆಗೆ ಹೋಲಿಸಬೇಕಿತ್ತು. ಪ್ರತಿಯೊಂದನ್ನು ಹೋಲಿಸುವುದಕ್ಕೂ ಮೊದಲಿಗೆ ವರ್ಣತಂತುವಿನ ಆ ಭಾಗದ ತುಣುಕನ್ನು ಗುರುತಿಸಿ, ಬೇರ್ಪಡಿಸಬೇಕಿತ್ತು. ಅನಂತರ ಅದರಲ್ಲಿರುವ ಡಿಎನ್ಎ ಸರಣಿಯನ್ನು ವಿವರಿಸಬೇಕಿತ್ತು. ಇದೇ ರೀತಿ ಆರೋಗ್ಯವಂತ ಇಲಿಯ ಡಿಎನ್ಎ ಸರಣಿಯನ್ನೂ ವಿವರಿಸಬೇಕಿತ್ತು. ಇವೆರಡೂ ಡಿಎನ್ಎ ಸರಣಿಯನ್ನು ಒಂದೊಂದೇ ಅಕ್ಷರವನ್ನಾಗಿ ಹೋಲಿಸಬೇಕಿತ್ತು.
- ಡಿಎನ್ಎಗೆ ಹೋಲಿಸುವುದು ಎಂದರೆ ಕಣ್ಣಿಗೆ ಕಾಣದ ಮಾಯದ ವಸ್ತುವಿನಲ್ಲಿ ವ್ಯತ್ಯಾಸಗಳನ್ನು ಹುಡುಕುವುದು ಎಂದಷ್ಟೆ. ಅದಕ್ಕಾಗಿ ಅತಿ ಎಚ್ಚರದಿಂದ ರಾಸಾಯನಿಕ ಕ್ರಿಯೆಗಳನ್ನು ನಡೆಸಬೇಕಿತ್ತು. ಈ ಎಲ್ಲವನ್ನೂ ನಡೆಸಿದ ನಂತರವಷ್ಟೆ ವ್ಯತ್ಯಾಸ ಗೊತ್ತಾಗಬೇಕು. ಬ್ರಂಕೋವ್ ಮತ್ತು ರಾಮ್ಸ್‌ಡೆಲ್ ಹೀಗೆ ಸ್ಕರ್ಫಿ ಇಲಿಯ ಎಕ್ಸ್ ವರ್ಣತಂತುವಿನ ಆ ದೋಷಪೂರ್ಣ ಭಾಗದಲ್ಲಿದ್ದ ಹತ್ತೊಂಬತ್ತು ಜೀನ್‌ಗಳನ್ನು ಆರೋಗ್ಯವಂತ ಇಲಿಯದ್ದರ ಜೊತೆಗೆ ಹೋಲಿಸಿ ನೋಡಿದರು. ಏನೂ ವ್ಯತ್ಯಾಸ ಕಂಡಿರಲಿಲ್ಲ. ಅಂತೂ ಕೊನೆಗೆ ಇಪ್ಪತ್ತನೆಯ ಜೀನನ್ನು ಹೋಲಿಸಿದಾಗ ಒಂದು ವ್ಯತ್ಯಾಸ ಕಂಡಿತು. ಈ ಬಗೆಯಲ್ಲಿ ವ್ಯತ್ಯಾಸ ಕಂಡ ಜೀನ್ ಅನ್ನು 'ಫಾಕ್ಸ್ 3' (ಫಾಕ್ಸ್ ತ್ರೀ) ಎಂದು ಕರೆದರು. ಫಾಕ್ಸ್ 3 ಜೀನ್ ಪತ್ತೆ, ಆಟೊ ಇಮ್ಯೂನ್ ರೋಗವನ್ನು ಅರ್ಥ ಮಾಡಿಕೊಳ್ಳುವ ಹಾದಿಯಲ್ಲಿ ಮಹಾತಿರುವೆನ್ನಿಸಿದೆ. ಇದನ್ನು ಸಾಧಿಸಿದ್ದು ಮೇರಿ ಬ್ರಂಕೋವ್ ಮತ್ತು ಫ್ರೆಡ್ ರಾಮ್ಸ್‌ಡೆಲ್.
- ಬ್ರಂಕೋವ್ ಸಂಶೋಧನೆ ಮಾಡಿದ್ದೆಲ್ಲವೂ ಖಾಸಗಿ ಕಂಪೆನಿಯಲ್ಲಿ. ಅವರು ಉದ್ಯೋಗಕ್ಕೆ ಸೇರಿದ್ದು ಡಾರ್ವಿನ್ ಮಾಲಿಕ್ಯುಲಾರ್ ಕಾರ್ಪೊರೇಷನ್ ಎನ್ನುವ ಜೈವಿಕ ತಂತ್ರಜ್ಞಾನದ ಕಂಪನಿಯಲ್ಲಿ. ಅನಂತರ ಆ ಕಂಪನಿ ಹಲವು ಬಾರಿ ಮಾರಾಟವಾಗಿ, ಬೇರೆ, ಬೇರೆ ಕಂಪನಿಗಳ ಜೊತೆಗೆ ಸೇರಿಕೊಂಡಿತು. ಇಷ್ಟೆಲ್ಲ ನಡೆದಾಗಲೂ ಮೇರಿ ಅಲ್ಲಿಯೇ ತಮ್ಮ ಉದ್ಯೋಗ ಮುಂದುವರೆಸಿದ್ದರು. ಫಾಕ್ಸ್ 3 ಪತ್ತೆಯಾದಾಗ ಕಂಪನಿ ಇಂಗ್ಲೆಂಡಿನ ಕಂಪನಿಯ ಒಡೆತನದಲ್ಲಿ ಇತ್ತು. ಯಾವುದೋ ಕಾರಣಕ್ಕೆ, ಬೊಥೆಲ್ ಪಟ್ಟಣದಲ್ಲಿದ್ದ ಸಂಶೋಧನಾಲಯವನ್ನು ಮುಚ್ಚಿಬಿಟ್ಟಿತು. ಬ್ರಂಕೋವ್ ಕೆಲಸ ಕಳೆದುಕೊಂಡು, ಬೇರೊಂದು ಕಂಪೆನಿ ಸೇರಿದರು. ಟಿ-ಕೋಶಗಳ ಸಂಶೋಧನೆ ಅಲ್ಲಿಗೇ ನಿಂತಿತು.
- ಎಂದೋ ನಡೆಸಿದ ಕೆಲಸ. ಕಷ್ಟದ ಹಾದಿಯಲ್ಲಿ ನಡೆದು ಮಾಡಿದ ಹೊಸ ಶೋಧ. ಅದಕ್ಕಾಗಿ ಪ್ರಪಂಚದ ಮೇರು ಪ್ರಶಸ್ತಿ ಮೇರಿ ಬ್ರಂಕೋವ್ ಅವರಿಗೆ ದಕ್ಕಿದೆ. 'ಕರ್ಮ ಬೆನ್ನು ಹತ್ತುತ್ತದೆ' ಎಂದು ಒಳ್ಳೆಯದಕ್ಕೂ ಹೇಳಬಹುದು!

## ❖ ಅಸಾಧಾರಣ ಆರ್ಥಿಕ ಬೆಳವಣಿಗೆ ಆತಂಕ-ಹಿಂಜರಿಕೆಗಳ ಸವಾಲು

**ಸಂದರ್ಭ: ಪ್ರಸಕ್ತ ಆರ್ಥಿಕ ವರ್ಷದ ಎರಡನೇ (ಜುಲೈ-ಸೆಪ್ಟೆಂಬರ್) ತ್ರೈಮಾಸಿಕದಲ್ಲಿ ದೇಶದ ಆರ್ಥಿಕತೆ ಸಾಧಿಸಿರುವ ಶೇ 8.2ರ ಬೆಳವಣಿಗೆ ಎಲ್ಲ ನಿರೀಕ್ಷೆ ಮತ್ತು ಅಂದಾಜುಗಳನ್ನು ಮೀರಿದ ಮುನ್ನಡೆಯಾಗಿದೆ. ಸರಕು ಮತ್ತು ಸೇವಾ ತೆರಿಗೆಯ (ಜಿಎಸ್‌ಟಿ) ದರ ಪರಿಷ್ಕರಣೆಯಿಂದ ಆರ್ಥಿಕ ಚಟುವಟಿಕೆಗಳು ಚುರುಕುಗೊಂಡಿರುವುದು, ದೇಶದ ಒಟ್ಟು ಆಂತರಿಕ ಉತ್ಪನ್ನವು (ಜಿಡಿಪಿ) ಉತ್ತಮ ಸ್ಥಿತಿ ತಲಪಲು ಕಾರಣವಾಗಿದೆ.**

- ಕಳೆದ ಆರು ತ್ರೈಮಾಸಿಕಗಳಲ್ಲಿ ಸಾಧಿಸಿರುವ ಗರಿಷ್ಠಮಟ್ಟದ ಬೆಳವಣಿಗೆ ಇದಾಗಿದ್ದು, ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಅಂದಾಜು ಮಾಡಿದ್ದ ಶೇ 7ರ ಬೆಳವಣಿಗೆಗಿಂತಲೂ ಹೆಚ್ಚಿನ ಸಾಧನೆಯಾಗಿದೆ. ಆರ್ಥಿಕ ತಜ್ಞರ ಗುರಿಯೂ ಶೇ 7ರಷ್ಟೇ ಇತ್ತು.
- ಎರಡನೇ ತ್ರೈಮಾಸಿಕದ ಅವಧಿಯಲ್ಲಿ ಅಮೆರಿಕ ಹೇರಿದ ಕಠಿಣ ಸುಂಕ ನೀತಿಯು ದೇಶದ ರಫ್ತು ವಲಯದ ಮೇಲೆ ಗಂಭೀರ ಪರಿಣಾಮ ಬೀರಿತ್ತು. ಇದರಿಂದ, ಆರ್ಥಿಕತೆ ಬೆಳವಣಿಗೆಯು ನಿರೀಕ್ಷೆಗಿಂತ ಕಡಿಮೆಯಾಗಲಿದೆ ಎಂದು ಆರ್‌ಬಿಐ ಅಂದಾಜು ಮಾಡಿತ್ತು.
- ಕಳೆದ ಆರ್ಥಿಕ ವರ್ಷದ ಇದೇ ತ್ರೈಮಾಸಿಕದಲ್ಲಿ ಜಿಡಿಪಿ ಶೇ 5.6ರಷ್ಟು ದಾಖಲಾಗಿತ್ತು. ಮೊದಲ ತ್ರೈಮಾಸಿಕದಲ್ಲಿನ ಶೇ 7ರ ಬೆಳವಣಿಗೆಯ ಹಿನ್ನೆಲೆಯಲ್ಲಿ ಪ್ರಸಕ್ತ ಆರ್ಥಿಕ ವರ್ಷದ ಮೊದಲಾರ್ಧದ ಬೆಳವಣಿಗೆಯು ಶೇ 8ಕ್ಕೆ ತಲಪಿದೆ ಮತ್ತು ಈ ಪ್ರಗತಿಯು ಅಸಾಧಾರಣ ಆದುದಾಗಿದೆ.
- ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯದ ಪ್ರಕಾರ, ಕೈಗಾರಿಕಾ ಉತ್ಪಾದನೆ ವಲಯದ ಬೆಳವಣಿಗೆಯು ಶೇ 8.1ರಷ್ಟು ಹಾಗೂ ಸೇವಾ ವಲಯ ಶೇ 9.2ರಷ್ಟು ಬೆಳವಣಿಗೆ ಸಾಧಿಸಿದೆ. ತಯಾರಿಕಾ ವಲಯವು ಆರು ತ್ರೈಮಾಸಿಕಗಳ ಗರಿಷ್ಠ ಸಾಧನೆಯಾದ ಶೇ 9.1ರಷ್ಟು ಬೆಳವಣಿಗೆ ದಾಖಲಿಸಿದೆ. ಈ ದರ ಕಳೆದ ತ್ರೈಮಾಸಿಕದಲ್ಲಿ ಶೇ 7.7ರಷ್ಟಿತ್ತು. ನಿರ್ಮಾಣ ವಲಯವೂ ಶೇ 7.2ರಷ್ಟು ಬೆಳವಣಿಗೆ ಕಂಡಿದೆ.
- ಹಣಕಾಸು, ರಿಯಲ್ ಎಸ್ಟೇಟ್ ಮತ್ತು ವೃತ್ತಿಪರ ಸೇವೆಗಳನ್ನು ಒಳಗೊಂಡಿರುವ ಸೇವಾ ವಲಯವು ಕಳೆದ ಒಂಬತ್ತು ತ್ರೈಮಾಸಿಕಗಳ ಗರಿಷ್ಠ ಮಟ್ಟವಾದ ಶೇ 10.2ರಷ್ಟು ಬೆಳವಣಿಗೆ ದಾಖಲಿಸಿದೆ. ಕುಟುಂಬಗಳಿಂದ ಸರಕುಗಳ ಖರೀದಿ ಮತ್ತು ಬಳಕೆಗೆ ಮಾಡುವ ವೆಚ್ಚವು ಜಿಡಿಪಿ ಪ್ರಗತಿಗೆ ಶೇ 60ರಷ್ಟು ಕೊಡುಗೆ ನೀಡುತ್ತದೆ. ಈ ಬಳಕೆಯ ವೆಚ್ಚ ಶೇ 7.9ರಷ್ಟು ಹೆಚ್ಚಾಗಿದೆ.
- ಈ ಪ್ರಮಾಣ ಕಳೆದ ಆರ್ಥಿಕ ವರ್ಷದ ಇದೇ ತ್ರೈಮಾಸಿಕದಲ್ಲಿ ಶೇ 6.4ರಷ್ಟಿತ್ತು. ಆದರೆ, ಕೃಷಿ ವಲಯದ ಬೆಳವಣಿಗೆಯು ಶೇ 3.5ಕ್ಕೆ ಕುಸಿದಿದೆ. ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ಶೇ 4.1ರಷ್ಟು ಬೆಳವಣಿಗೆ ಕಂಡಿತ್ತು. ಈ ನಡುವೆಯೂ, ಗ್ರಾಮೀಣ ಪ್ರದೇಶದಲ್ಲಿನ ಬೇಡಿಕೆ ಸುಧಾರಣೆ ಕಂಡಿದೆ.
- ಜಿಡಿಪಿ ದರ ಉತ್ತಮ ಸ್ಥಿತಿಯಲ್ಲಿರುವುದು ಸಮಾಧಾನಕರ ಸಂಗತಿಯಾದರೂ, ಕಳವಳಕ್ಕೆ ಕಾರಣಗಳೂ ಇವೆ. ಅಮೆರಿಕದೊಂದಿಗಿನ ವಾಣಿಜ್ಯ ಒಪ್ಪಂದಕ್ಕೆ ಸಂಬಂಧಿಸಿದ ಡೋಲಾಯಮಾನ ಸ್ಥಿತಿ ಮುಂದುವರಿದಿದೆ. ವಿಶ್ವ ವಾಣಿಜ್ಯ ದೃಷ್ಟಿಕೋನವೂ ದುರ್ಬಲವಾಗಿ ಗೋಚರಿಸುತ್ತಿದೆ.
- ಹಣದುಬ್ಬರಕ್ಕೆ ಅನುಗುಣವಾಗಿ ನೈಜ ಜಿಡಿಪಿ ದರವು ನಿರೀಕ್ಷೆಗಿಂತ ಹೆಚ್ಚಾಗಿದ್ದರೂ, ಸಾಂಕೇತಿಕ (ನಾಮಿನಲ್) ಜಿಡಿಪಿ ದರ ಕಡಿಮೆ ಇರುವುದು ಕಳವಳಕಾರಿ ಸಂಗತಿಯಾಗಿದೆ. ಇತ್ತೀಚಿನ 'ಐಎಂಎಫ್' ವರದಿಯು ಭಾರತದ ಜಿಡಿಪಿ ದತ್ತಾಂಶಗಳಿಗೆ 'ಸಿ' ಗ್ರೇಡ್ ನೀಡಿರುವುದನ್ನು ಇಲ್ಲಿ ಗಮನಿಸಬಹುದು. ಈ ಶ್ರೇಯಾಂಕವು ಆರ್ಥಿಕ ಬೆಳವಣಿಗೆಗೆ ಸಂಬಂಧಿಸಿದ ದತ್ತಾಂಶಗಳ ವಿಶ್ವಾಸಾರ್ಹತೆಯನ್ನು ಅನುಮಾನದಿಂದ ನೋಡಲು ಕಾರಣವಾಗುತ್ತದೆ.
- ಆರ್ಥಿಕತೆ ಬೆಳವಣಿಗೆಗೆ ಹಬ್ಬಗಳು ಚೋದಕವಾಗಿ ಪರಿಣಮಿಸಿದ್ದರೂ, ಅದು ನಿರಂತರ ಪ್ರಕ್ರಿಯೆ ಆಗಿರಬೇಕೆಂದು ನಿರೀಕ್ಷಿಸುವುದು ಸಾಧ್ಯವಿಲ್ಲ. ಖಾಸಗಿ ವಲಯದಲ್ಲಿ ಬಂಡವಾಳ ಹೂಡಿಕೆ ಕೂಡ ಇನ್ನೂ ಚುರುಕಾಗಿಲ್ಲ. ಈ ಹೂಡಿಕೆ ಸುಧಾರಿಸದೆ ಹೋದಲ್ಲಿ ಸುಸ್ಥಿರ ಬೆಳವಣಿಗೆಯೂ ಸಾಧ್ಯವಾಗುವುದಿಲ್ಲ. ಈ ಎಲ್ಲ ಗೊಂದಲಗಳ ಕಾರಣದಿಂದಾಗಿ, ಇಡೀ ಆರ್ಥಿಕ ವರ್ಷದ

ಬೆಳವಣಿಗೆಯನ್ನು ಶೇ 7ಕ್ಕೆ ಗೊತ್ತುಪಡಿಸಿರುವ ಸರ್ಕಾರದ ನಿರ್ಧಾರ ಅತೀವ ಆಶಾವಾದದಿಂದ ಕೂಡಿರುವಂತೆ ಭಾಸವಾಗುತ್ತಿದೆ.

## ❖ ಶುದ್ಧ ಪರಿಸರ ಎನ್ನುವ ಜೀವಿಸುವ ಹಕ್ಕು!

**ಸಂದರ್ಭ: 'ಮಾಲಿನ್ಯಮುಕ್ತ ಪರಿಸರ' ವನ್ನು ಹೊಂದುವುದು ನಾಗರಿಕರ ಹಕ್ಕು. ಈ ಹಕ್ಕನ್ನು ಸಾಕಾರಗೊಳಿಸುವ ಇಚ್ಛಾಶಕ್ತಿ ಸರ್ಕಾರಗಳಿಗೆ ಇಲ್ಲದಿರುವುದೇ ಸಮಸ್ಯೆಯಾಗಿದೆ.**


- 'ತಾಯ ಮೊಲೆವಾಲು ನಂಜಾಗಿ ಕೊಲುವೊಡೆ ಇನ್ನಾರಿಗೆ ದೂರುವೆ' ಎನ್ನುವ ಬಸವಣ್ಣನ ವಚನವನ್ನು ನೆನಪಿಸುವ ವಿದ್ಯಮಾನಗಳಿಗೆ ನಾವು ಸಾಕ್ಷಿಯಾಗುತ್ತಿದ್ದೇವೆ. ಸಕಲ ಜೀವಸಂಕುಲವನ್ನು ಪೊರೆಯುವ ತಾಯಿಯಾಗಿರುವ ಪ್ರಕೃತಿಯೇ ಪೂತನಿಯ ರೂಪದಲ್ಲಿ ಕಾಣಿಸಿಕೊಳ್ಳುತ್ತಿರುವ ವಿದ್ಯಮಾನಗಳನ್ನು ಕಾಣುತ್ತಿದ್ದೇವೆ ಹಾಗೂ ಅಂಥ ಘಟನೆಗಳ ಸೃಷ್ಟಿಕರ್ತರು ನಾವೇ ಆಗಿದ್ದೇವೆ.
- ಬಿಹಾರದ ಕೆಲವು ಪ್ರದೇಶಗಳಲ್ಲಿ ಹಾಲುಣಿಸುವ ತಾಯಂದಿರ ಎದೆಹಾಲಿನಲ್ಲಿ ನಂಜುಕಾರಕ ಯುರೇನಿಯಂ ಅಂಶ ಪತ್ತೆಯಾಗಿರುವುದು ಇತ್ತೀಚೆಗೆ ದೊಡ್ಡ ಸುದ್ದಿಯಾಗಿತ್ತು. ಕಲಬೆರಕೆ ಜಗತ್ತಿನಲ್ಲಿ ತಾಯಿಯ ಹಾಲೂ ಶುದ್ಧವಾಗಿ ಉಳಿದಿಲ್ಲ ಎನ್ನುವುದು ಮನುಷ್ಯ ಸಂಬಂಧಗಳ ಬಗ್ಗೆ ನಂಬಿಕೆ ಉಳ್ಳವರನ್ನು ಕಂಗೆಡಿಸುವ ಸಂಗತಿ. ಅಸಂಭವ ಎನ್ನುವ ಸಾದೃಶ್ಯಗಳನ್ನು ನೀಡುವ ಬಸವಣ್ಣನ 'ಒಲೆ ಹತ್ತಿ ಉರಿದಡೆ ನಿಲಬಹುದಲ್ಲದೆ ಧರೆ ಹತ್ತಿ ಉರಿದರೆ ನಿಲಲುಬಾರದು' ಎನ್ನುವ ವಚನದ ಆತಂಕ ವರ್ತಮಾನದಲ್ಲಿ ಸಂಭವನೀಯ ಎನ್ನುವಂತಾಗಿದೆ.
- ತಾಯಂದಿರ ಎದೆಹಾಲಿನಲ್ಲಿ ಯುರೇನಿಯಂ ಅಂಶ ಇರುವುದನ್ನು ಪಟ್ನಾದ ಮಹಾವೀರ್ ಕ್ಯಾನ್ಸರ್ ಸಂಸ್ಥೆ ಮತ್ತು ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಏಮ್ಸ್) ಸಂಶೋಧನೆ ದೃಢಪಡಿಸಿದೆ. ಯುರೇನಿಯಂ ಪ್ರಮಾಣವು ವಿಶ್ವ ಆರೋಗ್ಯ ಸಂಸ್ಥೆಯ ಸೂಚ್ಯಂಕಕ್ಕಿಂತ ಕಡಿಮೆ ಇದೆ ಎನ್ನುವುದು ಸಮಾಧಾನದ ಸಂಗತಿ.
- 'ಯಾರಿಗೆ ದೂರುವುದು' ಎನ್ನುವ ಬಸವಣ್ಣನ ಆತಂಕದ ಪ್ರಶ್ನೆಗೆ, ಪ್ರಜಾಪ್ರಭುತ್ವ ವ್ಯವಸ್ಥೆ ತೋರಬಹುದಾದ ಉತ್ತರ, ಪ್ರಜೆಗಳೇ ಚುನಾಯಿಸಿದ ಸರ್ಕಾರ. ಪರಿಸರ ಸಂರಕ್ಷಣೆ ಸರ್ಕಾರದ ಹೊಣೆಗಾರಿಕೆ. ಈ ಕರ್ತವ್ಯವನ್ನು ಸುಪ್ರೀಂ ಕೋರ್ಟ್, ಮೂಲಭೂತ ಹಕ್ಕುಗಳ ರಕ್ಷಣೆಯ ರೂಪದಲ್ಲಿ ವ್ಯಾಖ್ಯಾನಿಸಿರುವುದು ಕುತೂಹಲಕರ. ರಾಜಸ್ಥಾನದ ಮೂರು ನದಿಗಳ (ಜೊಜರಿ, ಬಂಡಿ, ಲುನಿ) ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಿಸಿದ ಪ್ರಕರಣದ ವಿಚಾರಣೆ ಸಂದರ್ಭದಲ್ಲಿ, 'ಪರಿಸರ ಸಂರಕ್ಷಣೆ ಜನತೆಯ ಮೂಲಭೂತ ಹಕ್ಕಿನ ರಕ್ಷಣೆ ಕೂಡ' ಎಂದು ಸುಪ್ರೀಂ ಕೋರ್ಟ್‌ನ ವಿಭಾಗೀಯ ಪೀಠ ಹೇಳಿದೆ. ನೈಸರ್ಗಿಕ ಸಮತೋಲನ ಮತ್ತು ಸ್ವಚ್ಛ ವಾತಾವರಣವನ್ನು ದೇಶದ ಜನತೆಗೆ ಕಲ್ಪಿಸುವುದು, ಅವರ ಮೂಲಭೂತ ಹಕ್ಕನ್ನು ಕಾಪಾಡಿದಂತೆಯೇ ಸರಿ ಎನ್ನುವುದು ಸುಪ್ರೀಂ ಕೋರ್ಟ್ ಅಭಿಪ್ರಾಯದ ಸಾರ. ತನ್ನ ಮಾತುಗಳ ಸಂದರ್ಭದಲ್ಲಿ, ಸಂವಿಧಾನದ 21ನೇ ವಿಧಿಯನ್ನು ಪ್ರಸ್ತಾಪಿಸಿರುವ ಕೋರ್ಟ್- 'ಪರಿಸರದ ಸಂರಕ್ಷಣೆ ಜೀವಿಸುವ ಹಕ್ಕಿಗೆ ಸಮಾನ' ಎಂದು ವಿಶ್ಲೇಷಿಸಿದೆ.
- ತಿರುಚಿರಾಪಳ್ಳಿಯ ಬಳಿ ಕಾವೇರಿ ನದಿಯನ್ನು ಅಧ್ಯಯನಕ್ಕೆ ಒಳಪಡಿಸಿರುವ ತಮಿಳುನಾಡಿನ 'ಭಾರತೀದಾಸನ್' ವಿಶ್ವವಿದ್ಯಾಲಯದ ಸಂಶೋಧಕರು, ನದಿಯ ನೀರಿನಲ್ಲಿ ಭಾರವಾದ ಲೋಹಗಳು ಸೇರಿರುವುದನ್ನು ಗುರ್ತಿಸಿದ್ದಾರೆ. ಸೀಸ ಮತ್ತು ಕ್ಯಾಡ್ಮಿಯಂ ಲೋಹದ ಮಾದರಿ ಕಾವೇರಿ ನದಿಯಲ್ಲಿನ ಮೀನಿನಲ್ಲಿಯೂ ಪತ್ತೆ ಆಗಿದೆ. ಭಾರಲೋಹ ಬೆರೆತ ನೀರು ಮಾತ್ರವಲ್ಲ, ಆ ಪರಿಸರದ ಮೀನುಗಳ ಸೇವನೆ ಕೂಡ ಆರೋಗ್ಯಕ್ಕೆ ಹಿತಕರವಲ್ಲ ಎಂಬ ಎಚ್ಚರಿಕೆಯನ್ನು ತಜ್ಞರ ತಂಡ ನೀಡಿದೆ.
- 'ಲಾನ್ಸೆಂಟ್ ಕೌಂಟ್‌ಡೌನ್' ನ 2025ರ ವರದಿಯಲ್ಲಿ ಇರುವ, ವಾಯುಮಾಲಿನ್ಯ ಉಂಟು ಮಾಡಿರುವ ಅನಾಹುತದ ಮಾಹಿತಿ ಗಾಬರಿ ಹುಟ್ಟಿಸುವಂತಿದೆ. 2022ರಲ್ಲಿ ಲಕ್ಷಾಂತರ ಭಾರತೀಯರು ವಾಯುಮಾಲಿನ್ಯಕ್ಕೆ ಬಲಿಯಾಗಿದ್ದಾರೆ ಎಂದು ವರದಿ ಹೇಳುತ್ತದೆ. 'ಲಾನ್ಸೆಂಟ್ ಕೌಂಟ್‌ಡೌನ್' ಅಂತರರಾಷ್ಟ್ರೀಯ ಸಂಸ್ಥೆಯಾಗಿದ್ದು, ಜಾಗತಿಕವಾಗಿ ಹವಾಮಾನ ಬದಲಾವಣೆ ಮತ್ತು ಅದು ಆರೋಗ್ಯದ ಮೇಲೆ ಉಂಟುಮಾಡುತ್ತಿರುವ ಪರಿಣಾಮದ ಬಗ್ಗೆ ಅಧ್ಯಯನ ನಡೆಸುತ್ತದೆ. ಪಾರಂಪರಿಕ

Dr Rajkumar IAS/KAS Academy

ಇಂಧನ ಮೂಲಗಳಾದ ಕಲ್ಲಿದ್ದಲು ಮತ್ತು ಪೆಟ್ರೋಲಿಯಂ ಬಳಕೆಯಿಂದ ಜಗತ್ತಿನ ನೂರು ದೇಶಗಳಲ್ಲಿ ಪ್ರತಿವರ್ಷ ಲಕ್ಷಾಂತರ ಮಂದಿ ಸಾವಿಗೀಡಾಗುತ್ತಿದ್ದಾರೆ ಎನ್ನುವ ದಾರುಣ ಸಂಗತಿಯನ್ನೂ ಲಾನ್ಸೆಂಟ್ ತನ್ನ ವರದಿಯಲ್ಲಿ ದಾಖಲಿಸಿದೆ.

- ಕರ್ನಾಟಕದಲ್ಲಿಯೂ ನದಿ ಮೂಲಗಳು ಶುದ್ಧವಾಗಿಲ್ಲ ಎನ್ನುವ ಆತಂಕ ದಶಕಗಳಿಂದಲೂ ಇದೆ. ಕೈಗಾರಿಕೆಗಳಿಂದ ನಾಡಿನ ಜೀವನದಿಗಳು ನಂಜು ಮೈಗೂಡಿಸಿಕೊಳ್ಳುತ್ತಿರುವ ಬಗ್ಗೆ ಪರಿಸರವಾದಿಗಳು ಎಚ್ಚರಿಕೆ ನೀಡುತ್ತಲೇ ಇದ್ದಾರೆ. ಆದರೆ, ನದಿಗಳನ್ನು ಚರಂಡಿಗಳಾಗಿಸುವ 'ನಾಗರಿಕ ಕಾರ್ಯ' ಎಗ್ಗಿಲ್ಲದೆ ಸಾಗಿದೆ.
- ವಾಯುಮಾಲಿನ್ಯ ಹೆಚ್ಚುತ್ತಿದ್ದರೂ, ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸಿ, ವಾಯುಮಾಲಿನ್ಯಕ್ಕೆ ತಿದಿ ಒತ್ತುತ್ತೇವೆ. ದೆಹಲಿಯ ಪಾಡಂತೂ ಹೇಳತೀರದು. ಅಲ್ಲಿ ಉಸಿರಾಡುವ ಗಾಳಿಯ ಗುಣಮಟ್ಟ ಅತ್ಯಂತ ಕಳಪೆಯಾಗಿದೆ ಎಂದು ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿಯೇ ಹೇಳಿದೆ. ದೇಶದ ರಾಜಧಾನಿಯಲ್ಲಿ ಗಾಳಿಯ ಗುಣಮಟ್ಟ ಸುಧಾರಿಸುವ ಬಗ್ಗೆ ಸುಪ್ರೀಂ ಕೋರ್ಟ್ ಸಿಟ್ಟು, ಆಕ್ರೋಶ ದೊಂದಿಗೆ, ನಿರಾಶೆಯ ಧ್ವನಿಯಲ್ಲೂ ಮಾತನಾಡಿರುವುದಿದೆ.
- ಮಾಲಿನ್ಯ ನಿಯಂತ್ರಣಕ್ಕೆ ಒತ್ತಾಯಿಸಿ ನಡೆಯುವ ನಾಗರಿಕ ಪ್ರತಿರೋಧದ ಚಳವಳಿಗಳನ್ನು ವ್ಯವಸ್ಥೆ ಹತ್ತಿಕ್ಕಲು ಬಯಸುತ್ತದೆ. ಪರಿಸರ ಕಾಳಜಿಯ ಮಾತುಗಳನ್ನಾಡುವವರು ಅಭಿವೃದ್ಧಿಯ ವಿರೋಧಿಗಳು ಎನ್ನುವಂತೆ ಚಿತ್ರಿಸಲಾಗುತ್ತದೆ. ಪ್ರತಿರೋಧದ ನಡುವೆಯೂ ಪರಿಸರ ಕಾಳಜಿಯ ವಿವೇಕದ ಧ್ವನಿಗಳು ಜೀವಂತವಾಗಿವೆ ಎನ್ನುವುದು ಆಶಾವಾದದ ಸಂಗತಿ.
- ಸ್ವಚ್ಛ ಪರಿಸರದ ಅಪೇಕ್ಷೆ ನಾಗರಿಕರ ಮೂಲಭೂತ ಹಕ್ಕು ಎನ್ನುವುದನ್ನು ಸರ್ಕಾರಗಳು ಮನಗಾಣಬೇಕಿದೆ. ಮುಂದಿನ ದಿನಗಳಲ್ಲಿ ಆರೋಗ್ಯಕರ ಗಾಳಿಗೂ ಪಡಿತರ ವ್ಯವಸ್ಥೆ ಅನಿವಾರ್ಯವಾಗುವ ಸ್ಥಿತಿಯನ್ನು ಸರ್ಕಾರಗಳು ಸೃಷ್ಟಿಸಬಾರದು.

IAS/KAS Academy



# ಡಿಜಿಟಲ್ ಇ–ಸ್ಟ್ಯಾಂಪ್ ಕಾಗದರಹಿತ ನೋಂದಣಿಯತ್ತ ಹೆಜ್ಜೆ





ಪ್ರಜಾವಾಣಿ ವಾರ್ತೆ

ರಾಜ್ಯದಲ್ಲಿ ನೋಂದಣಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸಲು (ಕಾಗದರಹಿತ) ಹೊರಟಿರುವ ಕಂದಾಯ ಇಲಾಖೆಯು ಅದಕ್ಕೆ ಪೂರಕವಾದ ಹೆಜ್ಜೆಯಾಗಿ ಡಿಜಿಟಲ್ ಇ–ಸ್ಟ್ಯಾಂಪ್ (ಡಿಇಎಸ್) ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಈಗ ನೋಂದಣಿ ಮತ್ತು ನೋಂದಣಿಯೇತರ ಛಾಪಾ ಕಾಗದ ವಹಿವಾಟುಗಳಿಗೆ ಬಳಸುವ 'ಇ–ಸ್ಟ್ಯಾಂಪ್' ಜಾಗವನ್ನು ಇನ್ನು ಮುಂದೆ 'ಡಿಜಿಟಲ್ ಇ–ಸ್ಟ್ಯಾಂಪ್' ತುಂಬಲಿದೆ.

ಈಗಿನ ವ್ಯವಸ್ಥೆಯಲ್ಲಿದ್ದ ಭದ್ರತಾ ಲೋಪವನ್ನು ತೊಡೆದು ಹಾಕುವುದು ಹೊಸ ವ್ಯವಸ್ಥೆಯ ಒಂದು ಉದ್ದೇಶವಾದರೆ, ಇ–ಸ್ಟ್ಯಾಂಪ್ ವಂಚನೆಯಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿದ್ದ ನಷ್ಟವನ್ನು ತಪ್ಪಿಸುವುದು ಇನ್ನೊಂದು ಉದ್ದೇಶ. ಜನರು ಜಗತ್ತಿನಲ್ಲಿ ಎಲ್ಲೇ ಇದ್ದರೂ ಮನೆಯಲ್ಲೇ ಕುಳಿತು ಸ್ಟ್ಯಾಂಪ್ ಖರೀದಿಸುವುದಕ್ಕೆ ಅವಕಾಶ ಮಾಡಿಕೊಡುವುದು ಈ ಪ್ರಯತ್ನದ ಹಿಂದಿರುವ ಮತ್ತೊಂದು ಸಕಾರಣ.

'ಈ ವ್ಯವಸ್ಥೆಯನ್ನು ಯಶಸ್ವಿಯಾಗಿ ಅಳವಡಿಸಿಕೊಳ್ಳಲಾಗಿದ್ದು, ಇನ್ನು ಮುಂದೆ ರಾಜ್ಯದಾದ್ಯಂತ ಡಿಜಿಟಲ್ ಇ–ಸ್ಟ್ಯಾಂಪ್ ಕಡ್ಡಾಯವಾಗಲಿದೆ' ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಹೊಸ ಸ್ಟ್ಯಾಂಪ್ ಹಾಗೂ ಅದರ ಪ್ರಯೋಜನಗಳ ವಿವರಗಳನ್ನು ಇಲ್ಲಿ ನೀಡಲಾಗಿದೆ.


Y26Y0SMMBEY8AF7

INDIA NON JUDICIAL

सत्यमेव जयते

Government of Karnataka

eStamp

| | | | |
|---|---|---|---|
| eStamp Certificate No. | : Y26Y0SMMBEY8AF7 | Executor Detail | : Ajay Kumar (Stamp Duty Paid By) |
| Issue Date | : 09-May-2025 | Executant Details | : Narayana M, Sanjay Kumar, Ram Kumar |
| Description of Document | : Lease of immovable property | Stamp Duty Amount (₹) | : 2000 ( Two Thousand Only) |
| As Per Stamp Act | : (30-1-iii) Where the lease purports to be for a term exceeding one year and not exceeding ten years | Transaction Type | : Online |

Schedule of the Property

| Location of the Property | Survey No. | Area | North | South | East | West |
|---|---|---|---|---|---|---|
| Anekal Village | 2/3 | 3.18(AG) | 2/4 | 2/6 | Road | 2/5 |
| Owner Name(s) : | Ajay Kumar, Harsha Kumar, Sanjay Kumar, Ram Kumar | | | | | |

Disclaimer :
1. The authenticity of this e-stamp paper can be verified at https://kaveri.karantaka.gov.in or send SMS to 556678 in the format <<eStampCertNo>>or scan the QR code.
2. In case of false e-Stamp paper, please inform us. Send SMS to 556678 in the format <<eStampCertNo FAKE>>.

Please write or type below this line

LEASE DEED

This deed of Lease is executed on 20 day of 06 month of 2025 year at Bengaluru BETWEEN Sri./Smt.XX YYYYY W/o. ZZZZZ Occupation Engineer aged 46 years, Aadhaar No xxxxxxx9321 PAN VDRTU4800B No 22/C 8th stage 11th block PIN Code 560060 herein after referred to as "the Lessor" of the one part and Represen holder Sri./Smt. AAAAA ,S/o./W/o.D/o BBBBBB occupation Doctor aged 36 years, Aadhaar No xxxxxxx6523 added if required) AND Sri./Smt. CCCCC , S/o./ W/o.D/o DDDDD

## ಛಾಪಾ ಕಾಗದದಿಂದ ಡಿಇಎಸ್‌ವರೆಗೆ

ಹಿಂದೆ ನೋಂದಣಿಗಾಗಿ ಛಾಪಾ ಕಾಗದಗಳನ್ನು ಬಳಸಲಾಗುತ್ತಿತ್ತು. ಇವುಗಳನ್ನು ಮಹಾರಾಷ್ಟ್ರದ ನಾಸಿಕ್‌ನಲ್ಲಿರುವ ಇಂಡಿಯಾ ಸೆಕ್ಯೂರಿಟಿ ಪ್ರೆಸ್‌ನಲ್ಲಿ ಮುದ್ರಿಸಲಾಗುತ್ತಿತ್ತು. ಪರವಾನಗಿ ಪಡೆದ ಸ್ಟ್ಯಾಂಪ್ ಮಾರಾಟಗಾರರು ಈ ಛಾಪಾ ಕಾಗದಗಳನ್ನು ನಾಗರಿಕರಿಗೆ ಒದಗಿಸುತ್ತಿದ್ದರು. 2000ದಲ್ಲಿ ನಕಲಿ ಛಾಪಾ ಕಾಗದ ಹಗರಣ ಬೆಳಕಿಗೆ ಬಂತು. ₹32 ಸಾವಿರ ಕೋಟಿ ಮೌಲ್ಯದ ಈ ಹಗರಣದ ಹಿಂದಿದ್ದ ಕರೀಂ ಲಾಲ್ ತೆಲಗಿಯನ್ನು 2001ರಲ್ಲಿ ಬಂಧಿಸಲಾಯಿತು. ಆ ಬಳಿಕವೂ ಕೆಲವು ತಿಂಗಳು ಛಾಪಾ ಕಾಗದ ಬಳಕೆಯಲ್ಲಿತ್ತು. 2003ರ ಏಪ್ರಿಲ್ 1ರಿಂದ ಜಾರಿಗೆ ಬರುವಂತೆ ರಾಜ್ಯ ಸರ್ಕಾರ ಛಾಪಾ ಕಾಗದದ ಬಳಕೆಯನ್ನು ಸ್ಥಗಿತಗೊಳಿಸಿ ಆದೇಶ ಹೊರಡಿಸಿತು.



ಆ ಬಳಿಕ ದಾಖಲೆಯ ವಿವರಗಳನ್ನು ₹2 ಮೌಲ್ಯದ ದಾಖಲೆ ಹಾಳೆ (ಡಾಕ್ಯುಮೆಂಟ್ ಶೀಟ್) ಅಥವಾ ಖಾಲಿ ಹಾಳೆಯಲ್ಲಿ ಬರೆಯುವ ಮತ್ತು ಆಯಾ ವ್ಯಾಪ್ತಿಯ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಅಥವಾ ಅಧಿಕೃತ ಬ್ಯಾಂಕುಗಳಲ್ಲಿ ಛಾಪಾ ಕಾಗದದ ಸುಂಕ (ಸ್ಟ್ಯಾಂಪ್ ಡ್ಯೂಟಿ) ಪಾವತಿಸುವ ವ್ಯವಸ್ಥೆಯನ್ನು ಜಾರಿಗೆ ತರಲಾಯಿತು.

ಕಂದಾಯ ಇಲಾಖೆಯು 2008ರಲ್ಲಿ ರಾಜ್ಯದಲ್ಲಿ ಪ್ರಾಯೋಗಿಕವಾಗಿ ಇ–ಸ್ಟ್ಯಾಂಪ್ ವ್ಯವಸ್ಥೆ ಪರಿಚಯಿಸಿತು. 2009ರಲ್ಲಿ ಇದನ್ನು ರಾಜ್ಯದಾದ್ಯಂತ ವಿಸ್ತರಿಸಲಾಯಿತು. ಭದ್ರತೆ ಮತ್ತು ಪಾರದರ್ಶಕತೆಯನ್ನು ಹೆಚ್ಚಿಸುವ ದಿಸೆಯಲ್ಲಿ ಇದು ಮಹತ್ವದ ಹೆಜ್ಜೆ ಎಂದು ಇಲಾಖೆ ಅಂದು ಪ್ರತಿಪಾದಿಸಿತ್ತು.

ರಾಜ್ಯದಾದ್ಯಂತ ಇ-ಸ್ಟ್ಯಾಂಪ್‌ಗಳ ವಿತರಣೆ ಜವಾಬ್ದಾರಿಯನ್ನು ಸ್ಟಾಕ್ ಹೋಲ್ಡಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್‌ಗೆ (ಎಸ್‌ಎಚ್‌ಸಿಐಎಲ್) ನೀಡಲಾಗಿತ್ತು.

**ಇ-ಸ್ಟ್ಯಾಂಪ್‌ನಲ್ಲೂ ವಂಚನೆ:** ಹೆಚ್ಚು ಸುರಕ್ಷಿತ ಮತ್ತು ಪಾರದರ್ಶಕ ಎಂದು ಬಿಂಬಿಸಲಾಗಿದ್ದ ಇ-ಸ್ಟ್ಯಾಂಪ್ ವ್ಯವಸ್ಥೆಯಲ್ಲೂ ಲೋಪಗಳು ಕಂಡುಬಂದವು.

ಇ-ಸ್ಟ್ಯಾಂಪ್ ಪ್ರಮಾಣಪತ್ರಗಳನ್ನು ಜೆರಾಕ್ಸ್ ಪಡೆದು ನಕಲು ಮಾಡುವುದು ಅಥವಾ ಅವುಗಳಂತೆಯೇ ಕಾಣುವ ಪ್ರತಿಗಳನ್ನು ಸೃಷ್ಟಿಸುವ ಪ್ರಕರಣಗಳು ವರದಿಯಾದವು. ಒಂದು ಉದ್ದೇಶಕ್ಕಾಗಿ ಖರೀದಿಸಿದ ಇ-ಸ್ಟ್ಯಾಂಪ್ ಅನ್ನು ಬೇರೆ ರೀತಿಯ ದಾಖಲೆಗೆ ಬಳಸುವ ಪ್ರಸಂಗಗಳು ನಡೆಯುತ್ತಿರುವುದು ಕೂಡ ಗಮನಕ್ಕೆ ಬಂದವು.

ಇಂತಹ ಕೃತ್ಯಗಳ ಮೂಲಕ ಸ್ಟ್ಯಾಂಪ್ ಶುಲ್ಕ ಪಾವತಿಯನ್ನು ತಪ್ಪಿಸಿ ಇಲಾಖೆಗೆ ವಂಚಿಸುತ್ತಿರುವ ಘಟನೆಗಳು ರಾಜ್ಯದಾದ್ಯಂತ ನಡೆದಿವೆ. ಇದು ರಾಜ್ಯದ ಬೊಕ್ಕಸಕ್ಕೆ ನಷ್ಟವನ್ನು ಉಂಟುಮಾಡಿತ್ತು. ಇದೆಲ್ಲವನ್ನೂ ಗಮನದಲ್ಲಿಟ್ಟುಕೊಂಡು ಡಿಜಿಟಲ್ ಇ-ಸ್ಟ್ಯಾಂಪ್ ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

## ವೈಶಿಷ್ಟ್ಯಗಳು, ಪ್ರಯೋಜನಗಳು

- ಮಧ್ಯವರ್ತಿಗಳ ನೆರವಿಲ್ಲದೆ ನಾಗರಿಕರು ಸ್ವತಃ ಡಿಜಿಟಲ್ ಇ-ಸ್ಟ್ಯಾಂಪ್ ಪಡೆಯಬಹುದು. ಈ ಸೇವೆ 24x7 ಲಭ್ಯ. ಜಗತ್ತಿನಲ್ಲಿ ಎಲ್ಲೇ ಇದ್ದರೂ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಈ ಸ್ಟ್ಯಾಂಪ್ ಪಡೆಯಬಹುದು. ಅದಕ್ಕಾಗಿ ಕಂಪ್ಯೂಟರ್‌ಗೆ ಇಂಟರ್‌ನೆಟ್ ಸಂಪರ್ಕ ಇರಬೇಕಷ್ಟೆ
- ಈ ಸೇವೆ ಸಂಪೂರ್ಣ ಡಿಜಿಟಲ್ ಆಗಿರುವುದರಿಂದ ಸುರಕ್ಷಿತವಾಗಿ ಆನ್‌ಲೈನ್ ಮೂಲಕ ಪಾವತಿ ಮಾಡಬಹುದು
- ನಾಗರಿಕರು ಆಧಾರ್ ಆಧಾರಿತ ಇ–ಸಹಿ ಅಥವಾ ಡಿಜಿಟಲ್ ಸಹಿ ಪ್ರಮಾಣಪತ್ರ (ಡಿಎಸ್‌ಸಿ) ಬಳಸಿಕೊಂಡು ದಾಖಲೆಗಳಿಗೆ ಡಿಜಿಟಲ್ ಸಹಿ ಮಾಡಬೇಕಾಗುತ್ತದೆ. ಹೀಗಾಗಿ ಇಡೀ ಪ್ರಕ್ರಿಯೆ ಸುರಕ್ಷಿತ
- ಆನ್‌ಲೈನ್ ಮೂಲಕವೇ ಎಲ್ಲ ಪ್ರಕ್ರಿಯೆ ನಡೆಯುವುದರಿಂದ ಸ್ಟ್ಯಾಂಪ್‌ನ ನಕಲು ಮಾಡಲು ಸಾಧ್ಯವಿಲ್ಲ. ವ್ಯವಸ್ಥೆ ಹೆಚ್ಚು ಪಾರದರ್ಶಕವಾಗಿರಲಿದೆ. ಶುಲ್ಕ ವಂಚನೆಗೂ ಕಡಿವಾಣ ಬೀಳಲಿದೆ. ಶುಲ್ಕ ನೇರವಾಗಿ ಸರ್ಕಾರದ ಖಜಾನೆಗೆ ಜಮೆ ಆಗುತ್ತದೆ
- ಡಿಜಿಟಲ್ ಸ್ಟ್ಯಾಂಪ್ ವಿವರಗಳು ಸ್ವಯಂಚಾಲಿತವಾಗಿ ನೋಂದಣಿ ವ್ಯವಸ್ಥೆಗೆ ಸೇರುತ್ತವೆ. ಕಂದಾಯ ಇಲಾಖೆ ಪರಿಚಯಿಸಲು ಉದ್ದೇಶಿಸಿರುವ ಕಾಗದ ರಹಿತ ನೋಂದಣಿ ವ್ಯವಸ್ಥೆಗೆ ಇದು ಅನುಗುಣವಾಗಿದೆ
- ಸ್ಟ್ಯಾಂಪ್‌ನ ತಪ್ಪು ವರ್ಗೀಕರಣ ಹಾಗೂ ವಂಚನೆಗಳಿಗೆ ಕಡಿವಾಣ ಬೀಳುವುದರಿಂದ ಇಲಾಖೆಯ ಆದಾಯವೂ ಹೆಚ್ಚಲಿದೆ
- ಈ ಸ್ಟ್ಯಾಂಪ್, ದಾಖಲೆಯ ಪ್ರಮುಖ ಭಾಗವಾಗಿರುವುದರಿಂದ, ಸಹಿ ಮಾಡಿರುವವರ ಗಮನಕ್ಕೆ ಬಾರದಂತೆ ಯಾವುದೇ ಬದಲಾವಣೆ ಮಾಡಲು ಸಾಧ್ಯವಿಲ್ಲ
- ಡಿಜಿಟಲ್ ರೂಪದಲ್ಲಿ ಸಂಗ್ರಹಿಸಲಾದ ದಾಖಲೆಗಳು ಕಾನೂನು ಬದ್ಧ. ಹೀಗಾಗಿ ಭೌತಿಕ ಪ್ರತಿಯ ಅಗತ್ಯವಿಲ್ಲ

## ಡಿಜಿಟಲ್ ಸ್ಟ್ಯಾಂಪ್ ಪಡೆಯುವುದು ಹೇಗೆ?

ಕಾವೇರಿ ಪೋರ್ಟಲ್ (https://kaveri.karnataka.gov.in/) ಮೂಲಕ ಡಿಜಿಟಲ್ ಇ–ಸ್ಟ್ಯಾಂಪ್ ಪಡೆಯಬೇಕು. ಅದಕ್ಕಾಗಿ ಪೋರ್ಟಲ್‌ನಲ್ಲಿ ನೋಂದಣಿ ಆಗಬೇಕು. ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ತನ್ನ ಯೂಟ್ಯೂಬ್ ಚಾನೆಲ್‌ನಲ್ಲಿ ಡಿಜಿಟಲ್ ಇ–ಸ್ಟ್ಯಾಂಪ್ ಅನ್ನು ಪಡೆಯುವ ವಿಧಾನವನ್ನು ವಿವರಿಸಿದೆ.

- ಈಗಾಗಲೇ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡಿದ್ದರೆ, ಮತ್ತೆ ಹೊಸದಾಗಿ ಮಾಡಬೇಕಾದ ಅಗತ್ಯವಿಲ್ಲ. ನೇರವಾಗಿ ಪೋರ್ಟಲ್‌ಗೆ ಲಾಗಿನ್ ಆಗಬಹುದು
- ಲಾಗಿನ್ ಆದ ಬಳಿಕ 'ಸ್ಟಾರ್ಟ್ ನ್ಯೂ ಅಪ್ಲಿಕೇಷನ್' ಎಂಬ ಕೊಂಡಿ ಒತ್ತಿದರೆ, ವಿವಿಧ ಸೇವೆಗಳ ಪಟ್ಟಿ ತೋರಿಸುತ್ತದೆ. ಅದರಲ್ಲಿ ಡಿಜಿಟಲ್ 'ಇ–ಸ್ಟ್ಯಾಂಪ್' ಆಯ್ಕೆ ಒತ್ತಬೇಕು




- ಸ್ಟ್ಯಾಂಪ್ ಡೌನ್‌ಲೋಡ್ ಮಾಡಿಕೊಳ್ಳಲು ಏಳು ಹಂತಗಳನ್ನು ಪೂರೈಸಬೇಕಾಗುತ್ತದೆ
- ಮೊದಲ ಹಂತದಲ್ಲಿ ದಾಖಲೆಯ ವಿಧ (ಉದಾ: ಬಾಡಿಗೆ ಒಪ್ಪಂದ, ಅಫಿಡವಿಟ್, ಮಾರಾಟ ಒಪ್ಪಂದ ಮುಂತಾದ 60 ವಿಧಗಳಿವೆ) ಮತ್ತು ಉಪ ವಿಧಗಳನ್ನು ಆಯ್ಕೆ ಮಾಡಬೇಕಾಗುತ್ತದೆ. ನಂತರ ವಿವರಗಳನ್ನು ಭರ್ತಿ ಮಾಡಬೇಕು
- ಅರ್ಜಿದಾರರು ಹಾಗೂ ಸಹಿ ಮಾಡುವ ಎಲ್ಲರೂ ಆಧಾರ್ ಆಧಾರಿತ ಪರಿಶೀಲನೆ ಮೂಲಕ ಗುರುತು ದೃಢೀಕರಿಸಬೇಕು

(ಆಸ್ತಿ ಸಂಬಂಧಿತ ದಾಖಲೆಗಳಿದ್ದರೆ, ಸರ್ಕಾರಿ ದತ್ತಾಂಶದಲ್ಲಿ ದಾಖಲಾಗಿರುವ ಆಸ್ತಿ ಮಾಹಿತಿಯನ್ನು ಈ ವ್ಯವಸ್ಥೆ ಸ್ವಯಂಚಾಲಿತವಾಗಿ ಪರಿಶೀಲಿಸುತ್ತದೆ)

- ಸ್ಟ್ಯಾಂಪ್ ಶುಲ್ಕ ಲೆಕ್ಕ ಹಾಕಿದ ನಂತರ, ಖಜಾನೆ ಪಾವತಿ ಗೇಟ್‌ವೇ ಮೂಲಕ ಪಾವತಿ ಮಾಡಬೇಕು
- ಶುಲ್ಕ ಪಾವತಿ ದೃಢಪಟ್ಟ ನಂತರ, ಪೋರ್ಟಲ್ ಡಿಜಿಟಲ್ ಇ–ಸ್ಟ್ಯಾಂಪ್ ಸೃಷ್ಟಿಸುತ್ತದೆ. ಇದರಲ್ಲಿ ವಿಶಿಷ್ಟ ಕ್ರಮ ಸಂಖ್ಯೆ, ಕ್ಯೂಆರ್ ಕೋಡ್, ಡಿಜಿಟಲ್ ವಾಟರ್‌ಮಾರ್ಕ್ ಇರುತ್ತದೆ
- ದಾಖಲೆಗಳಿಗೆ ಸಹಿ ಹಾಕುವವರಿಗೆ ಅವರ ಮೊಬೈಲ್‌ಗೆ ಇ–ಸಹಿ ಹಾಕುವ ಲಿಂಕ್ ಬರುತ್ತದೆ. ಅದರಲ್ಲಿ ಆಧಾರ್ ಇ–ಸಹಿ ಅಥವಾ ಡಿಜಿಟಲ್ ಸಹಿ ಪ್ರಮಾಣಪತ್ರದ ಮೂಲಕ ಸಹಿ ಹಾಕಬೇಕಾಗುತ್ತದೆ
- ಎಲ್ಲರೂ ಸಹಿ ಮಾಡಿದ ನಂತರ ಅಂತಿಮ ಡಿಜಿಟಲ್ ಇ–ಸ್ಟ್ಯಾಂಪ್ ಸಿಗುತ್ತದೆ. ಇದನ್ನು ಡೌನ್‌ಲೋಡ್ ಮಾಡಿ ನೋಂದಣಿಗೆ ಬಳಸಬಹುದು

## ❖ ಕೇಂದ್ರದಿಂದ ಭಾರತ್ ಟ್ಯಾಕ್ಸಿ ಆ್ಯಪ್

**ಸಂದರ್ಭ: ಸಹಕಾರ ವ್ಯವಸ್ಥೆಯ ಅಡಿಯಲ್ಲಿ ಕೆಲಸ ನಿರ್ವಹಿ ಸುವ 'ಭಾರತ್ ಟ್ಯಾಕ್ಸಿ' ಆ್ಯಪ್ ಅನ್ನು ಆರಂಭಿಸುವ ಆಲೋಚನೆಯನ್ನು ಸರ್ಕಾರ ಹೊಂದಿದೆ ಎಂದು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ತಿಳಿಸಿದ್ದಾರೆ.**

- ಈ ಆ್ಯಪ್ ಕಾರ್ಯರೂಪಕ್ಕೆ ಬಂದ ನಂತರದಲ್ಲಿ ವಾಣಿಜ್ಯ ಬಳಕೆಯ ವಾಹನ ಗಳ ಚಾಲಕರು ಖಾಸಗಿ ಕಂಪನಿಗಳ ಮೇಲೆ ಅವಲಂಬಿತರಾಗುವುದು ಇನ್ನಿಲ್ಲವಾಗಲಿದೆ ಎಂಬುದು ಸರ್ಕಾರದ ಲೆಕ್ಕಾಚಾರ.
- 'ಭಾರತ್ ಟ್ಯಾಕ್ಸಿ' ಆ್ಯಪ್‌ಅನ್ನು ಸಹಕಾರ ಟ್ಯಾಕ್ಸಿ ಕೋ-ಆಪರೇಟಿವ್ ಲಿಮಿಟೆಡ್ ನಿರ್ವಹಿಸಲಿದೆ. ಇದು ಬಹುರಾಜ್ಯ ಸಹಕಾರ ಸಂಸ್ಥೆಯಾಗಿದೆ ಎಂದು ಅಮಿತ್ ಶಾ ಅವರು ಲೋಕಸಭೆಗೆ ಮಂಗಳವಾರ ತಿಳಿಸಿದ್ದಾರೆ.
- ಟ್ಯಾಕ್ಸಿ ಸೇವೆಯನ್ನು ಈ ಆ್ಯಪ್ ಮೂಲಕ ಪಡೆದುಕೊಳ್ಳುವುದು ಗ್ರಾಹಕಸ್ನೇಹಿ ಆಗಿರಲಿದೆ. ಸೇವೆಗಳಿಗೆ ಬೆಲೆ ನಿಗದಿಯು ಪಾರದರ್ಶಕವಾಗಿ ಇರಲಿದೆ.
- ಈ ಆ್ಯಪ್‌ನ ಬಳಕೆಗೆ ಕಮಿಷನ್ ನೀಡುವ ಪ್ರಮೇಯ ಇರುವುದಿಲ್ಲ. ಹೀಗಾಗಿ ಚಾಲಕರಿಗೆ ಪ್ರತಿ ಬಾರಿಯೂ ಪೂರ್ಣ ಮೊತ್ತ ಪಾವತಿ ಆಗುತ್ತದೆ. ಸಹಕಾರ ಸಂಘ ಪಡೆಯುವ ಲಾಭವನ್ನು ಚಾಲಕರಿಗೆ ನೇರವಾಗಿ ಹಂಚಿಕೆ ಮಾಡಲಾಗುತ್ತದೆ. ಪಾರದರ್ಶಕ ಬೆಲೆ ನಿಗದಿ ವ್ಯವಸ್ಥೆಯು ಚಾಲಕರಿಗೆ ಹಾಗೂ ಪ್ರಯಾಣಿಕರಿಗೆ ಲಾಭದಾಯಕ ಆಗಲಿದೆ ಎಂದು ಶಾ ಅವರು ಹೇಳಿದ್ದಾರೆ.
- ಭಾರತ್ ಟ್ಯಾಕ್ಸಿ ಆ್ಯಪ್ ತನ್ನ ಪ್ರಾಯೋಗಿಕ ಕಾರ್ಯಾಚರಣೆಯನ್ನು ಮಂಗಳವಾರ ದೆಹಲಿಯಲ್ಲಿ ಆರಂಭಿಸಿದೆ. ಈಗ ಈ ಆ್ಯಪ್‌ನಲ್ಲಿ 51 ಸಾವಿರಕ್ಕೂ ಹೆಚ್ಚು ಚಾಲಕರು ನೋಂದಾಯಿಸಿಕೊಂಡಿದ್ದಾರೆ.

## ❖ ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ₹: ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದದ ಅನಿಶ್ಚಿತತೆಯಿಂದ ಇಳಿಕೆ

**ಸಂದರ್ಭ: ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ಮಂಗಳವಾರ ನಡೆದ ವಹಿವಾಟಿನಲ್ಲಿ ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯವು 43 ಪೈಸೆಯಷ್ಟು ಕುಸಿದಿದ್ದು, ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ಇಳಿದಿದೆ.**

- ವಹಿವಾಟಿನ ಅಂತ್ಯದ ವೇಳೆಗೆ ರೂಪಾಯಿ ಮೌಲ್ಯವು ₹89.96ಕ್ಕೆ ಇಳಿದಿದೆ. ದೇಶದ ಷೇರುಪೇಟೆಯಿಂದ ವಿದೇಶಿ ಬಂಡವಾಳದ ಹೊರಹರಿವು, ಭಾರತ ಮತ್ತು ಅಮೆರಿಕದ ನಡುವಿನ ವ್ಯಾಪಾರ ಒಪ್ಪಂದ ಬಗ್ಗೆ ಇರುವ ಅನಿಶ್ಚಿತತೆಯು ಹೂಡಿಕೆದಾರರ ಭಾವನೆ ಮೇಲೆ ಪರಿಣಾಮ ಬೀರಿದೆ. ಇವು ರೂಪಾಯಿ ಮೌಲ್ಯ ಇಳಿಕೆಗೆ ಕಾರಣವಾಗಿವೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ.
- ಮಂಗಳವಾರ ಬೆಳಿಗ್ಗೆ ರೂಪಾಯಿ ವಿನಿಮಯ ಮೌಲ್ಯವು ಡಾಲರ್ ಎದುರು ₹89.70 ಇತ್ತು. ವಹಿವಾಟಿನ ನಡುವಿನಲ್ಲಿ ಮೌಲ್ಯವು ₹90.00 ಕೂಡ ಆಗಿತ್ತು. ಸೋಮವಾರದ ವಹಿವಾಟಿನಲ್ಲಿ ರೂಪಾಯಿ ಮೌಲ್ಯ 8 ಪೈಸೆ ಇಳಿಕೆ ಆಗಿ, ₹89.53 ಆಗಿತ್ತು.
- ಜಾಗತಿಕ ಮಾರುಕಟ್ಟೆಯಲ್ಲಿ ಬ್ರೆಂಟ್ ಕಚ್ಚಾ ತೈಲ ದರವು ಶೇ 0.25ರಷ್ಟು ಇಳಿಕೆ ಆಗಿದೆ. ಪ್ರತಿ ಬ್ಯಾರಲ್ ದರ 63.03 ಡಾಲರ್ ಆಗಿದೆ.
- ಮುಂಬೈ ಷೇರುಪೇಟೆ ಸೂಚ್ಯಂಕ ಸೆನ್ಸೆಕ್ಸ್ 503 ಅಂಶ ಇಳಿಕೆಯಾಗಿ, 85,138ಕ್ಕೆ ವಹಿವಾಟು ಅಂತ್ಯ ಗೊಂಡಿದೆ. ರಾಷ್ಟ್ರೀಯ ಷೇರುಪೇಟೆ ಸೂಚ್ಯಂಕ ನಿಫ್ಟಿ 143 ಅಂಶ ಕಡಿಮೆ ಯಾಗಿ, 26,032ಕ್ಕೆ ಕೊನೆಗೊಂಡಿದೆ.
- ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಸೋಮವಾರದ ವಹಿವಾಟಿನಲ್ಲಿ ₹1,171 ಕೋಟಿ ಮೌಲ್ಯದ ಷೇರುಗಳನ್ನು ಮಾರಾಟ ಮಾಡಿದ್ದಾರೆ.

### 'ರೂಪಾಯಿ ಮೌಲ್ಯ ಇಳಿಕೆ; ಆರ್ಥಿಕತೆಗೆ ಉತ್ತಮ'

Dr. Rajkumar IAS Academy

- 'ಜಾಗತಿಕ ಮಟ್ಟದ ಪ್ರಮುಖ ಕರೆನ್ಸಿಗಳ ವಿರುದ್ಧ ದೇಶದ ರೂಪಾಯಿ ಮೌಲ್ಯ ಇಳಿಕೆ ಆಗುತ್ತಿರುವುದು ಆರ್ಥಿಕತೆಗೆ ಉತ್ತಮ' ಎಂದು ನೀತಿ ಆಯೋಗದ ಉಪಾಧ್ಯಕ್ಷ ಹಾಗೂ ಅರ್ಥಶಾಸ್ತ್ರಜ್ಞ ರಾಜೀವ್ ಕುಮಾರ್ ಹೇಳಿದ್ದಾರೆ.
- ರೂಪಾಯಿ ಮೌಲ್ಯ ಇಳಿಕೆ ಆಗುತ್ತಿರುವುದರ ಬಗ್ಗೆ ಚಿಂತಿಸುವ ಅಗತ್ಯವಿಲ್ಲ. 'ಸದೃಢವಾದ ರೂಪಾಯಿ' ಎಂದು ಕರೆಯಲ್ಪಡುವ ರೂಪಾಯಿಯನ್ನು ಆರ್ಥಿಕ ಶಕ್ತಿಯ ಸಂಕೇತವಾಗಿ ನೋಡುವ ಸಮಯ ಬಂದಿದೆ ಎಂದು ಹೇಳಿದ್ದಾರೆ.
- ರೂಪಾಯಿ ಮೌಲ್ಯ ಇಳಿಕೆಯು ದೇಶದ ಕಾರ್ಮಿಕ ಕೇಂದ್ರಿತ ಸರಕುಗಳ ರಫ್ತಿಗೆ ಉತ್ತೇಜನ ನೀಡಲಿದೆ. ಇದು ವಿದೇಶಿ ವಿನಿಮಯ ಸಂಗ್ರಹವನ್ನು ಹೆಚ್ಚಿಸಲಿದೆ ಮತ್ತು ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಗಳನ್ನು ಸೃಷ್ಟಿಸಲಿದೆ ಎಂದು 'ಎಕ್ಸ್' ನಲ್ಲಿ ಹೇಳಿದ್ದಾರೆ.

## ❖ ರಕ್ಷಣಾ ಒಪ್ಪಂದಕ್ಕೆ ರಷ್ಯಾ ಅನುಮೋದನೆ

**ಸಂದರ್ಭ: ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಇದೇ 4 ಮತ್ತು 5ರಂದು ಭಾರತಕ್ಕೆ ಭೇಟಿ ನೀಡಲಿದ್ದು, ಉಭಯ ದೇಶಗಳ ನಡುವಿನ ರಕ್ಷಣಾ ಒಪ್ಪಂದಕ್ಕೆ ರಷ್ಯಾ ಸಂಸತ್‌ನ ಕೆಳಮನೆ (ಡುಮಾ) ಮಂಗಳವಾರ ಅನುಮೋದನೆ ನೀಡಿದೆ.**

- 'ಭಾರತದೊಂದಿಗೆ ರಷ್ಯಾ ಸಮಗ್ರ ದ್ವಿಪಕ್ಷೀಯ ಸಂಬಂಧ ಹೊಂದಿದೆ. ರಕ್ಷಣಾ ಒಪ್ಪಂದಕ್ಕೆ ಅನುಮೋದನೆ ನೀಡಿರುವುದು ಉಭಯ ದೇಶಗಳ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ' ಎಂದು ಡುಮಾ ಸ್ಪೀಕರ್ ವ್ಯಚೆಸ್ಲಾವ್ ವೊಲೊಡಿನ್ ಸದನ ಉದ್ದೇಶಿಸಿ ಹೇಳಿದರು.
- ಅಗತ್ಯದ ಸಂದರ್ಭಗಳಲ್ಲಿ, ರಷ್ಯಾ ತನ್ನ ಯುದ್ಧನೌಕೆಗಳು, ಯುದ್ಧವಿಮಾನಗಳು ಸೇರಿ ಶಸ್ತ್ರಾಸ್ತ್ರಗಳನ್ನು ಭಾರತಕ್ಕೆ ಕಳುಹಿಸುವುದು. ಇದೇ ರೀತಿ ಭಾರತ ಕೂಡ ರಷ್ಯಾಕ್ಕೆ ನೆರವು ನೀಡುವ ಅಂಶಗಳನ್ನು ಈ ಒಪ್ಪಂದ ಒಳಗೊಂಡಿದೆ. ಉಭಯ ದೇಶಗಳು ಪರಸ್ಪರ ವಾಯುಪ್ರದೇಶ ಹಾಗೂ ಬಂದರುಗಳನ್ನು ಬಳಸುವುದಕ್ಕೆ ಕೂಡ ಈ ಒಪ್ಪಂದ ಅವಕಾಶ ಒದಗಿಸುತ್ತದೆ ಎಂದು ಡುಮಾ ಜಾಲತಾಣದಲ್ಲಿ ಪ್ರಕಟಿಸಿರುವ ಟಿಪ್ಪಣಿಯಲ್ಲಿ ಹೇಳಲಾಗಿದೆ.

## ❖ 'ವ್ಯಾಪಾರ ಕೊರತೆ ಬಗ್ಗೆ ಭಾರತದ ಕಳವಳ ಪರಿಹರಿಸಲು ಸಿದ್ಧ'

**ಸಂದರ್ಭ: ಬೃಹತ್ ವ್ಯಾಪಾರ ಕೊರತೆಯ ಕುರಿತು ಭಾರತದ ಕಳವಳದ ಬಗ್ಗೆ ರಷ್ಯಾಗೆ ಸಂಪೂರ್ಣವಾಗಿ ತಿಳಿದಿದೆ. ಈ ಸಮಸ್ಯೆಯನ್ನು ಪರಿಹರಿಸಲು ನಾವು ಭಾರತದೊಂದಿಗೆ ಕೆಲಸ ಮಾಡುತ್ತಿದ್ದೇವೆ ಎಂದು ರಷ್ಯಾ ಅಧ್ಯಕ್ಷರ ಕಚೇರಿಯ ವಕ್ತಾರ ಡಿಮಿಟ್ರಿ ಪೆಸ್ಕೋವ್ ಮಂಗಳವಾರ ಹೇಳಿದ್ದಾರೆ.**

- ಭಾರತದ ಪತ್ರಕರ್ತರೊಂದಿಗೆ ವಿಡಿಯೊ ಸ್ಟ್ರೀಮ್ ಆಧಾರಿತ ಸುದ್ದಿಗೋಷ್ಠಿಯಲ್ಲಿ ಡಿಮಿಟ್ರಿ ಪೆಸ್ಕೋವ್ ಅವರು ಮಾತನಾಡಿದರು. ಉಕ್ರೇನ್‌ನಲ್ಲಿ ಅಮೆರಿಕದ ಶಾಂತಿ ಯೋಜನೆ, ರಷ್ಯಾದ ಕಚ್ಚಾ ತೈಲದ ಮೇಲೆ ಅಮೆರಿಕದ ನಿರ್ಬಂಧಗಳು, ಭಾರತಕ್ಕೆ ರಷ್ಯಾದ ರಕ್ಷಣಾ ಮತ್ತು ತಂತ್ರಜ್ಞಾನ ಪೂರೈಕೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಪ್ರಸ್ತಾಪಿಸಿದರು.
- ಜಾಗತಿಕ ವ್ಯಾಪಾರದಲ್ಲಿ ಪಾವತಿ ವ್ಯವಸ್ಥೆಯನ್ನು (ಈಗಿನ ಅಮೆರಿಕದ ಡಾಲರ್ ಆಧಾರಿತ ಪಾವತಿ) 'ರಾಜಕೀಯ ಸಾಧನ' ವಾಗಿ ಬಳಸದ ಹೊಸ ವ್ಯವಸ್ಥೆಗೆ ಕರೆ ನೀಡಿದರು.

## ❖ ‘ಎರಡು ಹಂತದಲ್ಲಿ ಜನಗಣತಿ- 2027’

**ಸಂದರ್ಭ: 2027ರ ಜನಗಣತಿಗೆ ಸಂಬಂಧಿಸಿದಂತೆ ಪ್ರಶ್ನಾವಳಿ ರಚಿಸಲಾಗುತ್ತಿದ್ದು, ರಿಜಿಸ್ಟ್ರಾರ್ ಜನರಲ್ ಹಾಗೂ ಜನಗಣತಿ ಆಯುಕ್ತರು ಆ ಪ್ರಶ್ನೆಗಳನ್ನು ಅಂತಿಮಗೊಳಿಸುವ ಪ್ರಕ್ರಿಯೆ ಯಲ್ಲಿ ತೊಡಗಿದ್ದಾರೆ. ಜನಗಣತಿ ಸಂದರ್ಭದಲ್ಲೇ ಜಾತಿಗಣತಿಯನ್ನೂ ನಡೆಸಲಾಗುತ್ತದೆ ಎಂದು ಕೇಂದ್ರ ಸರ್ಕಾರ ಲೋಕಸಭೆಗೆ ಮಂಗಳವಾರ ಮಾಹಿತಿ ನೀಡಿದೆ.**

- ಜನಗಣತಿಗೆ ಸಂಬಂಧಿಸಿದಂತೆ ಲೋಕಸಭಾ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿ ಹಲವು ಸಂಸದರು ಕೇಳಿದ್ದ ಪ್ರಶ್ನೆಗಳಿಗೆ ಕೇಂದ್ರ ಗೃಹ ಖಾತೆ ಸಹಾಯಕ ಸಚಿವ ನಿತ್ಯಾನಂದ ರಾಯ್ ಅವರು ಲಿಖಿತ ಉತ್ತರ ನೀಡಿದ್ದಾರೆ.
- ಪ್ರಶ್ನಾವಳಿಯ ಕರಡು ಪ್ರತಿಯನ್ನು ಪ್ರಕಟಗೊಳಿಸಿ ಸಾರ್ವಜನಿಕರು ಅಥವಾ ಸಾರ್ವಜನಿಕ ಪ್ರತಿನಿಧಿಗಳ ಸಲಹೆ ಪಡೆಯುವಿರೇ ಎಂಬ ಪ್ರಶ್ನೆಗೆ ಉತ್ತರಿಸಿರುವ ರಾಯ್,‘ವಿವಿಧ ಸಚಿವಾಲಯಗಳು, ಇಲಾಖೆಗಳು, ಸಂಸ್ಥೆಗಳು, ಜನಗಣತಿ ದತ್ತಾಂಶ ಬಳಕೆದಾರರು ಸೇರಿದಂತೆ ಹಲವು ಪಾಲುದಾರರ ಸಲಹೆಗಳ ಆಧಾರದ ಮೇಲೆ ಪ್ರಶ್ನಾವಳಿಯನ್ನು ಅಂತಿಮಗೊಳಿಸಲಾಗುತ್ತದೆ’ ಎಂದು ಹೇಳಿದ್ದಾರೆ.
- ಪ್ರಶ್ನಾವಳಿ ಅಂತಿಮಗೊಳಿಸುವ ಮೊದಲು ಅವುಗಳ ಕಾರ್ಯಸಾಧ್ಯತೆ ಯನ್ನು ಖಾತರಿಪಡಿಸಿಕೊಳ್ಳಲು ಪ್ರಾಯೋಗಿಕ ಗಣತಿ ನಡೆಸಲಾಗಿದೆ ಎಂದೂ ಮಾಹಿತಿ ನೀಡಿದ್ದಾರೆ.
- ಇದಲ್ಲದೇ, ಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುತ್ತಿದೆ ಎಂದಿರುವ ಅವರು, ಮನೆಗಣತಿಯನ್ನು 2026ರ ಏಪ್ರಿಲ್ 1ರಿಂದ ಸೆಪ್ಟೆಂಬರ್ 30ರ ಅವಧಿಯಲ್ಲಿ ನಡೆಯಲಿದೆ. ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಅನುಕೂಲವಾಗುವಂತೆ 30 ದಿನಗಳೊಳಗೆ ಈ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ ಎಂದಿದ್ದಾರೆ. ಜತೆಗೆ ಎರಡನೇ ಹಂತದಲ್ಲಿ 2027ರ ಫೆಬ್ರುವರಿಯಲ್ಲಿ ಜನಗಣತಿಯನ್ನು ಆರಂಭಿಸಲಾಗುತ್ತದೆ ಎಂದೂ ತಿಳಿಸಿದ್ದಾರೆ.

IAS/KAS Academy




## ❖ ಬಹಿಷ್ಕಾರ ಶಿಕ್ಷಾರ್ಹ ಅಪರಾಧ: ಮಸೂದೆ ಸಿದ್ಧಪಡಿಸಿದ ರಾಜ್ಯ ಸರ್ಕಾರ ಅಧಿವೇಶನದಲ್ಲಿ ಮಂಡನೆ ಸಂಭವ

**ಸಂದರ್ಭ: ಸಾಮಾಜಿಕ ಬಹಿಷ್ಕಾರವು ಮಾನವ ಘನತೆಗೆ ಧಕ್ಕೆ ತರುವ ಕ್ರಿಯೆ. ಈಗಿರುವ ಕಾನೂನುಗಳು ಬಹಿಷ್ಕಾರ ತಡೆಗೆ ಪರಿಣಾಮಕಾರಿಯಾಗಿಲ್ಲ. ಹಾಗಾಗಿ, ಹೊಸ ಕಾಯ್ದೆ ಜಾರಿಗೆ ನಿರ್ಧರಿಸಲಾಗಿದೆ ಸಂಸದೀಯ ವ್ಯವಹಾರಗಳ ಸಚಿವ.**

- ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರನ್ನು ಸಾಮಾಜಿಕವಾಗಿ ಬಹಿಷ್ಕರಿಸಿ ದರೆ, ಅಂತಹ ಹೀನ ಕೃಮ ಎಸಗಿದವರು ₹ 1 ಲಕ್ಷ ದಂಡ ಹಾಗೂ ಮೂರು ವರ್ಷದವರೆಗಿನ ಜೈಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.
- ಸಾಮಾಜಿಕ ಬಹಿಷ್ಕಾರವನ್ನು ನಿಷೇಧಿಸಲು ಮುಂದಾಗಿರುವ ರಾಜ್ಯ ಸರ್ಕಾರ, ಬಹಿಷ್ಕರಿಸುವ ತೀರ್ಮಾನ ತೆಗೆದುಕೊಂಡವರು, ಬಹಿಷ್ಕಾರ ಹಾಕುವ ಬಗ್ಗೆ ಸಭೆ-ಪಂಚಾಯ್ತಿ ನಡೆಸಿದವರು ಅಪರಾಧಿಗಳು ಎಂದು ಶಿಕ್ಷೆಗೆ ಗುರಿ ಮಾಡುವ ಮಹತ್ವದ ಹೆಜ್ಜೆಯನ್ನು ಇಟ್ಟಿದೆ.
- ಈ ಉದ್ದೇಶಕ್ಕಾಗಿ, 'ಕರ್ನಾಟಕ ಸಾಮಾಜಿಕ ಬಹಿಷ್ಕಾರದಿಂದ ಜನರ ರಕ್ಷಣೆ (ತಡೆ, ನಿಷೇಧ ಮತ್ತು ಪರಿಹಾರ) ಮಸೂದೆ-2025'ಯನ್ನು ಸಿದ್ಧಪಡಿಸ ಲಾಗಿದೆ. ಬೆಳಗಾವಿಯಲ್ಲಿ ಡಿ.8ರಿಂದ ಆರಂಭವಾಗುವ ಚಳಿಗಾಲದ ಅಧಿವೇಶನದಲ್ಲಿ ಮಸೂದೆ ಮಂಡಿಸುವ ತಯಾರಿಯನ್ನು ಸರ್ಕಾರ ನಡೆಸಿದೆ.
- ಬಹಿಷ್ಕಾರಕ್ಕೆ ಸಹಾಯ, ಪ್ರಚೋದನೆ ಶಿಕ್ಷಾರ್ಹ ಅಪರಾಧವಾಗಲಿದೆ. ಅದಕ್ಕೂ ಮೂರು ವರ್ಷಗಳವರೆಗೆ ಜೈಲು, ₹1 ಲಕ್ಷ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶ ಇದೆ. ಸಭೆಯಲ್ಲಿ ಹಾಜರಿಲ್ಲ ದಿದ್ದರೂ ಬಹಿಷ್ಕಾರಕ್ಕೆ ಒತ್ತಡ ಹೇರುವ ಮೂಲಕ ನಿರ್ಧಾರಕ್ಕೆ ಕಾರಣರಾದವರು, ಬಹಿಷ್ಕಾರದ ಪರವಾಗಿ ಮತ ಹಾಕಿದವರು ಅಥವಾ ಚರ್ಚೆಯಲ್ಲಿ ಪಾಲ್ಗೊಂಡವರನ್ನೂ ಅಪರಾಧಿ ಗಳೆಂದು ನಿರ್ಧರಿಸಲಾಗುತ್ತದೆ. ಈ ಕುರಿತು ಸಭೆ, ಜಮಾವಣೆ, ಸಮಾವೇಶ ನಡೆಸುವುದು ಅಕ್ರಮ ಎಂದು ಮಸೂದೆ ಉಲ್ಲೇಖಿಸಿದೆ.
- ಬಹಿಷ್ಕಾರಕ್ಕೆ ಒಳಗಾಗುವವರು ಠಾಣೆ ಅಥವಾ ನ್ಯಾಯಾಧೀಶರಿಗೆ ನೇರವಾಗಿ ದೂರು ಸಲ್ಲಿಸ ಬಹುದು.

**ಯಾವ್ಯಾವುದಕ್ಕೆ ನಿಷೇಧ?**

- ✓ ಗ್ರಾಮ ಅಥವಾ ಸಮುದಾಯದಿಂದ ಹೊರ ಹಾಕುವುದು
- ✓ ಧಾರ್ಮಿಕ, ಸಾರ್ವಜನಿಕ ಸ್ಥಳಗಳ ಬಳಕೆಗೆ ನಿರ್ಬಂಧ ವಿಧಿಸುವುದು
- ✓ ಪೂಜಾ ಸ್ಥಳಗಳ ಪ್ರವೇಶಕ್ಕೆ ಅಡ್ಡಿ ಮಾಡುವುದು
- ✓ ಸಾಮಾಜಿಕ-ಧಾರ್ಮಿಕ ಆಚರಣೆಗಳಲ್ಲಿ ಪಾಲ್ಗೊಳ್ಳುವುದಕ್ಕೆ ತಡೆಯೊಡ್ಡುವುದು
- ✓ ವ್ಯವಹಾರ ಅಥವಾ ಉದ್ಯೋಗ ತಿರಸ್ಕಾರ ಮಾಡುವುದು
- ✓ ಶಾಲೆ, ಆಸ್ಪತ್ರೆ, ಸಮುದಾಯ ಭವನಗಳ ಪ್ರವೇಶಕ್ಕೆ ತಡೆಯೊಡ್ಡುವುದು
- ✓ ಸೇವೆಗಳು, ಅವಕಾಶಗಳನ್ನು ನಿರಾಕರಿಸುವುದು
- ✓ ಮದುವೆ, ಅಂತ್ಯಕ್ರಿಯೆಗಳಲ್ಲಿ ಭಾಗವಹಿಸು ವುದಕ್ಕೆ ತಡೆಯೊಡ್ಡುವುದು
- ✓ ಸಂಬಂಧ ಕಡಿತಗೊಳಿಸಲು ಪ್ರಚೋದನೆ ನೀಡುವುದು
- ✓ ಲಿಂಗತ್ವದ ಆಧಾರದ ಮೇಲೆ ಭೇದ ಮಾಡುವುದು
- ✓ ವ್ಯಾಪಾರ, ಸಾಮಾಜಿಕ ಸಂಬಂಧಗಳಿಗೆ ತಡೆಯೊಡ್ಡುವುದು
- ✓ ಮಕ್ಕಳನ್ನು ಒಟ್ಟಿಗೆ ಆಡಲು ಅಡ್ಡಿ ಪಡಿಸುವುದು
- ✓ ಮಾನವ ಹಕ್ಕುಗಳನ್ನು ನಿರಾಕರಿಸುವುದು
- ✓ ಬಟ್ಟೆ, ಭಾಷೆ, ಸಾಂಸ್ಕೃತಿಕ ಭೇದ ಎಸಗುವುದು

- ಮೊದಲ ರಾಜ್ಯ ಮಹಾರಾಷ್ಟ್ರ, ಸಾಮಾಜಿಕ ಬಹಿಷ್ಕಾರ ನಿಷೇಧ ಕಾಯ್ದೆ ಜಾರಿಗೆ ತಂದ ಭಾರತದ ಮೊದಲ ರಾಜ್ಯ ಮಹಾರಾಷ್ಟ್ರ.

Dr. Rajkumar IAS/KAS Academy

- ಬಹಿಷ್ಕಾರದ ಮೂಲಕ ದಲಿತರು ಮತ್ತು ಇತರ ಅಳಿವಿನ ಅಂಚಿನಲ್ಲಿರುವ ಸಮುದಾಯಗಳಿಗೆ ರಕ್ಷಣೆ ನೀಡಲು 2016ರಲ್ಲಿ ಕಾಯ್ದೆ ಜಾರಿಗೆ ತರಲಾಯಿತು. 2017ರ ಜುಲೈನಲ್ಲಿ ರಾಷ್ಟ್ರಪತಿ ಅನುಮೋದನೆ ದೊರೆಯಿತು.
- ಜಾತಿ, ಸಮುದಾಯ, ಧರ್ಮ, ಆಚರಣೆಗಳು ಅಥವಾ ವೈಯಕ್ತಿಕ ಜೀವನಶೈಲಿಯಂತಹ ಯಾವುದೇ ಆಧಾರದ ಮೇಲೆ ಒಬ್ಬ ವ್ಯಕ್ತಿ ಅಥವಾ ಗುಂಪನ್ನು ಬಹಿಷ್ಕರಿಸುವುದನ್ನು ಈ ಕಾಯ್ದೆ ನಿಷೇಧಿಸಿತ್ತು. ಇಂತಹ ಕೃತ್ಯ ಎಸಗುವ ಅಪರಾಧಿಗಳಿಗೆ ಏಳು ವರ್ಷ ಜೈಲು ಶಿಕ್ಷೆ, ₹5 ಲಕ್ಷ ದಂಡ ವಿಧಿಸಲು ಅವಕಾಶ ನೀಡಿದೆ.

## ❖ ದಾಖಲೆ ಮಟ್ಟಕ್ಕೆ ಕುಸಿದ ರೂಪಾಯಿ

**ಸಂದರ್ಭ: ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ರೂಪಾಯಿ ಮೌಲ್ಯವು ಅಮೆರಿಕದ ಡಾಲರ್ ಎದುರು ಬುಧವಾರ ₹90.15ಕ್ಕೆ ಕುಸಿದಿದೆ. ರೂಪಾಯಿಯ ಮೌಲ್ಯವು ವಹಿವಾಟಿನ ಅಂತ್ಯಕ್ಕೆ 90ಕ್ಕಿಂತ ಕಡಿಮೆ ಮಟ್ಟಕ್ಕೆ ಬಂದಿರುವುದು ಇದೇ ಮೊದಲು.**

- ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ರೂಪಾಯಿ ಮೌಲ್ಯವು ಅಮೆರಿಕದ ಡಾಲರ್ ಎದುರು ಬುಧವಾರ ₹90.15ಕ್ಕೆ ಕುಸಿದಿದೆ. ರೂಪಾಯಿಯ ಮೌಲ್ಯವು ವಹಿವಾಟಿನ ಅಂತ್ಯಕ್ಕೆ 90ಕ್ಕಿಂತ ಕಡಿಮೆ ಮಟ್ಟಕ್ಕೆ ಬಂದಿರುವುದು ಇದೇ ಮೊದಲು.
- ವಿದೇಶಿ ಬಂಡವಾಳದ ಹೊರಹರಿವು ನಿರಂತರವಾಗಿರುವುದು, ಕಚ್ಚಾ ತೈಲದ ಬೆಲೆಯು ಹೆಚ್ಚಳವಾಗಿರುವುದು ಕೂಡ ರೂಪಾಯಿ ಮೌಲ್ಯ ಕುಸಿಯಲು ಕಾರಣವಾಗಿವೆ. ಅಮೆರಿಕ ಮತ್ತು ಭಾರತದ ನಡುವೆ ವ್ಯಾಪಾರ ಒಪ್ಪಂದ ಏರ್ಪಡುವ ಬಗ್ಗೆ ಅನಿಶ್ಚಿತತೆ ಮುಂದುವರಿದಿರುವುದು, ರೂಪಾಯಿ ಮೌಲ್ಯ ಕುಸಿತವನ್ನು ತಡೆಯಲು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಹೆಚ್ಚಿನ ಯತ್ನ ನಡೆಸುತ್ತಿಲ್ಲದಿರುವುದು ರೂಪಾಯಿಯ ಮೇಲೆ ಒತ್ತಡ ಸೃಷ್ಟಿಸಿವೆ ಎಂದು ವರ್ತಕರು ಹೇಳಿದ್ದಾರೆ.
- ವಹಿವಾಟಿನ ಆರಂಭದಲ್ಲಿ ರೂಪಾಯಿ ಮೌಲ್ಯವು ಡಾಲರ್ ಎದುರು ₹89.96ರಷ್ಟು ಇತ್ತು. ದಿನದ ನಡುವೆ ಅದು ₹90.30ರವರೆಗೂ ಇಳಿದಿತ್ತು. ವಹಿವಾಟಿನ ಕೊನೆಯಲ್ಲಿ ಮೌಲ್ಯವು ₹90.15 ಆಗಿದೆ. ಮಂಗಳವಾರದ ಮೌಲ್ಯಕ್ಕೆ ಹೋಲಿಸಿದರೆ ರೂಪಾಯಿ ಮೌಲ್ಯವು 19 ಪೈಸೆಯಷ್ಟು ಕುಸಿದಿದೆ.
- ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿಯುತ್ತಿದ್ದರೂ, ರೂಪಾಯಿ ದುರ್ಬಲ ಎನ್ನಲಾಗದು ಎಂದು ಎಸ್‌ಬಿಐನ ಆರ್ಥಿಕ ಸಂಶೋಧನಾ ವಿಭಾಗವು ವರದಿಯೊಂದರಲ್ಲಿ ಹೇಳಿದೆ.
- ವಿದೇಶಿ ಹೂಡಿಕೆದಾರರು ಭಾರತದ ಷೇರುಪೇಟೆಗಳಲ್ಲಿ ನಿರಂತರವಾಗಿ ಷೇರು ಮಾರಾಟದಲ್ಲಿ ತೊಡಗಿರುವುದು ರೂಪಾಯಿ ಮೌಲ್ಯ ಕುಸಿಯುತ್ತಿರುವುದಕ್ಕೆ ಕಾರಣ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಕ್ರಿಪ್ಟೊಕರೆನ್ಸಿಗಳಲ್ಲಿ ದಿಢೀರ್ ಕುಸಿತ ಉಂಟಾಗಿದ್ದುದು ಡಾಲರ್‌ಗೆ ಹೆಚ್ಚು ಬೇಡಿಕೆ ಬರುವಂತೆ ಮಾಡಿದೆ ಎಂದು ತಜ್ಞರು ಹೇಳಿದ್ದಾರೆ.
- ಷೇರುಪೇಟೆಯ ಬುಧವಾರದ ವಹಿವಾಟಿನಲ್ಲಿ ವಿದೇಶಿ ಹೂಡಿಕೆದಾರರು ಒಟ್ಟು ₹3,206 ಕೋಟಿ ಮೌಲ್ಯದ ಷೇರುಗಳನ್ನು ಮಾರಾಟ ಮಾಡಿದ್ದಾರೆ. ಬುಧವಾರ ಸೆನ್ಸೆಕ್ಸ್ ಮತ್ತು ನಿಫ್ಟಿ ಇಳಿಕೆ ಕಂಡಿವೆ.
- ಸೇವಾ ಚಟುವಟಿಕೆ ಏರಿಕೆ: ದೇಶದ ಸೇವಾ ವಲಯದ ಚಟುವಟಿಕೆಗಳ ಮಟ್ಟವನ್ನು ಸೂಚಿಸುವ ಎಚ್‌ಎಸ್‌ಬಿಸಿ ಇಂಡಿಯಾ ಸರ್ವಿಸಸ್ ಬ್ಯುಸಿನೆಸ್ ಆ್ಯಕ್ಟಿವಿಟಿ ಸೂಚ್ಯಂಕವು ನವೆಂಬರ್ ತಿಂಗಳಲ್ಲಿ 59.8ಕ್ಕೆ ಏರಿಕೆ ಕಂಡಿದೆ. ಇದು ಅಕ್ಟೋಬರ್‌ನಲ್ಲಿ 58.9ರಷ್ಟು ಇತ್ತು. ಹೊಸ ವಹಿವಾಟುಗಳಲ್ಲಿನ ಏರಿಕೆಯು ಈ ಬೆಳವಣಿಗೆಗೆ ಪೂರಕವಾಗಿ ಒದಗಿಬಂದಿದೆ.

Dr. Rajkumar IAS KAS Academy

## ❖ ಸಂಚಾರ ಸಾಥಿ ಆದೇಶ ಹಿಂದಕ್ಕೆ

**ಸಂದರ್ಭ: ದೇಶದಲ್ಲಿ ಮಾರಾಟವಾಗುವ ಎಲ್ಲ ಸ್ಮಾರ್ಟ್‌ಫೋನ್ ಗಳಲ್ಲಿ 'ಸಂಚಾರ ಸಾಥಿ' ಸೈಬರ್ ಭದ್ರತಾ 'ಆ್ಯಪ್' ನ ಪೂರ್ವ ಅಳವಡಿಕೆಯನ್ನು ಕಡ್ಡಾಯಗೊಳಿಸಿ ಹೊರಡಿಸಿದ್ದ ಆದೇಶವನ್ನು ಕೇಂದ್ರ ಸರ್ಕಾರ ಬುಧವಾರ ಹಿಂಪಡೆದಿದೆ.**

- 'ಆ್ಯಪ್‌ನ ಕಡ್ಡಾಯ ಅಳವಡಿಕೆಯಿಂದ ನಾಗರಿಕರ ಖಾಸಗಿತನ, ವೈಯಕ್ತಿಕ ಹಕ್ಕುಗಳಿಗೆ ಚ್ಯುತಿ ಬರುತ್ತದೆ. ಸರ್ಕಾರ ಜನರ ಮೇಲೆ ಕಣ್ಗಾವಲು ಇಡುವುದು, ಗೂಢಚಾರಿಕೆ ನಡೆಸುವುದು ಸರಿಯಲ್ಲ. ಇದು ಸರ್ವಾಧಿಕಾರಿ ನಡೆ' ಎಂದು ಆರೋಪಿಸುವ ಮೂಲಕ ವಿರೋಧ ಪಕ್ಷಗಳು ಕೇಂದ್ರದ ನಿರ್ಧಾರವನ್ನು ವ್ಯಾಪಕವಾಗಿ ಟೀಕಿಸಿದ್ದವು. ಸಂಸತ್ತಿನ ಒಳಗೆ ಮತ್ತು ಹೊರಗೆ ಪ್ರತಿಭಟಿಸಿ, ಆದೇಶ ಹಿಂಪಡೆಯುವಂತೆ ಆಗ್ರಹಿಸಿದ್ದವು.
- ಲೋಕಸಭೆಯಲ್ಲಿ ಕಲಾಪದ ವೇಳೆ ಈ ವಿಷಯವನ್ನು ಪ್ರಸ್ತಾಪಿಸಿದ ವಿರೋಧ ಪಕ್ಷಗಳ ಮುಖಂಡರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.
- ಈ ಬೆಳವಣಿಗೆಗಳ ಬೆನ್ನಲ್ಲೇ ಕೇಂದ್ರ ಸರ್ಕಾರ, 'ಸಂಚಾರ ಸಾಥಿ' ಆ್ಯಪ್‌ನ ಕಡ್ಡಾಯ ಅಳವಡಿಕೆ ಆದೇಶವನ್ನು ಹಿಂದಕ್ಕೆ ಪಡೆದಿರುವುದಾಗಿ ಘೋಷಿಸಿದೆ.

**'ಗೂಢಚಾರಿಕೆ ಸಾಧ್ಯವಿಲ್ಲ' - ಸಿಂಧಿಯಾ:**

- ಇದಕ್ಕೂ ಮುನ್ನ, ವಿರೋಧ ಪಕ್ಷಗಳ ಆಕ್ಷೇಪಗಳ ಕುರಿತು ಲೋಕಸಭೆಯಲ್ಲಿ ಮಾತನಾಡಿದ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, 'ಈ ಅಪ್ಲಿಕೇಷನ್ ಮೂಲಕ ಕಣ್ಗಾವಲು ಅಥವಾ ಬೇಹುಗಾರಿಕೆ ನಡೆಸಲು ಆಗುವುದಿಲ್ಲ. ಮೊಬೈಲ್‌ಗಳಲ್ಲಿ ಈ ಆ್ಯಪ್ ಅಳವಡಿಕೆ ಕುರಿತ ಆದೇಶದಲ್ಲಿ ಬದಲಾವಣೆಗಳನ್ನು ಮಾಡಲು ಸಚಿವಾಲಯ ಸಿದ್ಧವಿದೆ' ಎಂದು ಹೇಳಿದರು.
- 'ಬಳಕೆದಾರರು ಆ್ಯಪ್‌ನಲ್ಲಿ ನೋಂದಾಯಿಸಿಕೊಳ್ಳದಿದ್ದರೆ ಅದು ಕಾರ್ಯ ನಿರ್ವಹಿಸುವುದಿಲ್ಲ. ಅಲ್ಲದೆ ಅವರು ಆ್ಯಪ್ ಅನ್ನು ಅಳಿಸಬಹುದು' ಎಂದು ಅವರು ಪುನರುಚ್ಚರಿಸಿದರು.
- ಸರ್ಕಾರದ ವಿರುದ್ಧ ಕಾಂಗ್ರೆಸ್ ಟೀಕೆ: ಕಾಂಗ್ರೆಸ್ ಸಂಸದ ದೀಪೇಂದರ್ ಸಿಂಗ್ ಹೂಡಾ ಅವರು 'ಸಂಚಾರ ಸಾಥಿ' ಆ್ಯಪ್ ಅಳವಡಿಕೆಯಿಂದ ನಾಗರಿಕರ ಮೇಲೆ ಗೂಢಚಾರಿಕೆ ಮಾಡಿದಂತೆ ಆಗುತ್ತದೆ. ಇದು ಸರಿಯಲ್ಲ' ಎಂದು ಕಳವಳ ವ್ಯಕ್ತಪಡಿಸಿದರು.
- 'ಆ್ಯಪ್ ನಿಷ್ಕ್ರಿಯಗೊಳಿಸಿದ ಬಳಿಕವೂ, ಅದರ ಎಲ್ಲ ವೈಶಿಷ್ಟ್ಯಗಳು ನಿಷ್ಕ್ರಿಯವಾಗಿವೆಯೋ, ಇಲ್ಲವೋ ಎಂಬುದು ಬಳಕೆದಾರರಿಗೆ ತಿಳಿಯಲು ಸಾಧ್ಯವಾಗುವುದಿಲ್ಲ. ಇದು ಖಾಸಗಿತನದ ಹಕ್ಕಿನ ಉಲ್ಲಂಘನೆಯಾಗುತ್ತದೆ. ಅಲ್ಲದೆ ಬೇಹುಗಾರಿಕೆಯ ಶಂಕೆ ಮೂಡುತ್ತದೆ' ಎಂದು ಅವರು ಬೇಸರ ವ್ಯಕ್ತಪಡಿಸಿದರು.
- ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ, 'ಈ ಆ್ಯಪ್ ಅನ್ನು ಸರ್ಕಾರ ಭಿನ್ನಮತೀಯರ ವಿರುದ್ಧ ಬಳಸಬಹುದು. ಇದರಿಂದ ಪತ್ರಕರ್ತರು, ವಿರೋಧ ಪಕ್ಷದ ನಾಯಕರ ವಿರುದ್ಧ ಬೇಹುಗಾರಿಕೆ ನಡೆಸಬಹುದು' ಎಂದು ಆರೋಪಿಸಿದರು.
- 'ಅಲ್ಲದೆ ಜನರ ಬ್ಯಾಂಕ್ ಖಾತೆ ಸಂಖ್ಯೆಗಳು, ಪಾಸ್‌ವರ್ಡ್‌ಗಳು, ವೈಯಕ್ತಿಕ ದತ್ತಾಂಶ ಸೇರಿದಂತೆ ಸೂಕ್ಷ್ಮ ಮಾಹಿತಿ ಬಹಿರಂಗ ಆಗಬಹುದಾದ ಅಪಾಯವೂ ಇದೆ' ಎಂದು ಅವರು ಎಚ್ಚರಿಸಿದರು.

**ಆದೇಶದಲ್ಲಿ ಏನಿತ್ತು?:** ಭಾರತದಲ್ಲಿ ಮಾರಾಟವಾಗುವ ಎಲ್ಲ ಮೊಬೈಲ್‌ಗಳಲ್ಲಿ ಮತ್ತು ಈಗಾಗಲೇ ಬಳಕೆಯಲ್ಲಿರುವ ಮೊಬೈಲ್‌ಗಳಲ್ಲಿ ಸಾಫ್ಟ್‌ವೇರ್ ನವೀಕರಣದ ಮೂಲಕ 'ಸಂಚಾರ ಸಾಥಿ' ಆ್ಯಪ್ ಅನ್ನು ಕಡ್ಡಾಯವಾಗಿ ಅಳವಡಿಸುವಂತೆ ಎಲ್ಲ ಮೊಬೈಲ್ ಫೋನ್ ತಯಾರಕ ಕಂಪನಿಗಳಿಗೆ ಕೇಂದ್ರ ಸರ್ಕಾರ ನವೆಂಬರ್ 28ರಂದು ಆದೇಶಿಸಿತ್ತು. ಇದು ವಿವಾದಕ್ಕೆ ಕಾರಣವಾಗಿತ್ತು.

**10 ಪಟ್ಟು ಹೆಚ್ಚಿದ ಆ್ಯಪ್ ಅಳವಡಿಕೆ**

Dr. Rajkumar IAS KAS Academy

- ‘ಸಂಚಾರ ಸಾಥಿ’ ಆ್ಯಪ್ ಕಡ್ಡಾಯ ಅಳವಡಿಕೆ ಆದೇಶ ಹೊರಬಿದ್ದ ಬೆನ್ನಲ್ಲೇ ಮೊಬೈಲ್ ಬಳಕೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂ ಪ್ರೇರಿತವಾಗಿ ಅದನ್ನು ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ದೂರಸಂಪರ್ಕ ಇಲಾಖೆ ತಿಳಿಸಿದೆ.
- ಕೇವಲ ಒಂದು ದಿನದಲ್ಲಿ 6 ಲಕ್ಷಕ್ಕೂ ಹೆಚ್ಚು ಮೊಬೈಲ್ ಬಳಕೆದಾರರು ಸ್ವಯಂ ಪ್ರೇರಿತವಾಗಿ ಈ ಆ್ಯಪ್ ಅಳವಡಿಸಿಕೊಂಡಿದ್ದಾರೆ. ಅಂದರೆ ಅಳವಡಿಕೆ ಪ್ರಕ್ರಿಯೆ 10 ಪಟ್ಟು ಏರಿಕೆಯಾಗಿದೆ. ಇದರಿಂದ ಒಟ್ಟಾರೆ ಈ ಅಪ್ಲಿಕೇಷನ್ ಬಳಕೆದಾರರ ಸಂಖ್ಯೆ 1.5 ಕೋಟಿ ಆಗಿದೆ ಎಂದು ಅದು ಮಾಹಿತಿ ನೀಡಿದೆ.
- ‘ಜನರು ತಾವಾಗಿಯೇ ಈ ಆ್ಯಪ್ ಅಳವಡಿಸಿಕೊಳ್ಳಲು ಉತ್ಸುಕತೆ ತೋರುತ್ತಿದ್ದಾರೆ’ ಎಂದು ಅದು ಪ್ರಕಟಣೆಯಲ್ಲಿ ತಿಳಿಸಿದೆ.

## ❖ ಇ-ಖಾತಾದಲ್ಲಿ ಯುಪಿಒಆರ್ ಮಾಹಿತಿ: ಇಂಟಿಗ್ರೇಟೆಡ್ ವ್ಯವಸ್ಥೆ: ಮುನೀಶ್ ಮೌದ್ಗಿಲ್

**ಸಂದರ್ಭ: ಜಿಬಿಎ ವ್ಯಾಪ್ತಿಯಲ್ಲಿನ ಆಸ್ತಿಗಳ ಇ-ಖಾತಾದಲ್ಲಿ ನಗರ ಆಸ್ತಿ ಮಾಲೀಕತ್ವದ ದಾಖಲೆಗಳನ್ನು (ಯುಪಿ ಒಆರ್) ಅಳವಡಿಸುವ ‘ಇಂಟಿಗ್ರೇಟೆಡ್ ಇ-ಖಾತಾ ವ್ಯವಸ್ಥೆ’ ಯನ್ನು ಜಾರಿ ಮಾಡಲಾಗಿದೆ ಎಂದು ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ತಿಳಿಸಿದರು.**

- ನಗರ ಸಮೀಕ್ಷೆಯಲ್ಲಿ ಯುಪಿಒಆರ್ ನಲ್ಲಿ ಆಸ್ತಿ ನಕ್ಷೆಗಳು, ಡ್ರೋನ್ ಮೂಲಕ ಪಡೆದುಕೊಂಡ ಓವರ್-ವ್ಯೂ ಚಿತ್ರಗಳನ್ನು ಜಿಬಿಎ ನೀಡುತ್ತಿರುವ ಇ-ಖಾತಾ ವ್ಯವಸ್ಥೆ ಯೊಂದಿಗೆ ಸಂಯೋಜಿಸಲಾಗಿದೆ.ನಗರದಲ್ಲಿ ಸುಮಾರು ಎರಡು ವರ್ಷ ಗಳಿಂದ ಯುಪಿಒಆರ್ ಯೋಜನೆಯಡಿ ನಿರ್ವಹಿಸಲಾಗಿರುವ ಕಾರ್ಯವನ್ನು ಇ-ಖಾತಾ ವ್ಯವಸ್ಥೆಗೆ ಸಂಯೋಜಿಸಲು ಕಂದಾಯ ಇಲಾಖೆ ಅಧಿಕಾರಿಗಳು ಮಾಡಿರುವ ಕಾರ್ಯ ಶ್ಲಾಘನೀಯ ಎಂದರು.
- ಇ-ಖಾತಾದಲ್ಲಿರುವ ನಿಖರ ಜಿಪಿಎಸ್ ಮಾಹಿತಿ, ಯುಪಿಒಆರ್ ನಕ್ಷೆ ಮತ್ತು ಚಿತ್ರಗಳನ್ನು ಜೋಡಿಸುವುದು ಅತ್ಯಂತ ಪ್ರಮುಖವಾಗಿದೆ. ಈಗಾಗಲೇ ಸುಮಾರು ಒಂದು ಲಕ್ಷ ಸಂಯೋಜಿತ ಇ-ಖಾತಾಗಳನ್ನು ನೀಡಲಾಗಿದ್ದು, ಪ್ರತಿದಿನವೂ ಈ ಸಂಖ್ಯೆ ಮತ್ತಷ್ಟು ಹೆಚ್ಚಿಸಲು ಕ್ರಮವಹಿಸಲಾಗುವುದು ಎಂದು ಹೇಳಿದರು.
- ಜಿಬಿಎ ವ್ಯಾಪ್ತಿಯಲ್ಲಿ ಸುಮಾರು 9 ಲಕ್ಷ ಅಂತಿಮ ಇ-ಖಾತಾ ನೀಡಲಾಗಿದ್ದು, ಪ್ರತಿದಿನ ಸರಾಸರಿ 2,500 ಇ-ಖಾತಾಗಳನ್ನು ನೀಡಲಾಗುತ್ತಿದೆ. ಕಾಯುವ ಅವಧಿ ಸರಾಸರಿ ಎರಡು ದಿನ ಎಂದು ಮಾಹಿತಿ ನೀಡಿದರು.

**ಲಭ್ಯವಿರುವ ಮಾಹಿತಿ**

। ಮಾಲೀಕರ ವಿವರ । ಆಸ್ತಿಯ ಎಲ್ಲ ವಿವರ

। ಆಸ್ತಿಯ ಚಿತ್ರ । ಮಾಲೀಕರ ಚಿತ್ರ

। ಆಸ್ತಿಯ ಜಿಪಿಎಸ್ ಅಂಕಿಗಳು । ಆಸ್ತಿಯ ಡಿಜಿಟಲ್ ಮ್ಯಾಪ್, ಸ್ಥಳದ ಚಿತ್ರ

। ಆಸ್ತಿಯ ತೆರಿಗೆ, ಬಳಕೆ ವಿವರ । ಬೆಸ್ಕಾಂ ಮೀಟರ್ ಸಂಖ್ಯೆ

। ಆಸ್ತಿ ಮಾಲೀಕತ್ವ ಪಡೆದಿರುವ ದಾಖಲೆ ಸಂಖ್ಯೆ

Dr. Rajkumar IAS/KAS Academy

## ❖ ವನ್ಯಜೀವಿ ಮಾನವ ಸಂಘರ್ಷ ತಡೆಗೆ ಕಮಾಂಡ್ ಸೆಂಟರ್ ಆರಂಭ

**ಸಂದರ್ಭ: ಸಿಬ್ಬಂದಿ ಕಾಡಿನಲ್ಲಿ ಎಷ್ಟು ಹೊತ್ತು ಗಸ್ತು ತಿರುಗುತ್ತಾರೆ ಎಂದು ಗಮನಿಸಲು ಇ-ಗಸ್ತು ತಂತ್ರಾಂಶ ರೂಪಿಸಿದ್ದು, ಎಂ.ಸ್ಟ್ರೈಪ್ ಜೊತೆಗೆ ಜಾರಿಗೆ ಸೂಚಿಸಲಾಗಿದೆ, ಸಚಿವ.**

- 'ಮಾನವ ಹಾಗೂ ವನ್ಯಜೀವಿ ಸಂಘರ್ಷ ತಡೆಯಲು ನಾಗರಹೊಳೆ, ಮಲೆಮಹದೇಶ್ವರ ಬೆಟ್ಟ, ಕಾಳಿ, ಮಡಿಕೇರಿ ವನ್ಯಧಾಮಗಳಲ್ಲಿ ಕಮಾಂಡ್ ಕೇಂದ್ರ ತೆರೆಯಲಾಗಿದೆ' ಎಂದು ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು.
- ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಅರಣ್ಯ ಇಲಾಖೆಯ ಕಚೇರಿ ಆವರಣದಲ್ಲಿ ಸಮಗ್ರ ಕಮಾಂಡ್ ಸೆಂಟರ್ ಉದ್ಘಾಟಿಸಿದ ಅವರು, 'ಅರಣ್ಯದೊಳಗೆ ಗಸ್ತು ಹೆಚ್ಚಿಸಲು ಇದು ಸಹಕಾರಿ. ಚಿಕ್ಕಮಗಳೂರು, ಬನ್ನೇರು ಘಟ್ಟ ರಾಷ್ಟ್ರೀಯ ಉದ್ಯಾನ, ಮೈಸೂರು ವಿಭಾಗ, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ, ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ, ಹಾಸನ ವಲಯದಲ್ಲೂ ಸೆಂಟರ್ ತೆರೆಯಲಾಗುವುದು. ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ಕೇಂದ್ರವನ್ನು ಅಧಿವೇಶನದ ನಂತರ ಉದ್ಘಾಟಿಸಲಾಗುವುದು' ಎಂದರು.
- 'ಈ ಕೇಂದ್ರದಲ್ಲಿ ಕೃತಕ ಬುದ್ಧಿಮತ್ತೆ ಕ್ಯಾಮೆರಾ, ಥರ್ಮಲ್ ಡ್ರೋನ್ ಕ್ಯಾಮೆರಾ, ಆಧುನಿಕ ತಂತ್ರಜ್ಞಾನ ಆಧಾರಿತ ಪರಿಕರಗಳು ಇರಲಿದ್ದು, ವನ್ಯಜೀವಿಗಳ ಚಲನವಲನದ ಬಗ್ಗೆ ನಿಗಾ ಇರಿಸಲಾಗುವುದು. ಯಾವ ಗ್ರಾಮಗಳ ವನ್ಯಜೀವಿ ಬಳಿ ಬಂದಿವೆ ಎಂಬ ಅರಿತು ಕ್ರಮ ವಹಿಸಿ ಜೀವಹಾನಿ ತಡೆಯಬಹುದು' ಎಂದರು.

## ❖ 'ರಾಜ ಭವನ' ಅಲ್ಲ 'ಲೋಕ ಭವನ'

**ಸಂದರ್ಭ: ಕೇಂದ್ರ ಗೃಹ ಸಚಿವಾಲಯದ ತೀರ್ಮಾನದಂತೆ ದೇಶದಾದ್ಯಂತ ಇರುವ 'ರಾಜ ಭವನ' ಗಳ ಹೆಸರನ್ನು 'ಲೋಕ ಭವನ' ಎಂದು ಮರುನಾಮಕರಣ ಮಾಡಲಾಗಿದ್ದು, 'ರಾಜ ಭವನ, ಕರ್ನಾಟಕ' ಎನ್ನುವುದನ್ನು 'ಲೋಕ ಭವನ, ಕರ್ನಾಟಕ' ಎಂದು ಹೆಸರಿಸಲಾಗಿದೆ.**

- ಈ ಬಗ್ಗೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಬುಧವಾರ ಪತ್ರ ಬರೆದಿರುವ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್, 'ಹೆಸರು ಬದಲಾವಣೆಗೆ ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ಅನುಮೋದನೆ ನೀಡಿದ್ದಾರೆ. ಈ ಆದೇಶವು ತಕ್ಷಣದಿಂದ ಜಾರಿಗೆ ಬರಲಿದೆ' ಎಂದು ತಿಳಿಸಿದ್ದಾರೆ.
- 'ಮುಂದಿನ ದಿನಗಳಲ್ಲಿ ಸರ್ಕಾರದ ಎಲ್ಲ ಇಲಾಖೆಗಳು, ಸರ್ಕಾರಿ ಆದೇಶಗಳು, ಅಧಿಕೃತ ಪತ್ರ ವ್ಯವಹಾರಗಳು, ವೆಬ್‌ಸೈಟ್ ಹಾಗೂ ಫಲಕಗಳಲ್ಲಿ 'ರಾಜ ಭವನ ಕರ್ನಾಟಕ' ಬದಲು 'ಲೋಕ ಭವನ ಕರ್ನಾಟಕ' ಎಂದು ಬಳಸಬೇಕು' ಎಂದೂ ಪತ್ರದಲ್ಲಿ ಅವರು ತಿಳಿಸಿದ್ದಾರೆ.

## ❖ ಜಿಲ್ಲೆ ರಚನೆಗೆ ಆಗ್ರಹ: ಗೋಕಾಕ ಬಂದ್ ಯಶಸ್ವಿ

**ಸಂದರ್ಭ: 'ಬೆಳಗಾವಿ ಜಿಲ್ಲೆ ವಿಭಜಿಸಿ ಗೋಕಾಕ ಅನ್ನು ಕೇಂದ್ರವಾಗಿಸಿ ಹೊಸ ಜಿಲ್ಲೆ ರಚಿಸಬೇಕು. ಚಳಿಗಾಲದ ಅಧಿವೇಶನದಲ್ಲಿ ಈ ಕುರಿತು ನಿರ್ಧಾರ ಕೈಗೊಳ್ಳಬೇಕು' ಎಂದು ಆಗ್ರಹಿಸಿ ಬುಧವಾರ ಕರೆ ನೀಡಿದ್ದ ಗೋಕಾಕ ಬಂದ್ ಯಶಸ್ವಿಯಾಯಿತು.**

- ಗೋಕಾಕ ಜಿಲ್ಲಾ ಹೋರಾಟ ಚಾಲನಾ ಸಮಿತಿ ಹಾಗೂ ವಕೀಲರ ಸಂಘದ ನೇತೃತ್ವದಲ್ಲಿ ಮೆರವಣಿಗೆ ನಡೆಸಿ, ಧರಣಿ ಮಾಡಲಾಯಿತು. ಕಾಂಗ್ರೆಸ್ ಹಾಗೂ ಬಿಜೆಪಿ ನಾಯಕರೂ ಬಂದ್‌ಗೆ ಬೆಂಬಲ ನೀಡಿದರು.

Dr. Rajkumar KAS Academy

## ಯುನಿಸೆಫ್ ಜಾಗತಿಕ ಮಕ್ಕಳ ಸ್ಥಿತಿಗತಿ ವರದಿ–2025ರಲ್ಲಿ ಉಲ್ಲೇಖ

# ಬಡತನದ ಸುಳಿಯಲ್ಲಿ ಭಾರತದ ಮಕ್ಕಳು

**ಭಾರತವನ್ನೂ ಒಳಗೊಂಡಂತೆ ಜಗತ್ತಿನಲ್ಲಿ ದೊಡ್ಡ ಸಂಖ್ಯೆಯ ಮಕ್ಕಳು ಬಡತನವನ್ನು ಎದುರಿಸುತ್ತಿದ್ದಾರೆ ಎಂದು ಯುನಿಸೆಫ್ ಜಾಗತಿಕ ಮಕ್ಕಳ ಸ್ಥಿತಿಗತಿ– 2025 ವರದಿ ತಿಳಿಸಿದೆ. ದಶಕದ ಹಿಂದಿನ ಅಂಕಿ ಅಂಶಗಳಿಗೆ ಹೋಲಿಸಿದರೆ ಜಾಗತಿಕ ಮಟ್ಟದಲ್ಲಿ ಕಡುಬಡ ಮಕ್ಕಳ ಸಂಖ್ಯೆಯಲ್ಲಿ ಇಳಿಮುಖವಾಗಿದೆ. ಆದರೆ, ಭಾರತದಲ್ಲಿ ಮಕ್ಕಳ ಬಹುಆಯಾಮದ ಬಡತನ ಪ್ರಮಾಣ ಈಗಲೂ ಗಣನೀಯವಾಗಿಯೇ ಇದೆ. ಇದು ಅವರ ಆರೋಗ್ಯ ಮತ್ತು ಬೆಳವಣಿಗೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಜಗತ್ತಿನಲ್ಲಿ 41.2 ಕೋಟಿ ಮಕ್ಕಳು ಕಡುಬಡತನಕ್ಕೆ ಗುರಿಯಾಗಿದ್ದು, ದಿನನಿತ್ಯದ ನೈರ್ಮಲ್ಯ ಮತ್ತು ಪೌಷ್ಟಿಕತೆಯಿಂದ ವಂಚಿತರಾಗಿದ್ದಾರೆ ಎಂದು ವರದಿ ಹೇಳಿದೆ**

ಪ್ರಜಾವಾಣಿ ವಾರ್ತೆ

ಕಡಿಮೆ ಮತ್ತು ಕೆಳ-ಮಧ್ಯಮ ಆದಾಯದ ದೇಶಗಳ ಮಕ್ಕಳು ಬಡತನದಿಂದ ನರಳುತ್ತಿದ್ದಾರೆ ಎಂದು ವಿಶ್ವಸಂಸ್ಥೆಯ ಮಕ್ಕಳ ನಿಧಿಯ (ಯುನಿಸೆಫ್) ಇತ್ತೀಚಿನ ವರದಿ ತಿಳಿಸಿದೆ. ಜಗತ್ತಿನಲ್ಲಿ 41.2 ಕೋಟಿ ಮಕ್ಕಳು ಕಡುಬಡತನವನ್ನು ಎದುರಿಸುತ್ತಿದ್ದಾರೆ. ಭಾರತದಲ್ಲಿಯೂ ಬಡ ಮಕ್ಕಳ ಸಂಖ್ಯೆ ಹೆಚ್ಚೇ ಇದೆ ಎಂದು ವರದಿ ತಿಳಿಸಿದೆ.

ವರದಿಯು 130 ಕೆಳ ಮತ್ತು ಮಧ್ಯಮ ಆದಾಯದ ರಾಷ್ಟ್ರಗಳ ಬಹುಆಯಾಮದ ದತ್ತಾಂಶವನ್ನು ವಿಶ್ಲೇಷಿಸಿದ್ದು, ಆರು ರೀತಿಯ ಸೌಲಭ್ಯಗಳ ಕೊರತೆಯನ್ನು ಪಟ್ಟಿ ಮಾಡಿದೆ. ಶಿಕ್ಷಣ, ಆರೋಗ್ಯ, ವಸತಿ, ಪೌಷ್ಟಿಕತೆ, ನೈರ್ಮಲ್ಯ ಮತ್ತು ಶುದ್ಧ ನೀರು. ಇವುಗಳ ಪೈಕಿ 41.7 ಕೋಟಿ ಮಕ್ಕಳು ಎರಡು ಮತ್ತು ಅದಕ್ಕಿಂತ ಹೆಚ್ಚಿನ ಕೊರತೆಗಳನ್ನು ಎದುರಿಸುತ್ತಿದ್ದಾರೆ.

ಜಾಗತಿಕವಾಗಿ ಇಂದಿಗೂ ಅನೇಕ ಮಕ್ಕಳು ಮೂಲಭೂತ ಅಗತ್ಯಗಳಿಂದ ವಂಚಿತರಾಗಿದ್ದಾರೆ. ಇವು ಅಸಮಾನತೆಯನ್ನು ಹೆಚ್ಚಿಸುತ್ತಿದ್ದು, ಬೆಳವಣಿಗೆಯನ್ನು ಕುಂಠಿತಗೊಳಿಸಿವೆ. ಇದು ಸಾಮಾಜಿಕ ವ್ಯವಸ್ಥೆಯನ್ನೂ ದುರ್ಬಲಗೊಳಿಸುತ್ತಿದ್ದು, ತಲೆಮಾರುಗಳ ಕಾಲ ಅದರ ಪರಿಣಾಮ ಇರುತ್ತದೆ ಎಂದು ವಿಶ್ಲೇಷಿಸಿದೆ. ಚಿಕ್ಕ ಮಕ್ಕಳು, ಅಂಗವಿಕಲರು ಮತ್ತು ಬಿಕ್ಕಟ್ಟುಗಳಲ್ಲಿ ಬದುಕುತ್ತಿರುವ ಮಕ್ಕಳು ಹೆಚ್ಚು ಸಮಸ್ಯೆ ಎದುರಿಸುತ್ತಿದ್ದಾರೆ. ಹವಾಮಾನ ವೈಪರೀತ್ಯಗಳು, ರಾಜಕೀಯ ಬಿಕ್ಕಟ್ಟುಗಳು ಮತ್ತು ರಾಷ್ಟ್ರದ ಸಾಲವು ಕುಟುಂಬಗಳನ್ನು ಸಂಕಷ್ಟಕ್ಕೆ ದೂಡುತ್ತಿದ್ದು, ಕುಟುಂಬದ ದುಡಿಮೆಯನ್ನು ಮಕ್ಕಳಿಗೆ ಬಳಸುವುದಕ್ಕೆ ಆಸ್ಪದ ನೀಡುತ್ತಿಲ್ಲ.

**ಭಾರತದಲ್ಲಿ ಬಡಮಕ್ಕಳು:** ಕಡುಬಡತನವು ಜಾಗತಿಕ ಮಟ್ಟದಲ್ಲಿ ಇಳಿಮುಖವಾಗುತ್ತಿದೆ. ಆದರೆ, ಭಾರತದಲ್ಲಿ ಬಹುಆಯಾಮದ ಬಡತನದಿಂದ ನರಳುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಿದೆ. ದೇಶದ 20.6 ಕೋಟಿ ಮಕ್ಕಳು ಆರು ಸವಲತ್ತುಗಳ ಪೈಕಿ ಕನಿಷ್ಠ ಒಂದರ ಕೊರತೆ ಎದುರಿಸುತ್ತಿದ್ದಾರೆ. ಈ ಪೈಕಿ ಮೂರನೇ ಒಂದರಷ್ಟು ಮಕ್ಕಳಿಗೆ ಎರಡು ಮತ್ತು ಅದಕ್ಕಿಂತ ಹೆಚ್ಚು ಕೊರತೆಗಳಿವೆ. ಜತೆಗೆ, ಪೌಷ್ಟಿಕತೆ, ಶಿಕ್ಷಣ, ಆರೋಗ್ಯ, ವಸತಿ ಮತ್ತು ನೈರ್ಮಲ್ಯ ಈ ಎಲ್ಲ ವಲಯಗಳಲ್ಲಿಯೂ ಉತ್ತಮಿಕೆಯ ಅಗತ್ಯವಿದೆ ಎಂದು ವರದಿ ಎಚ್ಚರಿಸಿದೆ.

ಭಾರತದಲ್ಲಿ 2013-2014 ಮತ್ತು 2022-2023ರ ನಡುವೆ ಬಹುಆಯಾಮದ ಬಡತನ ಪ್ರಮಾಣವು ಶೇ 29.2ರಿಂದ ಶೇ 11.3ಕ್ಕೆ ಇಳಿದಿದ್ದು, 24.8 ಕೋಟಿ ಮಂದಿಯನ್ನು ಬಡತನದಿಂದ ಮುಕ್ತಗೊಳಿಸಲಾಗಿದೆ ಎಂದು ನೀತಿ ಆಯೋಗದ ವರದಿ ಹೇಳಿತ್ತು. ಆದರೆ, ಬಡತನದ ಹೆಚ್ಚಿನ ಪರಿಣಾಮಗಳಿಗೆ ಮಕ್ಕಳು ಗುರಿಯಾಗುತ್ತಲೇ ಇದ್ದಾರೆ.


ಭಾರತವು ಜಗತ್ತಿನಲ್ಲೇ ಅತಿ ಹೆಚ್ಚು ಜನಸಂಖ್ಯೆಯ ದೇಶವಾಗಿದೆ. ಆದರೆ, ಬಡ ಮಕ್ಕಳು ಹೆಚ್ಚಾಗಿರುವುದರಿಂದ ಜನಸಂಖ್ಯೆ ಹೆಚ್ಚಳದ ಪ್ರಯೋಜನಗಳನ್ನು ಪಡೆಯುವುದು ಕಷ್ಟಕರವಾಗಿ ಪರಿಣಮಿಸಿದೆ. ದೇಶದಲ್ಲಿ ಕುಂಠಿತ ಬೆಳವಣಿಗೆಯ ಮತ್ತು ಕಡಿಮೆ ತೂಕದ ಮಕ್ಕಳು ಹೆಚ್ಚಾಗಿದ್ದಾರೆ. ಹಸಿವು ಮುಕ್ತವಾಗಿರುವುದು, ಶಿಕ್ಷಣ, ಆರೋಗ್ಯ ಪಡೆಯುವುದು ದೇಶದ ಪ್ರತಿಯೊಬ್ಬ ಮಗುವಿನ ಹಕ್ಕಾಗಿದೆ. ಮಕ್ಕಳಿಗೆ ಮೂಲಭೂತ ಅಗತ್ಯಗಳನ್ನು ಪೂರೈಸುವುದು ಸರ್ಕಾರಗಳ ಕರ್ತವ್ಯವಾಗಿದೆ. ಇದಕ್ಕಾಗಿ ರಾಷ್ಟ್ರ ಮತ್ತು ರಾಜ್ಯ ಮಟ್ಟದಲ್ಲಿ ಹಲವು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಆದರೆ, ಸಮಸ್ಯೆಯ ತೀವ್ರತೆ ಹೆಚ್ಚಾಗಿದೆ, ಅವು ಸಾಲದಾಗಿವೆ.

**ಕುಸಿಯುತ್ತಿರುವ ಅನುದಾನ:** 2025–26ರ ಕೇಂದ್ರ ಬಜೆಟ್‌ನಲ್ಲಿ ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯಕ್ಕೆ ₹26,890 ಕೋಟಿ ಮೀಸಲಿಡಲಾಗಿದೆ. ಮಕ್ಕಳ ಕಾರ್ಯಕ್ರಮಗಳೂ ಇದರ ವ್ಯಾಪ್ತಿಯಲ್ಲಿಯೇ ಬರುತ್ತವೆ. ಆದರೆ, 2015-2016ರಲ್ಲಿ ಕೇಂದ್ರದ ವೆಚ್ಚದಲ್ಲಿ ಸಚಿವಾಲಯದ ಪಾಲು ಶೇ 0.96ರಷ್ಟಿತ್ತು. 2025-2026ರಲ್ಲಿ ಅದು ಶೇ 0.5ರಷ್ಟು ಕುಸಿದಿದೆ. ಅಂದರೆ, 10 ವರ್ಷದಲ್ಲಿ ಮಕ್ಕಳ ಅಭಿವೃದ್ಧಿಗಾಗಿ ಮೀಸಲಿಡುವ ಹಣವು ಕುಸಿಯುತ್ತಲೇ ಸಾಗಿದೆ.

ಒಟ್ಟಾರೆ ಬಡತನ ಮತ್ತು ಮಕ್ಕಳ ಬಡತನ ಎರಡೂ ಭಿನ್ನ. ಎರಡಕ್ಕೂ ಪ್ರತ್ಯೇಕ ಯೋಜನೆಗಳನ್ನು ರೂಪಿಸಬೇಕು. ನಿರ್ದಿಷ್ಟ ಕಾರ್ಯಕ್ರಮಗಳನ್ನು ರೂಪಿಸಿ, ಅವುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಮಕ್ಕಳ ಕಲ್ಯಾಣಕ್ಕಾಗಿ ಯುನಿಸೆಫ್ ಐದು ಅಂಶಗಳ ಕಾರ್ಯಕ್ರಮವನ್ನು ರೂಪಿಸಿದೆ ಮತ್ತು ಆರೋಗ್ಯ, ಕಲಿಕೆ, ರಕ್ಷಣೆ ಮತ್ತು ಸ್ವಚ್ಛ ವಾತಾವರಣದ ಬದುಕನ್ನು ಮಕ್ಕಳಿಗೆ ಖಾತರಿ ಪಡಿಸಬೇಕು ಎಂದು ಆಗ್ರಹಿಸಿದೆ.



**ಜಾಗತಿಕವಾಗಿ ಕಡು ಬಡತನ ಎದುರಿಸುತ್ತಿರುವ ಮಕ್ಕಳ ಸಂಖ್ಯೆ (ಕೋಟಿಗಳಲ್ಲಿ)**




* ಕೋವಿಡ್ ಸಾಂಕ್ರಾಮಿಕದ ಕಾರಣದಿಂದ ಕಡು ಬಡತನ ಎದುರಿಸುತ್ತಿದ್ದ ಮಕ್ಕಳ ಸಂಖ್ಯೆಯಲ್ಲಿ ಹೆಚ್ಚಳವಾಗಿತ್ತು

ಕಡು ಬಡತನ ಎಂದರೆ, ಕಡಿಮೆ ಆದಾಯದ ರಾಷ್ಟ್ರಗಳಲ್ಲಿ ವ್ಯಕ್ತಿಯೊಬ್ಬರಿಗೆ ಬದುಕಲು ದಿನಕ್ಕೆ ಗರಿಷ್ಠ 3 ಡಾಲರ್‌ನಷ್ಟು (₹270) ವೆಚ್ಚ ಮಾಡುವ ಸಾಮರ್ಥ್ಯ ಇರುತ್ತದೆ

## ವರದಿಯ ಪ್ರಮುಖ ಅಂಶಗಳು


- ಜಗತ್ತಿನಲ್ಲಿ ಐದು ಮಕ್ಕಳಲ್ಲಿ ಒಂದು ಮಗು ಕಡು ಬಡತನದ ಸ್ಥಿತಿಯನ್ನು ಎದುರಿಸುತ್ತಿದೆ
- ಹವಾಮಾನ ಬದಲಾವಣೆ ಮತ್ತು ಸಂಘರ್ಷಗಳು ಹೆಚ್ಚು ಕುಟುಂಬಗಳನ್ನು ಬಡತನದತ್ತ ದೂಡುತ್ತಿವೆ
- ಪ್ರತಿ ವರ್ಷ ಐವರು ಮಕ್ಕಳಲ್ಲಿ ನಾಲ್ವರು ಒಂದಲ್ಲ ಒಂದು ರೀತಿಯ ಹವಾಮಾನ ವಿಕೋಪದ ಪರಿಣಾಮವನ್ನು ಎದುರಿಸುತ್ತಿದ್ದಾರೆ
- 2024ರಲ್ಲಿ ಐವರು ಮಕ್ಕಳಲ್ಲಿ ಒಂದು ಮಗು ಸಂಘರ್ಷಪೀಡಿತ ಪ್ರದೇಶದಲ್ಲಿ ವಾಸಿಸುತ್ತಿತ್ತು
- ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳಲ್ಲಿ ಆರ್ಥಿಕ ಪ್ರಗತಿ ಕುಂಠಿತವಾಗುತ್ತಿದೆ. ಇದರಿಂದ ಮಕ್ಕಳ ಅಭಿವೃದ್ಧಿ ಕಾರ್ಯಕ್ರಮದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಅಭಿವೃದ್ಧಿಗಾಗಿ ನೀಡುತ್ತಿರುವ ನೆರವಿನಲ್ಲಿ ಕಡಿತವಾಗುತ್ತಿದೆ. ಇದರಿಂದಾಗಿ 2030ರ ಹೊತ್ತಿಗೆ ಪ್ರಪಂಚದಲ್ಲಿ ಐದು ವರ್ಷದೊಳಗಿನ 45 ಲಕ್ಷ ಮಕ್ಕಳ ಜೀವಕ್ಕೆ ಕುತ್ತು ಉಂಟಾಗಲಿದೆ. ಕಲಿಕೆಯ ಮೇಲೂ ಇದು ಪರಿಣಾಮ ಬೀರಲಿದ್ದು, 2026ರ ಹೊತ್ತಿಗೆ ಜಾಗತಿಕವಾಗಿ 60 ಲಕ್ಷ ಮಕ್ಕಳು ಶಾಲೆಯಿಂದ ಹೊರಗುಳಿಯಲಿದ್ದಾರೆ
- ಬಡ ಮತ್ತು ಅಭಿವೃದ್ಧಿ ಹೊಂದುತ್ತಿರುವ ದೇಶಗಳು ಸಾಲದ ಸುಳಿಗೆ ಸಿಲುಕಿವೆ. 45 ಪ್ರಗತಿಶೀಲ ರಾಷ್ಟ್ರಗಳು ಆರೋಗ್ಯ ಕ್ಷೇತ್ರಕ್ಕೆ ಮಾಡುತ್ತಿರುವ ವೆಚ್ಚಕ್ಕಿಂತಲೂ ಹೆಚ್ಚು ಮೊತ್ತವನ್ನು ಸಾಲದ ಬಡ್ಡಿಗೆ ಪಾವತಿಸುತ್ತಿವೆ. 22 ದೇಶಗಳು ಶಿಕ್ಷಣಕ್ಕೆ ಮೀಸಲಿಡುತ್ತಿರುವುದಕ್ಕಿಂತಲೂ ಹೆಚ್ಚಿನ ಹಣವನ್ನು ಸಾಲದ ಬಡ್ಡಿಯಾಗಿ ಪಾವತಿಸುತ್ತಿವೆ. ಮಕ್ಕಳ ಅಭಿವೃದ್ಧಿಗೆ ಹೆಚ್ಚಿನ ಹೂಡಿಕೆ ಮಾಡುವ ರಾಷ್ಟ್ರಗಳ ಸಾಮರ್ಥ್ಯವನ್ನು ಇದು ಕುಗ್ಗಿಸುತ್ತಿದೆ

## ಪರಿಹಾರವೇನು?

ಮಕ್ಕಳು ಎದುರಿಸುತ್ತಿರುವ ಬಡತನವನ್ನು ನಿವಾರಿಸುವುದಕ್ಕಾಗಿ ಕೈಗೊಳ್ಳಬೇಕಾದ ಪರಿಹಾರೋಪಾಯಗಳನ್ನೂ ಯುನಿಸೆಫ್ ತನ್ನ ವರದಿಯಲ್ಲಿ ಪಟ್ಟಿ ಮಾಡಿದೆ. ಮಕ್ಕಳ ಸ್ಥಿತಿಗತಿ ಸುಧಾರಣೆ ಕಂಡ ರಾಷ್ಟ್ರಗಳಲ್ಲಿ ಅಲ್ಲಿನ ಆಡಳಿತಗಳು ಅನುಸರಿಸಿರುವ ನೀತಿಗಳನ್ನು ಸಾಕ್ಷ್ಯಗಳನ್ನಾಗಿ ಇಟ್ಟುಕೊಂಡು ಪ್ರಮುಖವಾಗಿ ಐದು ಶಿಫಾರಸುಗಳನ್ನು ಯುನಿಸೆಫ್ ಮಾಡಿದೆ. ಅವುಗಳನ್ನು ಆಧಾರ ಸ್ತಂಭಗಳು (ಪಿಲ್ಲರ್) ಎಂದು ಅದು ಕರೆದಿದೆ.

1. ಮಕ್ಕಳ ಬಡತನವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದನ್ನು ರಾಷ್ಟ್ರೀಯ ಆದ್ಯತೆಯ ವಿಷಯವನ್ನಾಗಿ ಪರಿಗಣಿಸಬೇಕು
2. ವಿತ್ತೀಯ ಅವಕಾಶಗಳನ್ನು ಸೃಷ್ಟಿಸಬೇಕು ಮತ್ತು ಆರ್ಥಿಕ ಪರಿಸ್ಥಿತಿಗೆ ಪೂರಕವಾಗಿರುವ ನೀತಿಗಳನ್ನು ರೂಪಿಸಬೇಕು. ಸಾಲದ ಮೇಲಿನ ಬಡ್ಡಿದರದಲ್ಲಿ ಆಗುವ ಬದಲಾವಣೆಯು ಕುಟುಂಬಗಳ ಮೇಲೆ ಯಾವ ರೀತಿಯ ಪರಿಣಾಮ ಬೀರಲಿದೆ ಎಂಬುದನ್ನು ಕೇಂದ್ರೀಯ ಬ್ಯಾಂಕುಗಳು ಮೌಲ್ಯಮಾಪನ ಮಾಡಬೇಕು. ಮಕ್ಕಳಿಗೆ ಸಂಬಂಧಿಸಿದಂತೆ ಮಾಡುವ ವೆಚ್ಚಗಳನ್ನು ರಕ್ಷಿಸುವಂತಹ ಕಾನೂನಿನ ಚೌಕಟ್ಟುಗಳನ್ನು ರೂಪಿಸಬೇಕು. ಮಕ್ಕಳಿಗೆ ಪೂರಕವಾದ ಬಜೆಟ್ ಮತ್ತು ಉತ್ತರದಾಯಿತ್ವವನ್ನು ಬೆಂಬಲಿಸುವ ಪಾರದರ್ಶಕ ವ್ಯವಸ್ಥೆಯ ಅಗತ್ಯವಿದೆ
3. ಎಲ್ಲರನ್ನೂ ಒಳಗೊಳ್ಳುವ ಸಾಮಾಜಿಕ ರಕ್ಷಣಾ ಯೋಜನೆಗಳನ್ನು ಇನ್ನಷ್ಟು ವಿಸ್ತರಿಸಬೇಕು. ಸಾರ್ವತ್ರಿಕ, ಕುಟುಂಬ ಗುರಿ ಆಧಾರಿತ ಹಾಗೂ ಮಕ್ಕಳಿಗೆ ಅನುಕೂಲ ಕಲ್ಪಿಸುವ ಯೋಜನೆಗಳು ಮಕ್ಕಳ ಪೌಷ್ಟಿಕತೆ, ಆರೋಗ್ಯ ಮತ್ತು ಶಾಲಾ ಹಾಜರಾತಿಯನ್ನು ಹೆಚ್ಚಿಸುವ ಮೂಲಕ ಮಕ್ಕಳ ಬಡತನ ಪ್ರಮಾಣವನ್ನು ಕಡಿಮೆ ಮಾಡಿದ ಉದಾಹರಣೆಗಳು ಜಗತ್ತಿನಲ್ಲಿ ಸಾಕಷ್ಟಿವೆ. ಇಂತಹ ಕಾರ್ಯಕ್ರಮಗಳಿಗೆ ಹೆಚ್ಚು ಪ್ರೋತ್ಸಾಹ ನೀಡಬೇಕು
4. ಶಿಕ್ಷಣ, ಆರೋಗ್ಯ, ಶುದ್ಧ ನೀರು, ನೈರ್ಮಲ್ಯ, ಪೌಷ್ಟಿಕತೆ, ಮಾಹಿತಿ, ವಸತಿ, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಸಾರ್ವಜನಿಕ ಸೇವೆ ಲಭ್ಯವಾಗುವಂತೆ ನೋಡಿಕೊಳ್ಳಬೇಕು
5. ಮಕ್ಕಳ ಪೋಷಕರು ಆರ್ಥಿಕವಾಗಿ ಸುಭದ್ರರಾಗಿರುವಂತೆ ನೋಡಿಕೊಳ್ಳಬೇಕು. ಇದಕ್ಕಾಗಿ ಪೋಷಕರಿಗೆ ಉದ್ಯೋಗ ನೀಡಬೇಕು. ಅವರಿಗೆ ಕನಿಷ್ಠ ವೇತನ, ಪ್ರೋತ್ಸಾಹ ಧನ ನೀಡುವ ವ್ಯವಸ್ಥೆ, ಅಸಂಘಟಿತ ವಲಯದವರಿಗೂ ಸಾಮಾಜಿಕ ಭದ್ರತಾ ಯೋಜನೆಗಳನ್ನು ವಿಸ್ತರಿಸುವುದು ಮುಂತಾದ ಶಾಸನಬದ್ಧವಾದ ನೀತಿಗಳನ್ನು ಜಾರಿಗೊಳಿಸಬೇಕು

### ಕಡಿಮೆ ಆದಾಯ ಹಾಗೂ ಕೆಳ– ಮಧ್ಯಮ ಆದಾಯ ಹೊಂದಿರುವ ರಾಷ್ಟ್ರಗಳಲ್ಲಿ ಮಕ್ಕಳು ಎದುರಿಸುತ್ತಿರುವ ಸೌಲಭ್ಯಗಳ ತೀವ್ರ ಕೊರತೆಯ ಸರಾಸರಿ ಪ್ರಮಾಣ (%ಗಳಲ್ಲಿ)




ಭಾರತವು ಕೆಳ ಮಧ್ಯಮ ಆದಾಯ ಹೊಂದಿರುವ ರಾಷ್ಟ್ರಗಳ ಸಾಲಿಗೆ ಸೇರುತ್ತದೆ

**4.20** ಡಾಲರ್ (₹379) ಕೆಳ ಮಧ್ಯಮ ಆದಾಯದ ರಾಷ್ಟ್ರಗಳಲ್ಲಿ ವ್ಯಕ್ತಿಯೊಬ್ಬರು ಬದುಕಲು ಮಾಡುವ ದಿನದ ವೆಚ್ಚ

### ಕಡಿಮೆ ಮತ್ತು ಕೆಳ ಮಧ್ಯಮ ಆದಾಯದ ರಾಷ್ಟ್ರಗಳ ಸೌಲಭ್ಯ ವಂಚಿತ ಮಕ್ಕಳು

**41.7** ಕೋಟಿ ಎರಡು ಅಥವಾ ಅದಕ್ಕಿಂತ ಹೆಚ್ಚು ಸೌಲಭ್ಯಗಳಿಂದ ವಂಚಿತರಾದವರು

**11.8** ಕೋಟಿ ಮೂರು ಅಥವಾ ಅದಕ್ಕಿಂತ ಹೆಚ್ಚು ಸವಲತ್ತುಗಳ ಕೊರತೆ ಎದುರಿಸುತ್ತಿರುವವರು

**1.7** ಕೋಟಿ ನಾಲ್ಕು ಮತ್ತು ಅದಕ್ಕಿಂತ ಹೆಚ್ಚು ಸೌಲಭ್ಯಗಳಿಂದ ವಂಚಿತರಾದವರು

**ಭಾರತದಲ್ಲಿ...**

**20.6** ಕೋಟಿ ಕನಿಷ್ಠ ಒಂದು ಸೌಲಭ್ಯದಿಂದ ವಂಚಿತರಾದವರು

**6.2** ಕೋಟಿ, ಎರಡು ಅಥವಾ ಹೆಚ್ಚು ಸವಲತ್ತುಗಳ ಕೊರತೆ ಎದುರಿಸುತ್ತಿರುವವರು

### ಪದಬಂ

**ಎಡದಿಂದ ಬಲಕ್ಕೆ**

2.ಅತಿಯಾದ ಬಯಕೆ (3)
5.ಅದೇ ತಾನೆ ಮದುವೆಯಾದ ಗಂಡಹೆಂಡತಿ (5)
7.ಭೂಮಿಗೂ ಆಕಾಶಕ್ಕೂ ನಡುವಣ ಪ್ರದೇಶ (4)
9.ವನಿತೆ ತೋರಿಸಿದ ಪರದೆ! (4)
12.ಮರದ ಹತ್ತಿರ ಕಾಣಿಸಿದ ಪಚ್ಚೆ (4)
15.ಪತಿಯೊಳಗಿರುವ ಮೇರೆ ಕಾಣುತ್ತಿದೆಯೇ? (4)
17.ಬೇರೆಯ ಕಾರಣ (5)
18.ಉತ್ತರದವರ ಬಾಯಲ್ಲಿ ವಿಪುಲತೆ (3)

**ಮೇಲಿಂದ ಕೆಳಕ್ಕೆ**

1.ಕಾಡಿನ ಹೂವು (4)
2.ತರಗತಿಯಲ್ಲಿರುವ ಗುಂಪು
3.ಕಾಗದ ಪತ್ರಗಳ ಕಟ್ಟು
4.ಪ್ರತ್ಯಕ್ಷ ಪದದ ವಿರುದ್ಧ ಪದ
6.ಚಿಗುರು ಎಂಬರ್ಥದ ರಾಜವಂಶ
7.ಹತೋಟಿ ಅಥವಾ ಸಂಖ್ಯೆ
8.ರೀತಿಯೊಡಗೂಡುವ ಜೋಡುನುಡಿ
10.ಇದು ಕರಾರುವಾಕ್ಕಾದುದು
11.ನಗರದಲ್ಲಿ ಕೇಳಿಸಿದ ಚರ್ಮವಾದ್ಯ
12.ಅನುಮತಿ ನೀಡಿದವನ ಬುದ್ಧಿ
13.ಕರದಲ್ಲಿರುವ ಮಣ್ಣಿನ ಭಿಕ್ಷಾಪಾತ್ರೆ
14.ಮನಸ್ಸಿನ ಬಯಕೆ
15.ಪಟದಲ್ಲಿ ಬದಲಾವಣೆ!
16.ನೇಸರನ ಇನ್ನೊಂದು ಹೆಸರು
17.ಕಾದಾಡುವ ಜಾಗದಲ್ಲಿನ ಅರಣ್ಯ

6242ನೇ

## ❖ ಕರ್ನಾಟಕದ ಸಹಕಾರ ಸಂಘಗಳ ಅಭಿವೃದ್ಧಿಗೆ ₹4,164 ಕೋಟಿ

**ಸಂದರ್ಭ: ಕರ್ನಾಟಕದಲ್ಲಿನ ಸಹಕಾರ ಸಂಘಗಳ ಅಭಿವೃದ್ಧಿಗೆ ₹4,164 ಕೋಟಿ ನೀಡಲಾಗಿದೆ ಎಂದು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಅವರು ರಾಜ್ಯಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.**

- ನವೆಂಬರ್ 25ರವರೆಗೆ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮವು (ಎನ್‌ಸಿಡಿಸಿ) ದೇಶದಲ್ಲಿನ ಸಹಕಾರ ಸಂಸ್ಥೆಗಳ ಅಭಿವೃದ್ಧಿಗೆ ₹4.67 ಲಕ್ಷ ಕೋಟಿ ಮಂಜೂರು ಮಾಡಿದೆ. ಈ ಪೈಕಿ ಕರ್ನಾಟಕದಲ್ಲಿನ ಸಹಕಾರ ಸಂಘಗಳ ಅಭಿವೃದ್ಧಿಗೆ ₹4,164 ಕೋಟಿ ನೀಡಲಾಗಿದೆ ಎಂದು ಬುಧವಾರ ತಿಳಿಸಿದ್ದಾರೆ.
- ರಾಷ್ಟ್ರೀಯ ಸಹಕಾರ ದತ್ತಾಂಶದ ಪ್ರಕಾರ, ಕರ್ನಾಟಕದಲ್ಲಿ 46,798 ಸಹಕಾರ ಸಂಘಗಳು ಇದ್ದು, ಅವು ಒಟ್ಟು 2.38 ಕೋಟಿ ಸದಸ್ಯರನ್ನು ಹೊಂದಿವೆ.
- 2021ರಲ್ಲಿ ಕೇಂದ್ರ ಸಹಕಾರ ಸಚಿವಾಲಯ ಆರಂಭವಾಯಿತು. ಅಂದಿನಿಂದ 'ಸಹಕಾರದಿಂದ ಸಮೃದ್ಧಿ' ಗುರಿ ಸಾಧಿಸಲು ಮತ್ತು ಕರ್ನಾಟಕ ಸೇರಿದಂತೆ ದೇಶದ ಎಲ್ಲೆಡೆ ಹೈನುಗಾರಿಕೆ, ಸಕ್ಕರೆ ಮತ್ತು ಕೃಷಿ ಸಹಕಾರ ಸಂಘಗಳ ಬಲವರ್ಧನೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

## ❖ ಪಾನ್ ಮಸಾಲಾ ಮೇಲೆ ಬೆಲೆ ನಮೂದು ಕಡ್ಡಾಯ

**ಸಂದರ್ಭ: ಪಾನ್ ಮಸಾಲಾ ಪೊಟ್ಟಣಗಳ ಮೇಲೆ ಚಿಲ್ಲರೆ ಮಾರಾಟ ದರವನ್ನು (ಆರ್‌ಎಸ್‌ಪಿ) ನಮೂದು ಮಾಡುವುದು ಕಡ್ಡಾಯ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವಾಲಯವು ಹೇಳಿದೆ.**

- ಪೊಟ್ಟಣಗಳ ಗಾತ್ರ ಯಾವುದೇ ಇರಲಿ, ಅದರಲ್ಲಿ ಇರುವ ಉತ್ಪನ್ನದ ತೂಕ ಎಷ್ಟೇ ಇರಲಿ, ಆರ್‌ಎಸ್‌ಪಿ ಹಾಗೂ 'ಕಾನೂನು ಮಾಪನಶಾಸ್ತ್ರ (ಪೊಟ್ಟಣದಲ್ಲಿನ ಸರಕುಗಳು) ನಿಯಮ-2011'ರ ಅಡಿಯಲ್ಲಿ ಹೇಳಿರುವ ಸಂಗತಿಗಳನ್ನು ನಮೂದು ಮಾಡುವುದು ಕಡ್ಡಾಯ ಎಂದು ಇಲಾಖೆಯು ಸ್ಪಷ್ಟಪಡಿಸಿದೆ.
- ಈ ಆದೇಶ ಫೆಬ್ರುವರಿ 1ರಿಂದ ಅನ್ವಯ ವಾಗಲಿದೆ. 10 ಗ್ರಾಂ ಹಾಗೂ ಅದ ಕ್ಕಿಂತ ಕಡಿಮೆ ತೂಕದ ಪೊಟ್ಟಣ ಗಳಲ್ಲಿ ಕೆಲವು ವಿವರಗಳನ್ನು ನೀಡುವ ಅಗತ್ಯ ಇಲ್ಲ ಎಂದು ಈ ಹಿಂದೆ ವಿನಾಯಿತಿ ನೀಡಲಾಗಿತ್ತು. ಆದರೆ ಈಗಿನ ಆದೇ ಶವು ವಿನಾಯಿತಿಗಳನ್ನು ಇಲ್ಲವಾಗಿಸಲಿದೆ.

## ❖ ತಂಬಾಕು ಉತ್ಪನ್ನಗಳ ಮೇಲೆ ಅಬಕಾರಿ ಸುಂಕ ಮಸೂದೆಗೆ ಅನುಮೋದನೆ

**ಸಂದರ್ಭ: ತಂಬಾಕು ಮತ್ತು ಅದಕ್ಕೆ ಸಂಬಂಧಿಸಿದ ಉತ್ಪನ್ನಗಳ ಮೇಲೆ ಹೆಚ್ಚಿನ ಅಬಕಾರಿ ಸುಂಕ ವಿಧಿಸುವ ಮಸೂದೆಯನ್ನು ಲೋಕಸಭೆ ಅಂಗೀಕರಿಸಿದೆ.**

- ಕೇಂದ್ರ ಅಬಕಾರಿ (ತಿದ್ದುಪಡಿ) ಮಸೂದೆ- 2025 ಅನ್ನು ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.
- ಪ್ರಸ್ತುತ ಜಾರಿಯಲ್ಲಿರುವ ತೆರಿಗೆ ಪರಿಹಾರದ ಸ್ವರೂಪವು 2026ರ ಮಾರ್ಚ್ ವೇಳೆಗೆ ಸ್ಥಗಿತಗೊಳ್ಳುವ ಸಾಧ್ಯತೆಯಿದೆ. ಈ ಮಸೂದೆ ಜಾರಿಗೆ ಬಂದ ನಂತರ ಸಿಗರೇಟ್, ಜಗಿಯುವ ತಂಬಾಕು, ಸಿಗಾರ್, ಹುಕ್ಕಾ, ಜರ್ದಾ ಮತ್ತು ಪರಿಮಳಯುಕ್ತ ತಂಬಾಕಿನಂತಹ ಎಲ್ಲ ಉತ್ಪನ್ನಗಳ ಮೇಲಿನ ತೆರಿಗೆಯನ್ನು ಗರಿಷ್ಠ ಮಟ್ಟದಲ್ಲೇ ಮುಂದುವರಿಸಲು ಅವಕಾಶ ಸಿಗುತ್ತದೆ.
- ಪ್ರಸ್ತುತ, ತಂಬಾಕು ಮತ್ತು ಸಂಬಂಧಿತ ಉತ್ಪನ್ನಗಳ ಮೇಲೆ ಶೇ 28ರಷ್ಟು ಜಿಎಸ್‌ಟಿ ಜೊತೆಗೆ ವಿವಿಧ ತೆರಿಗೆ ವಿಧಿಸಲಾಗುತ್ತಿದೆ.
- ಈ ಮಸೂದೆಯು, ತಯಾರಿಸದ ತಂಬಾಕಿನ ಮೇಲೆ ಶೇ 60–70ರಷ್ಟು ಅಬಕಾರಿ ಸುಂಕ ವಿಧಿಸಲು ಪ್ರಸ್ತಾಪಿಸುತ್ತದೆ. ಸಿಗಾರ್ ಮತ್ತು ಚುಟ್ಟ ಮೇಲಿನ ಅಬಕಾರಿ ಸುಂಕವು ಶೇ 25ರಷ್ಟು ಅಥವಾ ಒಂದು ಸಾವಿರ ಸಿಗಾರ್ ಮೇಲೆ ₹5 ಸಾವಿರ ಯಾವುದು ಹೆಚ್ಚೋ ಅದನ್ನು ಪ್ರಸ್ತಾಪಿಸಲಾಗಿದೆ.

- ಉದ್ದವಿರುವ ಹಾಗೂ ಫಿಲ್ಟರ್ ಆಧರಿಸಿ ಒಂದು ಸಾವಿರ ಸಿಗರೇಟ್ ಮೇಲೆ ₹2,700ರಿಂದ ₹11 ಸಾವಿರವರೆಗೆ ತೆರಿಗೆ ವಿಧಿಸಲು ಪ್ರಸ್ತಾಪಿಸಲಾಗಿದೆ. ಆದರೆ, ಜಗಿಯುವ ತಂಬಾಕಿಗೆ ಪ್ರತಿ ಕೆ.ಜಿಗೆ ₹100ವರೆಗೆ ತೆರಿಗೆ ವಿಧಿಸಲಾಗುತ್ತದೆ.

## ❖ ಭಾರತಕ್ಕೆ ಇಂದು ಪುಟಿನ್ ಭೇಟಿ: ರಷ್ಯಾದಿಂದ ಭಾರತಕ್ಕೆ ಯುದ್ಧೋಪಕರಣಗಳ ತ್ವರಿತ ಪೂರೈಕೆ ಕುರಿತು ಮಾತು

**ಸಂದರ್ಭ: ಭಾರತ-ರಷ್ಯಾದ 23ನೇ ವಾರ್ಷಿಕ ಶೃಂಗಸಭೆಗಾಗಿ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಡಿ.4, 5ರಂದು ಭಾರತಕ್ಕೆ ಭೇಟಿ ನೀಡುತ್ತಿದ್ದಾರೆ.**

- ಪ್ರಧಾನಿ ನರೇಂದ್ರ ಮೋದಿ ಅವರು ಪುಟಿನ್ ಅವರೊಂದಿಗೆ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದಾರೆ.
- ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ರಷ್ಯಾದ ರಕ್ಷಣಾ ಸಚಿವ ಆಂಡ್ರೆ ಬೆಲೊಸೊವ್ ಅವರು ಮಾತುಕತೆ ನಡೆಸಲಿದ್ದಾರೆ.
- ಪುಟಿನ್ ಅವರ ನಿಯೋಗದಲ್ಲಿ ಆಂಡ್ರೆ ಬೆಲೊಸೊವ್ ಕೂಡ ಇದ್ದಾರೆ.
- ಎಸ್- 400 ಕ್ಷಿಪಣಿ ವ್ಯವಸ್ಥೆಗಳ ಖರೀದಿ, ಸುಖೋಯ್-30 ಎಂಕೆಐ ಯುದ್ಧ ವಿಮಾನಗಳನ್ನು ಮೇಲ್ದರ್ಜೆಗೇರಿಸುವುದು ಹಾಗೂ ರಷ್ಯಾದಿಂದ ಇತರ ಮಿಲಿಟರಿ ಸಾಧನಗಳನ್ನು ಖರೀದಿಸುವುದರಲ್ಲಿ ಭಾರತದ ಆಸಕ್ತಿ ಕುರಿತು ಉಭಯ ನಾಯಕರು ಮಾತುಕತೆ ನಡೆಸಲಿದ್ದಾರೆ.
- ರಷ್ಯಾದಿಂದ ಭಾರತಕ್ಕೆ, ಯುದ್ಧೋಪಕರಣಗಳ ತ್ವರಿತ ಪೂರೈಕೆ ಹಾಗೂ ಎರಡೂ ದೇಶಗಳ ನಡುವಿನ ರಕ್ಷಣೆ ಮತ್ತು ಭದ್ರತಾ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸುವ ಗುರಿ ಇದೆ ಎಂದು ಸೇನೆಯ ಅಧಿಕಾರಿಗಳು ತಿಳಿಸಿದರು.

## ❖ ‘ಅಣು ಸಹಕಾರ: ಭಾರತದ ಜೊತೆ ಒಪ್ಪಂದ’

**ಸಂದರ್ಭ: ನಾಗರಿಕ ಅಣುಶಕ್ತಿ ಕ್ಷೇತ್ರದಲ್ಲಿ ಭಾರತದ ಜೊತೆ ಸಹಕಾರವನ್ನು ಮತ್ತಷ್ಟು ವೃದ್ಧಿಸುವುದಕ್ಕೆ ಸಂಬಂಧಿಸಿದ ಒಡಂಬಡಿಕೆಗೆ (ಎಂಒಯು) ರಷ್ಯಾ ಸಂಪುಟ ಅನುಮೋದನೆ ನೀಡಿದೆ.**

- ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಡಿಸೆಂಬರ್ 4 ಮತ್ತು 5ರಂದು ಕೈಗೊಂಡಿರುವ ಭಾರತ ಪ್ರವಾಸ ವೇಳೆ ಈ ಕುರಿತ ಒಪ್ಪಂದಕ್ಕೆ ಉಭಯ ದೇಶಗಳು ಅಂಕಿತ ಹಾಕಲಿವೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.
- ರಷ್ಯಾದ ಅಣು ನಿಗಮ ರೊಸಾಟಮ್, ತಮಿಳುನಾಡಿನ ಕೂಡಂಕುಳಂನಲ್ಲಿರುವ ಅಣುಶಕ್ತಿ ಸ್ಥಾವರದಲ್ಲಿ ಹಲವು ರಿಯಾಕ್ಟರ್‌ಗಳನ್ನು ನಿರ್ಮಿಸುತ್ತಿದೆ. ಈಗ, ಭಾರತದೊಂದಿಗಿನ ಅಣುಶಕ್ತಿ ಒಪ್ಪಂದಕ್ಕೆ ರಷ್ಯಾ ಸರ್ಕಾರದ ಪರವಾಗಿ ಸಹಿ ಹಾಕುವುದಕ್ಕೆ ಈ ನಿಗಮಕ್ಕೆ ಅಧಿಕಾರ ನೀಡಲಾಗಿದೆ ಎಂದೂ ಮಾಧ್ಯಮಗಳು ವರದಿ ಮಾಡಿವೆ.
- ‘ನವದೆಹಲಿಯಲ್ಲಿ ನಡೆಯುವ ಉಭಯ ದೇಶಗಳ ನಾಯಕರ ಸಭೆಯಲ್ಲಿ ಈ ಕುರಿತ ಪ್ರಸ್ತಾವನೆಗಳನ್ನು ರೊಸಾಟಮ್ ಸಿಇಒ ಅಲೆಕ್ಸಿ ಲಿಗಾಚೆವ್ ಮಂಡಿಸುವರು’ ಎಂದು ಕ್ರೆಮ್ಲಿನ್ ವಕ್ತಾರ ದಿಮಿಟ್ರಿ ಪೆಸ್ಕೋವ್ ಹೇಳಿದ್ದಾರೆ.

Dr. Rajkumar IAS/KAS Academy

## ❖ ರ್‍ಯಾಂಕಿಂಗ್: ನಾಲ್ಕನೇ ಸ್ಥಾನಕ್ಕೆ ಕೊಹ್ಲಿ


**ಸಂದರ್ಭ: ಏಕದಿನ ಸರಣಿಯ ಮೊದಲ ಪಂದ್ಯದಲ್ಲಿ ಶತಕ ಬಾರಿಸಿದ್ದ ಭಾರತದ ಬ್ಯಾಟಿಂಗ್ ತಾರೆ ವಿರಾಟ್ ಕೊಹ್ಲಿ ಅವರು ಪ್ರಕಟವಾದ ಐಸಿಸಿ ಏಕದಿನ ಬ್ಯಾಟರ್‌ಗಳ ರ್‍ಯಾಂಕಿಂಗ್ ನಲ್ಲಿ ನಾಲ್ಕನೇ ಸ್ಥಾನಕ್ಕೆ ಏರಿದ್ದಾರೆ.**

- 37 ವರ್ಷ ವಯಸ್ಸಿನ ಕೊಹ್ಲಿ ಭಾನುವಾರ ನಡೆದ ಆ ಪಂದ್ಯದಲ್ಲಿ 120 ಎಸೆತಗಳಲ್ಲಿ 135 ರನ್ ಗಳಿಸಿ 50 ಓವರುಗಳ ಮಾದರಿಯಲ್ಲಿ 52ನೇ ಶತಕ ಬಾರಿಸಿದ್ದರು.
- ಕೊಹ್ಲಿ 751 ರ್‍ಯಾಂಕಿಂಗ್ ಪಾಯಿಂಟ್ಸ್ ಗಳಿಸಿದ್ದಾರೆ. ರೋಹಿತ್ ಶರ್ಮಾ (783) ಅವರು ಅಗ್ರಸ್ಥಾನದಲ್ಲಿ ಮುಂದುವರಿ ದಿದ್ದಾರೆ. ನ್ಯೂಜಿಲೆಂಡ್‌ನ ಡೇರಿಲ್ ಮಿಚೆಲ್ (766), ಅಫ್ಘಾನಿಸ್ತಾನದ ಇಬ್ರಾಹಿಂ ಜದ್ರಾನ್ (764) ಮೂರನೇ ಸ್ಥಾನದಲ್ಲಿದ್ದಾರೆ.
- ಏಕದಿನ ತಂಡದ ನಾಯಕ ಶುಭಮನ್ ಗಿಲ್ (5ನೇ ಸ್ಥಾನ) ಅವರನ್ನು ಕೊಹ್ಲಿ ಅವರು ಹಿಂದೆಹಾಕಿದ್ದಾರೆ.
- ಬೌಲರ್‌ಗಳ ವಿಭಾಗದಲ್ಲಿ ಎಡಗೈ ಸ್ಪಿನ್ನರ್ ಕುಲದೀಪ್ ಯಾದವ್ ಅವರು ಎರಡು ಸ್ಥಾನ ಬಡ್ತಿ ಪಡೆದು ಆರನೇ ಸ್ಥಾನಕ್ಕೇರಿ ದ್ದಾರೆ. ಅವರು ಮೊದಲ ಪಂದ್ಯದಲ್ಲಿ ನಾಲ್ಕು ವಿಕೆಟ್ ಗಳಿಸಿದ್ದರು.
- ಟೆಸ್ಟ್ ಬೌಲರ್‌ಗಳ ವಿಭಾಗದಲ್ಲಿ ಜಸ್‌ಪ್ರೀತ್ ಬೂಮ್ರಾ 879 ಪಾಯಿಂಟ್ ಗಳೊಡನೆ ಅಗ್ರಸ್ಥಾನ ಉಳಿಸಿಕೊಂಡಿ ದ್ದಾರೆ. ನ್ಯೂಜಿಲೆಂಡ್‌ನ ಮ್ಯಾಟ್ ಹೆನ್ರಿ (8467) ಎರಡನೇ ಸ್ಥಾನದಲ್ಲಿದ್ದಾರೆ.

**ರಾಣಾಗೆ ವಾಗ್ದಂಡನೆ**

- ರಾಂಚಿಯಲ್ಲಿ ನಡೆದ ಮೊದಲ ಏಕದಿನ ಕ್ರಿಕೆಟ್ ಪಂದ್ಯದ ವೇಳೆ ದಕ್ಷಿಣ ಆಫ್ರಿಕಾದ ಬ್ಯಾಟರ್ ಡೆವಾಲ್ಡ್ ಬ್ರೆವಿಸ್ ವಿರುದ್ಧ ಆಕ್ರಮಣಕಾರಿ ರೀತಿ ವರ್ತಿಸಿದ್ದಕ್ಕೆ ಭಾರತ ತಂಡದ ವೇಗದ ಬೌಲರ್ ಹರ್ಷಿತ್ ರಾಣಾ ಅವರಿಗೆ ಐಸಿಸಿ ವಾಗ್ದಂಡನೆ ವಿಧಿಸಿದೆ. ಅವರ ಶಿಸ್ತಿನ ದಾಖಲೆಗೆ ಒಂದು ಡಿಮೆರಿಟ್ ಪಾಯಿಂಟ್ ಸಹ ಸೇರಿಸಿದೆ.

IAS/KAS Academy



## ❖ ದ್ವೇಷ ಭಾಷಣ: 7 ವರ್ಷ ಜೈಲು

**ಸಂದರ್ಭ: ದ್ವೇಷಾಪರಾಧ ನಿರ್ಬಂಧಕ್ಕೆ ಮಸೂದೆ 2ನೇ ಬಾರಿ ತಪ್ಪೆಸಗಿದರೆ 10 ವರ್ಷ ಸೆರೆವಾಸ: ಧರ್ಮ, ಜನಾಂಗ, ಭಾಷೆ, ಜನ್ಮಸ್ಥಳ, ಜಾತಿ, ಲಿಂಗದ ಆಧಾರದಲ್ಲಿ ದ್ವೇಷದ ಭಾಷಣ ಮಾಡುವವರನ್ನು ನಿರ್ಬಂಧಿಸಲು ಮುಂದಾಗಿರುವ ರಾಜ್ಯ ಸರ್ಕಾರ, ಈ ಉದ್ದೇಶಕ್ಕಾಗಿ ಕಾಯ್ದೆಯನ್ನು ಜಾರಿಗೊಳಿಸಲಿದೆ.**

- ದ್ವೇಷ ಭಾಷಣ, ಪ್ರಚೋದನಕಾರಿ ಮಾತುಗಳು ಸಮಾಜದ ಸಾಮರಸ್ಯಕ್ಕೆ ಧಕ್ಕೆ ತರುತ್ತಿರುವುದನ್ನು ಗಮನಿಸಿರುವ ಸರ್ಕಾರ, ಇಂತಹ ಕೃತ್ಯ ಎಸಗುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕ್ಕೆ ಮುಂದಾಗಿದೆ. ದ್ವೇಷಾಪರಾಧ ಎಸಗಿದವರಿಗೆ ಒಂದು ವರ್ಷದಿಂದ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ₹50 ಸಾವಿರ ದಂಡ ವಿಧಿಸಲಾಗುತ್ತದೆ.
- ಈ ಉದ್ದೇಶಕ್ಕಾಗಿ ಸರ್ಕಾರ ರೂಪಿಸಿರುವ, 'ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷಾಪರಾಧಗಳ (ಪ್ರತಿಬಂಧಕ) ಮಸೂದೆ- 2025'ಕ್ಕೆ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.
- 'ಈ ಮಸೂದೆಯೂ ಸೇರಿ ಒಟ್ಟು ಎಂಟು ಮಸೂದೆಗಳ ಕರಡುಗಳಿಗೆ ಗುರುವಾರ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಈ ಎಲ್ಲ ಮಸೂದೆಗಳನ್ನು ಬೆಳಗಾವಿಯಲ್ಲಿ ಡಿ. 8ರಿಂದ ನಡೆಯಲಿರುವ ಅಧಿವೇಶನದಲ್ಲಿ ಮಂಡಿಸಲಾಗುವುದು' ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.
- 'ರಾಜ್ಯದಲ್ಲಿ ದ್ವೇಷ ಭಾಷಣ ಮತ್ತು ದ್ವೇಷಾ ಪರಾಧಗಳ ಪ್ರಸರಣ, ಪ್ರಕಟಣೆ ಅಥವಾ ಪ್ರಚಾರ ಮಾಡುವುದರಿಂದ ಸಮಾಜದ ಸಾಮರಸ್ಯ ಹದಗೆಡಿಸುವುದು ಮತ್ತು ದ್ವೇಷ ಹರಡಿಸುವಿಕೆಗೆ ಕಡಿವಾಣ ಹಾಕಲು ಮತ್ತು ಅಂತಹ ಅಪರಾಧ ಗಳನ್ನು ಎಸಗುವ ವ್ಯಕ್ತಿ, ವ್ಯಕ್ತಿಗಳು, ಸಂಘಟನೆ ಯವರನ್ನು ಶಿಕ್ಷೆಗೆ ಒಳಪಡಿಸುವ ಉದ್ದೇಶ ದಿಂದ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷಾಪರಾಧಗಳ (ಪ್ರತಿಬಂಧಕ) ಮಸೂದೆ ರೂಪಿಸಲಾಗಿದೆ' ಎಂದು ಅವರು ವಿವರಿಸಿದರು.
- ಧಾರ್ಮಿಕ, ಜನಾಂಗೀಯ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮಸ್ಥಳ, ಭಾಷೆ, ವಾಸಸ್ಥಳ, ಅಂಗವೈಕಲ್ಯ ಅಥವಾ ಬುಡಕಟ್ಟು ಜನರ ಕುರಿತು ಯಾವುದೇ ವ್ಯಕ್ತಿಗೆ ಹಾನಿ ಮಾಡುವುದು ಅಥವಾ ದ್ವೇಷ ಉತ್ತೇಜಿಸುವುದು ಅಥವಾ ಪ್ರಚಾರ ಮಾಡುವುದನ್ನು ದ್ವೇಷಾಪರಾಧ ಎಂದು ಪರಿಗಣಿಸಲಾಗುತ್ತದೆ. ಮೊದಲ ಬಾರಿ ಇಂತಹ ಕೃತ್ಯದಲ್ಲಿ ಭಾಗಿಯಾದರೆ ಏಳುವರ್ಷಗಳವರೆಗೆ ಜೈಲು ಶಿಕ್ಷೆಗೆ ಗುರಿಪಡಿಸಬಹುದು. ಇದೇ ಅಪರಾಧವನ್ನು ಪುನರಾವರ್ತಿಸಿದರೆ ಎರಡು ವರ್ಷದಿಂದ 10 ವರ್ಷದವರೆಗೆ ವಿಸ್ತರಿಸ ಬಹುದಾದ ಜೈಲು ಮತ್ತು ₹ 1 ಲಕ್ಷ ದಂಡ ವಿಧಿಸಲು ಮಸೂದೆ ಅವಕಾಶ ಕಲ್ಪಿಸಿದೆ.
- ದ್ವೇಷಾಪರಾಧದಿಂದ ಆಗಿರುವ ಹಾನಿಯ ತೀವ್ರತೆ ಪರಿಗಣಿಸಿ ಸಂತ್ರಸ್ತರಿಗೆ ನ್ಯಾಯಾಲಯವು ಸೂಕ್ತ ಪರಿಹಾರ ಘೋಷಿಸ ಬಹುದು. ಇಂತಹ ಕೃತ್ಯವೂ ಜಾಮೀನುರಹಿತ ಅಪರಾಧ ಎಂದು ಪರಿಗಣಿಸಲ್ಪಡಲಿದೆ. ಇವು ಗಳನ್ನು ಜೆಎಂಎಫ್‌ಸಿ ನ್ಯಾಯಾಲಯ ವಿಚಾರಣೆ ನಡೆಸಲಿದೆ.

Dr. Rajkumar IAS/KAS Academy




# ಬಿಕ್ಕಟ್ಟಿನ ಕಾಲದ ಸ್ನೇಹಬಂಧ

**ಭಾರತ ಮತ್ತು ರಷ್ಯಾವು ಹಲವು ಬಿಕ್ಕಟ್ಟುಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಭಾರತಕ್ಕೆ ಭೇಟಿ ನೀಡಿದ್ದಾರೆ. ಎರಡೂ ದೇಶಗಳಿಗೆ ಈ ಭೇಟಿ ಮಹತ್ವದ್ದು. ಉಕ್ರೇನ್ ಯುದ್ಧದಿಂದ ಜಾಗತಿಕವಾಗಿ ರಷ್ಯಾ ಒಬ್ಬಂಟಿಯಾಗಿದ್ದರೆ, ರಷ್ಯಾದಿಂದ ತೈಲ ಖರೀದಿಸುತ್ತಿರುವುದು ಮತ್ತು ಅಮೆರಿಕದ ಸುಂಕ ಹೇರಿಕೆಯಿಂದ ಭಾರತವೂ ಹಲವು ಸಮಸ್ಯೆಗಳನ್ನು ಎದುರಿಸುತ್ತಿದೆ. ಇನ್ನೊಂದೆಡೆ, ಚೀನಾ ಪೈಪೋಟಿ ಮತ್ತು ಬೆದರಿಕೆ. ಇಂಥ ಸ್ಥಿತಿಯಲ್ಲಿ ಪುಟಿನ್–ಮೋದಿ ಮಾತುಕತೆಯು ಹಲವು ನಿರೀಕ್ಷೆಗಳನ್ನು ಹುಟ್ಟು ಹಾಕಿದೆ**

ಪ್ರಜಾವಾಣಿ ವಾರ್ತೆ

ಭಾರತ–ರಷ್ಯಾ ಸಂಬಂಧಕ್ಕೆ 78 ವರ್ಷಗಳ ಇತಿಹಾಸವಿದೆ. ಸುಮಾರು ಎಂಟು ದಶಕಗಳಿಂದಲೂ ಎರಡೂ ದೇಶಗಳ ನಡುವೆ ಹಲವು ಬಗೆಯ ಒಪ್ಪಂದಗಳು ಜಾರಿಯಲ್ಲಿವೆ. ಸೇನೆ, ಅಣ್ವಸ್ತ್ರ ಮತ್ತು ಖಗೋಳ ಕ್ಷೇತ್ರದಲ್ಲಿ ಎರಡೂ ದೇಶಗಳ ನಡುವೆ ಬಹಳ ಹಿಂದಿನಿಂದಲೂ ಕೊಡು–ಕೊಳ್ಳುವಿಕೆ ನಡೆಯುತ್ತಿದೆ. ಇವುಗಳ ಜತೆಗೆ ಮೂರು ವರ್ಷಗಳಿಂದ ವ್ಯಾಪಾರ ಸಂಬಂಧವು ಮತ್ತಷ್ಟು ವೃದ್ಧಿಯಾಗಿದೆ. ಈ ವೇಳೆ, ರಷ್ಯಾ–ಭಾರತದ ನಡುವಿನ 22ನೇ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಭಾರತಕ್ಕೆ ಬಂದಿದ್ದಾರೆ. ಉಕ್ರೇನ್ ಯುದ್ಧ ಆರಂಭವಾದ ನಂತರ ಪುಟಿನ್ ಅವರು ಭಾರತಕ್ಕೆ ಭೇಟಿ ನೀಡಿರುವುದು ಇದೇ ಮೊದಲು. ದ್ವಿಪಕ್ಷೀಯ ವ್ಯಾಪಾರವನ್ನು ಇನ್ನಷ್ಟು ವಿಸ್ತರಿಸುವುದು ಮತ್ತು ಜಾಗತಿಕ ರಾಜಕೀಯ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಎರಡೂ ದೇಶಗಳ ಸಂಬಂಧವನ್ನು ಗಟ್ಟಿಗೊಳಿಸುವುದು ಭೇಟಿಯ ಪ್ರಮುಖ ಉದ್ದೇಶವಾಗಿದೆ.

ಜಾಗತಿಕ ರಾಜಕಾರಣದಲ್ಲಿ ಏನೇ ಬದಲಾವಣೆಗಳು ಘಟಿಸಿದರೂ, ಭಾರತ–ರಷ್ಯಾ ಸ್ನೇಹಕ್ಕೆ ಚ್ಯುತಿ ಬಂದಿಲ್ಲ. ಪರಸ್ಪರ ವ್ಯಾಪಾರವೂ ಹೆಚ್ಚಾಗುತ್ತಿದೆ. ಭಾರತದ ಕಂಪನಿಗಳು ರಷ್ಯಾದ ತೈಲ, ಅನಿಲ, ಔಷಧ ಮತ್ತು ಐಟಿ ಕ್ಷೇತ್ರಗಳಲ್ಲಿ ಹೂಡಿಕೆ ಮಾಡಿದರೆ, ಅಲ್ಲಿನ ಕಂಪನಿಗಳು ಭಾರತದ ಇಂಧನ, ಮೂಲ ಸೌಕರ್ಯ, ಉತ್ಪಾದನಾ ವಲಯಗಳಲ್ಲಿ ಹೂಡಿಕೆ ಮಾಡಿವೆ.

ಅಮೆರಿಕದ ಅಧ್ಯಕ್ಷರಾಗಿ ಎರಡನೇ ಅವಧಿಗೆ ಆಯ್ಕೆಯಾದ ಡೊನಾಲ್ಡ್ ಟ್ರಂಪ್ ಅವರು ಶ್ವೇತಭವನಕ್ಕೆ ಅಡಿಯಿಡುವವರೆಗೆ ಭಾರತ–ರಷ್ಯಾದ ವ್ಯಾಪಾರಕ್ಕೆ ಯಾವ ತೊಡಕೂ ಇರಲಿಲ್ಲ. ಆದರೆ, ಟ್ರಂಪ್ ಅವರಿಗೆ ಭಾರತವು ರಿಯಾಯಿತಿ ದರದಲ್ಲಿ ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವುದು ಇಷ್ಟವಾಗಲಿಲ್ಲ. ಉಕ್ರೇನ್ ಯುದ್ಧವನ್ನು ಮುಂದಿಟ್ಟುಕೊಂಡು ತೈಲ ಖರೀದಿಸಬಾರದು ಎಂದು ಭಾರತದ ಮೇಲೆ ಒತ್ತಡ ಹಾಕಿದರು. ಅದು ಫಲಿಸದೇ ಇದ್ದಾಗ, ಸುಂಕ ಹೆಚ್ಚಳ, ನಿರ್ಬಂಧಗಳ ಮೊರೆ ಹೋದರು. ಈಗ ಭಾರತ ಖಾಸಗಿ ಕಂಪನಿಗಳು ರಷ್ಯಾದಿಂದ ಖರೀದಿಸುತ್ತಿದ್ದ ತೈಲದ ಪ್ರಮಾಣವನ್ನು ಕಡಿಮೆ ಮಾಡಿವೆ. ಇತರೆ ಕ್ಷೇತ್ರಗಳಲ್ಲಿ ವ್ಯಾಪಾರಕ್ಕೆ ಇರುವ ಅವಕಾಶಗಳ ಬಗ್ಗೆ ಮೋದಿ ಮತ್ತು ಪುಟಿನ್ ಮಾತುಕತೆ ನಡೆಸಲಿದ್ದಾರೆ ಎನ್ನಲಾಗುತ್ತಿದೆ.

**ಬದಲಾದ ಜಾಗತಿಕ ಸ್ಥಿತಿ:** ನಾಲ್ಕು ವರ್ಷಗಳ ಹಿಂದೆ ಪುಟಿನ್ ಭಾರತಕ್ಕೆ ಭೇಟಿ ನೀಡಿದ್ದರು. ಕೋವಿಡ್ ಕಾರಣದಿಂದ ಅಲ್ಪಾವಧಿಯಲ್ಲಿಯೇ ಹಿಂದಿರುಗಿದ್ದರು. ಅದಾದ ಮೂರು ತಿಂಗಳಲ್ಲೇ ಉಕ್ರೇನ್ ವಿರುದ್ಧ ರಷ್ಯಾ ಯುದ್ಧ ಆರಂಭಿಸಿತ್ತು. ಯುದ್ಧ ನಿಲ್ಲಿಸುವಂತೆ ಅಮೆರಿಕವು ರಷ್ಯಾ ಮೇಲೆ ಒತ್ತಡ ಹೇರುತ್ತಲೇ ಇದೆ. ಇದೇ ಕಾರಣಕ್ಕೆ ಅಮೆರಿಕವೂ ಸೇರಿ ಪಶ್ಚಿಮದ ಅನೇಕ ದೇಶಗಳು ರಷ್ಯಾ ಮೇಲೆ ನಿರ್ಬಂಧ ವಿಧಿಸಿವೆ. ಯುರೋಪ್‌ನಲ್ಲಿ ರಷ್ಯಾ ಒಬ್ಬಂಟಿಯಾಗಿದೆ.




ಯುದ್ಧ ನಿಲ್ಲಿಸುವಂತೆ ಪುಟಿನ್ ಅವರ ಮನವೊಲಿಸಲು ಭಾರತದ ಮೇಲೂ ಒತ್ತಡ ಹೇರಲಾಗುತ್ತಿದೆ. ಆದರೆ, ಭಾರತವು ಈ ವಿಚಾರದಲ್ಲಿ ಎಚ್ಚರಿಕೆಯಿಂದ ವರ್ತಿಸುತ್ತಿದೆ; ಅಮೆರಿಕ ಮತ್ತು ರಷ್ಯಾ ಎರಡೂ 'ಸೂಪರ್ ಪವರ್'ಗಳ ಜತೆಗಿನ ಸಂಬಂಧವನ್ನು ಜಾಗರೂಕತೆಯಿಂದ ನಿರ್ವಹಿಸುತ್ತಿದೆ. ಆದರೆ, ಟ್ರಂಪ್ ಎರಡನೇ ಬಾರಿಗೆ ಅಮೆರಿಕದ ಅಧ್ಯಕ್ಷರಾದ ನಂತರ ಭಾರತದ ಮೇಲೆ ಒತ್ತಡ ಹೆಚ್ಚಾಗಿದ್ದು, ಸಂದಿಗ್ಧ ಉಂಟಾಗಿದೆ. ಈ ದಿಸೆಯಲ್ಲಿ, ದ್ವಿಪಕ್ಷೀಯ ವ್ಯಾಪಾರವನ್ನು ಮುಂದಿನ ದಿನಗಳಲ್ಲಿ ಹೇಗೆ ಮುಂದುವರಿಸಬೇಕು ಎನ್ನುವುದರ ಬಗ್ಗೆ ಮೋದಿ–ಪುಟಿನ್ ಮಾತುಕತೆ ನಡೆಸಲಿದ್ದಾರೆ.

**ಭಾರತಕ್ಕೆ ಏಕೆ ಮುಖ್ಯ?:** ರಷ್ಯಾಕ್ಕೆ ಅಷ್ಟೇ ಅಲ್ಲ, ಈ ಭೇಟಿಯು ಭಾರತದ ದೃಷ್ಟಿಯಿಂದಲೂ ಮಹತ್ವ ಪಡೆದಿದೆ. ಅಮೆರಿಕದ ಒತ್ತಡಕ್ಕೆ ಮಣಿದು ಭಾರತ ತೈಲ ಆಮದು ಕಡಿಮೆ ಮಾಡಿರುವುದರಿಂದ ಮೋದಿ ಅವರಿಗೆ ಕೊಂಚ ಹಿನ್ನಡೆ ಆದಂತಾಗಿದೆ. ಕೆಲವು ಉದ್ಯಮಗಳಿಗೂ ಹೊಡೆತ ಬಿದ್ದಿದೆ. ಮುಖ್ಯವಾಗಿ, ಚೀನಾದ ಪೈಪೋಟಿ ಮತ್ತು ಬೆದರಿಕೆ ಇದ್ದೇ ಇದೆ. ಇಂಥ ಸಂದರ್ಭದಲ್ಲಿ ರಷ್ಯಾ ಜತೆ ಮಾತುಕತೆ ನಡೆಸುವ ಮೂಲಕ ಅಮೆರಿಕಕ್ಕೆ ದಿಟ್ಟ ಸಂದೇಶ ನೀಡಬಹುದು, ಜಾಗತಿಕ ಮಟ್ಟದಲ್ಲಿ ಸಂದೇಶ ರವಾನಿಸಬಹುದು ಎನ್ನುವ ಲೆಕ್ಕಾಚಾರವೂ ಮೋದಿ ಅವರಿಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಇದೇ ವೇಳೆ, ಭಾರತವು ಅಮೆರಿಕ ಮತ್ತು ಯುರೋಪ್ ಜತೆಗೂ ಉತ್ತಮ ಸಂಬಂಧ ಕಾಪಾಡಿಕೊಳ್ಳುವ ಎಚ್ಚರಿಕೆಯಿಂದಲೇ ಹೆಜ್ಜೆ ಹಾಕುವ ಅನಿವಾರ್ಯವೂ ಇದೆ.




ವ್ಲಾದಿಮಿರ್ ಪುಟಿನ್ ನರೇಂದ್ರ ಮೋದಿ

ಆಧಾರ: ಪಿಟಿಐ, ದಿ ಗಾರ್ಡಿಯನ್, ಬಿಬಿಸಿ, ಮಾಸ್ಕೊದಲ್ಲಿನ ಭಾರತದ ರಾಯಭಾರ ಕಚೇರಿಯ ವೆಬ್‌ಸೈಟ್, ಹಣಕಾಸು ಸಚಿವಾಲಯ

## ದ್ವಿಪಕ್ಷೀಯ ವ್ಯಾಪಾರ: ₹9 ಲಕ್ಷ ಕೋಟಿ ಗುರಿ

ಎರಡೂ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ವರ್ಷದಿಂದ ವರ್ಷಕ್ಕೆ ಏರಿಕೆ ಕಾಣುತ್ತಿದೆ. ಮೂರು ವರ್ಷಗಳಿಂದೀಚೆಗೆ ಭಾರತವು ರಷ್ಯಾದಿಂದ ಕಡಿಮೆ ಬೆಲೆಗೆ ಕಚ್ಚಾ ತೈಲ ಖರೀದಿಸಲು ಆರಂಭಿಸಿದ ಬಳಿಕ ದ್ವಿಪಕ್ಷೀಯ ವ್ಯಾಪಾರ ಗಣನೀಯವಾಗಿ ಹೆಚ್ಚಳವಾಗಿದೆ. 2021-22ರಲ್ಲಿ ದ್ವಿಪಕ್ಷೀಯ ವ್ಯಾಪಾರ ಮೌಲ್ಯ ₹98 ಸಾವಿರ ಕೋಟಿ ಇದ್ದುದು, 2022-23ರಲ್ಲಿ ಏಕಾಏಕಿ ₹3.99 ಲಕ್ಷ ಕೋಟಿಗೆ ತಲುಪಿತ್ತು. ಕಳೆದ ವರ್ಷ ಇದು ₹5.80 ಲಕ್ಷ ಕೋಟಿಗೆ ಏರಿಕೆ ಕಂಡಿದೆ. 2030ರ ವೇಳೆಗೆ ಇದನ್ನು ₹9 ಲಕ್ಷ ಕೋಟಿಗೆ (10,000 ಕೋಟಿ ಡಾಲರ್) ಹೆಚ್ಚಿಸಲು ಎರಡೂ ರಾಷ್ಟ್ರಗಳು ಗುರಿ ಹಾಕಿಕೊಂಡಿವೆ.

**ವ್ಯಾಪಾರ ಕೊರತೆ:** ಭಾರತವು ರಷ್ಯಾದೊಂದಿಗೆ ಭಾರಿ ಪ್ರಮಾಣದ ವ್ಯಾಪಾರ ಕೊರತೆ ಹೊಂದಿದೆ. ಭಾರತವು ರಷ್ಯಾಕ್ಕೆ ಕಡಿಮೆ ಪ್ರಮಾಣದಲ್ಲಿ ರಫ್ತು ಮಾಡಿದರೆ, ಅಲ್ಲಿಂದ ಹೆಚ್ಚಿನ ಆಮದು ಮಾಡಿಕೊಳ್ಳುತ್ತದೆ. ಅದರಲ್ಲಿ ಕಚ್ಚಾ ತೈಲದ್ದೇ ಸಿಂಹಪಾಲು. 2024-25ರಲ್ಲಿ ಭಾರತವು ₹41,243 ಕೋಟಿ ಮೌಲ್ಯದ ಸರಕುಗಳನ್ನು ರಫ್ತು ಮಾಡಿದ್ದರೆ, ₹5.39 ಲಕ್ಷ ಕೋಟಿ ಮೌಲ್ಯದ ಸರಕುಗಳನ್ನು ಆಮದು ಮಾಡಿಕೊಂಡಿದೆ. ಕಳೆದ ವರ್ಷದ ವ್ಯಾಪಾರ ಕೊರತೆ ಮೌಲ್ಯ ₹4.98 ಲಕ್ಷ ಕೋಟಿ.




## ರಕ್ಷಣೆ: ದೊಡ್ಡ ಪಾಲುದಾರ






ಭಾರತ ಮತ್ತು ರಷ್ಯಾ ನಡುವಿನ ದ್ವಿಪಕ್ಷೀಯ ಸಂಬಂಧ ಹೆಚ್ಚು ಸದೃಢವಾಗಿರುವುದು ರಕ್ಷಣಾ ಪಾಲುದಾರಿಕೆಯಿಂದ. ಸೋವಿಯತ್ ಒಕ್ಕೂಟದ ಕಾಲದಿಂದಲೂ ಈ ಕ್ಷೇತ್ರದಲ್ಲಿ ಉಭಯ ರಾಷ್ಟ್ರಗಳು ಪಾಲುದಾರಿಕೆ ಹೊಂದಿವೆ. ಈಗ ಭಾರತ ಅಮೆರಿಕ, ಫ್ರಾನ್ಸ್ ಸೇರಿದಂತೆ ಬೇರೆ ಬೇರೆ ರಾಷ್ಟ್ರಗಳೊಂದಿಗೆ ರಕ್ಷಣಾ ಒಪ್ಪಂದಗಳನ್ನು ಮಾಡಿಕೊಂಡಿದ್ದರೂ ರಕ್ಷಣೆ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ರಷ್ಯಾವು ಈಗಲೂ ಬಹುದೊಡ್ಡ ಪಾಲುದಾರ ರಾಷ್ಟ್ರವಾಗಿದೆ.

'ಆಪರೇಷನ್ ಸಿಂಧೂರ'ದ ನಂತರ ನಡೆದ ಸಂಘರ್ಷದಲ್ಲಿ ಪಾಕಿಸ್ತಾನವು ಭಾರತದ ಮುಂದೆ ಮಂಡಿಯೂರುವಂತೆ ಮಾಡಿದ್ದು, ಬ್ರಹ್ಮೋಸ್ ಕ್ಷಿಪಣಿ ಮತ್ತು ಎಸ್–400 ವಾಯು ರಕ್ಷಣಾ ವ್ಯವಸ್ಥೆ ಎಂದು ಹೇಳಲಾಗಿದೆ. ಇವೆರಡಲ್ಲೂ ರಷ್ಯಾದ ಕೊಡುಗೆ ಇದೆ. ನಿಖರ ದಾಳಿಯ ಮೂಲಕ ಜಗತ್ತಿಗೆ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸಿದ ಬ್ರಹ್ಮೋಸ್ ಕ್ಷಿಪಣಿ ವ್ಯವಸ್ಥೆಯನ್ನು ಭಾರತ ಮತ್ತು ರಷ್ಯಾವು ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಅದೇ ರೀತಿ, ಪಾಕಿಸ್ತಾನದ ಕ್ಷಿಪಣಿ, ಡ್ರೋನ್ ದಾಳಿಗಳನ್ನು ತಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದ ಎಸ್–400 ವ್ಯವಸ್ಥೆ ರಷ್ಯಾ ಸೃಷ್ಟಿ. ಸುಖೋಯ್ ಯುದ್ಧವಿಮಾನಗಳು (ಎಸ್‌ಯು–30, ಎಸ್‌ಯು–30ಎಂಕೆಐ) ಸೇರಿದಂತೆ ರಷ್ಯಾ ನಿರ್ಮಿತ ಹಲವು ಯುದ್ಧ ಸಲಕರಣೆಗಳು ಭಾರತದ ಸೇನಾ ಬತ್ತಳಿಕೆಯಲ್ಲಿವೆ.

ಅಮೆರಿಕ, ಫ್ರಾನ್ಸ್ ಹಾಗೂ ಇತರ ದೇಶಗಳು ರಕ್ಷಣಾ ಸಾಮಗ್ರಿಗಳನ್ನು ಮಾತ್ರ ನೀಡುತ್ತವೆಯೇ ವಿನಾ, ಅವುಗಳ ತಂತ್ರಜ್ಞಾನವನ್ನು ವರ್ಗಾವಣೆ ಮಾಡುವುದಿಲ್ಲ. ಆದರೆ, ರಷ್ಯಾ ಉಪಕರಣಗಳ ಜೊತೆಗೆ, ಅವುಗಳ ತಂತ್ರಜ್ಞಾನಗಳನ್ನೂ ಭಾರತಕ್ಕೆ ನೀಡುತ್ತಾ ಬಂದಿದೆ. ಟಿ–90 ಟ್ಯಾಂಕ್‌ಗಳು, ಎಸ್–30ಎಂಕೆಐ ಯುದ್ಧವಿಮಾನಗಳು ಸೇರಿದಂತೆ ಹಲವು ಸೇನಾ ಸಲಕರಣೆಗಳನ್ನು ಭಾರತದಲ್ಲೇ ಜೋಡಿಸಲಾಗುತ್ತಿದೆ ಇಲ್ಲವೇ ತಯಾರಿಸಲಾಗುತ್ತಿದೆ. ರಷ್ಯಾದ ಅತ್ಯಾಧುನಿಕ ಯುದ್ಧವಿಮಾನವಾದ ಎಸ್‌ಯು–57 ತಂತ್ರಜ್ಞಾನವನ್ನು ಭಾರತಕ್ಕೆ ವರ್ಗಾಯಿಸಿ, ಇಲ್ಲೇ ಅದನ್ನು ತಯಾರಿಸುವ ಮಾತುಗಳು ಈಗ ಕೇಳಿಬರುತ್ತಿವೆ. ಶಸ್ತ್ರಾಸ್ತ್ರ ಮತ್ತು ಸೇನಾ ಸಲಕರಣೆಗಳಿಗೆ ಸಂಬಂಧಿಸಿದಂತೆ ಜಂಟಿ ಸಂಶೋಧನೆ, ಅಭಿವೃದ್ಧಿ, ತಯಾರಿಕೆ ಮತ್ತು ಮಾರಾಟದ ನಂತರದ ಸೇವಾ ನೆರವಿಗೆ ಸಂಬಂಧಿಸಿದಂತೆ ಎರಡೂ ರಾಷ್ಟ್ರಗಳು 2021–2031ರ ಅವಧಿಗೆ ಸೇನಾ–ತಂತ್ರಜ್ಞಾನ ಸಹಕಾರ ಒಪ್ಪಂದಕ್ಕೆ 2021ರ ಡಿ.6ರಂದು ಸಹಿ ಹಾಕಿವೆ.

## ❖ ಹಾನಿಕಾರಕ ಸರಕುಗಳ ಮೇಲೆ ಸೆಸ್

**ಸಂದರ್ಭ: ಆರೋಗ್ಯ, ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ ಮಂಡನೆ । ರಾಜ್ಯಗಳ ಜತೆ ಆದಾಯ ಹಂಚಿಕೆ: ಆರೋಗ್ಯಕ್ಕೆ ಹಾನಿಕಾರಕ ಎಂದು ಪರಿಗಣಿಸಲಾಗಿರುವ ಪಾನ್ ಮಸಾಲಾದಂತಹ ಸರಕುಗಳ ಮೇಲೆ ಸೆಸ್ ವಿಧಿಸಲು ಅವಕಾಶ ನೀಡುವ 'ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ-2025' ಅನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಮಂಡಿಸಿದರು.**

- 'ಅಗತ್ಯ ವಸ್ತುಗಳ ಮೇಲೆ ಈ ಸೆಸ್ ಹೇರುವುದಿಲ್ಲ, ಇದರಿಂದ ಬರುವ ಆದಾಯವನ್ನು ಆರೋಗ್ಯ ಯೋಜನೆ ಗಳಿಗೆ ಖರ್ಚು ಮಾಡಲು ರಾಜ್ಯ ಗಳೊಂದಿಗೆ ಹಂಚಿಕೊಳ್ಳಲಾಗುವುದು' ಎಂದು ಮಸೂದೆ ಮಂಡನೆ ವೇಳೆ ಅವರು ತಿಳಿಸಿದರು.
- ಎರಡು ಪ್ರಮುಖ ಕ್ಷೇತ್ರಗಳಾದ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಗಾಗಿ ಸಂಪನ್ಮೂಲ ಒದಗಿಸುವ ಮಹತ್ವದ ಉದ್ದೇಶವನ್ನು ಈ ಮಸೂದೆ ಹೊಂದಿದೆ ಎಂದು ಅವರು ಹೇಳಿದರು.
- 'ಈ ಸೆಸ್ ಅನ್ನು ಯಾವುದೇ ಅಗತ್ಯ ವಸ್ತುಗಳ ಮೇಲೆ ವಿಧಿಸುವುದಿಲ್ಲ. ಆರೋಗ್ಯಕ್ಕೆ ಅಪಾಯಕಾರಿ ಎಂಬಂತಹ ಸರಕುಗಳ ಮೇಲೆ ಮಾತ್ರ ವಿಧಿಸ ಲಾಗುವುದು. ಜನರು ಇಂಥ ಅನಾರೋಗ್ಯಕಾರಿ ಸರಕುಗಳನ್ನು ಬಳಸದಂತೆ ತಡೆಯುವ ಉದ್ದೇಶವನ್ನೂ ಈ ಮಸೂದೆ ಹೊಂದಿದೆ' ಎಂದರು.
- ಮಸೂದೆಯಲ್ಲಿ, ಪಾನ್ ಮಸಾಲಾ ಉತ್ಪಾದನಾ ಕಾರ್ಖಾನೆಗಳಲ್ಲಿನ ಯಂತ್ರಗಳ ಉತ್ಪಾದನಾ ಸಾಮರ್ಥ್ಯದ ಮೇಲೆಯೂ ಸೆಸ್ ವಿಧಿಸಲು ಪ್ರಸ್ತಾಪಿಸ ಲಾಗಿದೆ ಎಂದು ಹೇಳಿದರು.
- 'ಜಿಎಸ್‌ಟಿ ಅನ್ನು ಬಳಕೆ ಹಂತದಲ್ಲಿ ವಿಧಿಸಲಾಗುತ್ತದೆ ಮತ್ತು ಪಾನ್ ಮಸಾಲಾ ಮೇಲೆ ಅಬಕಾರಿ ಸುಂಕ ವಿಧಿಸಲಾಗುತ್ತಿಲ್ಲ. ಆದ್ದರಿಂದ ಈ ಸೆಸ್ ಅನ್ನು ಪಾನ್ ಮಸಾಲಾ ಘಟಕಗಳ ಉತ್ಪಾದನಾ ಸಾಮರ್ಥ್ಯದ ಆಧಾರ ಮೇಲೆ ವಿಧಿಸಲಾಗುತ್ತದೆ' ಎಂದರು.
- 'ಈ ಸೆಸ್‌ನಿಂದ ಬರುವ ಆದಾಯದ ಒಂದು ಭಾಗವನ್ನು ಆರೋಗ್ಯ ಜಾಗೃತಿ ಅಥವಾ ಇತರ ಆರೋಗ್ಯ ಸಂಬಂಧಿ ಯೋಜನೆಗಳ ಮೂಲಕ ರಾಜ್ಯಗಳ ಜತೆಗೆ ಹಂಚಿಕೊಳ್ಳಲಾಗುವುದು' ಎಂದರು.
- ಪ್ರಸ್ತುತ ಪಾನ್ ಮಸಾಲಾ, ತಂಬಾಕು ಇತರ ಸಂಬಂಧಿತ ಉತ್ಪನ್ನಗಳ ಮೇಲೆ ಶೇ 28ರಷ್ಟು ಜಿಎಸ್‌ಟಿ ಮತ್ತು ವಿವಿಧ ದರದಲ್ಲಿ ಪರಿಹಾರ ಸೆಸ್ ವಿಧಿಸಲಾಗುತ್ತಿದೆ. ಪರಿಹಾರ ಸೆಸ್ ಲೆವಿ ಅಂತ್ಯಗೊಂಡಂತೆ, ಜಿಎಸ್‌ಟಿ ದರವು ಶೇ 40ಕ್ಕೆ ಏರುತ್ತದೆ. ಹೆಚ್ಚುವರಿಯಾಗಿ ತಂಬಾಕಿನ ಮೇಲೆ ಅಬಕಾರಿ ಸುಂಕವನ್ನು ಮತ್ತು ಪಾನ್ ಮಸಾಲಾ ಮೇಲೆ ಆರೋಗ್ಯ ಮತ್ತು ರಾಷ್ಟ್ರೀಯ ಸೆಸ್ ವಿಧಿಸಲಾಗುತ್ತದೆ ಎಂದು ಅವರು ಹೇಳಿದರು.

## ❖ ಜಿಡಿಪಿ ಬೆಳವಣಿಗೆ ಅಂದಾಜು ಪರಿಷ್ಕರಿಸಿದ ಫಿಚ್

**ಸಂದರ್ಭ: ಪ್ರಸಕ್ತ ಹಣಕಾಸು ವರ್ಷದಲ್ಲಿ ದೇಶದ ಅರ್ಥ ವ್ಯವಸ್ಥೆಯ ಬೆಳವಣಿಗೆ ದರವು ಶೇ 7.4ರಷ್ಟು ಆಗಬಹುದು ಎಂದು ಫಿಚ್ ರೇಟಿಂಗ್ಸ್ ಸಂಸ್ಥೆಯು ಅಂದಾಜನ್ನು ಹೆಚ್ಚಿಸಿದೆ.**

- ಜಿಎಸ್‌ಟಿ ದರ ಪರಿಷ್ಕರಣೆಯ ಪರಿಣಾಮವಾಗಿ ಗ್ರಾಹಕರು ಹೆಚ್ಚು ವೆಚ್ಚ ಮಾಡುತ್ತಿರುವುದು ಮುನ್ನೋಟದ ಪರಿಷ್ಕರಣೆಗೆ ಒಂದು ಕಾರಣ. ಫಿಚ್ ಸಂಸ್ಥೆಯು ಈ ಮೊದಲು ಜಿಡಿಪಿ ಬೆಳವಣಿಗೆ ದರವು ಶೇ 6.9ರಷ್ಟು ಇರಲಿದೆ ಎಂದು ಅಂದಾಜಿಸಿತ್ತು.
- ಹಣದುಬ್ಬರ ಕಡಿಮೆ ಆಗುತ್ತಿರುವ ಕಾರಣದಿಂದಾಗಿ ಆರ್‌ಬಿಐಗೆ ರೆಪೊ ದರವನ್ನು ಡಿಸೆಂಬರ್‌ನಲ್ಲಿ ಇನ್ನಷ್ಟು ತಗ್ಗಿಸಲು ಅವಕಾಶ ಇದೆ ಎಂದು ಫಿಚ್ ಹೇಳಿದೆ.

## ❖ ಪುಟಿನ್ ಸ್ವಾಗತಿಸಿದ ಪ್ರಧಾನಿ ಮೋದಿ

**ಸಂದರ್ಭ: ನನ್ನ ಸ್ನೇಹಿತ ಮೋದಿ ಅವರನ್ನು ಭೇಟಿಯಾಗಲು ತುಂಬಾ ಸಂತಸವಾಗುತ್ತಿದೆ. ಭಾರತದೊಂದಿಗಿನ ನಮ್ಮ ಸಹಕಾರದ ವ್ಯಾಪ್ತಿಯು ತುಂಬಾ ದೊಡ್ಡದಾಗಿದೆವ್ಲಾದಿಮಿರ್ ಪುಟಿನ್, ರಷ್ಯಾ ಅಧ್ಯಕ್ಷ.**

- ರಷ್ಯಾದಿಂದ ಯುದ್ಧ ವಿಮಾನಗಳು ಮತ್ತು ವಾಯು ರಕ್ಷಣಾ ವ್ಯವಸ್ಥೆ ಖರೀದಿ ಸಂಬಂಧ ಒಪ್ಪಂದ ಏರ್ಪಡುವ ಸಾಧ್ಯತೆಯಿದೆ.
- ರಕ್ಷಣಾ ಕ್ಷೇತ್ರದಲ್ಲಿನ ಸಹಕಾರ ಹೆಚ್ಚಿಸುವುದು, ಭಾರತ-ರಷ್ಯಾ ವ್ಯಾಪಾರ ಸಂಬಂಧವನ್ನು ಬಾಹ್ಯ ಒತ್ತಡದಿಂದ ತಡೆಯುವುದು ಮತ್ತು ಸಣ್ಣ ಮಾಡ್ಯುಲರ್ ರಿಯಾಕ್ಟರ್‌ಗಳ ನಿರ್ಮಾಣದಲ್ಲಿ ಸಹಕಾರಕ್ಕೆ ಹೊಸ ಅವಕಾಶಗಳನ್ನು ಅನ್ವೇಷಿಸುವುದು ಉಭಯ ನಾಯಕರ ನಡುವಿನ ಶೃಂಗಸಭೆಯ ಕೇಂದ್ರಬಿಂದುವಾಗಿದೆ. ಮಾತುಕತೆಯ ಫಲಿತಾಂಶವನ್ನು ಪಾಶ್ಚಿಮಾತ್ಯ ದೇಶಗಳು ಕೂಡಾ ಬಹಳ ಕುತೂಹಲದಿಂದ ಎದುರು ನೋಡುತ್ತಿವೆ.
- ಭಾರತ-ಅಮೆರಿಕ ಸಂಬಂಧವು ಹದಗೆಟ್ಟಿರುವ ಹಿನ್ನೆಲೆಯಲ್ಲಿ ರಷ್ಯಾ ಅಧ್ಯಕ್ಷರ ಭಾರತ ಭೇಟಿಯು ಹೆಚ್ಚಿನ ಮಹತ್ವ ಪಡೆದುಕೊಂಡಿದೆ. ಶೃಂಗಸಭೆಯ ನಂತರ, ಎರಡೂ ಕಡೆಯವರು ವ್ಯಾಪಾರ ಕ್ಷೇತ್ರ ಸೇರಿದಂತೆ ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ.
- ಪ್ರಧಾನಿ ಮೋದಿ ಅವರು ರಾತ್ರಿ ಆಯೋಜಿಸಿದ ಔತಣಕೂಟದಲ್ಲಿ ಪುಟಿನ್ ಪಾಲ್ಗೊಂಡರು. ಶೃಂಗಸಭೆಯ ಆರಂಭಕ್ಕೂ ಮೊದಲು ಶುಕ್ರವಾರ ಬೆಳಿಗ್ಗೆ ರಷ್ಯಾ ಅಧ್ಯಕ್ಷರಿಗೆ ರಾಷ್ಟ್ರಪತಿ ಭವನದಲ್ಲಿ ಸ್ವಾಗತ ನೀಡಲಾಗುವುದು. ಶೃಂಗಸಭೆ ನಡೆಯಲಿರುವ ಹೈದರಾಬಾದ್ ಹೌಸ್‌ನಲ್ಲಿ ಮೋದಿ ಅವರು ಪುಟಿನ್ ಮತ್ತು ಅವರ ನಿಯೋಗಕ್ಕೆ ಭೋಜನ ಕೂಟ ಆಯೋಜಿಸಲಿದ್ದಾರೆ. ಪುಟಿನ್ ಅವರು ಬೆಳಿಗ್ಗೆ ರಾಜ್‌ಘಾಟ್‌ಗೂ ಭೇಟಿ ನೀಡುವರು ಎಂದು ಮೂಲಗಳು ತಿಳಿಸಿವೆ.

**<u>ಪ್ರಮುಖ ಅಂಶಗಳು</u>**

।ವಿಮಾನ ನಿಲ್ದಾಣದಲ್ಲಿ ರಷ್ಯಾ ಅಧ್ಯಕ್ಷರನ್ನು ಬರಮಾಡಿಕೊಂಡ ಪ್ರಧಾನಿ ಮೋದಿ

।ಭಾರತ-ರಷ್ಯಾ 23ನೇ ಶೃಂಗಸಭೆ ಮಾತುಕತೆ ಇಂದು

।ಪುಟಿನ್ ರಾತ್ರಿ 9ಕ್ಕೆ ಭಾರತದಿಂದ ತೆರಳುವ ಸಾಧ್ಯತೆ

।ರಷ್ಯಾ ಅಧ್ಯಕ್ಷರು 2021ರಲ್ಲಿ ಕೊನೆಯದಾಗಿ ಭಾರತಕ್ಕೆ ಭೇಟಿ ನೀಡಿದ್ದರು

।ಪ್ರಧಾನಿ ಮೋದಿ ಅವರು ಕಳೆದ ವರ್ಷ ಜುಲೈನಲ್ಲಿ ದ್ವಿಪಕ್ಷೀಯ ಶೃಂಗದಲ್ಲಿ ಪಾಲ್ಗೊಳ್ಳಲು ರಷ್ಯಾಕ್ಕೆ ಭೇಟಿ ನೀಡಿದ್ದರು

## ❖ ಹನೂರು: ಚಿನ್ನದ ನಿಕ್ಷೇಪ ಪತ್ತೆ?

**ಸಂದರ್ಭ: ಜಿಯಾಲಜಿಕಲ್ ಸರ್ವೆ ಆಫ್ ಇಂಡಿಯಾ ಅಧಿಕಾರಿಗಳ ತಂಡ ಈಚೆಗೆ ಜಿಲ್ಲೆಯಲ್ಲಿ ಖನಿಜ ನಿಕ್ಷೇಪಗಳ ಲಭ್ಯತೆ ಕುರಿತು ನಡೆಸಿದ ಪ್ರಾಥಮಿಕ ಹಂತದ ಸರ್ವೇಯಲ್ಲಿ, ಹನೂರು ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಚಿನ್ನದ ನಿಕ್ಷೇಪ ಲಭ್ಯವಾಗಬಹುದು ಎಂಬ ಸುಳಿವು ದೊರಕಿದೆ.**

- ‘ತಾಲ್ಲೂಕಿನ ಅಜ್ಜೀಪುರ, ಕೌದಳ್ಳಿ, ಆಲತ್ತೂರು ಸೇರಿ ಹಲವು ಗ್ರಾಮಗಳಲ್ಲಿ ಚಿನ್ನ ಸಹಿತ ಹಲವು ಉಪಯುಕ್ತ ಖನಿಜಗಳು ಸಿಗುವ ಸಾಧ್ಯತೆ’ ಕುರಿತು ಹೆಚ್ಚಿನ ಸಂಶೋಧನೆ ನಡೆಸಲು ಅಧಿಕಾರಿಗಳು ನಿರ್ಧರಿಸಿದ್ದಾರೆ.
- ‘6 ತಿಂಗಳು ಸಂಶೋಧನೆ ನಡೆಯಲಿದ್ದು, ಆ ಅವಧಿಯಲ್ಲಿ ಚಿನ್ನದ ಲಭ್ಯತೆಯ ಬಗ್ಗೆ ಖಚಿತವಾದರೆ ಮಾತ್ರ ಮುಂದಿನ ಪ್ರಕ್ರಿಯೆಗಳು ನಡೆಯಲಿವೆ’ ಎಂದು ತಿಳಿಸಿದರು.

Dr. Rajkumar IAS/KAS Academy

## ❖ ವಾಣಿಜ್ಯ ತೆರಿಗೆ ಗುರಿ: ಶೇ 10ರಷ್ಟು ಕೊರತೆ: ಜಿಎಸ್‌ಟಿ ದರ ಬದಲಾವಣೆ: ಬೆಳವಣಿಗೆ ದರ ಶೇ 3ಕ್ಕೆ ಇಳಿಕೆ

**ಸಂದರ್ಭ: ವಾಣಿಜ್ಯ ತೆರಿಗೆ ಸಂಗ್ರಹಕ್ಕೆ ನೀಡಲಾಗಿದ್ದ ಗುರಿಯಲ್ಲಿ ಶೇ 10ರಷ್ಟು ಕೊರತೆಯಾಗಿದ್ದು, ಆರ್ಥಿಕ ವರ್ಷದ ಅಂತ್ಯದ ವೇಳೆಗೆ ಶೇ 100ರಷ್ಟು ಗುರಿಯನ್ನು ಸಾಧಿಸಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾಕೀತು ಮಾಡಿದ್ದಾರೆ.**

- ವಾಣಿಜ್ಯ ತೆರಿಗೆ ಇಲಾಖೆ ಮತ್ತು ಅಬಕಾರಿ ಇಲಾಖೆ ಅಧಿಕಾರಿಗಳ ಜತೆಗೆ ವಿಧಾನಸೌಧದಲ್ಲಿ ಶುಕ್ರವಾರ ಅವರು ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಅಧಿಕಾರಿಗಳು ನೀಡಿದ ಅಂಕಿ-ಅಂಶಗಳನ್ನು ಪರಿಶೀಲಿಸಿದ ಅವರು, ಅಸಮಾಧಾನ ವ್ಯಕ್ತಪಡಿಸಿದರು ಎಂದು ಗೊತ್ತಾಗಿದೆ.
- 2025–26ನೇ ಆರ್ಥಿಕ ವರ್ಷದಲ್ಲಿ ₹1.20 ಲಕ್ಷ ಕೋಟಿ ವಾಣಿಜ್ಯ ತೆರಿಗೆ ಸಂಗ್ರಹ ಗುರಿ ನೀಡಲಾಗಿದೆ. ನವೆಂಬರ್ ಅಂತ್ಯದ ವೇಳೆಗೆ ₹80,000 ಕೋಟಿ ಸಂಗ್ರಹಿಸಬೇಕಿತ್ತು. ಆದರೆ ನವೆಂಬರ್ ಅಂತ್ಯದವರೆಗೆ ₹72,131 ಕೋಟಿ ಮಾತ್ರ ಸಂಗ್ರಹವಾಗಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು. ಈ ಪ್ರಕಾರ, ನಿಗದಿತ ಗುರಿಯಲ್ಲಿ ₹7,869 ಕೋಟಿ ಕೊರತೆಯಾಗಿದೆ.
- ಏಪ್ರಿಲ್‌ನಿಂದ ಆಗಸ್ಟ್‌ವರೆಗೆ ವಾಣಿಜ್ಯ ತೆರಿಗೆ ಸಂಗ್ರಹದಲ್ಲಿ ಶೇ 12ರಷ್ಟು ಪ್ರಗತಿ ಸಾಧಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರವು ಜಿಎಸ್‌ಟಿ ದರಗಳಲ್ಲಿ ಬದಲಾವಣೆ ಮಾಡಿದ್ದರಿಂದ ನಂತರದ ತಿಂಗಳುಗಳಲ್ಲಿ ತೆರಿಗೆ ಸಂಗ್ರಹ ಇಳಿಮುಖವಾಗಿದೆ. ಶೇ 12ರಷ್ಟು ಇದ್ದ ಬೆಳವಣಿಗೆ ದರವು ಸೆಪ್ಟೆಂಬರ್‌ನಿಂದ ನವೆಂಬರ್ ಅವಧಿಯಲ್ಲಿ ಶೇ 3ರಷ್ಟಕ್ಕೆ ಕುಸಿದಿದೆ. ಪರಿಣಾಮವಾಗಿ ಒಟ್ಟು ತೆರಿಗೆ ಸಂಗ್ರಹ ಗುರಿಯಲ್ಲಿ ಶೇ 10ರಷ್ಟು ಕೊರತೆಯಾಗಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ವಿವರಣೆ ನೀಡಿದ್ದಾರೆ.
- ತೆರಿಗೆ ವಂಚನೆ ಪ್ರಕರಣಗಳು ಮತ್ತು ನಕಲಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ (ಐಟಿಸಿ) ಕ್ಲೇಮುಗಳ ಕಾರಣ ದಿಂದ ತೆರಿಗೆ ಸಂಗ್ರಹ ಕೊರತೆ ಯಾಗಿದೆ. ಇದನ್ನು ತಡೆಯಲು ತಪಾಸಣಾ ಕಾರ್ಯಾಚರಣೆಗಳನ್ನು ನಡೆಸ ಲಾಗುತ್ತಿದೆ. ಈ ಅವಧಿಯಲ್ಲಿ ಒಟ್ಟು 13,000 ತಪಾಸಣೆಗಳನ್ನು ನಡೆಸಿ, ₹3,183 ಕೋಟಿ ತೆರಿಗೆ ಸಂಗ್ರಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.
- ತೆರಿಗೆ ವಂಚನೆಯ ಮಾರ್ಗಗಳನ್ನು ಪತ್ತೆ ಮಾಡಿ, ಇದನ್ನು ತಡೆಯಲು ತಂತ್ರಜ್ಞಾನ ಬಳಕೆ ಮಾಡಿಕೊಳ್ಳಿ. ನಕಲಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಕ್ಲೇಮುಗಳನ್ನು ಮಾಡುತ್ತಿರುವವರ ವಿರುದ್ಧ ಅಪರಾಧ ಪ್ರಕರಣ ದಾಖಲಿಸಿ. ತೆರಿಗೆ ವಂಚನೆಯನ್ನು ಗರಿಷ್ಠ ಪ್ರಮಾಣದಲ್ಲಿ ತಡೆಗಟ್ಟಿ ಎಂದು ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<u>ಅಬಕಾರಿ ತೆರಿಗೆ: ಶೇ 61ರಷ್ಟು ಸಾಧನೆ</u>**

- 2025–26ನೇ ಸಾಲಿನಲ್ಲಿ ಅಬಕಾರಿ ಇಲಾಖೆಗೆ ನೀಡಲಾಗಿದ್ದ ತೆರಿಗೆ ಸಂಗ್ರಹ ಗುರಿಯಲ್ಲಿ, ಈವರೆಗೆ ಶೇ 61ರಷ್ಟು ಮಾತ್ರ ಪ್ರಗತಿ ಸಾಧಿಸಲಾಗಿದೆ. ಹಿಂದಿನ ಆರ್ಥಿಕ ವರ್ಷಕ್ಕೆ ಹೋಲಿಸಿದರೆ, ಶೇ 10.46ರಷ್ಟು ಬೆಳವಣಿಗೆ ದಾಖಲಾಗಿದೆ.
- ಈ ಸಾಲಿನಲ್ಲಿ ಒಟ್ಟು ₹43,000 ಕೋಟಿ ಅಬಕಾರಿ ತೆರಿಗೆ ಸಂಗ್ರಹ ಗುರಿ ನೀಡಲಾಗಿತ್ತು. ಆದರೆ ನವೆಂಬರ್ ಅಂತ್ಯದವರೆಗೆ ₹26,215 ಕೋಟಿ ಮಾತ್ರ ಸಂಗ್ರಹವಾಗಿದೆ. ಆರ್ಥಿಕ ವರ್ಷದ ಅಂತ್ಯದ ವೇಳೆಗೆ ಶೇ100 ರಷ್ಟು ಗುರಿ ಸಾಧಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಿ ಎಂದು ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

## ❖ ₹8 ಲಕ್ಷ ದಾಟಿದರೆ ಮೀಸಲು ಅಲಭ್ಯ: ಆದಾಯ ಮಿತಿ ದಾಟಿದ್ದರೆ ಕೆನೆ ಪದರ ವ್ಯಾಪ್ತಿಗೆ: ಸರ್ಕಾರದ ಮೇಲ್ಮನವಿ ಮಾನ್ಯ

**ಸಂದರ್ಭ: 'ಪ್ರವರ್ಗ 2-ಎ (ಹಿಂದುಳಿದ ವರ್ಗ) ಅಡಿಯಲ್ಲಿ ಪೋಷಕರ ವಾರ್ಷಿಕ ಆದಾಯ ನಿಗದಿತ ಮಿತಿಯನ್ನು ದಾಟಿದ್ದರೆ ಅಭ್ಯರ್ಥಿಯು ಮೀಸಲಾತಿ ಪತ್ರ ಪಡೆ ಯಲು ಅನರ್ಹರಾಗುತ್ತಾರೆ' ಎಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.**

- 'ಪ್ರವರ್ಗ 2-ಎ (ಹಿಂದುಳಿದ ವರ್ಗ) ಅಡಿಯಲ್ಲಿ ಪೋಷಕರ ವಾರ್ಷಿಕ ಆದಾಯ ನಿಗದಿತ ಮಿತಿಯನ್ನು ದಾಟಿದ್ದರೆ ಅಭ್ಯರ್ಥಿಯು ಕೆನೆ ಪದರ ವ್ಯಾಪ್ತಿಗೆ ಒಳಪಡುತ್ತಾರೆ. ಹಾಗಾಗಿ, ಅವರು ಮೀಸಲಾತಿ ಪತ್ರ ಪಡೆಯಲು ಅನರ್ಹರಾಗುತ್ತಾರೆ' ಎಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಾತಿ, ಆದಾಯ ಪರಿಶೀಲನಾ ಮೇಲ್ಮನವಿ ಪ್ರಾಧಿಕಾರ ಮತ್ತು ಧಾರವಾಡ ಜಿಲ್ಲಾ ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ ಅಧ್ಯಕ್ಷರು ಸಲ್ಲಿಸಿದ್ದ ರಿಟ್ ಮೇಲ್ಮನವಿ ಮತ್ತು ನ್ಯಾಯಾಂಗ ನಿಂದನಾ ಅರ್ಜಿಗಳ (ಡಬ್ಲ್ಯು.ಎ 301/2025 ಜಿ-ಎಂ ಸಿಸಿ ಮತ್ತು ಸಿಸಿಪಿ 74/2025) ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಈ ಕುರಿತಂತೆ ಆದೇಶಿಸಿದೆ.
- ಸರ್ಕಾರದ ಪರ ವಾದ ಮಂಡಿಸಿದ್ದ ನಮಿತಾ ಮಹೇಶ್ ಅವರ ವಾದವನ್ನು ಮನ್ನಿಸಿರುವ ನ್ಯಾಯಪೀಠ, 'ಅಭ್ಯರ್ಥಿಯ ಪೋಷಕರ ಸಂಬಳವೂ ಸೇರಿದಂತೆ ಎಲ್ಲ ಮೂಲಗಳ ಆದಾಯವನ್ನು ಪರಿಗಣಿಸಬೇಕು. ಒಂದು ವೇಳೆ ಆದಾಯವು ನಿಗದಿತ ಮಿತಿಯನ್ನು ದಾಟಿದ್ದರೆ, ಆದಾಯ ತೆರಿಗೆ ಪಾವತಿದಾರ ಆಗಿದ್ದರೆ ಆಗ ಆತನಿಗೆ ಕೆನೆ ಪದರ ನಿಯಮ ಅನ್ವಯ ಆಗುತ್ತದೆ ಮತ್ತು ಅಭ್ಯರ್ಥಿಯು ಪ್ರವರ್ಗ 2-ಎ ಅಡಿ ಮೀಸಲಾತಿಯ ಅಧಿಕಾರ ಹೊಂದುವ ಬೇಡಿಕೆ ಸಲ್ಲಿಸಲು ಅವಕಾಶ ಹೊಂದಿರುವುದಿಲ್ಲ' ಎಂದು ತೀರ್ಪಿನಲ್ಲಿ ವಿವರಿಸಿದೆ.

**ಪ್ರಕರಣವೇನು?**

- ಕೆಪಿಟಿಸಿಎಲ್ ಸಹಾಯಕ ಎಂಜಿನಿಯರ್ ಹುದ್ದೆಗೆ ಅರ್ಜಿ ಸಲ್ಲಿಸಿದ್ದ ಧಾರವಾಡದ ರಾಘವೇಂದ್ರ ಫಕ್ಕೀರಪ್ಪ ಚಂದ್ರಣ್ಣನವರ ಪ್ರವರ್ಗ 2-ಎ (ಕುರುಬ ಜಾತಿ) ಅಡಿ ಆಯ್ಕೆಯಾಗಿದ್ದರು. ಅದರಂತೆ ಮೀಸಲಾತಿ ಪತ್ರಕ್ಕಾಗಿ ಜಿಲ್ಲಾ ಜಾತಿ ಮತ್ತು ಆದಾಯ ಪರಿಶೀಲನೆ ಸಮಿತಿಗೆ ಅರ್ಜಿ ಸಲ್ಲಿಸಿದ್ದರು.
- ಸಮಿತಿಯು, 'ಅಭ್ಯರ್ಥಿಯ ಪೋಷಕರ ಆದಾಯವು ಪ್ರವರ್ಗ-2ಎಗೆ ನಿಗದಿಪಡಿಸಿರುವ ವಾರ್ಷಿಕ ಆದಾಯ ಮಿತಿಯಾದ ₹8 ಲಕ್ಷ ಮೀರುತ್ತಿರುವ ಕಾರಣ ಅವರು ಹಿಂದುಳಿದ ವರ್ಗಗಳಡಿ ಮೀಸಲಾತಿ ಪಡೆಯಲು ಅರ್ಹರಲ್ಲ' ಎಂದು ಆದೇಶಿಸಿತ್ತು.
- ಇದನ್ನು ಪ್ರಶ್ನಿಸಿ ರಾಘವೇಂದ್ರ ಹೈಕೋರ್ಟ್ ಮೆಟ್ಟಿಲೇರಿದ್ದರು. ಪ್ರಕರಣದ ವಿಚಾರಣೆ ನಡೆಸಿದ್ದ ಏಕಸದಸ್ಯ ನ್ಯಾಯಪೀಠ 2024ರ ಅಕ್ಟೋಬರ್‌ನಲ್ಲಿ, 'ಅಭ್ಯರ್ಥಿಯು ಮೀಸಲಾತಿ ಸೌಲಭ್ಯ ಪಡೆಯಲು ಅರ್ಹ' ಎಂದು ತೀರ್ಪು ನೀಡಿತ್ತು. ಏಕಸದಸ್ಯ ನ್ಯಾಯಪೀಠದ ಆದೇಶವನ್ನು ಸರ್ಕಾರ ವಿಭಾಗೀಯ ನ್ಯಾಯಪೀಠದಲ್ಲಿ ಪ್ರಶ್ನಿಸಿತ್ತು.

## ❖ ಆರ್ಥಿಕ 'ಸ್ನೇಹ' : ಹಲವು ಒಪ್ಪಂದ: ಐದು ವರ್ಷಗಳ ಯೋಜನೆಗಳಿಗೆ ಭಾರತ-ರಷ್ಯಾ ಅಂಕಿತ

**ಸಂದರ್ಭ: ಭದ್ರತೆ, ಆರ್ಥಿಕತೆ, ವ್ಯಾಪಾರ ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ಸಹಕಾರ ಹೆಚ್ಚಿಸುವುದಕ್ಕೆ ಹಾಗೂ ಹೂಡಿಕೆಗೆ ಉತ್ತೇಜನ ನೀಡಲು ರಷ್ಯಾ ಮತ್ತು ಭಾರತ ನಿರ್ಧರಿಸಿವೆವ್ಲಾದಿಮಿರ್ ಪುಟಿನ್ ,ರಷ್ಯಾ ಅಧ್ಯಕ್ಷ.**

- 'ಭಾರತಕ್ಕೆ ತಡೆರಹಿತ ಇಂಧನ ಪೂರೈಕೆಯಾಗುವುದನ್ನು ಖಾತ್ರಿಪಡಿಸಲಾಗುವುದು' ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಯ ನೀಡಿದ್ದಾರೆ.
- 'ತೈಲ, ಅನಿಲ, ಕಲ್ಲಿದ್ದಲು ಸೇರಿದಂತೆ ಇಂಧನ ಪೂರೈಕೆಗೆ ಸಂಬಂಧಿಸಿ ರಷ್ಯಾ ನಂಬಲರ್ಹ ರಾಷ್ಟ್ರ. ಭಾರತದ ಆರ್ಥಿಕತೆ ಪ್ರಗತಿಗೆ ಈ ಇಂಧನಗಳನ್ನು ತಡೆರಹಿತವಾಗಿ ಪೂರೈಸಲು ರಷ್ಯಾ ಸಿದ್ಧವಿದೆ' ಎಂದೂ ಪುಟಿನ್ ಹೇಳಿದ್ದಾರೆ.
- ರಷ್ಯಾದಿಂದ ತೈಲ ಆಮದನ್ನು ಕಡಿಮೆ ಮಾಡುವಂತೆ ಭಾರತವನ್ನು ಮನವೊಲಿಸುವಲ್ಲಿ ತಾನು ಯಶಸ್ವಿಯಾಗಿ ದ್ದಾಗಿ ಅಮೆರಿಕ ಹೇಳಿಕೊಳ್ಳುತ್ತಿರುವ ಸಂದರ್ಭದಲ್ಲಿಯೇ ಪುಟಿನ್ ಅವರ ಈ ಮಾತಿಗೆ ಮಹತ್ವ ಬಂದಿದೆ.
- 'ಸಣ್ಣ ಹಾಗೂ ಅಗತ್ಯಕ್ಕೆ ತಕ್ಕಂತಹ ಗಾತ್ರದ (ಮಾಡುಲರ್) ಪರಮಾಣು ರಿಯಾಕ್ಟರ್‌ಗಳು ಹಾಗೂ ತೇಲುವ ಅಣು ವಿದ್ಯುತ್ ಸ್ಥಾವರ ನಿರ್ಮಾಣದಲ್ಲಿ ಭಾರತಕ್ಕೆ ಸಹಕಾರ ನೀಡಲು ರಷ್ಯಾ ಉತ್ಸುಕವಾಗಿದೆ.

ವೈದ್ಯಕೀಯ ಹಾಗೂ ಕೃಷಿಯಂತಹ ಕ್ಷೇತ್ರ ಗಳಲ್ಲಿ ಪರಮಾಣು ತಂತ್ರಜ್ಞಾನ ಬಳಕೆಗೆ ನೆರವು ನೀಡಲೂ ಸಿದ್ಧ' ಎಂದು ಅವರು ಹೇಳಿದ್ದಾರೆ.

- 23ನೇ ಭಾರತ-ರಷ್ಯಾ ಶೃಂಗಸಭೆಯಲ್ಲಿ, ಮೋದಿ ಅವರೊಂದಿಗೆ ವ್ಯಾಪಕ ಚರ್ಚೆ ನಡೆಸಿದ ವೇಳೆ ಪುಟಿನ್ ಈ ಭರವಸೆಗಳನ್ನು ನೀಡಿದ್ದಾರೆ.
- ಭಾರತ ಮತ್ತು ರಷ್ಯಾ ನಡುವಿನ ಆರ್ಥಿಕ ಮತ್ತು ವ್ಯಾಪಾರ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸಲು ದೃಢ ಸಂಕಲ್ಪ ಮಾಡಿದ ಉಭಯ ನಾಯಕರು, ಈ ಉದ್ದೇಶ ಸಾಧನೆಗಾಗಿ 5 ವರ್ಷಗಳ ಯೋಜನೆ ಅನುಷ್ಠಾನಕ್ಕೂ ಸಮ್ಮತಿಸಿದರು.
- ಎರಡೂ ದೇಶಗಳ ನಡುವೆ ವ್ಯಾಪಾರ ಮತ್ತು ಹೂಡಿಕೆ ಹೆಚ್ಚಿಸುವುದು, ತೈಲ ಸಂಸ್ಕರಣೆ, ಪೆಟ್ರೊಕೆಮಿಕಲ್ ತಂತ್ರಜ್ಞಾನ ಗಳು ಹಾಗೂ ಇದಕ್ಕೆ ಸಂಬಂಧಿಸಿದ ಕ್ಷೇತ್ರಗಳಲ್ಲಿ, ಎಲ್‌ಎನ್‌ಜಿ ಮತ್ತು ಪಿಎನ್‌ಜಿ ಮೂಲಸೌಕರ್ಯ ಹೆಚ್ಚಿಸುವುದು ಸೇರಿದಂತೆ ಹಲವು ಕ್ಷೇತ್ರ ಗಳಲ್ಲಿ ಸಹಕಾರ ವೃದ್ಧಿಸುವ ಬಗ್ಗೆಯೂ ಅವರು ಸಹಮತ ವ್ಯಕ್ತಪಡಿಸಿದ್ದಾರೆ.
- ಮೋದಿ ಮಾತು: 'ಜಾಗತಿಕ ರಾಜಕೀಯದಿಂದಾಗಿ ಎದುರಾಗುವ ಸವಾಲುಗಳ ಹೊರತಾಗಿಯೂ ಉಭಯ ದೇಶಗಳ ನಡುವಿನ ಬಾಂಧವ್ಯ ಧ್ರುವ ತಾರೆಯಂತೆ ಸದಾ ಪ್ರಜ್ವಲಿಸಲಿದೆ' ಎಂದು ಮೋದಿ ಬಣ್ಣಿಸಿದ್ದಾರೆ.
- ಶೃಂಗಸಭೆ ವೇಳೆ, ಉಕ್ರೇನ್ ಮತ್ತು ರಷ್ಯಾ ನಡುವಿನ ಸಂಘರ್ಷ ಕುರಿತಾಗಿಯೂ ಉಭಯ ನಾಯಕರು ಚರ್ಚಿಸಿದರು. 'ಶಾಂತಿಯುತ ಮಾರ್ಗದಲ್ಲಿ ಪರಿಹಾರ ಕಂಡುಕೊಳ್ಳುವ ಮೂಲಕ ಸಂಘರ್ಷಕ್ಕೆ ಅಂತ್ಯ ಹಾಡಬೇಕು' ಎಂಬ ಭಾರತದ ನಿಲುವನ್ನು ಮೋದಿ ಮತ್ತೊಮ್ಮೆ ಪುಟಿನ್ ಅವರಿಗೆ ಸ್ಪಷ್ಟಪಡಿಸಿದರು.
- ಹಲವು ಒಪ್ಪಂದ: '2030ರ ಆರ್ಥಿಕ ಕಾರ್ಯಕ್ರಮ' ವನ್ನು ಅಂತಿಮಗೊಳಿಸಿದ ಉಭಯ ದೇಶಗಳು, ಇದೇ ವೇಳೆ ಹಲವು ಒಪ್ಪಂದಗಳಿಗೆ ಸಹಿ ಹಾಕಿದವು.
- ಮಾನವ ಸಂಪನ್ಮೂಲ ವಿನಿಮಯ ಒಪ್ಪಂದಕ್ಕೆ ಎರಡೂ ದೇಶಗಳು ಸಹಿ ಹಾಕಿದವು. ಇದರಿಂದ ಉಭಯ ದೇಶಗಳ ಜನರಿಗೆ ಉದ್ಯೋಗಾ ವಕಾಶಗಳು ದೊರೆಯಲಿವೆ. ಅಲ್ಲದೇ, ಅನಿಯಂತ್ರಿತ ವಲಸೆಗೆ ಕಡಿವಾಣ ಹಾಕುವುದಕ್ಕೆ ಸಂಬಂಧಿಸಿದ ಮತ್ತೊಂದು ಒಪ್ಪಂದಕ್ಕೂ ಸಹಿ ಹಾಕಲಾಗಿದೆ.
- ಆರೋಗ್ಯ, ವಲಸೆ, ಆಹಾರ ಸುರಕ್ಷತೆ, ಕಡಲಯಾನ, ವಿನಿಮಯ ಕಾರ್ಯಕ್ರಮ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಸಹಕಾರವನ್ನು ಮತ್ತಷ್ಟು ಹೆಚ್ಚಿಸುವ ಅಂಶಗಳನ್ನು ಒಳಗೊಂಡ ಒಪ್ಪಂದಗಳಿಗೂ ಭಾರತ-ರಷ್ಯಾ ಅಂಕಿತ ಹಾಕಿವೆ.

**ಪ್ರಮುಖ ಘೋಷಣೆಗಳು**

I ರಷ್ಯಾ ಪ್ರಜೆಗಳಿಗೆ 30 ದಿನಗಳ ಉಚಿತ ಇ-ಪ್ರವಾಸಿ ವೀಸಾ ಕಾರ್ಯಕ್ರಮಕ್ಕೆ ಶೀಘ್ರವೇ ಚಾಲನೆ

I ರಷ್ಯಾ ಪ್ರಜೆಗಳಿಗೆ 30 ದಿನಗಳ 'ಗ್ರೂಪ್ ಟೂರಿಸ್ಟ್' ವೀಸಾ ಸೌಲಭ್ಯ

## ❖ ರೆಪೊ ಇಳಿಕೆ: ಸಾಲ ಅಗ್ಗ?

**ಸಂದರ್ಭ: ರೆಪೊ ದರವನ್ನು ಆರ್‌ಬಿಐ ಶೇ 0.25ರಷ್ಟು ಕಡಿಮೆ ಮಾಡಿದೆ. ಇದರಿಂದಾಗಿ ಗೃಹಸಾಲ ಸೇರಿದಂತೆ ವಿವಿಧ ಬಗೆಯ ಸಾಲಗಳ ಮೇಲಿನ ಬಡ್ಡಿ ಹೊರೆ ತುಸು ಇಳಿಕೆಯಾಗುವ ನಿರೀಕ್ಷೆ ಇದೆ.**

- ರೆಪೊ ದರವನ್ನು ತೀರ್ಮಾನಿಸುವ, ಆರು ಜನ ಸದಸ್ಯರ ಹಣಕಾಸು ನೀತಿ ಸಮಿತಿಯು (ಎಂಪಿಸಿ) ದರ ಇಳಿಕೆಗೆ ಸರ್ವಾನುಮತದಿಂದ ಒಪ್ಪಿಗೆ ನೀಡಿದೆ. ಈ ಇಳಿಕೆಯೊಂದಿಗೆ ರೆಪೊ ದರವು ಶೇ 5.25ರಷ್ಟು ಆಗಿದೆ. ಆರ್‌ಬಿಐ 'ತಟಸ್ಥ' ಹಣಕಾಸು ನಿಲುವನ್ನು ಕಾಯ್ದುಕೊಂಡಿದೆ, ಮುಂದೆಯೂ ರೆಪೊ ದರ ಇಳಿಕೆಗೆ ಅವಕಾಶ ಉಳಿಸಿಕೊಂಡಿದೆ.
- ರೆಪೊ ಇಳಿಕೆಯು ಮುಂದಿನ ಹಣಕಾಸು ವರ್ಷದಲ್ಲಿ ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡಬಹುದು. ಹಣಕಾಸು ನೀತಿಗಳಿಗೆ ಸಂಬಂಧಿಸಿದ ನಿರ್ಣಯಗಳ ಪರಿಣಾಮವು ಸಾಮಾನ್ಯವಾಗಿ ವಿಳಂಬವಾಗಿ ಕಾಣಿಸಿಕೊಳ್ಳುತ್ತದೆ. ಧರ್ಮಕೀರ್ತಿ ಜೋಷಿ , ಕ್ರಿಸಿಲ್ ಸಂಸ್ಥೆಯ ಮುಖ್ಯ ಅರ್ಥಶಾಸ್ತ್ರಜ್ಞ

Dr. Rajkumar IAS/KAS Academy

- ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ರೆಪೊ ದರವನ್ನು ಶೇಕಡ 0.25ರಷ್ಟು ಕಡಿಮೆ ಮಾಡಿದ್ದು, ಇದರ ಪರಿಣಾಮವಾಗಿ ಗೃಹಸಾಲ, ವಾಹನ ಸಾಲ ಮತ್ತು ಇತರ ಸಾಲಗಳ ಮೇಲಿನ ಬಡ್ಡಿಯ ಹೊರೆ ತುಸು ಇಳಿಕೆಯಾಗುವ ನಿರೀಕ್ಷೆ ಇದೆ.
- ಆರ್‌ಬಿಐ ಆರು ತಿಂಗಳ ಅವಧಿಯಲ್ಲಿ ಇದೇ ಮೊದಲ ಬಾರಿಗೆ ರೆಪೊ ದರ ತಗ್ಗಿಸಿದೆ. ದೇಶದ ಅರ್ಥ ವ್ಯವಸ್ಥೆಯು ಬಹಳ ಉತ್ತಮವಾದ ಸ್ಥಿತಿಯಲ್ಲಿ ಇದ್ದು, ಇದಕ್ಕೆ ಬೆಂಬಲವಾಗಿ ನಿಲ್ಲಲು ಬ್ಯಾಂಕಿಂಗ್ ವ್ಯವಸ್ಥೆಗೆ ಹೆಚ್ಚಿನ ನಗದು ಲಭ್ಯವಾಗುವಂತೆ ನೋಡಿಕೊಳ್ಳಲಾಗುತ್ತದೆ ಎಂದು ಆರ್‌ಬಿಐ ಹೇಳಿದೆ.
- ರೆಪೊ ದರವನ್ನು ತೀರ್ಮಾನಿಸುವ, ಆರು ಜನ ಸದಸ್ಯರ ಹಣಕಾಸು ನೀತಿ ಸಮಿತಿಯು (ಎಂಪಿಸಿ) ದರ ಇಳಿಕೆಗೆ ಸರ್ವಾನುಮತದಿಂದ ಒಪ್ಪಿಗೆ ನೀಡಿದೆ. ಸಮಿತಿಗೆ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರ ಮುಖ್ಯಸ್ಥರು. ಈ ಇಳಿಕೆಯೊಂದಿಗೆ ರೆಪೊ ದರವು ಶೇ 5.25ರಷ್ಟು ಆಗಿದೆ.
- ಆರ್‌ಬಿಐ 'ತಟಸ್ಥ' ಹಣಕಾಸು ನಿಲುವನ್ನು ಕಾಯ್ದುಕೊಂಡಿದೆ, ಮುಂದೆಯೂ ರೆಪೊ ದರ ಇಳಿಕೆಗೆ ಅವಕಾಶ ಉಳಿಸಿಕೊಂಡಿದೆ.
- ಅಮೆರಿಕವು ಭಾರತದ ಸರಕುಗಳ ಮೇಲೆ ಶೇ 50ರಷ್ಟು ಸುಂಕ ವಿಧಿಸಿದ ಪರಿಣಾಮವಾಗಿ ಆರ್ಥಿಕತೆಯ ಮೇಲೆ ಆಗಿರುವ ಕೆಟ್ಟ ಪರಿಣಾಮವನ್ನು ನಿಭಾಯಿಸುವ ಉದ್ದೇಶದೊಂದಿಗೆ ಆರ್‌ಬಿಐ ರೆಪೊ ದರ ಇಳಿಸಿದೆ ಎಂದು ತಜ್ಞರು ವಿಶ್ಲೇಷಿಸಿದ್ದಾರೆ.
- ಜಿಎಸ್‌ಟಿ ದರ ಪರಿಷ್ಕರಣೆ, ಕಾರ್ಮಿಕ ನಿಯಮಗಳಲ್ಲಿ ಬದಲಾವಣೆ, ಹಣಕಾಸು ವಲಯಕ್ಕೆ ಸಂಬಂಧಿಸಿದ ನಿಯಮಗಳನ್ನು ಸುಲಭವಾಗಿಸುವ ಮೂಲಕ ಕೇಂದ್ರ ಸರ್ಕಾರವು ಅರ್ಥ ವ್ಯವಸ್ಥೆಯ ಉತ್ತೇಜನಕ್ಕೆ ಒಂದಿಷ್ಟು ಕ್ರಮ ಕೈಗೊಂಡಿದೆ. ಅದಕ್ಕೆ ಪೂರಕವಾಗಿ ರೆಪೊ ದರ ಇಳಿಕೆ ಮಾಡಲಾಗಿದೆ ಎಂದೂ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.
- ರೆಪೊ ದರ ಇಳಿಕೆಯ ಪ್ರಯೋಜನವನ್ನು ಬ್ಯಾಂಕ್‌ಗಳು ಗ್ರಾಹಕರಿಗೆ ವರ್ಗಾವಣೆ ಮಾಡಿದ ನಂತರದಲ್ಲಿ ವಿವಿಧ ಬಗೆಯ ಸಾಲಗಳ ಮೇಲಿನ ಇಎಂಐ ಮೊತ್ತವು ಕಡಿಮೆ ಆಗಲಿದೆ.
- ಪ್ರಸಕ್ತ ಹಣಕಾಸು ವರ್ಷದ ಮೊದಲ ಆರು ತಿಂಗಳ ಅವಧಿಯಲ್ಲಿ ಹಣದುಬ್ಬರ ಪ್ರಮಾಣವು ಶೇ 2.2ರಷ್ಟು ಇದೆ. ಈ ಅವಧಿಯಲ್ಲಿ ಜಿಡಿಪಿ ಬೆಳವಣಿಗೆ ದರವು ಶೇ 8ರಷ್ಟು ಆಗಿದೆ. ಇದು ಅರ್ಥ ವ್ಯವಸ್ಥೆಯು ಬಹಳ ಉತ್ತಮ ಸ್ಥಿತಿಯಲ್ಲಿರುವುದನ್ನು ಹೇಳುತ್ತಿದೆ ಎಂದು ಮಲ್ಹೋತ್ರಾ ಅವರು ಸುದ್ದಿಗಾರರಿಗೆ ತಿಳಿಸಿದರು.
- ಇಡೀ ಹಣಕಾಸು ವರ್ಷದಲ್ಲಿ ಹಣದುಬ್ಬರ ಪ್ರಮಾಣವು ಶೇ 2ರಷ್ಟು ಮಾತ್ರ ಇರಲಿದೆ ಎಂದು ಆರ್‌ಬಿಐ ಅಂದಾಜು ಮಾಡಿದೆ. ಅಲ್ಲದೆ, ದೇಶದ ಜಿಡಿಪಿ ಬೆಳವಣಿಗೆ ಪ್ರಮಾಣವು ಶೇ 7.3ರಷ್ಟು ಆಗಲಿದೆ ಎಂದು ಕೂಡ ಅದು ಅಂದಾಜಿಸಿದೆ.

**ರೆಪೊ ಇಳಿಕೆಗೆ ಉದ್ಯಮ ವಲಯ ಹರ್ಷ**

- ರೆಪೊ ದರ ಇಳಿಕೆ ನಿರ್ಧಾರವನ್ನು ಆಟೊಮೊಬೈಲ್ ಹಾಗೂ ರಿಯಲ್ ಎಸ್ಟೇಟ್ ಉದ್ಯಮ ವಲಯಗಳು ಸ್ವಾಗತಿಸಿವೆ.
- ರೆಪೊ ದರವನ್ನು ಶುಕ್ರವಾರ ಶೇ 0.25ರಷ್ಟು ತಗ್ಗಿಸಿರುವುದು ಹಾಗೂ ಈ ಹಿಂದಿನ ರೆಪೊ ದರ ಇಳಿಕೆ ಕ್ರಮಗಳು ದೇಶದ ಗ್ರಾಹಕರ ವಿಶ್ವಾಸವನ್ನು ಹೆಚ್ಚಿಸಲು ಹಣಕಾಸಿನ ಪೂರಕ ಕ್ರಮಗಳಾಗಿ ಒದಗಿಬಂದಿವೆ ಎಂದು ಭಾರತೀಯ ಆಟೊಮೊಬೈಲ್ ತಯಾರಕರ ಸಂಘದ (ಎಸ್‌ಐಎಎಂ) ಅಧ್ಯಕ್ಷ ಶೈಲೇಶ್ ಚಂದ್ರ ಹೇಳಿದ್ದಾರೆ.
- '2025–26ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ ಆದಾಯ ತೆರಿಗೆ ವಿನಾಯಿತಿ ಕ್ರಮ, ಜಿಎಸ್‌ಟಿ ದರ ಪರಿಷ್ಕರಣೆಯು ವಾಹನಗಳು ಇನ್ನಷ್ಟು ಕೈಗೆಟಕುವಂತೆ ಮಾಡಿವೆ' ಎಂದು ಅವರು ಪ್ರಕಟಣೆಯಲ್ಲಿ ಹೇಳಿದ್ದಾರೆ.
- 'ಆರ್‌ಬಿಐನ ಕ್ರಮವು ಸಾಲದ ಬಡ್ಡಿಯನ್ನು ಕಡಿಮೆ ಮಾಡುತ್ತದೆ, ಸಾಲ ನೀಡಿಕೆಯನ್ನು ಹೆಚ್ಚಿಸುತ್ತದೆ, ರಿಯಲ್ ಎಸ್ಟೇಟ್ ಸೇರಿದಂತೆ ಬೇರೆ ಬೇರೆ ವಲಯಗಳಲ್ಲಿ ಬೇಡಿಕೆ ಹೆಚ್ಚಿಸುತ್ತದೆ' ಎಂದು ಕ್ರೆಡಾಯ್ ಅಧ್ಯಕ್ಷ ಶೇಖರ್ ಪಟೇಲ್ ಹೇಳಿದ್ದಾರೆ.

Dr. Rajkumar IAS/KAS Academy

- ರೆಪೊ ದರವನ್ನು ಇಳಿಕೆ ಮಾಡಿರುವುದು ಅರ್ಥ ವ್ಯವಸ್ಥೆಗೆ ಹೊಸ ವೇಗವನ್ನು ನೀಡಲು ಬಹಳ ಮುಖ್ಯವಾದ ಹೆಜ್ಜೆ ಎಂದು ರಾಷ್ಟ್ರೀಯ ರಿಯಲ್ ಎಸ್ಟೇಟ್ ಅಭಿವೃದ್ಧಿ ಮಂಡಳಿಯ (ನಾರೆಡ್ಕೊ) ಅಧ್ಯಕ್ಷ ಪ್ರವೀಣ್ ಜೈನ್ ಹೇಳಿದ್ದಾರೆ.

## ❖ 'ದೇವನಹಳ್ಳಿಯ 1,777 ಎಕರೆ ಶಾಶ್ವತ ವಿಶೇಷ ಕೃಷಿ ವಲಯ'

**ಸಂದರ್ಭ: 'ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯ 13 ಗ್ರಾಮಗಳ ವ್ಯಾಪ್ತಿಯಲ್ಲಿನ 1,777 ಎಕರೆ ಭೂಮಿಯನ್ನು`ಶಾಶ್ವತ ವಿಶೇಷ ಕೃಷಿ ವಲಯ' ಎಂದು ಘೋಷಿಸಲು ಸಚಿವ ಸಂಪುಟ ಸಭೆಯು ಒಪ್ಪಿಗೆ ನೀಡಿದೆ' ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.**

- ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ರೈತರ ಹಿತವನ್ನು ಪರಿಗಣಿಸಿ ಅವರಿಗೆ ಪೂರಕವಾಗಿ ಸ್ಪಂದಿಸಲಾಗಿದೆ. 1996ರ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಕಾಯ್ದೆಯ ಕಲಂ 4ರ ಅಡಿಯಲ್ಲಿರುವ ಅಧಿಕಾರವನ್ನು ಬಳಸಿ, 1,777 ಎಕರೆಯನ್ನು ಪ್ರಾಥಮಿಕ ಅಧಿಸೂಚನೆಯಿಂದ ಹೊರಗಿಡುವ ನಿರ್ಧಾರ ಕೈಗೊಳ್ಳಲಾಗಿದೆ' ಎಂದರು.
- 'ಇಷ್ಟು ಭೂಮಿಯನ್ನು ಶಾಶ್ವತ ವಿಶೇಷ ಕೃಷಿ ವಲಯವೆಂದು ಘೋಷಿಸಲು ಅಗತ್ಯವಿರುವ ರೂಪುರೇಷೆ ಸಿದ್ಧಪಡಿಸಲು ತಜ್ಞರ ಸಮಿತಿ ರಚಿಸಲಾಗುತ್ತದೆ. ನಗರಾಭಿವೃದ್ಧಿ ಇಲಾಖೆಯಿಂದ ಸಂಬಂಧಿತ ಸಮವರ್ತಿ ಅಧಿಸೂಚನೆ ಹೊರಡಿಸಲಾಗುವುದು. ಈ ಜಮೀನಿನ ಪಹಣಿಗಳಲ್ಲಿನ ಕಾಲಂ 11ರಲ್ಲಿ 'ಶಾಶ್ವತ ವಿಶೇಷ ಕೃಷಿ ವಲಯ' ವೆಂದು ನಮೂದಿಸಲು ಕ್ರಮ ಕೈಗೊಳ್ಳಲಾಗುವುದು' ಎಂದು ಅವರು ವಿವರಿಸಿದರು.
- 'ಒಂದು ವೇಳೆ, ಈ 13 ಗ್ರಾಮಗಳ ರೈತರೇ ಸ್ವಯಂಪ್ರೇರಿತವಾಗಿ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ತಮ್ಮ ಜಮೀನುಗಳನ್ನು ಬಿಟ್ಟು ಕೊಡಲು ಮುಂದೆ ಬಂದಲ್ಲಿ, ಅಂತಹ ಜಮೀನುಗಳನ್ನು ಅಗತ್ಯಾನುಸಾರ ಮತ್ತು ನಿಯಮಾನುಸಾರ ಸ್ವಾಧೀನ ಪಡಿಸಿಕೊಳ್ಳ ಲಾಗುವುದು. ಇದಕ್ಕಾಗಿ ರೈತರಿಗೆ ಮೂರು ತಿಂಗಳ ಕಾಲಾವಕಾಶ ನೀಡಲಾಗುವುದು. ಇಂತಹ ಪ್ರಕರಣಗಳಲ್ಲಿ ಭೂದರ ನಿರ್ಧರಣಾ ಸಮಿತಿಯ ತೀರ್ಮಾನದಂತೆ ಸೂಕ್ತ ಪರಿಹಾರವನ್ನೂ ನೀಡಲಾಗುವುದು' ಎಂದು ಅವರು ಸ್ಪಷ್ಟಪಡಿಸಿದರು.

## ❖ ವಯಸ್ಕರು ಸಹಜೀವನಕ್ಕೆ ಅರ್ಹರು: ಮದುವೆ ವಯಸ್ಸಿಗೆ ಬಾರದವರಿಗೂ ಜೀವಿಸುವ ಹಕ್ಕು ಇದೆ: ಹೈಕೋರ್ಟ್

**ಸಂದರ್ಭ: ವಿವಾಹವಾಗಲು ಕಾನೂನುಬದ್ಧ ವಯಸ್ಸು ಆಗದಿದ್ದರೂ ಇಬ್ಬರು ವಯಸ್ಕರು ಸಹಜೀವನದ ಸಂಬಂಧ ಹೊಂದಲು ಅರ್ಹರು ಎಂದು ರಾಜಸ್ಥಾನ ಹೈಕೋರ್ಟ್ ತೀರ್ಪು ನೀಡಿದೆ.**

- ಸ್ವ ಇಚ್ಛೆಯಿಂದ ಒಟ್ಟಿಗೆ ವಾಸಿಸುತ್ತಿರುವ ಕೋಟಾದ 18ರ ವಯಸ್ಸಿನ ಯುವತಿ ಮತ್ತು 19ರ ವಯಸ್ಸಿನ ಯುವಕ ರಕ್ಷಣೆಗೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನೂಪ್ ಧಂಡ್ ಅವರು ಈ ತೀರ್ಪು ನೀಡಿದ್ದಾರೆ.
- ವಿಚಾರಣೆ ವೇಳೆ, 'ನಾವು 2025ರ ಅಕ್ಟೋಬರ್ 27ರಂದು ಸಹಜೀವನ ಕುರಿತು ಒಪ್ಪಂದ ಮಾಡಿಕೊಂಡಿದ್ದೇವೆ' ಎಂದು ಯುವಕ ಮತ್ತು ಯುವತಿ ಕೋರ್ಟ್ ಗಮನಕ್ಕೆ ತಂದರು.
- 'ನಮ್ಮ ಸಹಜೀವನದ ಸಂಬಂಧ ವನ್ನು ವಿರೋಧಿಸುತ್ತಿರುವ ಯುವತಿಯ ಕುಟುಂಬದವರು, ನಮ್ಮನ್ನು ಕೊಲ್ಲುವ ಬೆದರಿಕೆ ಹಾಕಿದ್ದಾರೆ. ರಕ್ಷಣೆ ಕೋರಿ ಕೋಟಾ ಪೊಲೀಸರಿಗೆ ನೀಡಿದ ದೂರನ್ನು ಅವರು ಪರಿಗಣಿಸಿಲ್ಲ' ಎಂದು ಅರ್ಜಿದಾರರು ಆರೋಪಿಸಿದರು.
- ಈ ಅರ್ಜಿಯನ್ನು ವಿರೋಧಿಸಿದ ಪಬ್ಲಿಕ್ ಪ್ರಾಸಿಕ್ಯೂಟರ್ ವಿವೇಕ್ ಚೌಧರಿ, 'ಯುವಕನಿಗೆ 21 ವರ್ಷ ವಯಸ್ಸಾಗಿಲ್ಲ. ಅಂದರೆ ವಿವಾಹವಾಗುವ ಕಾನೂನುಬದ್ಧ ವಯಸ್ಸಾಗಿಲ್ಲ. ಹೀಗಾಗಿ ಅವರಿಗೆ ಸಹಜೀವನ ವ್ಯವಸ್ಥೆ ಯಲ್ಲಿ ಇರಲು ಅವಕಾಶ ನೀಡಬಾರದು' ಎಂದು ವಾದಿಸಿದರು. ಆಗ ಪ್ರತಿಕ್ರಿಯಿಸಿದ

Dr Rajkumar IAS Academy

ನ್ಯಾಯಮೂರ್ತಿ, 'ಅರ್ಜಿದಾರರು ವಿವಾಹವಾಗುವ ವಯಸ್ಸಿಗೆ ಬಂದಿಲ್ಲ ಎಂಬ ಕಾರಣಕ್ಕೆ, ಅವರಿಗೆ ಸಂವಿಧಾನದ 21ನೇ ವಿಧಿಯಡಿ ಜೀವಿಸುವ ಹಕ್ಕು ಮತ್ತು ವೈಯಕ್ತಿಕ ಸ್ವಾತಂತ್ರ್ಯವನ್ನು ನಿರಾಕರಿಸಲು ಆಗುವುದಿಲ್ಲ' ಎಂದರು.

- 'ಕಾನೂನಿನ ಅಡಿ ಸಹಜೀವನದ ಸಂಬಂಧಗಳನ್ನು ನಿಷೇಧಿಸಲಾಗಿಲ್ಲ ಅಥವಾ ಅಪರಾಧ ಎಂದೂ ಪರಿಗಣಿಸಿಲ್ಲ. ಹೀಗಾಗಿ ಪ್ರತಿಯೊಬ್ಬರ ಜೀವನ ಮತ್ತು ಸ್ವಾತಂತ್ರ್ಯವನ್ನು ಕಾಪಾಡುವುದು ರಾಜ್ಯದ ಕರ್ತವ್ಯ' ಎಂದು ಅವರು ತಿಳಿಸಿದರು. ಅರ್ಜಿದಾರರ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವಂತೆ ಜೋಧ್‌ಪುರ (ಗ್ರಾಮೀಣ) ಪೊಲೀಸ್ ವರಿಷ್ಠಾಧಿಕಾರಿಗೆ ಅವರು ನಿರ್ದೇಶಿಸಿದರು.

## • 'ಯುಪಿಐ: 8 ದೇಶಗಳೊಂದಿಗೆ ಮಾತುಕತೆ'

**ಸಂದರ್ಭ: ಯುಪಿಐ ಪಾವತಿ ವ್ಯವಸ್ಥೆಯನ್ನು ವಿವಿಧೆಡೆ ಜಾರಿಗೆ ತರಲು ಕೇಂದ್ರ ಸರ್ಕಾರವು ಪೂರ್ವ ಏಷ್ಯಾದ ಕೆಲವು ದೇಶಗಳು ಸೇರಿದಂತೆ ಒಟ್ಟು ಎಂಟು ದೇಶಗಳ ಜೊತೆ ಮಾತುಕತೆ ನಡೆಸುತ್ತಿದೆ ಎಂದು ಕೇಂದ್ರ ಹಣಕಾಸು ಸೇವೆಗಳ ಕಾರ್ಯದರ್ಶಿ ಎಂ. ನಾಗರಾಜು ತಿಳಿಸಿದ್ದಾರೆ.**

- ಬೇರೆ ಕೆಲವು ದೇಶಗಳ ಜೊತೆ ವ್ಯಾಪಾರ ಒಪ್ಪಂದ ಕುರಿತ ಮಾತುಕತೆ ನಡೆಸುವಾಗ ಕೇಂದ್ರ ಸರ್ಕಾರವು ಈಗ ಯುಪಿಐ ಬಗ್ಗೆಯೂ ಪ್ರಸ್ತಾಪ ಮಾಡುತ್ತಿದೆ ಎಂದು ನಾಗರಾಜು ಅವರು ಹೇಳಿದ್ದಾರೆ.


## ❖ ತಂತ್ರಜ್ಞಾನ ಪಾರ್ಕ್: ₹1,000 ಕೋಟಿ ಹೂಡಿಕೆಗೆ ತೈವಾನ್ ಒಡಂಬಡಿಕೆ

**ಸಂದರ್ಭ: ರಾಜ್ಯದಲ್ಲಿ ಕೈಗಾರಿಕಾ ತಂತ್ರಜ್ಞಾನ ನಾವೀನ್ಯತಾ ಪಾರ್ಕ್‌ಗೆ ತೈವಾನಿನ ಅಲಿಜನ್ಸ್ ಇಂಟರ್‌ನ್ಯಾಷನಲ್ ಗ್ರೂಪ್ ₹1,000 ಕೋಟಿ ಹೂಡಿಕೆ ಮಾಡಲಿದೆ.**

- ಈ ಕುರಿತು ಮಾಹಿತಿ ತಂತ್ರಜ್ಞಾನ-ಜೈವಿಕ ತಂತ್ರಜ್ಞಾನ ಇಲಾಖೆ (ಐಟಿ-ಬಿಟಿ) ನಿರ್ದೇಶಕ ರಾಹುಲ್ ಎಸ್. ಸಂಕನೂರ ಹಾಗೂ ಅಲಿಜನ್ಸ್ ಗ್ರೂಪ್‌ನ ಉಪಾಧ್ಯಕ್ಷ ಲಾರೆನ್ಸ್ ಚೆನ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಿದರು.
- ಬಳಿಕ ಮಾತನಾಡಿದ ಸಿದ್ದರಾಮಯ್ಯ, 'ತೈವಾನ್ ಕಂಪನಿಯು ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ಕಂಪನಿಗಳಿಗೆ ಮೀಸಲಾದ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ. ಅತ್ಯಾಧುನಿಕ ತಯಾರಿಕೆ, ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯಕ್ಕೆ ಉತ್ತೇಜನ ನೀಡಲಿದೆ. ಎಲೆಕ್ಟ್ರಾನಿಕ್ಸ್ ಸಿಸ್ಟಂ ಡಿಸೈನ್ ಮತ್ತು ತಯಾರಿಕಾ (ಇಎಸ್‌ಡಿಎಂ) ವಲಯದಲ್ಲಿ ಭಾರತದ ಪ್ರಮುಖ ತಾಣವಾಗಿ ಕರ್ನಾಟಕದ ಸ್ಥಾನ ಬಲಗೊಳ್ಳಲಿದೆ. ರಾಜ್ಯದಲ್ಲಿ ಸೆಮಿಕಂಡಕ್ಟರ್ ವಲಯದ ಬೆಳವಣಿಗೆಗೂ ವೇಗ ದೊರೆಯಲಿದೆ. 800 ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ' ಎಂದರು.
- ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, 'ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ವಲಯಗಳಲ್ಲಿ ತೈವಾನ್ ಕಂಪನಿಗಳಿಗೆ ನೆಲೆಯಾಗಲು ವಿಶ್ವ ದರ್ಜೆಯ ಕೈಗಾರಿಕಾ ಪಾರ್ಕ್ ಸ್ಥಾಪಿಸಲಾಗುವುದು, ಬಿಡಿಭಾಗಗಳು, ಪಿಸಿಬಿ ಮತ್ತು ಚಿಪ್ ಡಿಸೈನ್‌ಗೆ ಸದೃಢ ಪೂರೈಕೆ ಸರಪಳಿ ವ್ಯವಸ್ಥೆಯ ಅಭಿವೃದ್ಧಿಪಡಿಸಲಾಗುವುದು.ಶೈಕ್ಷಣಿಕ ಸಂಸ್ಥೆಗಳ ಸಹಯೋಗದಲ್ಲಿ ಗರಿಷ್ಠ ಮೌಲ್ಯದ ಉದ್ಯೋಗಗಳ ಸೃಷ್ಟಿ ಮತ್ತು ಕೌಶಲ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ವೇಗ ಸಿಗಲಿದೆ' ಎಂದು ಹೇಳಿದರು.



Dr. Rajkumar Academy




IAS/KAS Academy